ಸಂಪುಟ: 04 ಸಂಚಿಕೆ: 41 ಪುಟಗಳು: 08 ಗುರುವಾರ 25 ಏಪ್ರಿಲ್ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**

ಎಲ್ಲರಿಂದಲೂ ನಮಗೆ ಪ್ರಯೋಜನವಿದೆ. ಒಳ್ಳೆಯವರಿಂದ ಪ್ರಯೋಜನವು, ಕೆಟ್ಟವರಿಂದ ಪಾಠವೂ ದೊರೆಯುತ್ತದೆ. ಪಾಠ ಕಲಿಯುತಾಲೆ ಸಂತೋಷದಿಂದ ಸಾಗೋಣ...

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಉದಯ್ ಗರುಡಾಚಾರ್‌ಗೆ ಹೈಕೋರ್ಟ್ ಬಿಗ್ ರಿಲೀಫ್

• ಉದಯವಾಹಿನಿ, ಬೆಂಗಳೂರು

ವಿಧಾನಸಭಾ ಚುನಾವಣೆಯ ಸಂದರ್ಭದಲ್ಲಿ ತಪ್ಪು ಮಾಹಿತಿ ಆರೋಪದ ಮೇಲೆ ಶಾಸಕ ಉದಯ್ ಗರುಡಾಚಾರ್ ವಿರುದ್ಧ ಪ್ರಕರಣ ದಾಖಲಾಗಿತ್ತು. ಇದೀಗ ಹೈಕೋರ್ಟ್ ಈ ಪ್ರಕರಣವನ್ನು ರದ್ದುಗೊಳಿಸಿ ಬಿಗ್ ರಿಲೀಫ್ ನೀಡಿದೆ. ಶಾಸಕ ಉದಯ್ ಗರುಡಾಚಾರ್ ಅವರು ಚುನಾವಣೆ ಸಂದರ್ಭದಲ್ಲಿ ತಪ್ಪು ಮಾಹಿತಿ ನೀಡಿದ ಆರೋಪದಲ್ಲಿ ಪ್ರಕರಣ ದಾಖಲಾಗಿತ್ತು.ಈ ಪ್ರಕರಣವನ್ನು ರದ್ದುಕೋರಿ ಹೈಕೋರ್ಟ್ ಮೆಟ್ಟಿಲೇರಿದ್ದರು.

ಈ ಅರ್ಜಿಯ ವಿಚಾರಣೆ ನಡೆಸಿದಂತ ಹೈಕೋರ್ಟ್ ನ್ಯಾಯಮೂರ್ತಿ ಕೃಷ್ಣ ಎಸ್ ದೀಕ್ಷಿತ್ ಅವರನ್ನೊಳಗೊಂಡ ನ್ಯಾಯಪೀಠವು, ಪ್ರಕರಣವನ್ನು ರದ್ದುಗೊಳಿಸಿ ಆದೇಶಿಸಿದೆ. ಈ ಪ್ರಕರಣದಲ್ಲಿ ವಸೂಲಿ ಮಾಡಿದ್ದಂತ ದಂಡದ ಹಣವನ್ನು ಶಾಸಕರಿಗೆ ಹಿಂದಿರುಗಿಸುವಂತೆಯೂ ಹೈಕೋರ್ಟ್ ಆದೇಶಿಸಿದೆ.ಅಂದ ಹಾಗೇ ಶಾಸಕ ಉದಯ್ ಗರುಡಾಚಾರ್ ವಿರುದ್ಧ ವಿಚಾರಣಾ ನ್ಯಾಯಾಲಯವು 2 ತಿಂಗಳ ಶಿಕ್ಷೆಯನ್ನು ವಿಧಿಸಿತ್ತು.

## ಕರ್ನಾಟಕ ಬಿಜೆಪಿ ಪಕ್ಷದ ವಿರುದ್ಧ ಎಫ್‌ಐಆರ್ ದಾಖಲು

• ಉದಯವಾಹಿನಿ, ಬೆಂಗಳೂರು

ಕೆಲ ದಿನಗಳ ಹಿಂದೆ ಕಾಂಗ್ರೆಸ್ ಪಕ್ಷದಿಂದ ಲೋಕಸಭಾ ಚುನಾವಣೆಗಾಗಿ ಚುನಾವಣಾ ಪ್ರಣಾಳಿಕೆಯನ್ನು ಬಿಡುಗಡೆ ಮಾಡಲಾಗಿತ್ತು. ಈ ಪ್ರಣಾಳಿಕೆ ಮುಸ್ಲಿಂ ಲೀಗ್ ಪ್ರಣಾಳಿಕೆ ಅಂತ ಛೇಡಿಸಿ ಕರ್ನಾಟಕ ಬಿಜೆಪಿ ಪಕ್ಷದಿಂದ ಎಕ್ಸ್ ನಲ್ಲಿ ಪೋಸ್ಟ್ ಮಾಡಲಾಗಿತ್ತು.

ಈ ಪೋಸ್ಟ್ ವಿರುದ್ಧ ಕಾಂಗ್ರೆಸ್ ಪಕ್ಷದಿಂದ ದೂರು ನೀಡಿದ್ದರ ಹಿನ್ನಲೆಯಲ್ಲಿ ಕರ್ನಾಟಕ ಬಿಜೆಪಿ ಪಕ್ಷದ ವಿರುದ್ಧ ಎಫ್‌ಐಆರ್ ದಾಖಲಾದೆ. ಈ ಬಗ್ಗೆ ಎಕ್ಸ್ ನಲ್ಲಿ ಮಾಹಿತಿ ಹಂಚಿಕೊಂಡಿರುವಂತ ರಾಜ್ಯ ಚುನಾವಣಾ ಆಯೋಗವು, 23.04.2024 ರಂದು ಬಿಜೆಪಿಯ ಅಧಿಕೃತ ಹ್ಯಾಂಡಲ್ನಲ್ಲಿ ಕಾಂಗ್ರೆಸ್ ಪ್ರಣಾಳಿಕೆ, ಮುಸ್ಲಿಂ ಲೀಗ್ ಪ್ರಣಾಳಿಕೆ ಎಂಬ ಶೀರ್ಷಿಕೆಯಡಿ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ ಟ್ವೀಟ್ ಮಾಡಲಾಗಿತ್ತು. ಇದರ ವಿರುದ್ಧ ದೂರು ಬಂದ ಹಿನ್ನಲೆಯಲ್ಲಿ ಮಲ್ಲೇಶ್ವರಂ ವಿಧಾನಸಭಾ ಕ್ಷೇತ್ರದ ಎಫ್‌ಎಸ್ಟಿ ತಂಡವು ಮಲ್ಲೇಶ್ವರಂ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಿದೆ ಎಂದು ತಿಳಿಸಿದೆ.

## ನಾಡಗೀತೆ ದಾಟಿ ಪ್ರಶ್ನಿಸಿ ಸಲ್ಲಿಸಿದ್ದ ರಿಟ್ ಅರ್ಜಿ ಹೈಕೋರ್ಟ್ ವಜಾ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರ ನಿಗದಿ ಪಡಿಸಿ, ಹೊರಡಿಸಲಾಗಿದ್ದಂತ ನಾಡಗೀತೆ ದಾಟಿಯನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದಂತ ರಿಟ್ ಅರ್ಜಿಯನ್ನು ಕರ್ನಾಟಕ ಹೈಕೋರ್ಟ್ ವಜಾಗೊಳಿಸಿದೆ. ಈ ಕುರಿಂತೆ ಗಾಯಕ ಕಿಕ್ಕೇರಿ ಕೃಷ್ಣಮೂರ್ತಿ ಎಂಬುವರು ಹೈಕೋರ್ಟ್ ಗೆ ರಿಟ್ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಯನ್ನು ತಿಂಗಳಾನು ಗಟ್ಟಲೇ ಹೈಕೋರ್ಟ್ ನ್ಯಾಯಪೀಠವು ವಿಚಾರಣೆ ನಡೆಸಿತು. ಅಲ್ಲದೇ ನಾಡಗೀತೆಯ ದಾಟಿಗೆ ಸಂಬಂಧಿಸಿದಂತೆ ಗಾಯಕರಿಂದ ಕೋರ್ಟ್ ಹಾಲ್ ನಲ್ಲಿಯೇ ಹಾಡಿಸಿ, ವಿಚಾರಣೆ ನಡೆಸಲಾಗಿತ್ತು.

ಇಂದು ಅಂತಿಮವಾಗಿ ನ್ಯಾಯಮೂರ್ತಿ ಕೃಷ್ಣ ಎಸ್ ದೀಕ್ಷಿತ್ ಅವರನ್ನೊಳಗೊಂಡ ನ್ಯಾಯಪೀಠವು, ನಾಡಗೀತೆ ದಾಟಿ ಪ್ರಶ್ನಿಸಿ ಸಲ್ಲಿಸಲಾಗಿದ್ದಂತ ರಿಟ್ ಅರ್ಜಿಯನ್ನು ವಜಾಗೊಳಿಸಿದೆ. ಅಂದಹಾಗೇ ರಾಜ್ಯ ಸರ್ಕಾರ ಮೈಸೂರು ಅನಂತಸ್ವಾಮಿ ಅವರ ದಾಟಿಯನ್ನು ನಾಡಗೀತೆಗೆ ಕಡ್ಡಾಯಗೊಳಿಸಲಾಗಿತ್ತು. ಕುವೆಂಪು ವಿರಚಿತ ನಾಡಗೀತೆಗೆ ಸಂಗೀತ ಸಂಯೋಜನೆ ಕೂಡ ಮಾಡಲಾಗಿತ್ತು. ಅಂತಿಮವಾಗಿ ಬುಧವಾರ ಹೈಕೋರ್ಟ್ ನ್ಯಾಯಪೀಠವು ನಿರ್ದಿಷ್ಟ ರಾಗದಲ್ಲಿ ನಾಡಗೀತೆ ಕಡ್ಡಾಗೊಳಿಸುವ ಅಧಿಕಾರವನ್ನು ರಾಜ್ಯ ಸರ್ಕಾರಕ್ಕೆ ನೀಡಿ, ರಿಟ್ ಅರ್ಜಿಯನ್ನು ವಜಾಗೊಳಿಸಿತು.

## ಮೋದಿಯೂ ಕರಿಮಣಿ ಮಾಲೀಕರಾಗಿದ್ದರಲ್ವಾ: ಪ್ರಿಯಾಂಕ್ ಖರ್ಗೆ ಟೀಕೆ!

• ಉದಯವಾಹಿನಿ, ಹುಬ್ಬಳ್ಳಿ

ಪ್ರಧಾನಿ ನರೇಂದ್ರ ಮೋದಿ ಕೊಟ್ಟ ಮಾಸ್ಟರ್ ಸ್ಟ್ರೋಕ್‌ಗೆ ದೇಶದ ಜನರು ತತ್ತರಿಸಿಹೋಗಿದ್ದಾರೆಂದು ಸಚಿವ ಪ್ರಿಯಾಂಕ್ ಖರ್ಗೆ ಗಂಭೀರವಾಗಿ ಆರೋಪ ಮಾಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಪ್ರಧಾನಿ ಮೋದಿ ಕೊಟ್ಟ ಮಾಸ್ಟರ್ ಸ್ಟ್ರೋಕ್‌ಗಳು 45 ವರ್ಷಗಳು ಕಾಣದ ನಿರುದ್ಯೋಗ ಸಮಸ್ಯೆ, ಬೆಲೆ ಏರಿಕೆ.

ಈ ಸಮಸ್ಯೆಗಳಿಂದ ಹೊರಬರಲು ಜನರು ತಮ್ಮ ಚಿನ್ನಾಭರಣ ಹಾಗೂ ಆಸ್ತಿಪಾಸ್ತಿಗಳನ್ನು ಮಾರಿಕೊಂಡಿದ್ದಾರೆಂದು ದೂರಿದರು.

ಮೋದಿ ಅವರು ಮಂಗಳ ಸೂತ್ರದ ಬಗ್ಗೆ ಪಾಠ ಮಾಡುತ್ತಿದ್ದಾರೆ. ಮಂಗಳ ಸೂತ್ರದ ಬೆಲೆ ಎಷ್ಟು ಎಂಬುವುದು ಇವರಿಗೆ ಗೊತ್ತಾ. ಇವರು ಸಹ ಕರಿಮಣಿ ಮಾಲೀಕರಾಗಿದ್ದರು. ಆದರೆ ಬೆಲೆಏರಿಕೆಯಿಂದಾಗಿ ಎಷ್ಟೋ ಜನರು ಚಿನ್ನಾಭರಣವನ್ನು ಮಾರಿಕೊಂಡಿದ್ದಾರೆ ಎಂದರು. ಮೋದಿಯೊಬ್ಬರೆ ಅಲ್ಲ ಬಿಜೆಪಿಯ ಎಲ್ಲಾ ನಾಯಕರು ಸಹ ಇದೇ ರೀತಿಯಲ್ಲಿ ಮಾಡುತ್ತಾರೆಂದು ದೂರಿದರು.

ಕೇಂದ್ರ ಸರ್ಕಾರ ಹೊಸ ಸಂಸತ್ ಕಟ್ಟಡದ ಮೊದಲ ವಿಶೇಷ ಅಧಿವೇಶನ ಸಮಯದಲ್ಲಿ ಲೋಕಸಭೆ ಮತ್ತು ರಾಜ್ಯಗಳ ವಿಧಾನಸಭೆಯಲ್ಲಿ ಮಹಿಳೆಯರಿಗೆ 33% ಮೀಸಲಾತಿ ನೀಡುವ ಮಸೂದೆಯನ್ನು ಪಾಸ್ ಮಾಡಿದೆ. 1989 ರಿಂದ ಈ ವಿಚಾರ ಸಂಸತ್ತಿನಲ್ಲಿ ಚರ್ಚೆ ಆಗುತ್ತಲೇ ಇತ್ತು. ಆದರೆ 2023ರ ಸೆಪ್ಟೆಂಬರ್‌ನಲ್ಲಿ ಮಸೂದೆಯನ್ನು ಪಾಸ್ ಮಾಡಲಾಗಿದೆ. ಅಲ್ಲದೇ ಸಶಸ್ತ್ರ ಮೀಸಲು ಪಡೆಗಳು ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿಯೂ ಮಹಿಳೆಯರ ಪಾಲ್ಗೊಳ್ಳುವಿಕೆ ಹೆಚ್ಚುತ್ತಿದೆ. ಅಲ್ಲದೇ ಮಹಿಳೆಯರಿಗಾಗಿ ನಮೋ ಡ್ರೋನ್ ದೀದಿ, ಲಕ್‌ಪತಿ ದೀದಿ, ಸ್ವಸಹಾಯ ಸಂಘಗಳಿಗೆ ಆರ್ಥಿಕ ಸಹಾಯ ನೀಡುವ ಮೂಲಕ ನಾರಿ ಶಕ್ತಿಯ ಬಲ ಹೆಚ್ಚಿಸಿದೆ ಎಂದು ಮೋದಿ ಹೇಳಿಕೊಂಡಿದ್ದಾರೆ.

■ ಕರ್ನಾಟಕ ಬಿಟ್ಟರೆ ಉಳಿದ ರಾಜ್ಯಗಳಲ್ಲಿ ಅಷ್ಟೇನು ಬೆಂಬಲ ಸಿಗಲಿಲ್ಲ ■ ಮೋದಿ ನೇತೃತ್ವದ ಎನ್‌ಡಿಎ ಬಲ ಬಹುಮತ ಬರಲಿ

# ಕರುನಾಡಿಗೆ ಭೇಟಿ ಅಧಿಕಾರ ಗಟ್ಟಿ



**ಯಾವ ಚುನಾವಣೆಯಲ್ಲಿ ಎಷ್ಟು ಸ್ಥಾನ?**

- 2019 ರ ಚುನಾವಣೆ ಬಿಜೆಪಿ 29
- 2014 ರ ಚುನಾವಣೆ ಬಿಜೆಪಿ 21
- 2009 ರ ಚುನಾವಣೆ ಬಿಜೆಪಿ 19

• ಉದಯವಾಹಿನಿ, ನವದೆಹಲಿ

2024 ರ ಲೋಕಸಭಾ ಚುನಾವಣೆಗೆ ಈಗಾಗಲೇ ಮೊದಲ ಹಂತದ ಮತದಾನ ನಡೆದಿದೆ. ಚುನಾವಣೆಯಲ್ಲಿ ಬಹುಮತಕ್ಕಾಗಿ ರಾಷ್ಟ್ರೀಯ ಪಕ್ಷಗಳ ನಾಯಕರು ದೇಶಾದ್ಯಂತ ಸುತ್ತಿ ಅಬ್ಬರದ ಪ್ರಚಾರ ನಡೆಸುತ್ತಿದ್ದಾರೆ. ಇತ್ತ ಪ್ರಾದೇಶಿಕ ಪಕ್ಷಗಳು ತಮ್ಮ ರಾಜ್ಯಗಳಲ್ಲಿ ಪ್ರಾಬಲ್ಯ ಸ್ಥಾಪಿಸಲು ಕಸರತ್ತು ನಡೆಸುತ್ತಿವೆ. ಕಳೆದ 10 ವರ್ಷಗಳಿಂದ ಉತ್ತರದಲ್ಲಿ ಪ್ರಬಲವಾಗಿರುವ ಬಿಜೆಪಿಗೆ ದಕ್ಷಿಣ ಭಾಗ ಕಬ್ಬಿಣದ ಕಡಲೆಯಂತಾಗಿದೆ. ಕರ್ನಾಟಕ ಹೊರತುಪಡಿಸಿ ದಕ್ಷಿಣ ರಾಜ್ಯಗಳಲ್ಲಿ ಅಸ್ತಿತ್ವ ಕಂಡುಕೊಳ್ಳಲು ಕಸರತ್ತು ನಡೆಸುತ್ತಿದೆ. ಈ ಭಾಗದಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟದ ಸ್ಥಾನಮಾನ ಹೇಗಿದೆ. ಕಳೆದ ಚುನಾವಣೆಯಲ್ಲಿ ಬಿಜೆಪಿಗೆ ಯಾವ ಮಟ್ಟದಲ್ಲಿ ಬೆಂಬಲ ವ್ಯಕ್ತವಾಗಿತ್ತು. ಪ್ರಧಾನಿ ಮೋದಿ ಅವರು ಜನವರಿ ತಿಂಗಳಲ್ಲಿ ಮೂರು ಬಾರಿ ದಕ್ಷಿಣ ಭಾರತಕ್ಕೆ ಭೇಟಿ ನೀಡಿದ್ದರು. ಈ ಭೇಟಿಯು ಎಲ್ಲಾ ಐದು ದಕ್ಷಿಣ ರಾಜ್ಯಗಳನ್ನು ಒಳಗೊಂಡಿತ್ತು. ಆಂಧ್ರ ಪ್ರದೇಶ, ತೆಲಂಗಾಣ, ಕರ್ನಾಟಕ, ಕೇರಳ, ತಮಿಳುನಾಡು. ಒಂದೇ ತಿಂಗಳಲ್ಲಿ ಎರಡು ಬಾರಿ ಕೇರಳ ಮತ್ತು ತಮಿಳುನಾಡಿಗೆ ಭೇಟಿ ನೀಡಿದ್ದರು. ಫೆಬ್ರವರಿ 27 ಮತ್ತು 28 ರಂದು ಕೇರಳ ಮತ್ತು ತಮಿಳುನಾಡಿಗೆ ಮತ್ತೆ ಭೇಟಿ ಕೊಟ್ಟಿದ್ದರು. ಏಪ್ರಿಲ್ ತಿಂಗಳಲ್ಲಿ ಕರ್ನಾಟಕಕ್ಕೆ ಎರಡು ಬಾರಿ ಬಂದು ಪ್ರಚಾರ ನಡೆಸಿದ್ದಾರೆ. ಕಳೆದ ಎರಡು ಲೋಕಸಭಾ ಚುನಾವಣೆಗಳಲ್ಲಿ ಪಕ್ಷವು ಪ್ರಚಂಡ ಯಶಸ್ಸನ್ನು ಕಂಡಿದ್ದರೂ, ದಕ್ಷಿಣ ಭಾಗದಲ್ಲಿ ಕರ್ನಾ ಟಕ ಬಿಟ್ಟರೆ ಉಳಿದ ರಾಜ್ಯಗಳಲ್ಲಿ ಅಷ್ಟೇನು ಬೆಂಬಲ ಸಿಗಲಿಲ್ಲ. ಇದೆಲ್ಲವನ್ನೂ ಗಮನದಲ್ಲಿಟ್ಟುಕೊಂಡು ಈ ಬಾರಿ ಬಿಜೆಪಿ ಹಲವು ತಂತ್ರಗಾರಿಕೆ ರೂಪಿಸಿದೆ. 2019ರಲ್ಲಿ ಐತಿಹಾಸಿಕ ವಿಜಯದ ಹೊರತಾಗಿಯೂ, ದಕ್ಷಿಣದ ಐದು ರಾಜ್ಯಗಳಲ್ಲಿನ 129 ಸ್ಥಾನಗಳಲ್ಲಿ ಬಿಜೆಪಿ ಕೇವಲ 29 ಸ್ಥಾನಗಳನ್ನು ಜಯಿಸಿತ್ತು. ಈ 29 ರಲ್ಲಿ ಕರ್ನಾಟಕದ್ದೇ 25 ಸ್ಥಾನಗಳಿದ್ದವು. ಉಳಿದ ನಾಲ್ಕು ಸ್ಥಾನ ತೆಲಂಗಾಣ ರಾಜ್ಯದ್ದು. ತಮಿಳುನಾಡು ಮತ್ತು ಕೇರಳದಲ್ಲಿ ಬಿಜೆಪಿ ಒಂದೇ ಒಂದು ಸ್ಥಾನ ಕೂಡ ಗೆದ್ದಿಲ್ಲ. 2014 ರ ಚುನಾವಣೆಯಲ್ಲಿ ದಕ್ಷಿಣದಲ್ಲಿ ಬಿಜೆಪಿ 21 ಸ್ಥಾನಗಳನ್ನಷ್ಟೇ ಗೆದ್ದಿತ್ತು. 2009 ರಲ್ಲಿ 19 ಸ್ಥಾನ, 2004 ಮತ್ತು 1999 ರಲ್ಲಿ 18 ಸ್ಥಾನ, 1998 ರಲ್ಲಿ 20 ಸ್ಥಾನಗಳಲ್ಲಿ ಜಯ ಸಾಧಿಸಿತ್ತು. ಈ ರಾಜ್ಯಗಳಲ್ಲಿ ಇದಕ್ಕೂ ಮೊದಲು ನಡೆದ ಚುನಾವಣೆಗಳಲ್ಲಿ ಬಿಜೆಪಿ ಸಂಖ್ಯೆಯು 7 ಕ್ಕಿಂತ ಕಡಿಮೆ ಇತ್ತು. ಈ ಗ್ರಹಿಕೆಯು ಚುನಾವಣೆಯಲ್ಲಿ ಪಕ್ಷಕ್ಕೆ ಹಿನ್ನಡೆಯಾಗುವಂತೆ ಮಾಡಿದೆ. ಅಷ್ಟೇ ಅಲ್ಲ, ದಕ್ಷಿಣದ ರಾಜಕೀಯ ಭೂದೃಶ್ಯವು ಪ್ರತಿ ರಾಜ್ಯದಲ್ಲಿ ಒಂದು ಅಥವಾ ಎರಡು ಪ್ರಬಲ ಪ್ರಾದೇಶಿಕ ಪಕ್ಷಗಳನ್ನು ಹೊಂದಿದೆ. ಡಿಎಂಕೆ, ಎಐಎಡಿಎಂಕೆ, ಟಿಡಿಪಿ, ಐಎಸ್‌ಆರ್‌ಸಿಪಿ, ಬಿಆರ್‌ಎಸ್‌ನಂತಹ ಪಕ್ಷಗಳು ಪ್ರಾದೇಶಿಕವಾಗಿ ಪ್ರಬಲವಾಗಿವೆ.ಈ ಪಕ್ಷಗಳು ವಿಧಾನಸಭಾ ಮತ್ತು ಲೋಕಸಭಾ ಚುನಾವಣೆಗಳಲ್ಲಿ ರಾಷ್ಟ್ರೀಯ ವಿಷಯಗಳಿಗಿಂತ ಪ್ರಾದೇಶಿಕ ವಿಷಯಗಳ ಮೇಲೆ ಗಮನ ಕೇಂದ್ರೀಕರಿಸುತ್ತವೆ. ಇದು ಬಿಜೆಪಿಗೆ ತನ್ನದೇ ಆದ ಗಮನಾರ್ಹ ಅಸ್ತಿತ್ವ ಸ್ಥಾಪಿಸಲು ಸವಾಲಾಗಿದೆ. ಎಐಎಡಿಎಂಕೆ ದೂರವಿಟ್ಟ ನಂತರ ಬಿಜೆಪಿಯು ಪಿಎಂಕೆ ಜೊತೆ ಮೈತ್ರಿ ಮಾಡಿಕೊಂಡಿದೆ. ಜೊತೆಗೆ ಎಐ ಎಡಿಎಂಕೆ ಹೊರಹಾಕಿದ ಒ.ಪನ್ನೀರಸೆಲ್ವಂ ಬಿಜೆಪಿಗೆ ಬೆಂಬಲ ಘೋಷಿಸಿದ್ದಾರೆ. ಡಿಎಂಡಿಕೆ, ಎಐಡಿಎಂಎಂಕೆ ಜೊತೆಗೂ ಬಿಜೆಪಿ ಮೈತ್ರಿ ಮಾತುಕತೆ ನಡೆಸುತ್ತಿದೆ. ಇಷ್ಟೆಲ್ಲಾ ಸಿದ್ಧತೆ ಇದ್ದರೂ ಬಿಜೆಪಿಯು ತಮಿಳರ ವಿರೋಧಿ ಎಂಬ ಮತದಾರರ ಅಭಿಪ್ರಾಯ ತೊಡೆದು ಹಾಕುವ ಕೆಲಸ ಮಾಡುತ್ತಿಲ್ಲ. ಇದರಿಂದ ಪಕ್ಷಕ್ಕೆ ಹಿನ್ನಡೆಯಾಗಬಹುದು ಎಂದು ರಾಜಕೀಯ ವಿಶ್ಲೇಷಕರ ಅಭಿಪ್ರಾಯ. ಇತ್ತ ಕಾಂಗ್ರೆಸ್ ಪಕ್ಷ ತಮಿಳುನಾಡಿನಲ್ಲಿ ಪ್ರಬಲವಾಗಿರುವ ಡಿಎಂಕೆ ಜೊತೆ ಮೈತ್ರಿ ಮಾಡಿಕೊಂಡಿದೆ. ಆಡಳಿತಾರೂಢ ಡಿಎಂಕೆಗೆ ಈ ಚುನಾವಣೆಯಲ್ಲಿ ತಮಿಳುನಾಡಿನ ಜನರಿಂದ ಉತ್ತಮ ಬೆಂಬಲ ಸಿಗುವ ಸಾಧ್ಯತೆ ಇದೆ. ಕರ್ನಾಟಕದಲ್ಲಿ ಕಾಂಗ್ರೆಸ್ ಆಡಳಿತವಿದೆ. ಐದು ಗ್ಯಾರಂಟಿಗಳ ಕಾರಣ ಜನರು ಕಾಂಗ್ರೆಸ್‌ಗೆ 135 ಸ್ಥಾನ ನೀಡಿದ್ದಾರೆ. ಇದೇ ಗ್ಯಾರಂಟಿಗಳನ್ನು ಮುಂದಿಟ್ಟುಕೊಂಡು ಕಾಂಗ್ರೆಸ್ ಲೋಕಸಭಾ ಚುನಾವಣೆಗೂ ಪ್ರಚಾರ ನಡೆಸುತ್ತಿದೆ. ಕರ್ನಾಟಕದಲ್ಲಿ ಆಡಳಿತಾರೂಢ ಕಾಂಗ್ರೆಸ್ ಮಣಿಸಲು ಬಿಜೆಪಿ-ಜೆಡಿಎಸ್ ಮೈತ್ರಿ ಮಾಡಿಕೊಂಡಿವೆ. ರಾಜ್ಯದಲ್ಲಿ ಜೆಡಿಎಸ್‌ಗೆ ಮೂರು ಸ್ಥಾನಗಳನ್ನು ಬಿಟ್ಟುಕೊಟ್ಟಿರುವ ಬಿಜೆಪಿ 25 ಕ್ಷೇತ್ರಗಳಲ್ಲಿ ತನ್ನ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಬಿಜೆಪಿಗೆ ರಾಜ್ಯದಲ್ಲಿ ಮೈತ್ರಿ ತಂತ್ರಗಾರಿಕೆ ಕೈ ಹಿಡಿಯುತ್ತಾ ಎಂಬುದನ್ನು ಕಾದು ನೋಡಬೇಕಿದೆ.

**ಪ್ರಾಬಲ್ಯ ಹೆಚ್ಚಿಸಲು ಕಮಲ ಕಸರತ್ತು**

**ಚುನಾವಣೆ ಪ್ರಚಾರ ಅಬ್ಬರ**

- ■ ಈ ಲೋಕಸಭಾ ಚುನಾವಣೆಗೆ ಬಿಜೆಪಿ ಪ್ರಚಾರದ ಪ್ರಮುಖ ಭಾಗವಾಗಿ ದಕ್ಷಿಣ ಭಾರತ ತೋರುತ್ತಿದೆ.
- ■ ದಕ್ಷಿಣ ಭಾರತದಲ್ಲಿ ಜನರು ಬಿಜೆಪಿಯನ್ನು ಹಿಂದಿ, ಹಿಂದೂ ಮತ್ತು ಹಿಂದುತ್ವದ ಪಕ್ಷವೆಂದು ನೋಡುತ್ತಾರೆ.
- ■ ಕರ್ನಾಟಕದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲು ಲಿಂಗಾಯತ ಮತಗಳನ್ನು ಕ್ರೋಢೀಕರಿಸಿದ ಕೀರ್ತಿ ಬಿ.ಎಸ್‌ಯಡಿಯೂರಪ್ಪ ಅವರಿಗೆ ಸಲ್ಲುತ್ತದೆ.
- ■ ಬಿಜೆಪಿ ಈ ಬಾರಿ ತಮಿಳುನಾಡಿನಲ್ಲಿ ತನ್ನ ನೆಲೆ ಪರೀಕ್ಷೆಗೆ ಮುಂದಾಗಿದೆ.

### ಬಿಜೆಪಿಗೆ ಕರ್ನಾಟಕವೇ ಗಟ್ಟಿ

ಕರ್ನಾಟಕದಲ್ಲಿ 'ಲೋಕ' ರಾಜಕೀಯ ಚಿತ್ರಣವೇ ಬೇರೆ ಇದೆ. ಈ ರಾಜ್ಯದಲ್ಲಿ ಬಿಜೆಪಿ ಪ್ರಬಲವಾಗಿದೆ. ನರೇಂದ್ರ ಮೋದಿ ಅವರು ಕರ್ನಾಟಕ ಮತ್ತು ತೆಲಂಗಾಣದ ಕೆಲವು ನಗರ ಪ್ರದೇಶಗಳಲ್ಲಿ ಗೆಲುವಿಗೆ ಹೆಚ್ಚಿನ ಪ್ರಾಮುಖ್ಯತೆ ನೀಡಿದ್ದಾರೆ. ಆದರೆ ಪ್ರಬಲ ರಾಜ್ಯ ಘಟಕಗಳು ಮತ್ತು ಕಾರ್ಯಕರ್ತರ ಕೊರತೆ ಬಿಜೆಪಿಗೆ ಹಿನ್ನಡೆಗೆ ಕಾರಣವಾಗಿದೆ. ಆಂಧ್ರದ ಮಾಜಿ ಸಿಎಂ, ಟಿಡಿಪಿ ಮುಖ್ಯಸ್ಥ ಎನ್.ಚಂದ್ರಬಾಬು ನಾಯ್ಡು ಹಾಗೂ ಜನಸೇನಾ ಪಕ್ಷದ ಪವನ್ ಕಲ್ಯಾಣ್ ಬಿಜೆಪಿ ಜೊತೆ ಮೈತ್ರಿ ಮಾಡಿಕೊಂಡಿದ್ದಾರೆ. ರಾಜ್ಯದಿಂದ ಬಿಜೆಪಿ 6 ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಕೇರಳದಲ್ಲಿ ಬಿಜೆಪಿ ಅಸ್ತಿತ್ವ ಇಲ್ಲ. ಈ ಬಾರಿ ರಾಜ್ಯದಲ್ಲಿ 16 ಅಭ್ಯರ್ಥಿಗಳನ್ನು ಬಿಜೆಪಿ ಕಣಕ್ಕಿಳಿಸಿದೆ.

### ಸಂವಿಧಾನದ 370ನೇ ವಿಧಿ ರದ್ದು

ಜಮ್ಮು ಮತ್ತು ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ನೀಡುವ ಸಂವಿಧಾನದ 370ನೇ ವಿಧಿಯನ್ನು ರದ್ದುಗೊಳಿಸಿತು. ಭಾರತದ ಸಂವಿಧಾನದ 370ನೇ ವಿಧಿಯು ಉತ್ತರ ಭಾರತದಲ್ಲಿ ವಿವಾದಿತ ಪ್ರದೇಶವಾದ ಜಮ್ಮು ಮತ್ತು ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ಕಲ್ಪಿಸಿಕೊಟ್ಟಿತ್ತು. ಇದು ಜಮ್ಮು ಮತ್ತು ಕಾಶ್ಮೀರಕ್ಕೆ ಪ್ರತ್ಯೇಕ ಸಂವಿಧಾನ, ರಾಜ್ಯಧ್ವಜ ಮತ್ತು ಆಂತರಿಕ ಆಡಳಿತ ಸ್ವಾಯತತ್ತೆಯನ್ನು ಒದಗಿಸಿತ್ತು. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಈ ವಿಧಿಯನ್ನ ರದ್ದುಗೊಳಿಸಿತು. 370ನೇ ವಿಧಿ ರದ್ದತಿಯ ನಂತರ ಆ ಪ್ರದೇಶ ಜಾಗತಿಕ ಕಾರ್ಯಕ್ರಮಗಳ ತಾಣವಾಗಿ ಬದಲಾಗುತ್ತಿದೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ. ಅಲ್ಲದೇ ಇತ್ತೀಚೆಗೆ ಪ್ರಮುಖ ಹೂಡಿಕೆಗಾದರರೂ ಜಮ್ಮು ಮತ್ತು ಕಾಶ್ಮೀರದಂತಹ ಪ್ರದೇಶಗಳಲ್ಲಿ ಹೂಡಿಕೆಗೆ ಮನಸ್ಸು ಮಾಡುತ್ತಿರುವುದು ಗಮನಾರ್ಹ.

### ಜಗತ್ತು ಒಂದುಗೂಡಬೇಕು: ಮೋದಿ

ನೈಸರ್ಗಿಕ ವಿಕೋಪಗಳು ಹೆಚ್ಚುತ್ತಿರುವುದು ಜನರ ಮೇಲೆ ತೀವ್ರ ಪರಿಣಾಮ ಬೀರುತ್ತಿದೆ ಎಂದು ಆತಂಕ ವ್ಯಕ್ತಪಡಿಸಿರುವ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಇಂತಹ ಪರಿಸ್ಥಿತಿ ಎದುರಿಸಲು ಜಗತ್ತು ಒಂದುಗೂಡಬೇಕು ಎಂದು ಕರೆ ನೀಡಿದರು. ವಿಪತ್ತು ಸ್ಥಿತಿಸ್ಥಾಪಕ ಮೂಲಸೌಕರ್ಯ ಕುರಿತ ಅಂತರರಾಷ್ಟ್ರೀಯ ಸಮ್ಮೇಳನದ 6ನೇ ಆವೃತ್ತಿಯಲ್ಲಿ ಆಡಿದ ಧ್ವನಿಮುದ್ರಿತ ಸಂದೇಶದಲ್ಲಿ ಅವರು, ಉತ್ತಮ ನಾಳೆಗಾಗಿ ದೇಶಗಳು ಇಂದು ಚೇತರಿಸಿಕೊಳ್ಳುವ ಮೂಲಸೌಕರ್ಯದಲ್ಲಿ ಹೂಡಿಕೆ ಮಾಡಬೇಕು. ಸ್ಥಿತಿಸ್ಥಾಪಕತ್ವವು ಹೊಸ ಮೂಲಸೌಕರ್ಯ ಸೃಷ್ಟಿಗೆ ಅಂಶಗಳ ಅಗತ್ಯವಿದೆ ಇದರ ಜೊತೆಗೆ ವಿಪತ್ತುಗಳ ನಂತರದ ವಿಪತ್ತಿನ ಪುನರ್ನಿರ್ಮಾಣದ ಭಾಗವಾಗಿರಿ ಎಂದು ಕರೆ ನೀಡಿದ್ದಾರೆ. ನಾವೆಲ್ಲರೂ ಸಾಕ್ಷಿಯಾಗಿರುವಂತೆ, ನೈಸರ್ಗಿಕ ವಿಕೋಪಗಳು ಹೆಚ್ಚು ತೀವ್ರವಾಗುತ್ತಿವೆ. ಅವು ಉಂಟುಮಾಡುವ ಹಾನಿಯನ್ನು ಸಾಮಾನ್ಯವಾಗಿ ಡಾಲರ್‌ಗಳಲ್ಲಿ ವರದಿ ಮಾಡಲಾಗುತ್ತದೆ, ಆದರೆ ಜನರು, ಕುಟುಂಬಗಳು ಮತ್ತು ಸಮುದಾಯಗಳ ಮೇಲೆ ಅವುಗಳ ನಿಜವಾದ ಪ್ರಭಾವವು ಕೇವಲ ಸಂಖ್ಯೆಗಳನ್ನು ಮೀರಿದೆ. ಭೂಕಂಪಗಳು ಮನೆಗಳನ್ನು ನಾಶಮಾಡುತ್ತವೆ, ಸಾವಿರಾರು ಜನರನ್ನು ನಿರಾಶ್ರಿತರನ್ನಾಗಿ ಮಾಡುತ್ತವೆ. ನೈಸರ್ಗಿಕ ವಿಕೋಪಗಳು ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಅಡ್ಡಿಪಡಿಸಬಹುದು, ಜನರ ಆರೋಗ್ಯವನ್ನು ಅಪಾಯಕ್ಕೆ ತಳ್ಳಬಹುದು. ಕೆಲವು ವಿಪತ್ತುಗಳು ಶಕ್ತಿ ಸ್ಥಾವರಗಳ ಮೇಲೆ ಪರಿಣಾಮ ಬೀರಬಹುದು, ಇದು ಸಂಭಾವ್ಯ ಅಪಾಯಕಾರಿ ಪರಿಸ್ಥಿತಿಗಳಿಗೆ ಕಾರಣವಾಗಬಹುದು. ಈ ವಿಷಯಗಳು ಮಾನವ ಪ್ರಭಾವವನ್ನು ಹೊಂದಿವೆ.

**ಎಷ್ಟು ಅಭ್ಯರ್ಥಿಗಳು ಕಣಕ್ಕೆ**

| | |
|---|---|
| ಕರ್ನಾಟಕ | 25 |
| ಕೇರಳ | 16 |
| ತಮಿಳುನಾಡು | 23 |
| ತೆಲಂಗಾಣ | 17 |
| ಆಂಧ್ರ ಪ್ರದೇಶ | 6 |



## ಕೈ ಚುನಾವಣಾ ಪ್ರಣಾಳಿಕೆ ದೇಶವನ್ನು ಮಾವೋವಾದಿ ದೇಶ ಮಾಡಲು ಹೊರಟಿದೆ

• ಉದಯವಾಹಿನಿ, ಹುಬ್ಬಳ್ಳಿ

ಕಾಂಗ್ರೆಸ್ ಚುನಾವಣಾ ಪ್ರಣಾಳಿಕೆ ದೇಶವನ್ನು ಮಾವೋವಾದಿ ದೇಶ ಮಾಡಲು ಹೊರಟಿದೆ ಎಂಬುದು ರಾಹುಲ್ ಗಾಂಧಿ ಭಾಷಣದಿಂದ ಗೊತ್ತಾಗುತ್ತಿದೆ ಎಂದು ಧಾರವಾಡ ಬಿಜೆಪಿ ಅಭ್ಯರ್ಥಿ ಪ್ರಹ್ಲಾದ್ ಜೋಶಿ ವಾಗ್ದಾಳಿ ನಡೆಸಿದ್ದಾರೆ. ಜನರ ಬಳಿ ಎರಡು ಬೈಕ್, ಮನೆ ಇದ್ದರೆ ಒಂದನ್ನು ಕಸಿದುಕೊಳ್ಳುತ್ತಾರೆ.

ಕಾಂಗ್ರೆಸ್ ಪಕ್ಷ ದೇಶಕ್ಕೆ ಸಂಪತ್ತು ಸೃಷ್ಟಿ ಮಾಡುವವರ ವಿರುದ್ಧ ಹೊರಟಿದೆ. ಮಾವೋವಾದಿ ಮನಸ್ಥಿತಿ ಇಟ್ಟುಕೊಂಡು ಎಲ್ಲರನ್ನೂ ಟಾರ್ಗೆಟ್ ಮಾಡುತ್ತಿದ್ದಾರೆ. ಇಂತಹ ಮಾವೋವಾದಿ ವಿಚಾರಗಳ ಬಗ್ಗೆ ಜನ ಎಚ್ಚರವಾಗಿರಬೇಕು ಎಂದು ಕಿಡಿಕಾರಿದರು. ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಿನಿಂದ ಪಾಕಿಸ್ತಾನಿ ಮಾದರಿ ಆಡಳಿತ ನಡೆಯುತ್ತಿದೆ. ಕಾಂಗ್ರೆಸ್‌ನವರು ತುಷ್ಟೀಕರಣದ ಪರಾಕಾಷ್ಠೆ ತಲುಪುತ್ತಿದ್ದಾರೆ.

ನಟಿ ಹರ್ಷಿಕಾ ಪೂಣಚ್ಚ, ಭುವನ್ ಪೊನ್ನಣ್ಣ ಕನ್ನಡ ಮಾತನಾಡಿದ್ದಕ್ಕೆ ಹಲ್ಲೆ ಮಾಡಿದ್ದಾರೆ. ನನ್ನನ್ನು ಭೇಟಿಯಾಗಿ ತಮಗೆ ಸೂಕ್ತ ಭದ್ರತೆ ಇಲ್ಲ ಎಂದು ಹೇಳಲು ಬಂದಿದ್ದರು. ನಟ-ನಟಿಯರಿಗೇ ರಕ್ಷಣೆ ಇಲ್ಲವೆಂದ ಮೇಲೆ ಸಾಮಾನ್ಯಜರ ಪಾಡೇನು? ಎಂದು ಪ್ರಶ್ನಿಸಿದರು.



### ಸಿಎಂ ಸಿದ್ದರಾಮಯ್ಯರಿಂದ ಸಾಂತ್ವನದ ನಾಟಕ

ನೇಹಾ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ಅವರು ರಾಜಕೀಯ ನಷ್ಟ ತುಂಬಿಸಿಕೊಳ್ಳಲು ಸಾಂತ್ವನದ ನಾಟಕವಾಡಿದ್ದಾರೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಕಿಡಿಕಾರಿದ್ದಾರೆ. ವಿದ್ಯಾರ್ಥಿ ನೇಹಾ ಹತ್ಯೆಯಾಗಿ 6 ದಿನಗಳಾದ ನಂತರ ಸಿಎಂ ಸಿದ್ದರಾಮಯ್ಯ ಅವರು ಅನುಕಂಪ ತೋರಿದ್ದಾರೆ. ನಿಜಕ್ಕೂ ನೇಹಾ ಕುಟುಂಬದ ಮೇಲೆ ಅವರಿಗೆ ನಿಜವಾದ ಕಾಳಜಿ ಇದ್ದಿದ್ದರೆ, ಪ್ರಕರಣ ನಡೆದ ದಿನವೇ ನೇಹಾ ತಂದೆ ನಿರಂಜನ ಹಿರೇಮಠ ಅವರಿಗೆ ಸಾಂತ್ವನ, ಧೈರ್ಯ ಹೇಳುತ್ತಿದ್ದರು. ಈ ಪ್ರಕರಣದ ಕುರಿತು ಸಾಕಷ್ಟು ವಿರೋಧ ವ್ಯಕ್ತವಾಗುತ್ತಿದ್ದಂತೆ ಮತದಾರರು ತಿರುಗಿ ಬೀಳುವ ಭಯದಿಂದ ಸಿಎಂ ಸಾಂತ್ವನದ ನಾಟಕವಾಡಿದ್ದಾರೆ ಎಂದು ಜೋಶಿ ಆರೋಪಿಸಿದ್ದಾರೆ. ನೇಹಾ ಹತ್ಯೆ ಪ್ರಕರಣದಲ್ಲಿ ನಾವು ರಾಜಕೀಯ ಮಾಡುತ್ತಿಲ್ಲ ಎಂದು ಅವರು, ಯಾರಿಗೇ ಅನ್ಯಾಯವಾದರೂ ನಾವು ಧ್ವನಿ ಎತ್ತುತ್ತೇವೆ. ನನ್ನ ಕ್ಷೇತ್ರದಲ್ಲಿ ಮಹಿಳೆಯರಿಗೆ ಅನ್ಯಾಯವಾಗಿದೆ. ಹೀಗಿದ್ದಾಗಲೂ ನಾನು ಸುಮ್ಮನಿರಬೇಕಿತ್ತೇ? ಎಂದು ಪ್ರಶ್ನಿಸಿದ್ದಾರೆ.

## ಕಾಂಗ್ರೆಸ್‌ಗೆ ಬೆಂಬಲ ಸೂಚಿಸಿದ ರಾಜ್ಯ ಒಕ್ಕಲಿಗ ಸಂಘ; ಡಿಕೆಶಿಯನ್ನು ಸಿಎಂ ಮಾಡುವುದಾಗಿ ಶಪಥ


• ಉದಯವಾಹಿನಿ, ಬೆಂಗಳೂರು

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಒಕ್ಕಲಿಗರ ಸಂಘ ಬೆಂಬಲ ಸೂಚಿಸಿದೆ. ಬಿಜೆಪಿ, ಜೆಡಿಎಸ್‌ನಲ್ಲಿ ಒಕ್ಕಲಿಗರ ನಾಯಕರನ್ನು ಕಡೆಗಣಿಸಲಾಗಿದೆ ಎಂದು ಅಸಮಾಧಾನ ಹೊರಹಾಕಿರುವ ಸಂಘದ ಮುಖಂಡರು, ಡಿ.ಕೆ. ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡಿಯೇ ಮಾಡುತ್ತೇವೆ ಎಂದು ಶಪಥ ಮಾಡಿದ್ದಾರೆ.

ನಗರದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ರಾಜ್ಯ ಒಕ್ಕಲಿಗರ ಸಂಘದ ಅಧ್ಯಕ್ಷ ಹನುಮಂತಯ್ಯ ಅವರು ಮಾತನಾಡಿದ್ದು, ಕಾಂಗ್ರೆಸ್ ಪಕ್ಷ ಒಕ್ಕಲಿಗ ಸಂಘಕ್ಕೆ ಅತಿ ಹೆಚ್ಚು ಕೊಡುಗೆ ನೀಡಿದೆ.

ಮಾಜಿ ಮುಖ್ಯಮಂತ್ರಿ ದಿ. ದೇವರಾಜ ಅರಸು ಅವರು ಒಕ್ಕಲಿಗ ಸಮುದಾಯಕ್ಕೆ ಶೇ. 11 ಮೀಸ ಲಾತಿ ನೀಡಿದರು. ಕಾಲೇಜು ಕಟ್ಟಲು ಕಾಂಗ್ರೆಸ್ ಸರ್ಕಾರ ಬನಶಂಕರಿ ಯಲ್ಲಿ 9 ಎಕರೆ ಭೂಮಿ ನೀಡಿದೆ. ಈಗ ಡಿಕೆಶಿಯವರು ಒಕ್ಕಲಿಗ ಸಂಘದ ಮೆಡಿಕಲ್ ಕಾಲೇಜಿಗೆ ಕೋಟ್ಯಂತರ ಬಡ್ಡಿ ಹಣ ಮನ್ನಾ ಮಾಡಲು ಮುಂದಾಗಿದ್ದಾರೆ ಎಂದು ಹೇಳುವ ಮೂಲಕ ಕಾಂಗ್ರೆಸ್‌ಗೆ ಬೆಂಬಲ ಸೂಚಿಸಿದ್ದಾರೆ.

ಇನ್ನು ಇದು ಕಾಂಗ್ರೆಸ್ ಪ್ರೇರಿತ ಸುದ್ದಿಗೋಷ್ಠಿ ಎಂದು ಒಪ್ಪಿಕೊಂಡ ಒಕ್ಕಲಿಗ ಸಂಘದ ಅಧ್ಯಕ್ಷ ಹನುಮಂತಯ್ಯ, ದೇವೆಗೌಡರ ವಿರುದ್ಧ ಕಿಡಿ ಕಾರಿದರು. ಒಕ್ಕಲಿಗ ಸಮಾಜದ ಮತ್ತೊಂದು ಪೀಠವನ್ನು ಜೆಡಿಎಸ್ ಸ್ಥಾಪಿಸಿತು. ರಾಜಕೀಯವಾಗಿ ಎಚ್.ಎನ್. ನಂಜೇಗೌಡ. ಬೈರೇಗೌಡ, ನಾಗೇಗೌಡ, ಬಚ್ಚೇಗೌಡ. ನಟ ಅಂಬರೀಶ್ ಅವರನ್ನು ಪಕ್ಷದಿಂದ ಹೊರ ಹಾಕಿದ್ದ ಜೆಡಿಎಸ್. ಬಿಜೆಪಿ ಪಕ್ಷದಿಂದ ಕೂಡ ಒಕ್ಕಲಿಗ ಸಂಘಕ್ಕೆ ಯಾವುದೇ ಕೊಡುಗೆ ಇಲ್ಲ. ಸದಾನಂದ ಗೌಡರನ್ನು ಮುಖ್ಯಮಂತ್ರಿ ಸ್ಥಾನದಿಂದ ಇಳಿಸಿದರು. ಜಗದೀಶ್ ಶೆಟ್ಟರ್ ಸಿಎಂ ಆಗಿದ್ದಾಗ ಶ್ರೀಗಂಧದ ಕಾವಲು ಒಕ್ಕಲಿಗ ಸಂಘದ ಜಾಗವನ್ನು ಬೇರೆಯವರಿಗೆ ಮಂಜೂರು ಮಾಡಿದರು ಎಂದು ಅಸಮಾಧಾನ ಹೊರ ಹಾಕಿದರು.



## ಕಾಂಗ್ರೆಸ್ ಡೇಂಜರ್ ಪೋಸ್ಟರ್ ಬಿಡುಗಡೆ ಮಾಡಿದ ಬಿಜೆಪಿ

● ಕಾಂಗ್ರೆಸ್ ಪಕ್ಷವು ಧಿಕಾರಕ್ಕೆ ದಿನದಿಂದ ಒಲೈಕೆ, ತುಷ್ಟೀಕರಣದ ರಾಜಕಾರಣ ಮುಂದುವರೆಸಿದೆ

• ಉದಯವಾಹಿನಿ, ಬೆಂಗಳೂರು



ಕರ್ನಾಟಕ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವು ಅಧಿಕಾರಕ್ಕೆ ಬಂದ ದಿನದಿಂದ ಓಲೈಕೆ, ತುಷ್ಟೀಕರಣದ ರಾಜಕಾರಣ ಮುಂದುವರೆಸಿದೆ. ಕಾನೂನು- ಸುವ್ಯವಸ್ಥೆ ಸಂಪೂರ್ಣ ಕುಸಿದುಹೋಗಿದೆ ಎಂದು ರಾಜ್ಯದ ಮಾಜಿ ಉಪ ಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥನಾರಾಯಣ್ ಅವರು ಟೀಕಿಸಿದರು.

ನಗರದ ಹೋಟೆಲ್ ಜಿ.ಎಂ. ರಿಜಾಯ್ಸ್ ನ ಬಿಜೆಪಿ ಚುನಾವಣಾ ಮಾಧ್ಯಮ ಕೇಂದ್ರದಲ್ಲಿ ಬುಧವಾರ ಕಾಂಗ್ರೆಸ್ ಸರಕಾರದ ವಿರುದ್ಧ ಪೋಸ್ಟರ್ ಬಿಡುಗಡೆ ಬಳಿಕ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಓಲೈಕೆ ಜೊತೆಗೆ ಭಯೋತ್ಪಾದಕರ ವಿಚಾರದಲ್ಲಿ ಮೃದು ಧೋರಣೆ ಈ ಸರಕಾರದ್ದು ಎಂದು ಆಕ್ಷೇಪ ವ್ಯಕ್ತಪಡಿಸಿದರು. ಕಾಂಗ್ರೆಸ್ ಡೇಂಜರ್ ಪೋಸ್ಟರ್ ಇವತ್ತು ಬಿಡುಗಡೆ ಮಾಡಿದ್ದೇವೆ. ಕ್ಯೂ ಆರ್ ಕೋಡ್ ಕೊಟ್ಟಿದ್ದು, ಘಟನಾವಳಿಗಳನ್ನು ವೀಕ್ಷಿಸಬಹುದು ಎಂದರು. ನೇಹಾ ಹಿರೇಮಠದ ಹತ್ಯೆಯ ಲವ್ ಜಿಹಾದ್ ಸಂಬಂಧಿತ ಹುಬ್ಬಳ್ಳಿಯ ಘಟನೆ, ಸಿಎಂ ಹೇಳಿಕೆ, ಗೃಹ ಇಲಾಖೆ, ಕಮೀಷನರ್ ನಡವಳಿಕೆ ನೇಹಾರ ಪೋಷಕರಿಗೆ, ಕುಟುಂಬಕ್ಕಾದ ನೋವನ್ನು ಗಮನಿಸಬಹುದು.

**ಕಾಲೇಜಿಗೆ ಹೆಣ್ಮಕ್ಕಳು ಹೋಗ ಬೇಕೇ**

ಕಾಲೇಜಿಗೆ ಹೆಣ್ಮಕ್ಕಳು ಹೋಗಬೇಕೇ ಎಂಬ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಕಳವಳ ಸೂಚಿಸಿದರು.

ರಾಮೇಶ್ವರಂ ಕೆಫೆ ಬಾಂಬ್ ಪ್ರಕರಣವನ್ನು ವೈಯಕ್ತಿಕ ಎಂದಿದ್ದರು. ಕೊನೆಗೆ ಆರೋಪಿಗಳನ್ನು ಪತ್ತೆ ಹಚ್ಚಲಾಗಿದೆ. ಕುಕ್ಕರ್ ಬಾಂಬ್ ವಿಚಾರದಲ್ಲಿ ಭಯೋತ್ಪಾದಕರನ್ನು ಸೆರೆಹಿಡಿದಾಗ ಅವರನ್ನು ಭಯೋತ್ಪಾದಕರೆಂದು ಕರೆಯದಂತೆ ಹೇಳಿದ್ದರು ಎಂದು ಗಮನ ಸೆಳೆದರು.

ಜೈ ಶ್ರೀರಾಮ್ ಎಂದವರ ಮೇಲೆ ಹಲ್ಲೆ, ಹನುಮಾನ ಚಾಲೀಸ ಹಾಕಿದವರ ಮೇಲೆ ಹಲ್ಲೆ, ಮೋದಿಯವರ ಕುರಿತ ಹಾಡು ಬರೆದವರ ಮೇಲೆ ಹಲ್ಲೆ ನಡೆದಿದೆ. ಇದೆಲ್ಲಕ್ಕೂ ಕಾಂಗ್ರೆಸ್ ಸರಕಾರವೇ ಕಾರಣ ಎಂದು ಟೀಕಿಸಿದರು.

ಶಾಸಕ ಸುರೇಶ್‌ಕುಮಾರ್ ಅವರು ಮಾತನಾಡಿ, ಮತ ಚಲಾಯಿಸುವ ಮೊದಲು ದಯವಿಟ್ಟು ಕಾಂಗ್ರೆಸ್ ಪ್ರಣಾಳಿಕೆಯನ್ನು ಗಮನಿಸಿ. ಇಂಡಿ ಒಕ್ಕೂಟದ ಬೇರೆ ಬೇರೆ ಪಕ್ಷಗಳ ನಿಲುವನ್ನೂ ಗಮನಿಸಿ ಎಂದು ವಿನಂತಿಸಿದರು. ಇಂಡಿ ಒಕ್ಕೂಟ, ಕಾಂಗ್ರೆಸ್, ಈ ಒಕ್ಕೂಟದ ಪಾಲುದಾರರು ಭಾರತಕ್ಕೆ ಯಾವ ಗತಿ ತರಬಹುದು ಎಂಬುದು ಇವರ ಹೇಳಿಕೆಗಳಿಂದ ಗೊತ್ತಾಗುತ್ತದೆ ಎಂದು ವಿಶ್ಲೇಷಿಸಿದರು.

### ಕಾಂಗ್ರೆಸ್ಸಿನೊಳಗಡೆ ಉಂಟಾಗಿರುವ ಮಾವೋವಾದಿ ಮಾನಸಿಕತೆ

ಕಾಂಗ್ರೆಸ್ ಪ್ರಣಾಳಿಕೆ ಬಿಡುಗಡೆ ಮಾಡಿದ್ದ ರಾಹುಲ್ ಗಾಂಧಿಯವರು ಆಗ ಜನಗಣತಿ ಮಾಡಿ ದೇಶದ ಜನಸಂಖ್ಯೆ ಆಧಾರದಲ್ಲಿ ಸಂಪತ್ತಿನ ವಿತರಣೆ ಮಾಡುತ್ತೇವೆ ಎಂದಿದ್ದರು. ಅದು ಅಸಮಾನತೆ ಸರಿಪಡಿಸಲು ಪೂರಕ ಎಂದಿದ್ದರು. ಕಷ್ಟಪಟ್ಟು ದುಡಿದವರ ಹಣವನ್ನು ಕೂಡ ಏನೂ ಕಷ್ಟಪಡದೆ ಇರುವವರಿಗೆ ಹಂಚುತ್ತೇವೆ ಎಂಬ ಮನಸ್ಥಿತಿ ಇವತ್ತು ಬಂದಿದೆ ಎಂದು ಆಕ್ಷೇಪಿಸಿದರು. ಇವರಿಗೆ ಮಾತ್ರ ದೆಹಲಿಯಲ್ಲಿ ತಾಯಿಗೊಂದು ಮನೆ, ಒಬ್ಬನೇ ಮಗನಿಗೊಂದು ಮನೆ ಬೇಕು. ಇದು ಸಂಪತ್ತಿನ ವಿತರಣೆಯೇ ಎಂದು ಗೊತ್ತಾಗುತ್ತಿಲ್ಲ ಎಂದು ತಿಳಿಸಿದರು. ಇದು ಕಾಂಗ್ರೆಸ್ಸಿನೊಳಗಡೆ ಉಂಟಾಗಿರುವ ಮಾವೋವಾದಿ ಮಾನಸಿಕತೆ ಎಂದು ದೂರಿದರು.

## ಮುಸ್ಲಿಮರನ್ನು ಒಬಿಸಿಗೆ ಸೇರಿಸಿದ ಸಿದ್ದು ಸರ್ಕಾರ

• ಉದಯವಾಹಿನಿ, ಬೆಂಗಳೂರು

ಲೋಕಸಭೆ ಚುನಾವಣೆ ಹೊತ್ತಿನಲ್ಲಿಯೇ ಕರ್ನಾಟಕ ಸರ್ಕಾರವು ಮಹತ್ವದ ತೀರ್ಮಾನವೊಂದು ತೆಗೆದುಕೊಂಡಿದೆ. ಹೌದು, ಉದ್ಯೋಗ, ಶೈಕ್ಷಣಿಕ ಸಂಸ್ಥೆಗಳಲ್ಲಿ ಮೀಸಲಾತಿ ನೀಡುವ ದಿಸೆಯಲ್ಲಿ ರಾಜ್ಯ ಸರ್ಕಾರವು ಮುಸ್ಲಿಮರನ್ನು ಇತರೆ ಹಿಂದುಳಿದ ವರ್ಗಗಳ ಕೆಟಗರಿಗೆ ಸೇರಿದೆ. ಆದರೆ, ಇದಕ್ಕೆ ಹಿಂದುಳಿದ ವರ್ಗಗಳ ರಾಷ್ಟ್ರೀಯ ಆಯೋಗವು ಆಕ್ರೋಶ ವ್ಯಕ್ತಪಡಿಸಿದೆ.

ಕರ್ನಾಟಕ ಸರ್ಕಾರವು ಮುಸ್ಲಿಮರಿಗೆ ಮೀಸಲಾತಿ ನೀಡುವ ದಿಸೆಯಲ್ಲಿ ಆ ಧರ್ಮದ ಎಲ್ಲರನ್ನೂ ಒಬಿಸಿಗೆ ಸೇರಿಸಿರುವ ಕು ರಿತು ಎನ್‌ಸಿಬಿಸಿಯೇ ಮಾಹಿತಿ ನೀಡಿದೆ. ಮೀಸಲಾತಿ ನೀಡಲು ಕರ್ನಾಟಕ ಸರ್ಕಾರವು ಮುಸ್ಲಿಮರನ್ನು ಒಬಿಸಿ ಕೆಟಗರಿಗೆ ಸೇರಿಸಿದೆ. ಇದು ಸಾಮಾಜಿಕ ನ್ಯಾಯ ತತ್ವಕ್ಕೆ ವಿರುದ್ಧವಾಗಿದೆ. ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಹಿಂದುಳಿದವರಿಗೆ ಒಬಿಸಿ ಮೀಸಲಾತಿ ನೀಡಬೇಕೇ ಹೊರತು, ಇಡೀ ಧರ್ಮವನ್ನೇ ಒಬಿಸಿಗೆ ಸೇರಿಸಿರುವುದು ಸರಿಯಲ್ಲ' ಎಂದು ಎನ್‌ಸಿಬಿಸಿ ಅಸಮಾಧಾನ ವ್ಯಕ್ತಪಡಿಸಿದೆ. ಕರ್ನಾಟಕ ಸರ್ಕಾರವು ಮುಸ್ಲಿಮರನ್ನು ಒಬಿಸಿಗೆ ಸೇರಿಸಿರುವ ಕುರಿತು ಎನ್‌ಸಿಬಿಸಿಯು ದಾಖಲೆಗಳನ್ನೂ ನೀಡಿದೆ. ಮಾಹಿತಿ ಪ್ರಕಾರ, 'ಕರ್ನಾಟಕಲ್ಲಿ ಮುಸ್ಲಿಮರ ಸಂಖ್ಯೆ ಶೇ.12.92ರಷ್ಟಿದೆ. ಕೆಟಗರಿ II-B ಅನ್ವಯ ಕರ್ನಾಟಕದಲ್ಲಿರುವ ಎಲ್ಲಾ ಮುಸ್ಲಿಮರು ಒಬಿಸಿ ಕೆಟಗರಿ ವ್ಯಾಪ್ತಿಗೆ ಸೇರುತ್ತಾರೆ.

ಕೆಟಗರಿ 1ರಲ್ಲಿ 17 ಮುಸ್ಲಿಂ ಸಮುದಾಯಗಳು, 2ಎ ಕೆಟಗರಿಯಲ್ಲಿ 19 ಮುಸ್ಲಿಂ ಸಮುದಾಯಗಳು ಬರುತ್ತವೆ. ಇದು ಸಾಮಾಜಿಕ ನ್ಯಾಯ ತತ್ವದ ವಿರುದ್ಧದ ತೀರ್ಮಾನವಾಗಿದೆ' ಎಂಬುದಾಗಿ ಎನ್‌ಸಿಬಿಸಿ ತಿಳಿಸಿದೆ.

**ಈ ದಿನದ ದರ** ಪೆಟ್ರೋಲ್: 99.84 ₹/L | ಡೀಸೆಲ್ : 85.93 ₹/L | ಬಂಗಾರ: ₹7,265 /Gram(24ct) ₹6,660 /Gram(22ct) | ಬೆಳ್ಳಿ: ₹82.50 /Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಶ್ರವಣಾದಿಗಳಿಂದೆ ಶಬ್ದಾದಿ ಗೋಚರಿಸಿದವು

ನಿಜಗುಣರ ಪರಮಾನುಭವ ಬೋಧೆಯ ಮಾತು. ಶ್ರವಣ ಕಿವಿ ಮುಂತಾದ ಪಂಚ ಜ್ಞಾನೇಂದ್ರಿಯಗಳಿಂದ ಶಬ್ದ ಮುಂತಾದ ಪಂಚ ವಿಷಯಗಳು ತೋರುವವು. ಹೀಗೆ ತೋರಿದ ವಿಷಯಗಳಲ್ಲಿ ಮನ ಬೆರೆತು ಅದರಲ್ಲಿ ಸುಖವಿದೆ ಎಂಬ ಭ್ರಮೆ ಉಂಟಾಗುವುದು. ವಾಸ್ತವಿಕವಾಗಿ ತನ್ನ ಸುಖವೇ ಅಲ್ಲಿ ತೋರುವುದು. ಅದಿಲ್ಲದಿದ್ದಲ್ಲಿ ಸಕ್ಕರೆ ಕಾಯಿಲೆ ಬಂದಾದಮೇಲೆಯೂ ಸಕ್ಕರೆ ಹಿತವೆನಿಸಬೇಕಾದೀತು.

# ಬಿಜೆಪಿ ತೊರೆದ ಕಾಂಗ್ರೆಸ್ ಬಿಎಸ್‌ವೈ ಆಪ್ತ ಸೇರ್ಪಡೆ

■ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ಭೇಟಿ ■ ಇದೀಗ ಅಧಿಕೃತವಾಗಿ ಕಾಂಗ್ರೆಸ್ ಪಕ್ಷಕ್ಕೆ

• ಉದಯವಾಹಿನಿ, ಬೆಂಗಳೂರು

ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಬಣದಲ್ಲಿ ಗುರುತಿಸಿಕೊಂಡಿದ್ದ ವಿಧಾನ ಪರಿಷತ್ ಮತ್ತು ಬಿಜೆಪಿಯ ಪಾಥಮಿಕ ಸದಸ್ಯತ್ವ ಸ್ಥಾನಕ್ಕೆ ಕೆ ಪಿ ನಂಜುಂಡಿ ಅವರು ರಾಜಿನಾಮೆ ನೀಡಿ ಕಾಂಗ್ರೆಸ್ ಸೇರ್ಪಡೆಯಾಗಿದ್ದಾರೆ.

ಬುಧವಾರ ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ನೇತೃತ್ವದಲ್ಲಿ ಕೈ ಹಿಡಿದರು.

ನಂಜುಂಡಿ ಅವರು ರು. ಸುಮಾರು ಒಂದು ವಾರದಿಂದ ಅವರು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ಭೇಟಿಯ ನಂತರ ಕಾಂಗ್ರೆಸ್ ಸೇರಲಿದ್ದಾರೆ ಎಂಬ ಚರ್ಚೆ ರಾಜಕೀಯ ವಲಯದಲ್ಲಿ ಕೇಳಿ ಬರುತ್ತಿತ್ತು. ಇದೀಗ ಅಧಿಕೃತವಾಗಿ ಕಾಂಗ್ರೆಸ್ ಪಕ್ಷ ಸೇರಿದ್ದಾರೆ.

ಇನ್ನೂ ಈ ವೇಳೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಅವರು ಮಾತನಾಡಿ, ಇಂದು ಶ್ರಮಿಕ ವರ್ಗದ ಜನರು ಸಂಭ್ರಮಿಸುವ ದಿನ. ನಮ್ಮ ಹಿಂದುಳಿದ ವರ್ಗದ ನಾಯಕರಾದ ಕೆ.ಜಿ ನಂಜುಂಡಿ ಅವರು ಮನೆಗೆ



ಉದಯವಾಹಿನಿ ಚಿತ್ರ

**ಕಾಂಗ್ರೆಸ್ ಪಕ್ಷದಲ್ಲಿ ಸಂಭ್ರಮ**

ಮರಳಿದ್ದಾರೆ. ಅವರಿಗೆ ನನ್ನ ಹೃತ್ಪೂರ್ವಕ ಸ್ವಾಗತ. ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ ಅವರ ಪರವಾಗಿ ಸ್ವಾಗತ ಕೋರುತ್ತೇನೆ.

ಇಂದು ಭಾರತದ ಸಂವಿಧಾನ ದಾಳಿಗೊಳಗಾಗುತ್ತಿರುವ ಸಂದರ್ಭದಲ್ಲಿ ನಾವೆಲ್ಲರೂ ಒಂದಾಗಿ ಹೋರಾಟ ಮಾಡಬೇಕಾಗಿದೆ. ಪರಿಶಿಷ್ಟ ಜಾತಿ, ಪಂಗಡ ಹಿಂದುಳಿದ ವರ್ಗಗಳ ಮೀಸಲಾತಿಯನ್ನು ವ್ಯವಸ್ಥಿತವಾಗಿ ನಾಶ ಮಾಡಲಾಗುತ್ತಿದೆ. ಒಂದು ಕಡೆ ಬಿಜೆಪಿಯ ನಾಯಕರಾದ ಅನಂತ ಕುಮಾರ್ ಹೆಗಡೆ, ಅರುಣ್ ಗೋಯಲ್, ಲಲ್ಲು ಸಿಂಗ್, ಜ್ಯೋತಿ ಮಿರ್ಚೆನ್ ಅವರು ಬಹಿರಂಗವಾಗಿ ಬಿಜೆಪಿ ಅಧಿಕಾರಕ್ಕೆ ಬಂದರೆ ಸಂವಿಧಾನ ಬದಲಾವಣೆ ಮಾಡಲಿದೆ ಎಂದು ಹೇಳುತ್ತಿದ್ದಾರೆ.

> **ಜೂನ್ 4ರ ನಂತರ ಕೇಂದ್ರದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ರಚನೆಯಾದ ಬಳಿಕ ದೇಶದಲ್ಲಿ ಜಾತಿ ಗಣತಿ ಮಾಡಿ, ಸರ್ಕಾರಿ ಹುದ್ದೆಗಳನ್ನು ನೇಮಕ ಮಾಡಿ ಹಿಂದುಳಿದ ವರ್ಗಗಳ ಹುದ್ದೆಗಳನ್ನು ಭರ್ತಿ ಮಾಡಲಾಗುವುದು. ಇದರ ಜತೆಗೆ ಕಾಂಗ್ರೆಸ್ ಸರ್ಕಾರ ಮೀಸಲಾತಿ ಮಿತಿಯನ್ನು 50%ಗಿಂತ ಹೆಚ್ಚಳ ಮಾಡಲಾಗುವುದು. ಆಮೂಲಕ ಎಲ್ಲಾ ಸಮುದಾಯಗಳಿಗೂ ಅಗತ್ಯ ನೆರವು ನೀಡಲಾಗುವುದು. ಈ ನಿಟ್ಟಿನಲ್ಲಿ ನಾವೆಲ್ಲರೂ ಒಟ್ಟಾಗಿ ಶ್ರಮಿಸೋಣ. -ಡಿ.ಕೆ.ಶಿವಕುಮಾರ್**

ಈಗಾಗಲೇ ಭಆರತ ಸರ್ಕಾರದಲ್ಲಿ ಪರಿಶಿಷ್ಟ ಜಾತಿ, ಪಂಗಡ ಹಾಗೂ ಹಿಂದುಳಿದ ವರ್ಗದ ಅಧಿಕಾರಿಗಳು ಸರ್ಕಾರದ ಕಾರ್ಯದರ್ಶಿಯಾಗುತ್ತಿಲ್ಲ. ಜಂಟಿ ಕಾರ್ಯದರ್ಶಿಯಿಂದ ಉನ್ನತ ಸ್ಥಾನಗಳನ್ನು ಈ ಸಮುದಾಯದವರಿಗೆ ನೀಡುತ್ತಿಲ್ಲ. ಇಂತಹ ಪರಿಸ್ಥಿತಿಯಲ್ಲಿ ವಿಶ್ವಕರ್ಮ, ಈಡಿಗ ಸೇರಿದಂತೆ ನೂರಾರು ಹಿಂದುಳಿದ ವರ್ಗ ಎಲ್ಲಿ ಹೋಗಬೇಕು ಇನ್ನು ಸಾರ್ವಜನಿಕ ಉದ್ದಿಮೆಗಳಲ್ಲಿ ಒಬಿಸಿ ಗಳಿಗೆ 27% ಮೀಸಲಾತಿ

> **ಈ ಹಿನ್ನೆಲೆಯಲ್ಲಿ ನಾವೆಲ್ಲರೂ ಶೋಷಿತ, ಹಿಂದುಳಿದ ಸಮುದಾಯಗಳ ರಕ್ಷಣೆಗೆ ಮುಂದಾಗಬೇಕು. ನಂಜುಂಡಿ ಅವರು ಕೇವಲ ವಿಶ್ವಕರ್ಮ ಸಮಾಜ ಮಾತ್ರವಲ್ಲ ಹಿಂದುಳಿದ ವರ್ಗಗಳ ಧ್ವನಿಯಾಗಿದ್ದಾರೆ ಪರಿಶ್ರಮದ ದೇವರು ವಿಶ್ವಕರ್ಮ ಆಗಿದ್ದಾರೆ. ಜಗತ್ತಿನಲ್ಲಿ ಪರಿಶ್ರಮ ಇಲ್ಲದೆ ಏನಾದರೂ ಸಾಧನೆ ಮಾಡಲು ಸಾಧ್ಯವೇ ಎಂದು ಪ್ರಶ್ನಿಸಿದರು. -ಡಿ.ಕೆ.ಶಿವಕುಮಾರ್**

ನೀಡಲಾಗಿದ್ದು, ಈ ಉದ್ದಿಮೆಗಳನ್ನು ಖಾಸಗಿಕರಣ ಮಾಡುವ ಮೂಲಕ ಮೀಸಲಾತಿ ನಿರ್ಮೂಲನೆ ಮಾಡುತ್ತಿದ್ದಾರೆ. ಭಾರತ ಸರ್ಕಾರದಲ್ಲಿ ಕೇವಲ ಓರ್ವ ಒಬಿಸಿ ಸಮುದಾಯದ ಅಧಿಕಾರಿ ಕಾರ್ಯದರ್ಶಿ ಹುದ್ದೆಯಲ್ಲಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಹಿಂದುಳಿದ ಸಮಾಜದವರ ರಕ್ಷಣೆ ಮಾಡಲು ಹೇಗೆ ಸಾಧ್ಯ ಹಿಂದುಳಿದ ವರ್ಗಗಳ ಆದಾಯ ಮಿತಿಯನ್ನು ಪರಿಶೀಲನೆ ಮಾಡಿ ಹೆಚ್ಚಳ ಮಾಡಿಲ್ಲ. ಭಾರತ ಸರ್ಕಾರದ ವ್ಯಾಪ್ತಿಯಲ್ಲಿ 30 ಲಕ್ಷ ಹುದ್ದೆಗಳು ಖಾಲಿ ಇದ್ದು, ಇದರಲ್ಲಿ 8 ಲಕ್ಷಕ್ಕಿಂತ ಹೆಚ್ಚು ಹುದ್ದೆಗಳು ಹಿಂದುಳಿದ ವರ್ಗದವರಿಗೆ ಸೇರಬೇಕು.

## ಬೆಂಗಳೂರಿನಲ್ಲಿ ಬರೋಬ್ಬರಿ 22 ಕೆಜಿ ಚಿನ್ನ, 6 ಕೋಟಿ ಮೌಲ್ಯದ ವಜ್ರ ಜಪ್ತಿ


• ಉದಯವಾಹಿನಿ, ಬೆಂಗಳೂರು

ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ಕಳೆದ ಎರಡು ದನಗಳಲ್ಲಿ ಭರ್ಜರಿ ಕಾರ್ಯಾಚರಣೆ ನಡೆಸಿದ್ದಾರೆ. ಅಪಾರ ಪ್ರಮಾಣದ ಚಿಹ್ನ, ವಜ್ರಗಳನ್ನು ವಶಕ್ಕೆ ಪಡೆದಿದ್ದಾರೆ. ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದಲ್ಲಿ ಶೋಧ ಕಾರ್ಯ ನಡೆಸಿದ್ದ ಐಟಿ ಅಧಿಕಾರಿಗಳು ಬರೋಬ್ಬರಿ 16.10 ಕೋಟಿ ಮೌಲ್ಯದ 22 ಕೆಜಿ 923 ಗ್ರಾಂ ಚಿನ್ನ, 6 ಕೋಇ 45 ಲಕ್ಷ ಮೌಲ್ಯದ ವಜ್ರ ವಶಕ್ಕೆ ಪಡೆದಿದ್ದಾರೆ. ದಾಳಿ ವೇಳೆ 1.33 ಕೋಟಿ ನಗದು ಹಣ ಪತ್ತೆಯಾಗಿದೆ. ಶಕರಪುರದಲ್ಲಿ 3 ಕೋಟಿಗೂ ಅಧಿಕ ಮೌಲ್ಯದ 4 ಕೆಜಿ 400ಗ್ರಾಂ ಚಿನ್ನಾಭರಣ ಪತ್ತೆಯಾಗಿದೆ.

ಶಾರದಾದೇವಿ ರಸ್ತೆಯಲ್ಲಿ 3 ಕೋಟಿ 39 ಲಕ್ಷ ಮೌಲ್ಯದ 4 ಕೆಜಿ 800 ಗ್ರಾಂ ಮರ್ಕೈಂತಲ್ ಬ್ಯಾಂಕ್ ಬಳಿ 2 ಕೋಟಿ 13 ಲಕ್ಷ ಮೌಲ್ಯದ 3 ಇಎಜಿ 400 ಗ್ರಾಂ ಚಿನ್ನ, ಜಯನಗರ 3ನೇ ಬ್ಲಾಕ್ ಬಳಿ 5 ಕೋಟಿ 33 ಲಕ್ಷ ಮೌಲ್ಯದ 7 ಕೆಜಿ 598 ಗ್ರಾಂ, ಸಾರಸ್ವತ ಬ್ಯಾಂಕ್, ಚಾಮರಾಜಪೇಟೆಯಲ್ಲಿ 84 ಮೌಲ್ಯದ 1 ಕೆಜಿ 200 ಗ್ರಾಂ ಚಿನ್ನದ ಗಟ್ಟಿ ವಶಕ್ಕೆ ಪಡೆಯಲಾಗಿದೆ. ಜಯನಗರದಲ್ಲಿ 6 ಕೋಟಿ 40 ಲಕ್ಷ ಮೌಲ್ಯದ 202.83 ಕ್ಯಾರೆಟ್ ವಜ್ರ ಪತ್ತೆಯಾಗಿದೆ.

## ರಾಜ್‌ಕುಮಾರ್ 95ನೇ ಹುಟ್ಟುಹಬ್ಬದಂದು ಅಗರಬತ್ತಿ ಉದ್ಯಮಕ್ಕೆ ಕೈ ಹಾಕಿದ ಅಶ್ವಿನಿ

• ಉದಯವಾಹಿನಿ, ಬೆಂಗಳೂರು





ನಟ ಡಾ.ರಾಜ್‌ಕುಮಾರ್ ಅವರ ಹುಟ್ಟುಹಬ್ಬದಂದು ಅಶ್ವಿನಿ ಪುನೀತ್ ರಾಜ್‌ಕುಮಾರ್ ಹೊಸ ಉದ್ಯಮಕ್ಕೆ ಕೈ ಹಾಕಿದ್ದಾರೆ. ಈ ಕುರಿತಾಗಿ ಸೋಷಿಯಲ್ ಮೀಡಿಯಾದಲ್ಲಿ ಬರೆದುಕೊಂಡಿದ್ದಾರೆ.ಅಪ್ಪಾಜಿ ಹುಟ್ಟುಹಬ್ಬದ ಸವಿನೆನಪಿನಲ್ಲಿ ಎಂದು ಅಣ್ಣಾವ್ರರನ್ನು ಅಶ್ವಿನಿ ಸ್ಮರಿಸಿದ್ದಾರೆ. ಅಪ್ಪಾಜಿಯವರ 95ನೇ ಜನ್ಮದಿನಾಚರಣೆಯ ಅಂಗವಾಗಿ ಹಾಗೂ ಗಂಧದಗುಡಿ ಚಿತ್ರದ ಸುವರ್ಣ ಮಹೋತ್ಸವವನ್ನು ಆಚರಿಸುತ್ತಿರುವ ಸಂದರ್ಭದಲ್ಲಿ ಶುಭಸುದ್ದಿ ತಿಳಿಸಿದ್ದಾರೆ. ಅಪ್ಪು ಅವರ 'ಗಂಧದಗುಡಿ ಅಗರಬತ್ತಿ'ಯ ಶುಭಾರಂಭದೊಂದಿಗೆ ಸ್ಮರಿಸೋಣ ಎಂದು ಅಶ್ವಿನಿ ಪುನೀತ್ ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿದ್ದಾರೆ. ಕರ್ನಾಟಕ ಸರಕಾರ ಮತ್ತು ಡಾ.ರಾಜ್ ಕುಮಾರ್ ಸ್ಮಾರಕ ಟ್ರಸ್ಟ್ ಪ್ರತಿ ವರ್ಷದಂತೆ ಈ ವರ್ಷವೂ ನಾನಾ ರೀತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಪ್ರತಿ ವರ್ಷದಂತೆ ಈ ಸಲವೂ ಡಾ.ರಾಜ್ ಪುಣ್ಯಭೂಮಿ ಸ್ಥಳದಲ್ಲಿ ಅಭಿಮಾನಿಗಳು ರಕ್ತದಾನ ಶಿಬಿರ, ಕಣ್ಣುದಾನ ಶಿಬಿರ, ಅನ್ನ ಸಂತರ್ಪಣೆ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಆಯೋಜನೆ ಮಾಡಿಕೊಳ್ಳುತ್ತಿದ್ದಾರೆ. ಬೆಳಗ್ಗೆಯಿಂದಲೇ ಈ ಎಲ್ಲಾ ಕೆಲಸಗಳು ಬೆಂಗಳೂರಿನ ಕಂಠೀರವ ಸ್ಟುಡಿಯೋದ ಆವರಣದಲ್ಲೇ ಶುರುವಾಗಿದೆ.

## ಎ.26ರಂದು ಮತದಾನ ಹಿನ್ನೆಲೆ; ಬೆಂಗಳೂರಿನಲ್ಲಿ ಇಂದು ಸಂಜೆಯಿಂದ 144 ಸೆಕ್ಷನ್ ಜಾರಿ

• ಉದಯವಾಹಿನಿ, ಬೆಂಗಳೂರು

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಏಪ್ರಿಲ್ 26ರಂದು 14 ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ. ಪಾರದರ್ಶಕ ಹಾಗೂ ನ್ಯಾಯ ಸಮ್ಮತ ಮತದಾನಕ್ಕೆ ಚುನಾವಣಾ ಆಯೋಗ, ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಕ್ರಮ ಕೈಗೊಂಡಿದೆ.ಬೆಂಗಳೂರಿನಲ್ಲಿ ಇಂದು ಸಂಜೆ 6 ಗಂಟೆಯಿಂದ 144 ಸೆಕ್ಷನ್ ಅಡಿಯಲ್ಲಿ ನಿಷೇಧಾಜ್ಞೆ ಜಾರಿಯಾಗಲಿದೆ.ಇಂದು ಸಂಜೆ 6 ಗಂಟೆಯಿಂದ ಏಪ್ರಿಲ್ 26ರ ಮಧ್ಯರಾತ್ರಿವರೆಗೆ ನಿಷೇಧಾಜ್ಞೆ ಜಾರಿಯಲ್ಲಿರಲಿದೆ. ಅಲ್ಲದೇ ಇಂದು ಸಂಜೆಯಿಂದ ರಾಜಧಾನಿ ಬೆಂಗಳೂರಿನಲ್ಲಿ ಮದ್ಯ ಮಾರಾಟ ನಿಷೇಧಿಸಲಾಗುತ್ತಿದೆ. ಬೆಂಗಳೂರಿನ 5 ಲೋಕಸಭಾ ಕ್ಷೇರಗಳಲ್ಲಿ ಹೆಚ್ಚುವರಿ ಭದ್ರತೆ ಕಲ್ಪಿಸಲಾಗುತ್ತಿದೆ. 13 ಸಾವಿರಕ್ಕೂ ಅಧಿಕ ಪೊಲೀಸರನ್ನು ನಿಯೋಜಿಸಲಾಗಿದೆ. 11 ಸಿಆರ್ ಪಿಎಫ್, 14 ಕೆ ಎಸ್ ಆರ್ ಪಿ, 40 ಸಿಎ ಆರ್ ತುಕಡಿಗಳನ್ನು ನಿಯೋಜಿಸಲಾಗಿದೆ. ಬೆಂಗಳೂರು ಪೊಲೀಸ್ ಆಯುಕ್ತ ದಯಾನಂದ ಅವರ ನೇತೃವದಲ್ಲಿ ಬಿಗಿ ಬಂದೋಬಸ್ತ್ ಕೈಗೊಳ್ಳಲಾಗಿದೆ.

## ಎ.26ರಂದು ರಾತ್ರಿ 11.55ರವರೆಗೆ ಮೆಟ್ರೋ ರೈಲು ಸಂಚಾರ ಅವಧಿ ವಿಸ್ತರಣೆ

• ಉದಯವಾಹಿನಿ, ಬೆಂಗಳೂರು

ಏಪ್ರಿಲ್.26ರಂದು ಮೊದಲ ಹಂತದ ಲೋಕಸಭಾ ಚುನಾವಣೆಗೆ ಕರ್ನಾಟಕದಲ್ಲಿ ಮತದಾನ ನಡೆಯಲಿದೆ. ಮತದಾರರಿಗೆ ಅನುಕೂಲ ಕಲ್ಪಿಸೋ ನಿಟ್ಟಿನಲ್ಲಿ ನಮ್ಮ ಮೆಟ್ರೋ ರಾತ್ರಿ 11.55ರವರಗೆ ಸಂಚಾರವನ್ನು ವಿಸ್ತರಿಸಿದೆ. ಈ ಕುರಿತಂತೆ ಬಿಎಂಆರ್ ಸಿಎಲ್ ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದು, ದಿನಾಂಕ 26.04.2024 ರಂದು ಬೆಂಗಳೂರಿನಲ್ಲಿ ನಡೆಯುವ ಲೋಕಸಭಾ ಚುನಾವಣೆ 2024ರ ಪ್ರಯುಕ್ತ ಎಲ್ಲಾ ನಾಲ್ಕು ಟರ್ಮಿನಲ್ ಅಂದರೆ, ನಾಗಸಂದ್ರ, ರೇಷ್ಮೆ ಸಂಸ್ಥೆ ಚಲ್ಲಘಟ್ಟ, ವೈಟ್ ಫೀಲ್ (ಕಾಡುಗೋಡಿ) ನಿಲ್ದಾಣಗಳಿಂದ ಕೊನೆಯ ರೈಲು ಸೇವೆಯನ್ನು ರಾತ್ರಿ 3.55 ಕ್ಕೆ (11.55pm) ವಿಸ್ತರಿಸಲಾಗಿದೆ ಎಂದಿದೆ. ನಾಡಪ್ರಭು ಕೆಂಪೇಗೌಡ ನಿಲ್ದಾಣ ಮೆಜೆಸ್ಟಿಕ್‌ನಿಂದ ಎಲ್ಲಾ ನಾಲ್ಕು ದಿಕ್ಕುಗಳಿಗೆ ಕೊನೆಯ ರೈಲು ದಿನಾಂಕ 27.04.2024 ರಂದು 00.35 ಗಂಟೆಗೆ (ಮಧ್ಯರಾತ್ರಿ 00.35) ಹೊರಡಲಿದೆ. ಪ್ರಯಾಣಿಕರು ಈ ಸೌಲಭ್ಯವನ್ನು ಬಳಸಿಕೊಳ್ಳುವಂತೆ ಕೋರಿದೆ.

## ಲೋಕಸಭಾ ಚುನಾವಣೆ: ಏಪ್ರಿಲ್ 26 ಮತದಾನದ ದಿನ ರಾಜ್ಯದಲ್ಲಿ ಯಾರಿಗೆಲ್ಲ ರಜೆ

• ಉದಯವಾಹಿನಿ, ಬೆಂಗಳೂರು

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಏಪ್ರಿಲ್ 26ರಂದು ಮೊದಲ ಹಂತದ ಮತದಾನ ನಡೆಯಲಿದೆ. ಕರ್ನಾಟಕದ ದಕ್ಷಿಣ ಭಾಗದ 14 ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ. ಎಲ್ಲರೂ ಮತದಾನ ಮಾಡುವುದು ಕಡ್ಡಾಯ. ಆದರೆ ಖಾಸಗಿ ಕಂಪನಿಗಳಿಗಳಿಗೆ ಕಡ್ಡಾಯ ರಜೆ ಇಲ್ಲ, ಸರ್ಕಾರಿ ಕಚೇರಿ, ಶಾಲಾ-ಕಾಲೇಜುಗಳಿಗೆ ರಜೆ ನೀಡಲಾಗಿದೆ. ಮತದಾನದ ದಿನ ಏಪ್ರಿಲ್ 26ರಂದು ಬ್ಯಾಂಕ್ ಗಳು, ಶಾಲಾ-ಕಾಲೇಜು, ಕೆಲ ಸರ್ಕಾರಿ ಕಚೇರಿಗಳಿಗೆ ರಜೆ ನೀಡಲಾಗಿದೆ. ಅಗತ್ಯ ಸೇವೆಗಳಾದ ಬಸ್, ರೈಲು, ಆಸ್ಪತ್ರೆ, ಔಷಧಾಲಯಗಳು, ಖಾಸಗಿ ಸಂಸ್ಥೆಗಳು ಎಂದಿನಂತೆ ಕಾರ್ಯನಿರ್ವಹಿಸಲಿವೆ. ಖಾಸಗಿ ಕಂಪನಿಗಳಿಗೆ ಕಡ್ಡಾಯ ರಜೆ ಇರುವುದಿಲ್ಲ. ಬ್ಯಾಂಕ್ ಗಳು, ಶಾಲಾ-ಕಾಲೇಜು, ಹೈಕೋರ್ಟ್ ನ್ಯಾಯಪೀಠ, ದ್ಸರ್ಕಾರಿ ಕಚೇರಿಗಳಿಗೆ ರಜೆ ನೀಡಲಾಗಿದೆ. ಇನ್ನು ಖಾಸಗಿ ಕಂಪನಿ ಉದ್ಯೋಗಿಗಳಿಗೆ ಮತದಾನಕ್ಕೆ ಅವಕಾಶ ನೀಡಲಾಗಿದೆ. ವೋಟ್ ಹಾಕಿ ಕಚೇರಿಗೆ ಬರಬಹುದು. ಮೊದಲ ಪಾಳಿಯಿದ್ದರೆ ಕಚೇರಿ ಕೆಲಸ ಮುಗಿಸಿ ಸಂಜೆ ಮತದಾನ ಮಾಡಬಹುದು.

## ರಾಜ್ಯ ಸರ್ಕಾರದಿಂದ ಸಾರ್ವತ್ರಿಕ ರಜೆ ಘೋಷಿಸಿ ಆದೇಶ

• ಉದಯವಾಹಿನಿ, ಬೆಂಗಳೂರು

ಏಪ್ರಿಲ್.26ರಂದು ಲೋಕಸಭಾ ಚುನಾವಣೆಗೆ ಮೊದಲ ಹಂತದ ಮತದಾನ ನಡೆಯಲಿದೆ.

ಅಂದು ಎಲ್ಲಾ ಕಾರ್ಮಿಕರು, ಅರ್ಹ ಮತದಾರರು ಮತದಾನ ಮಾಡೋದಕ್ಕಾಗಿ ರಾಜ್ಯ ಸರ್ಕಾರದಿಂದ ಸಾರ್ವತ್ರಿಕ ರಜೆ ಘೋಷಣೆ ಮಾಡಿ ಆದೇಶಿಸಿದೆ.ಈ ಕುರಿತಂತೆ ಕಾರ್ಮಿಕ ಆಯುಕ್ತರಿಂದ ಆದೇಶ ಹೊರಡಿಸಿದ್ದು,ಭಾರತ ಚುನಾವಣಾ ಆಯೋಗವು 2024ರ ಲೋಕಸಭಾ ಚುನಾವಣೆಯನ್ನು ದಿನಾಂಕ:16-03-2024ರಂದು ಘೋಷಿಸಿದ್ದು ಅದರಂತೆ ಕರ್ನಾಟಕ ರಾಜ್ಯದಲ್ಲಿ ಎರಡು ಹಂತದಲ್ಲಿ ಚುನಾವಣೆ ನಿಗಧಿಯಾಗಿರುತ್ತದೆ.

ದಿನಾಂಕ:26-04-2024 (ಶುಕ್ರವಾರ) ರಂದು ಮೊದಲನೇಯ ಹಂತ ಹಾಗೂ ದಿನಾಂಕ:07-05-2024 (ಮಂಗಳವಾರ) ರಂದು ಎರಡನೇ ಹಂತದ ಲೋಕಸಭಾ ಚುನಾವಣೆ ನಡೆಯಲಿದ್ದು, ದ.ಕ. ಜಿಲ್ಲೆಯಲ್ಲಿ ದಿನಾಂಕ:26.04.2024 (ಶುಕ್ರವಾರ) ರಂದು ನಿಗಧಿಯಾಗಿರುತ್ತದೆ ಎಂದಿದೆ.


ಸದರಿ ದಿನಾಂಕದಂದು ಮತದಾನ ನಡೆಯಲಿರುವ ಕ್ಷೇತ್ರದ ವ್ಯಾಪ್ತಿಯಲ್ಲಿ ನೋಂದಾಯಿತರಾದ ಅರ್ಹ ಮತದಾರರಾಗಿರುವ ಎಲ್ಲಾ ಅರ್ಹ ಕಾರ್ಮಿಕರಿಗೆ ಮತ ಚಲಾಯಿಸಲು ಅನುಕೂಲವಾಗುವಂತೆ ಸಂಬಂಧಪಟ್ಟ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಇತರೆ ಸಂಸ್ಥೆಗಳು 1963ರ ಕರ್ನಾಟಕ ಔದ್ಯೋಗಿಕ ಸಂಸ್ಥೆಗಳ (ರಾಷ್ಟ್ರೀಯ ಹಾಗೂ ಹಬ್ಬದ ರಜಾದಿನಗಳು) ಕಾಯ್ದೆಯ ಕಲಂ 3-ಎ ಪುಕಾರ ಮತ ಚಲಾಯಿಸಲು ಅವಕಾಶ ಮಾಡಿ ಕೊಡಬೇಕಾಗುತ್ತದೆ. ಆದ್ದರಿಂದ, ಮತದಾನ ನಡೆಯಲಿರುವ ಕ್ಷೇತ್ರದಲ್ಲಿ ಅರ್ಹರಿರುವ ಎಲ್ಲಾ ಕಾರ್ಮಿಕ ಮತದಾರರಿಗೆ ದಿನಾಂಕ:26-04-2024 ರಂದು ವೇತನ ಸಹಿತ ರಜೆ ನೀಡಿ, ಎಲ್ಲಾ ಅರ್ಹ ಕಾರ್ಮಿಕರು ಸಂವಿಧಾನಾತ್ಮಕ/ಶಾಸನಾತ್ಮಕ ಹಕ್ಕಾದ ಮತವನ್ನು ಚಲಾಯಿಸಲು ಅನುವು ಮಾಡಿಕೊಡಲು ಸೂಚಿಸಿದ್ದಾರೆ.



## ಹಾಸನ-ಮಂಡ್ಯದಲ್ಲಿ ಮೂಡದ ಒಮ್ಮತ್ತ; ಮಾಜಿ ಪ್ರಧಾನಿ ಎಚ್‌ಡಿಡಿ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಸಾರ್ವತ್ರಿಕ ಚುನಾವಣೆಯ ಕಣದ ಕಾವು ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಕರ್ನಾಟಕದಲ್ಲಿ ಮೊದಲ ಹಂತದ ಮತದಾನಕ್ಕೆ ಎರಡು ದಿನಗಳು ಬಾಕಿ ಉಳಿದಿದ್ದು, ಅಭ್ಯರ್ಥಿಗಳು ಬಿರುಸಿನ ಪ್ರಚಾರದಲ್ಲಿ ನಿರತರಾಗಿದ್ದಾರೆ. ಬಿಜೆಪಿ-ಜೆಡಿಎಸ್ ಮೈತ್ರಿ ಅಭ್ಯರ್ಥಿಗಳ ಪರ ಇಳಿವಯಸ್ಸಿನಲ್ಲೂ ಬಿರುಸಿನ ಪ್ರಚಾರ ನಡೆಸುತ್ತಿರುವ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಹಲವು ವಿಚಾರಗಳ ಕುರಿತು ಮಾತನಾಡಿದ್ದಾರೆ.



ಈ ಕುರಿತು ಮಾತನಾಡಿದ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ, ಹಾಸನದಲ್ಲಿ ಮೈತ್ರಿಗೆ ಬಿಜೆಪಿಯ ಕೆಲವರು ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಕೆಲವರು ನಮಗೆ ಸಹಕಾರ ನೀಡುತ್ತಿಲ್ಲ ಹಾಗೆಂದ ಮಾತ್ರಕ್ಕೆ ನಾವು ಹಾಸನದಲ್ಲಿ ಗೆಲ್ಲುತ್ತೇವೆ. ಮಂಡ್ಯದಲ್ಲೂ ಸುಮಲತಾ ಅವರು ಕುಮಾರಸ್ವಾಮಿಗೆ ಸಹಾಯ ಮಾಡಿಲ್ಲ. ಅದಾಗ್ಯೂ ಈ ಎರಡು ಕ್ಷೇತ್ರಗಳಲ್ಲಿಯೂ ಮೈತ್ರಿ ಅಭ್ಯರ್ಥಿಗಳು ಗೆಲ್ಲುವುದು ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಈ ಮೂಲಕ ಮೈತ್ರಿಯಲ್ಲಿ ಈವರೆಗೂ ಒಮ್ಮತ್ತ ಮೂಡಿಲ್ಲ ಎಂದು ಹೇಳಿದ್ದಾರೆ.

ನಾವು ಕಾವೇರಿ ಭಾಗದ ಎಲ್ಲಾ ಭಾಗದಲ್ಲೂ ಪ್ರವಾಸ ಮಾಡಿದ್ದೇನೆ. ಮೈತ್ರಿಗೆ ಪೂರಕವಾದ ವಾತಾವರಣ ಇರುವುದು ಸ್ಪಷ್ಟವಾಗಿ ಗೋಚರಿಸುತ್ತಿದೆ. ಪ್ರಧಾನಿ ಮೋದಿ ಅವರ ಜೊತೆ ಎರಡು ಸಾರ್ವಜನಿಕ ಸಭೆಗಳಲ್ಲಿ ಭಾಗಿಯಾಗಿದ್ದೇನೆ. ಎರಡನೇ ಹಂತದ ಚುನಾವಣೆ ನಡೆಯುವ ಕ್ಷೇತ್ರಗಳಲ್ಲಿಯೂ ಪ್ರವಾಸ ಮಾಡುತ್ತೇನೆ. ನಾವು 28ಕ್ಕೆ 28 ಸ್ಥಾನಗಳಲ್ಲಿ ಜಯ ಗಳಿಸುವುದು ನಿಶ್ಚಿತ ಎಂದು ಹೇಳಿದ್ದಾರೆ.


> **ಕಳೆದ ಎರಡು ದಿನಗಳಿಂದ ಬಿಜೆಪಿ ಹಾಗೂ ಕಾಂಗ್ರೆಸ್ ನಡುವೆ ಸಂಪತ್ತು ಹಂಚಿಕೆ ಬಗ್ಗೆ ದೊಡ್ಡ ಚರ್ಚೆ ನಡೆದಿದೆ. ಕಾಂಗ್ರೆಸ್ ತನ್ನ ಪ್ರಣಾಳಿಕೆಯಲ್ಲಿ ಹಲವು ವಿಚಾರ ಹೇಳಿದೆ. ಅವರು ಹೇಗಾದರೂ ಸರಿ, ಅಧಿಕಾರಿಕ್ಕೆ ಬರಬೇಕು ಎಂದು ಹೊರಟಿದ್ದಾರೆ. ಸಂಪತ್ತಿನ ಸರ್ವೇ ಹಾಗೂ ಹಂಚಿಕೆ ಬಗ್ಗೆ ರಾಹುಲ್ ಗಾಂಧಿ ಮಾತನಾಡಿದ್ದಾರೆ. ಕಾಂಗ್ರೆಸ್‌ನವರು ಎಷ್ಟೇ ದುಡ್ಡಿನ ಮಳೆ ಸುರಿಸಿದರೂ ಗೆಲ್ಲುವುದು ನಾವೇ ಎಂದು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಭವಿಷ್ಯ ನುಡಿದಿದ್ದಾರೆ.**

## ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷ ಅರ್ಜುನ್ ದೇವ ನಿಧನ

• ಉದಯವಾಹಿನಿ, ಬೆಂಗಳೂರು

ಹಿರಿಯ ಪತ್ರಕರ್ತರು, ಕರ್ನಾಟಕ ಮಾಧ್ಯಮ ಅಕಾಡೆಮಿ (ಹಿಂದಿನ ಪತ್ರಕರ್ತರ ಅಕಾಡೆಮಿ) ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದ ಅರ್ಜುನ್ ದೇವ ಅವರು ಇಂದು (ಏಪ್ರಿಲ್ 24) ನಿಧನ ಹೊಂದಿದ್ದಾರೆ. ಅರ್ಜುನ್ ದೇವ ಅವರಿಗೆ 92 ವರ್ಷ ವಯಸ್ಸಾಗಿತ್ತು.

ಕೆಂಗೇರಿ ಉಪನಗರದ ಖಾಸಗಿ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ.ಇಬ್ಬರು ಮಕ್ಕಳು ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅರ್ಜುನ್ ದೇವ ಅವರು ತಾಯಿನಾಡು ಪತ್ರಿಕೆ, ಸಂಯುಕ್ತ ಕರ್ನಾಟಕ ಹಾಗೂ ಪ್ರಜಾವಾಣಿ ಪತ್ರಿಕೆಯಲ್ಲಿ ಸೇವೆ ಸಲ್ಲಿಸಿದ್ದರು. ಅಲ್ಲದೆ, ಸೂರ್ಯೋದಯ ಪತ್ರಿಕೆಯ ಸಂಪಾದಕರಾಗಿಯೂ ಸೇವೆ ಸಲ್ಲಿಸಿದ್ದರು. ಅರ್ಜುನ್ ದೇವ ಅವರು ಹುಟ್ಟೂರು ಕೋಲಾರ ಜಿಲ್ಲೆಯ ಚೌಡದೇವನಹಳ್ಳಿಯಲ್ಲಿ ಇಂದು ಸಂಜೆ ಅಂತ್ಯಸಂಸ್ಕಾರ ನಡೆಯಲಿದೆ ಎಂದು ಕುಟುಂಬದ ಸದಸ್ಯರು ಮಾಹಿತಿ ನೀಡಿದ್ದಾರೆ.



ಹಿರಿಯ ಪತ್ರಕರ್ತರದ ಅರ್ಜುನ್ ದೇವ್ ಅವರ ನಿಧನಕ್ಕೆ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ ತೀವ್ರ ಸಂತಾಪ ವ್ಯಕ್ತಪಡಿಸಿದೆ. ಪ್ರಜಾವಾಣಿ, ಸಂಯುಕ್ತ ಕರ್ನಾಟಕ ಸೇರಿದಂತೆ ಹಲವು ಪತ್ರಿಕೆಯಲ್ಲಿ ಸಲ್ಲಿಸಿದ್ದ ಸೇವೆ ಅನನ್ಯವಾದದ್ದು.


ಪತ್ರಕರ್ತರ ಸಂಘಟನೆಯಲ್ಲಿ ಅವರಿಗಿದ್ದ ಬದ್ಧತೆ, ಸಮಾಜಮುಖಿಯಾಗಿ ತೊಡಗಿಸಿಕೊಳ್ಳುವ ಪರಿ ನಿಜಕ್ಕೂ ಶ್ಲಾಘನೀಯ. ಸಂಘದ ಅಧ್ಯಕ್ಷರಾಗಿ ಕ್ರಿಯಾಶೀಲವಾಗಿ ಕೆಲಸ ಮಾಡಿದ್ದ ಅರ್ಜುನ್ ದೇವ ಅವರ ನಿಧನದಿಂದ ಸುದ್ದಿಮನೆಗೆ ತುಂಬಲಾರದ ನಷ್ಟವಾಗಿದೆ ಎಂದು ಕೆಯುಡಬ್ಲ್ಯುಜೆ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು ಸಂತಾಪ ವ್ಯಕ್ತಪಡಿಸಿದ್ದಾರೆ.

## ಮತದಾನ ಮಾಡಿದವರಿಗೆ ಹೋಟೆಲ್‌ಗಳಲ್ಲಿ ಊಟ

• ಉದಯವಾಹಿನಿ, ಬೆಂಗಳೂರು

ಲೋಕಸಭಾ ಚುನಾವಣೆ ಮತದಾನಕ್ಕೆ ರಾಜ್ಯದಲ್ಲಿ ಕ್ಷಣ ಗಣನೆ ಆರಂಭವಾಗಿದೆ. ವೋಟ್ ಮಾಡಿ ಬಂದವರಿಗೆ ಉಚಿತ ಊಟ ನೀಡಲು ಬೆಂಗಳೂರಿನ ಹೋಟೆಲ್ ಅಸೊಸಿಯೇಷನ್ ಸದಸ್ಯರಿಗೆ ಕರ್ನಾಟಕ ಹೈಕೋರ್ಟ್ ಅನುಮತಿ ನೀಡಿದೆ. ಈ ಬಗ್ಗೆ ಹೈಕೋರ್ಟ್ ಮಧ್ಯಂತರ ಆದೇಶ ಹೊರಡಿಸಿದೆ.

ಏಪ್ರಿಲ್ 26ರಂದು ರಾಜ್ಯದಲ್ಲಿ ಮೊದಲ ಹಂತದ ಲೋಕಸಭಾ ಚುನಾವಣಾ ಮತದಾನ ನಡೆಯಲಿದೆ. ಅಂದು ಮತದಾನ ಮಾಡಿ ಅದಕ್ಕೆ ಸಂಬಂಧಿಸಿದ ಪುರಾವೆಗಳನ್ನು ತೋರಿಸಿದವರಿಗೆ ಹೋಟೆಲ್ ಗಳಲ್ಲಿ ಉಚಿತವಾದ ಆಹಾರ, ಊಟ ನೀಡಲು ಸೂಚಿಸಲಾಗಿದೆ.ಮತದಾನದ ಪ್ರಮಾಣ ಹೆಚ್ಚಿಸುವ ಉದ್ದೇಶದಿಂದ ಬೆಂಗಳೂರಿನ ಕೆಲವು ಹೋಟೆಲ್ ಗಳು ಕಳೆದ ವರ್ಷ ವಿಧಾನಸಭೆ ಚುನಾವಣೆ ವೇಳೆ ಇದೇ ರೀತಿಯ ಪ್ರಯತ್ನ ಮಾಡಿದ್ದವು.





> **ಹೋಟೆಲ್‌ಗಳ ಸಂಘ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್, ಅರ್ಜಿದಾರರು ಮಾದರಿ ನೀತಿ ಸಂಹಿತೆಯನ್ನು ಉಲ್ಲಂಘಿಸಬಾರದು. ಬೆಂಗಳೂರಿನ ಹೋಟೆಲ್ ಗಳು ಮತದಾನದ ಬಳಿಕ ಮತದಾರರಿಗೆ ಉಚಿತ ಊಟ ವಿತರಿಸಲು ಅನುಮತಿ ನೀಡಲಾಗಿದೆ ಎಂದು ತಿಳಿಸಿದೆ.**

## ಕೇರಳ ಗಡಿಯಲ್ಲಿ ಕಾಣಿಸಿಕೊಂಡ ಹಕ್ಕಿಜ್ವರ

• ಉದಯವಾಹಿನಿ, ಬೆಂಗಳೂರು

ನೆರೆಯ ಕೇರಳದ ಕೆಲವು ಜಿಲ್ಲೆಗಳಲ್ಲಿ ಹಕ್ಕಿ ಜ್ವರ ಕಾಣಿಸಿಕೊಂಡಿರುವ ಹಿನ್ನೆಲೆಯಲ್ಲಿ ರಾಜ್ಯದಲ್ಲೂ ಕಟ್ಟುನಿಟ್ಟಿನ ಕ್ರಮಕೈಗೊಳ್ಳಲಾಗುತ್ತಿದೆ.ಕೇರಳಕ್ಕೆ ಸಮೀಪ ಇರುವ ಮಂಗಳೂರು ಸೇರಿದಂತೆ ಕರ್ನಾಟಕದ ಗಡಿ ಪ್ರದೇಶಗಳಲ್ಲಿ ಕಟ್ಟೆಚ್ಚರ ವಹಿಸಲಾಗಿದೆ.



ಉದಯವಾಹಿನಿ ಚಿತ್ರ

ಯಾವುದೇ ಕ್ರಮ ತೆಗೆದುಕೊಳ್ಳುವ ಮೊದಲು ಕೇರಳದ ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡಲಾಗುತ್ತಿದೆ ಎಂದು ಕರ್ನಾಟಕ ಪಶುಸಂಗೋಪನಾ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.

ಆದಾಗ್ಯೂ, ರೈಲುಗಳಲ್ಲಿ ಮತ್ತು ರೈಲ್ವೆ ನಿಲ್ದಾಣಗಳಲ್ಲಿ ಕೋಳಿ ಮತ್ತು ಕೋಳಿ ಉತ್ಪನ್ನಗಳನ್ನು ಲೋಡ್ ಮಾಡುವುದು, ಕಾಯ್ದಿರಿಸುವುದು ಮತ್ತು ಸಾಗಿಸುವುದರ ಮೇಲೆ ಕಣ್ಗಾವಲು ವಹಿಸಲಾಗಿದೆ. ರೈಲ್ವೆ ಮಾತ್ರವಲ್ಲದೆ ಕೇರಳದಿಂದ ಮಂಗಳೂರಿಗೆ ಕೋಳಿ ಲೋಡ್ ಸಾಗಿಸುವ ರಸ್ತೆ ಸಾರಿಗೆಯ ಮೇಲೂ ಕಣ್ಗಾವಲು ಇಡಲಾಗಿದೆ. ಕೇರಳದಿಂದ ಅತಿ ಹೆಚ್ಚು ಕೋಳಿ ಖರೀದಿಸುವ ದೇಶಗಳಲ್ಲಿ ಒಂದಾದ ಮಂಗಳೂರು, ಕೇರಳ ಮೂಲದ ಪೂರೈಕೆದಾರರಿಂದ ಕೋಳಿ ಖರೀದಿಯನ್ನು ನಿಲ್ಲಿಸಿದೆ ಎಂದು ಮೂಲಗಳಿಂದ ತಿಳಿದುಬಂದಿದೆ.

## ವಿದ್ಯಾರ್ಥಿಗಳ ಅಪಹರಣ, ಹಲ್ಲೆ!

• ಉದಯವಾಹಿನಿ, ಬೆಂಗಳೂರು

ಬಾಡಿಗೆ ಮನೆ ನೋಡಲು ಹೋಗಿದ್ದ ವಿದ್ಯಾರ್ಥಿಗಳನ್ನು ಗುಂಪೊಂದು ಅಪಹರಿಸಿ, ಕೂಡಿ ಹಾಕಿ ಹಲ್ಲೆ ನಡೆಸಿರುವ ಘಟನೆ ಯಲಹಂಕ ನ್ಯೂ ಟೌನ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ನಗರದ ರಾಜಾನುಕುಂಟೆಯ ಖಾಸಗಿ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿದ್ದ ವಿದ್ಯಾರ್ಥಿಗಳಾದ ಕೃಷ್ಣ ಬಾಜಪೇಯಿ ಮತ್ತು ಯುವರಾಜ್ ಮೇಲೆ ಹಲ್ಲೆ ನಡೆಸಲಾಗಿದೆ. ವಿದ್ಯಾರ್ಥಿಗಳು ಬಾಡಿಗೆ ಮನೆ ನೋಡಲು ಹೋಗಿದ್ದಾಗ ಗುಂಪೊಂದು ಇಬ್ಬರನ್ನೂ ಅಪಹರಿಸಿದೆ. ಬಳಿಕ ಒಂದು ಕೋಣೆಯಲ್ಲಿ ಕೂಡಿಹಾಕಿ ಇಬ್ಬರ ಮೇಲೆ ರಾಡ್‌ನಿಂದ ಮನಸೋ ಇಚ್ಛೆ ಹಲ್ಲೆ ನಡೆಸಿ ಸಿಗರೇಟ್‌ನಿಂದ ಸುಟ್ಟಿದ್ದಾರೆ. ಘಟನೆ ಬಳಿಕ ಈ ಬಗ್ಗೆ ಯಲಹಂಕ ನ್ಯೂ ಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, 7 ಆರೋಪಿಗಳನ್ನು ಬಂಧಿಸಿದ್ದಾರೆ. ವಿಚಾರಣೆ ವೇಳೆ ಹಲ್ಲೆಗೊಳಗಾದವರು ಹಾಗೂ ಹಲ್ಲೆ ನಡೆಸಿದವರು ಹೊರರಾಜ್ಯದ ವಿದ್ಯಾರ್ಥಿಗಳು ಎಂದು ತಿಳಿದುಬಂದಿದೆ. ಆರೋಪಿಗಳು ಹಲ್ಲೆಗೊಳಗಾದ ವಿದ್ಯಾರ್ಥಿಗಳಿಗೆ 5 ಲಕ್ಷ ರೂ. ಹಣಕ್ಕೆ ಬೇಡಿಕೆ ಇಟ್ಟಿದ್ದ ಮಾಹಿತಿಯೂ ಬಹಿರಂಗವಾಗಿದೆ.

## ಡಿ.ಕೆ.ಸುರೇಶ್ ಆಪ್ತ, ನಿವಾಸದ ಮೇಲೆ ಐಟಿ ದಾಳಿ

• ಉದಯವಾಹಿನಿ, ಬೆಂಗಳೂರು

ಸಂಸದ ಡಿ.ಕೆ ಸುರೇಶ್ ಆಪ್ತ ಮಾಜಿ ಕಾರ್ಪೊರೇಟರ್ ಗಂಗಾಧರ್ ಅವರ ನಿವಾಸದ ಮೇಲೆ ಐಟಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಇದೇ ವೇಳೆ ಕೋಣನಕುಂಟೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶ್ರೀಧರ್ ಅವರ ಮನೆ ಮೇಲೂ ದಾಳಿ ನಡೆಸಲಾಗಿದೆ.





ಕಾಂಗ್ರೆಸ್ ನಾಯಕರ ಮನೆ ಮೇಲಿನ ಐಟಿ ದಾಳಿಯನ್ನು ಖಂಡಿಸಿರುವ ಕಾಂಗ್ರೆಸ್ ಕಾರ್ಯಕರ್ತರು ಬೀದಿಗಿಳಿದು ಹೋರಾಟ ನಡೆಸಿದ್ದಾರೆ. ಡಿ.ಕೆ ಸುರೇಶ್ ಅವರನ್ನು ಟಾರ್ಗೆಟ್ ಮಾಡಿ ಅವರ ಆಪ್ತರ ಮನೆಗಳ ಮೇಲೆ ಐಟಿ ದಾಳಿ ನಡೆಸಲಾಗಿದ್ದು, ಇದು ಡಿ.ಕೆ.ಸುರೇಶ್ ಅವರನ್ನು ಕಟ್ಟಿಹಾಕುವ ಯತ್ನ ಎಂದು ಕಾಂಗ್ರೆಸ್ ಕಾರ್ಯಕರ್ತರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಮಾಜಿ ಕಾರ್ಪೊರೇಟರ್ ಗಂಗಾಧರ್ ಹಾಗೂ ಶ್ರೀಧರ್ ನಿವಾಸದ ಬಳಿ ಜಮಾವಣೆಗೊಂಡಿರುವ ಕಾಂಗ್ರೆಸ್ ಕಾರ್ಯಕರ್ತರು ಕೇಂದ್ರ ಬಿಜೆಪಿ ಸರ್ಕಾರ ಹಾಗೂ ಐಟಿ ಇಲಾಖೆ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಏಕಕಾಲದಲ್ಲಿ ಒಟ್ಟು 6 ಕಡೆ 10ಕ್ಕೂ ಹೆಚ್ಚ ಐಟಿ ಅಧಿಕರಿಗಳ ತಂಡ ದಾಳಿ ನಡೆಸಿ, ದಾಖಲೆಗಳ ಪರಿಶೀಲನೆ ನಡೆಸಿದೆ.

# ಡಾ.ಮಂಜುನಾಥ್ ಕೇಂದ್ರ ಸಚಿವ ಸ್ಥಾನ: ಹೆಚ್‌ಡಿಡಿ

■ ದೇವೇಗೌಡ್ರು ಮಹತ್ವದ ಸುಳಿವು ■ ಕೇಂದ್ರ ಸಚಿವ ಸಂಪುಟಕ್ಕೆ ತಮ್ಮ ಅಳಿಯ ಬೆಂ.ಗ್ರಾ. ಲೋ. ಕ್ಷೇತ್ರದ ಬಿಜೆಪಿ ಅಭ್ಯರ್ಥಿ

• ಉದಯವಾಹಿನಿ, ಬೆಂಗಳೂರು

ಲೋಕಸಭಾ ಚುನಾವಣೆ ಹಿನ್ಕಲೆ ಮೈತ್ರಿಯಾಗಿರುವ ಬಿಜೆಪಿ ಜೆಡಿಎಸ್ ಭರ್ಜರಿ ಪ್ರಚಾರದಲ್ಲಿ ತೊಡಗಿದ್ದು, ಕಾಂಗ್ರೆಸ್ ವಿರುದ್ಧ ತಮ್ಮ ಶಕ್ತಿ ಪ್ರದರ್ಶನಕ್ಕೆ ಮುಂದಾಗಿವೆ. ಇತ್ತ ಮಂಡ್ಯದಿಂದ ಸ್ಪರ್ಧೆ ನಡೆಸಿರುವ ಮಾಜಿ ಮುಖ್ಯಮಂತ್ರಿ ಹೆಚ್‌ಡಿ ಕುಮಾರಸ್ವಾಮಿ ಅವರು ಗೆದ್ದ ಬಳಿಕ ಕೇಂದ್ರ ಮಂತ್ರಿ ಯಾಗಲಿದ್ದಾರೆ ಎನ್ನುವ ಚರ್ಚೆ ಜೋರಾಗಿದ್ದು, ಇದೀಗ ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ್ರು ಮಹತ್ವದ ಸುಳಿವು ನೀಡಿದ್ದಾರೆ.

ಕೇಂದ್ರ ಸಚಿವ ಸಂಪುಟಕ್ಕೆ ತಮ್ಮ ಅಳಿಯ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಸಿ.ಎನ್.ಮಂಜುನಾಥ್ ಅವರನ್ನು ಸೇರ್ಪಡೆ ಮಾಡಿಕೊಳ್ಳಲು ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಉತ್ಸುಕರಾಗಿದ್ದಾರೆ ಎಂದು ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ ಸುಳಿವು ನೀಡಿದ್ದಾರೆ. ಪ್ರಸ್ತುತ ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಸರ್ಕಾರವನ್ನು ಅಧಿಕಾರದಿಂದ ಕಿತ್ತೊಗೆಯುವವರೆಗೂ ತಾವು ವಿರಮಿಸುವುದಿಲ್ಲ ಎಂದು ಗೌಡರು ಪಣತೊಟ್ಟಿದ್ದಾರೆ.



ಉದಯವಾಹಿನಿ ಚಿತ್ರ

**ಮತದಾರರ ಗಮನ ಸೆಳೆಯುವ ಪ್ರಯತ್ನ**

ರಾಮನಗರ ಜಿಲ್ಲೆಯಲ್ಲಿ ಮಂಗಳವಾರ ಡಾ.ಮಂಜುನಾಥ್ ಪರ ಪ್ರಚಾರ ನಡೆಸಿದ ಅವರು, ಮಂಜುನಾಥ್ ಅವರು ತಮ್ಮ ವೈದ್ಯ ವೃತ್ತಿಯಲ್ಲಿ ಎಂಟು ಲಕ್ಷಕ್ಕೂ ಅಧಿಕ ಆಪರೇಷನ್ ಮಾಡಿ ಬಡವರಿಗೆ ಸಹಾಯ ಮಾಡಿದ್ದಾರೆ, ಹೀಗಾಗಿ ರಾಷ್ಟ್ರೀಯ ನಾಯಕರು ಅವರನ್ನು ತಮ್ಮ ಸಂಪುಟದಲ್ಲಿ ಸೇರಿಸಬೇಕೆಂದು ಬಯಸಿದ್ದಾರೆ. ನಾನು ಇಲ್ಲಿನ ಜನರನ್ನು ಮತ ಚಲಾಯಿಸುವಂತೆ ಒತ್ತಾಯಿಸುತ್ತೇನೆ ಎಂದು ಅವರು ಹೇಳಿದರು. ಕೇಂದ್ರದಲ್ಲಿ ಮೋದಿ ಮತ್ತು ಶಾ ಅವರು ಡಾ ಮಂಜುನಾಥ್ ಅವರ ಶಕ್ತಿಯನ್ನು ಗುರುತಿಸಿ ಬೆಂಗಳೂರು ಗ್ರಾಮಾಂತರದಿಂದ ಬಿಜೆಪಿ ಟಿಕೆಟ್‌ನಲ್ಲಿ ಸ್ಪರ್ಧಿಸಲು ಅವಕಾಶ ನೀಡುವಂತೆ ಕೇಳಿಕೊಂಡರು. ಮಂಜುನಾಥ್ ಅವರ ಸೇವೆ ರಾಷ್ಟ್ರಮಟ್ಟದಲ್ಲಿ ಅಗತ್ಯವಿದೆ ಎಂದು ಬಿಜೆಪಿ ನಾಯಕರು ಹೇಳಿದ್ದರು. ಇದು ಅನಿವಾರ್ಯ ಎಂದು ಹೇಳಿದರು ಎಂದರು. ಮಂಜುನಾಥ್ ಅವರು 16 ವರ್ಷಗಳಿಂದ ಬೆಂಗಳೂರಿನ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ನಿರ್ದೇಶಕರಾಗಿ ಸಾಕಷ್ಟು ಗುರುತರ ಕೆಲಸ ಮಾಡಿದ್ದಾರೆ ಎಂದರು.

> **ಬಿಎಸ್ ಯಡಿಯೂರಪ್ಪ ಅವರು ಸಿಎಂ ಆಗಿದ್ದಾಗ, ಜಯದೇವದಲ್ಲಿ ಡಾ.ಮಂಜುನಾಥ್‌ಗೆ ಅವಧಿ ವಿಸ್ತರಿಸಿದ್ದರು. ಮಂಜುನಾಥ್ ಅವರು ಆಸ್ಪತ್ರೆಯಲ್ಲಿ ಹಾಸಿಗೆಯ ಸಾಮರ್ಥ್ಯವನ್ನು ಹೆಚ್ಚಿಸಿದರು ಎಂದು ತಮ್ಮ ಅಳಿಯ ಮಾಡಿರುವ ಕೆಲಸ ಬಗ್ಗೆ ಹೇಳಿ ಕ್ಷೇತ್ರದ ಮತದಾರರ ಗಮನ ಸೆಳೆಯುವ ಪ್ರಯತ್ನ ಮಾಡಿದರು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಗೌಡರು. ಇಂತಹ ಭ್ರಷ್ಟ ಸರ್ಕಾರವನ್ನು ರಾಜ್ಯದಿಂದ ಕಿತ್ತೊಗೆಯುವವರೆಗೂ ನಾನು ವಿರಮಿಸುವುದಿಲ್ಲ. ಮೇ 5ರವರೆಗೆ ಕರ್ನಾಟಕದಾದ್ಯಂತ ಸಂಚರಿಸಿ ಮತ ಯಾಚಿಸುತ್ತೇನೆ ಎಂದು ಹೇಳಿದರು.**

> **ಚಿಕ್ಕಬಳ್ಳಾಪುರದಲ್ಲಿ ಇತ್ತೀಚೆಗೆ ಮೋದಿ ಜೊತೆಗಿನ ಸಂವಾದವನ್ನು ನೆನಪಿಸಿಕೊಂಡ ಗೌಡರು, ಮೋದಿ ಅವರು ನಮ್ಮ ನೋವನ್ನು ಅರ್ಥಮಾಡಿಕೊಳ್ಳುತ್ತಾರೆ ಎಂದು ಹೇಳಿದರು. ನಾನು ಕಾವೇರಿ ಸಮಸ್ಯೆಯನ್ನು ಬಗೆಹರಿಸುತ್ತೇನೆ. ಬೆಂಗಳೂರು ಗ್ರಾಮಾಂತರ ಸೇರಿದಂತೆ ಎಲ್ಲ 28 ಸ್ಥಾನಗಳನ್ನು ಗೆಲ್ಲಬೇಕಿದೆ ಎಂದು ಗೌಡ ಹೇಳಿದರು. ನಾವು ಇಲ್ಲಿ 28 ಸ್ಥಾನಗಳನ್ನು ಗೆದ್ದರೆ, ನಾನು ವೈಯಕ್ತಿಕವಾಗಿ ಮೋದಿಯವರ ಕೈ ಹಿಡಿದು ಮೇಕೆದಾಟು ಯೋಜನೆಗೆ ಅನುಮೋದನೆ ಪಡೆಯುತ್ತೇನೆ ಎಂದು ಹೇಳಿದರು. ದೇವೇಗೌಡ್ರು**

# ಲೋಕ ಅಖಾಡದಲ್ಲಿ ಕಾಂಗ್ರೆಸ್ ತಂತ್ರಕ್ಕೆ ಬಿಜೆಪಿ ಪ್ರತಿತಂತ್ರ

## • ಡಾ.ಸುಶ್ರುತ್ ಗೌಡ ಬಿಜೆಪಿಯತ್ತ, ಚುನಾವಣೆ ಹೊಸ್ತಿಲಲ್ಲೇ ಇಂತಹದೊಂದು ಬೆಳವಣಿಗೆ ಕಾಂಗ್ರೆಸ್‌ಗೆ ಆಘಾತ

• ಉದಯವಾಹಿನಿ ಮೈಸೂರು

ಮೈಸೂರು ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಗೆದ್ದೇ ಗೆಲ್ಲಬೇಕೆಂದು ಕಾಂಗ್ರೆಸ್ ಹೋರಾಟ ನಡೆಸುತ್ತಿರುವ ಬೆನ್ನಲ್ಲೇ ಮೈಸೂರು ಕೊಡಗು ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸುವ ಆಕಾಂಕ್ಷೆ ಹೊಂದಿದ್ದ ಕಾಂಗ್ರೆಸ್‌ನ ಪ್ರಭಾವಿ ಒಕ್ಕಲಿಗ ನಾಯಕ ಡಾ.ಸುಶ್ರುತ್ ಗೌಡ ಬಿಜೆಪಿಯತ್ತ ಮುಖ ಮಾಡಿದ್ದಾರೆ. ಚುನಾವಣೆ ಹೊಸ್ತಿಲಲ್ಲೇ ಇಂತಹದೊಂದು ಬೆಳವಣಿಗೆ ಕಾಂಗ್ರೆಸ್‌ಗೆ ಆಘಾತ ನೀಡಿದೆ.

ಕಾಂಗ್ರೆಸ್ ಮೈಸೂರು ಕೊಡಗು ಕ್ಷೇತ್ರದಲ್ಲಿ ಒಕ್ಕಲಿಗ ಮತಗಳನ್ನು ಸೆಳೆಯುವ ಸಲುವಾಗಿ ಒಕ್ಕಲಿಗ ಅಸ್ತ್ರವನ್ನು ಬಳಸುವ ಪ್ರಯತ್ನ ಮಾಡಿತ್ತು. ಬಿಜೆಪಿ ಒಕ್ಕಲಿಗರಿಗೆ ಅನ್ಯಾಯ ಮಾಡಿದೆ. ಪ್ರತಾಪ್ ಸಿಂಹ ಅವರಿಗೆ ಟಿಕೆಟ್ ನೀಡದೆ ಒಕ್ಕಲಿಗ ಸಮುದಾಯಕ್ಕೆ ದ್ರೋಹ ಬಗೆದಿದೆ ಎಂಬಂತಹ ಮಾತುಗಳನ್ನಾಡುವ ಮೂಲಕ ಬಿಜೆಪಿ ಒಕ್ಕಲಿಗ ವಿರೋಧಿ ಎಂಬಂತೆ ಬಿಂಬಿಸುವ ಕೆಲಸವನ್ನು ಕೆಪಿಸಿಸಿ ಅಧ್ಯಕ್ಷ, ಡಿಸಿಎಂ ಡಿ.ಕೆ.ಶಿವಕುಮಾರ್ ಸೇರಿದಂತೆ ಹಲವು ನಾಯಕರು ಮಾಡಿದ್ದರು. ಆ ಮೂಲಕ ಒಕ್ಕಲಿಗರನ್ನು ಬಿಜೆಪಿ ವಿರುದ್ಧ ಎತ್ತಿಕಟ್ಟುವ ತಂತ್ರಗಳನ್ನು ರೂಪಿಸಿದ್ದರು. ಕಾಂಗ್ರೆಸ್ ಒಕ್ಕಲಿಗರ ಪರವಾಗಿದ್ದು, ಒಕ್ಕಲಿಗ ಅಭ್ಯರ್ಥಿಗೆ ನಾವು ಟಿಕೆಟ್ ನೀಡಿದ್ದೇವೆ ಎಂದು


☛ ಉದಯವಾಹಿನಿ ಚಿತ್ರ

ಬೆನ್ನು ತಟ್ಟಿಕೊಳ್ಳುವ ಕೆಲಸ ಮಾಡಿದ್ದರು. ಅಷ್ಟೇ ಅಲ್ಲದೆ ಒಂದು ಹೆಜ್ಜೆ ಮುಂದೆ ಹೋಗಿ ಅಭ್ಯರ್ಥಿ ಎಂ.ಲಕ್ಷ್ಮಣ್ ಹೆಸರಿನ ಮುಂದೆ ಲಕ್ಷ್ಮಣ ಗೌಡ ಎಂದು ಸೇರಿಸಿ ಪ್ರಚಾರ ನಡೆಸಿದರು. ಇಷ್ಟೇ ಅಲ್ಲದೆ ಕೊಡಗಿನಲ್ಲಿ ಗೌಡ ಸಮುದಾಯ ಪ್ರಾಬಲ್ಯವಿರುವ ಕಾರಣ ಅಲ್ಲಿ ಡಿ.ಕೆ.ಶಿವಕುಮಾರ್ ಸಭೆ ನಡೆಸುವಂತೆ ಮಾಡಿ ಮತ ಸೆಳೆಯುವ ಪ್ರಯತ್ನವನ್ನು ಮಾಡಿದ್ದರು.

ಚುನಾವಣೆ ಆರಂಭದಿಂದಲೂ ಒಕ್ಕಲಿಗ ಮತಗಳ ಮೇಲೆ ಕಣ್ಣಿಟ್ಟಿರುವ ಕಾಂಗ್ರೆಸ್ ನಾಯಕರು ಹೇಗಾದರೂ ಮಾಡಿ ಒಕ್ಕಲಿಗ ಮತಗಳನ್ನು ಸೆಳೆದುಕೊಂಡಿದ್ದೇ ಆದರೆ ಸುಲಭವಾಗಿ ಗೆಲ್ಲಬಹುದು ಎಂಬ ಲೆಕ್ಕಾಚಾರದಲ್ಲಿದ್ದರು. ಆದರೀಗ ಪ್ರಭಾವಿ ಒಕ್ಕಲಿಗ ನಾಯಕ ಡಾ.ಸುಶ್ರುತ್ ಗೌಡ ಅವರು ಬಿಜೆಪಿಗೆ ಸೇರ್ಪಡೆಯಾಗಿರುವುದು ಇಷ್ಟು ದಿನಗಳ ಕಾಲ ಒಕ್ಕಲಿಗ ಮತವನ್ನು ಸೆಳೆಯಲು ಪಟ್ಟ ಶ್ರಮವೆಲ್ಲವೂ ಕಾವೇರಿ ನದಿಯಲ್ಲಿ ಕೊಚ್ಚಿ ಹೋದಂತಾಗಿದೆ.ಹಾಗೆನೋಡಿದರೆ ಮೈಸೂರು ಕೊಡಗು ಲೋಕ ಸಭಾ ಕ್ಷೇತ್ರದಿಂದ ಅಭ್ಯರ್ಥಿಯಾಗಿ ಸ್ಪರ್ಧಿಸಲು ಕಾಂಗ್ರೆಸ್‌ನಿಂದ ಡಜನ್ ಗಟ್ಟಲೆ ನಾಯಕರು ಮುಗಿಬಿದ್ದಿದ್ದರು.

### ಅರೆಗೌಡರು ಹೆಚ್ಚು ಪ್ರಾಬಲ್ಯ

**ಕೊಡಗಿನ ಗೌಡ ಫೌಂಡರೇಷನ್ ಪ್ರಮುಖರಾದ ಸೂರ್ತಲೆ ಸೋಮಣ್ಣನವರ ಮೂಲಕ ಸಭೆಯನ್ನು ನಡೆಸಿ ಅರೆ ಭಾಷೆ ಗೌಡ ಮತ್ತು ಒಕ್ಕಲಿ ಗೌಡ ಸಮುದಾಯವನ್ನು ಸೆಳೆಯುವ ಪ್ರಯತ್ನ ಮಾಡಿದ್ದರು. ಇಲ್ಲಿ ಒಕ್ಕಲಿಗ ಗೌಡರಿಗಿಂತ ಹೆಚ್ಚಾಗಿ ದಕ್ಷಿಣಕನ್ನಡ ಮೂಲದ ಅರೆಗೌಡರು ಹೆಚ್ಚು ಪ್ರಾಬಲ್ಯ ಹೊಂದಿದ್ದು ಅವರನ್ನು ಕಾಂಗ್ರೆಸ್‌ನತ್ತ ಒಲೈಸುವ ಕೆಲಸ ಮಾಡಲಾಗಿತ್ತು.**

> **ಈಗಾಗಲೇ ಮೈಸೂರು ಕೊಡಗು ಕ್ಷೇತ್ರದಲ್ಲಿ ಅಲ್ಪಸಂಖ್ಯಾತ, ದಲಿತ ಮತಗಳೊಂದಿಗೆ ಒಂದಷ್ಟು ಮಹಿಳಾ ಮತಗಳು ಕಾಂಗ್ರೆಸ್‌ನ ಕೈಹಿಡಿಯಲಿದ್ದು, ಇದರ ಜತೆಗೆ ಒಕ್ಕಲಿಗ ಮತ್ತು ಅರೆಗೌಡ ಸಮಾಜದ ಒಂದಷ್ಟು ಮತಗಳು ಕಾಂಗ್ರೆಸ್‌ಗೆ ಬಿದ್ದರೆ ಸುಲಭವಾಗಿ ಗೆಲ್ಲಬಹುದು ಎಂಬುವುದು ಕಾಂಗ್ರೆಸ್ ನಾಯಕರ ಲೆಕ್ಕಾಚಾರವಾಗಿದೆ. ಹೀಗಾಗಿಯೇ ಒಕ್ಕಲಿಗ ಸಮುದಾಯದ ಬಗ್ಗೆಯೇ ಹೆಚ್ಚು ಮಾತನಾಡಿದ್ದರು. ಆದರೀಗ ಬಿಜೆಪಿ ನಾಯಕರು ಕಾಂಗ್ರೆಸ್‌ನಲ್ಲಿದ್ದ ಒಕ್ಕಲಿಗ ನಾಯಕರಿಗೆ ಗಾಳ ಹಾಕುವ ಮೂಲಕ ತಿರುಗೇಟು ನೀಡಿದ್ದಾರೆ. -ಕಾಂಗ್ರೆಸ್**

### ಕೊಡಗಿನಿಂದ ಬೀಳಲಿರುವ ಮತಗಳು ನಿರ್ಣಾಯಕ

**ಮೈಸೂರು ಕೊಡಗು ಲೋಕಸಭಾ ಅಖಾಡದಲ್ಲಿ ಕೊಡಗಿನಿಂದ ಬೀಳಲಿರುವ ಮತಗಳು ನಿರ್ಣಾಯಕವಾಗಿವೆ ಎಂದರೆ ತಪ್ಪಾಗಲಾರದು. ಇಲ್ಲಿನ ಬಹುತೇಕರು ಪಕ್ಷವನ್ನು ನೋಡಿ ಮತಹಾಕುವುದರಿಂದ ಅದರಲ್ಲೂ ಪ್ರಾಬಲ್ಯವಿರುವ ಅರೆಗೌಡ ಸಮುದಾಯ ಬಿಜೆಪಿಯೊಂದಿಗೆ ಹೆಚ್ಚಾಗಿ ಗುರುತಿಸಿಕೊಂಡಿರುವುದರಿಂದ ಅವರನ್ನು ಸೆಳೆಯುವ ಪ್ರಯತ್ನವನ್ನು ಡಿ.ಕೆ.ಶಿವಕುಮಾರ್ ಮಾಡಿದ್ದಾರೆ.**

## ಲೋಕಸಭಾ ಚುನಾವಣೆ ದೇಶದ ಭವಿಷ್ಯತ್ತನ್ನು ರೂಪಿಸುವ ಚುನಾವಣೆಯಾಗಿದೆ

• ಉದಯವಾಹಿನಿ ಶಿಡ್ಲಘಟ್ಟ

ಪ್ರತಿಯೊಬ್ಬ ವ್ಯಕ್ತಿಗೂ ಜನ್-ಧನ್ ಅಕೌಂಟ್ ಮಾಡಿಸಿ 15 ಲಕ್ಷ ಹಣ ಹಾಕುತ್ತೇವೆ ಎಂದು ಚುನಾವಣಾ ಪೂರ್ವ ಹೇಳಿದ ನರೇಂದ್ರ ಮೋದಿಯವರು ಜನಸಾಮಾನ್ಯರಿಗೆ ಮಂಕುಬೂದಿ ಎರಚಿದ್ದಾರೆ ಎಂದು ಕುರುಬ ಸಂಘದ ಜಿಲ್ಲಾಧ್ಯಕ್ಷ ಡಾಲ್ಫಿನ್ ಎ.ನಾಗರಾಜು ಮೋದಿ ವಿರುದ್ಧ ಕಿಡಿ ಕಾರಿದರು.

ಶಿಡ್ಲಘಟ್ಟ ನಗರದ ಡಾಲ್ಫಿನ್ ಕಾಲೇಜಿನ ಸಭಾಂಗಣದಲ್ಲಿ ಶೋಷಿತ ಸಮುದಾಯಗಳ ಒಕ್ಕೂಟದ ವತಿಯಿಂದ ಕಾಂಗ್ರೆಸ್ ಬೆಂಬಲಿಸಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ವರ್ಷಕ್ಕೆ ಎರಡು ಕೋಟಿ ಉದ್ಯೋಗ ಕೊಡುತ್ತೇನೆ ಎಂದು ಭರವಸೆ ನೀಡಿ 10 ವರ್ಷ ಕಳೆದರೂ ಎರಡು ಲಕ್ಷ ಉದ್ಯೋಗವನ್ನು ಕೊಡಲಿಲ್ಲ. ಕಳೆದ ಬಾರಿ ಯುವಕರಿಗೆ ಮಂಕು ಬೂದಿ ಎರಚಿ ಮತ್ತೊಮ್ಮೆ ಅಧಿಕಾರ ವಹಿಸಿಕೊಂಡರು. ಅಯೋಧ್ಯ ರಾಮಮಂದಿರ ಕಟ್ಟಿಸಿದ್ದಾರೆ ಅಲ್ಲಿ ರಾಮ ಮಾತ್ರ ಇದ್ದಾರೆ, ಸೀತೆ,ಲಕ್ಷ್ಮಣ,ಆಂಜನೇಯ ಇಲ್ಲ. ಅದನ್ನು ಬಿಜೆಪಿಯವರು ಮಾತ್ರ ಕಟ್ಟಿಸಿದರು ಎಂದು ಬಿಂಬಿಸಿಕೊಳ್ಳುತ್ತಿದ್ದಾರೆ ಹಾಗಾದರೆ ಅವರು ಮಾತ್ರ ಹಿಂದೂಗಳು. ನಾವು ಹಿಂದುಗಳು ಅಲ್ಲವೇ ಅಲ್ಲ. ಸ್ವಾತಂತ್ರ್ಯ ಬಂದು ಎಪ್ಪತ್ತು ವರ್ಷ ಕಳೆದಿದೆ. ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನ ಬರೆದು ಎಲ್ಲಾ ವರ್ಗಗಳಿಗೂ ಮೀಸಲಾತಿ ನೀಡಿದ್ದಾರೆ.


☛ ಉದಯವಾಹಿನಿ ಚಿತ್ರ

> **ಲೋಕಸಭಾ ಚುನಾವಣೆ ಬಹಳ ಮಹತ್ತರವಾಗಿದೆ ಈ ದೇಶದ ಭವಿಷ್ಯತ್ತನ್ನು ರೂಪಿಸುವ ಚುನಾವಣೆಯಾಗಿದೆ. ಎಲ್ಲಾ ದಲಿತ ಹಿಂದುಳಿದ ವರ್ಗದವರು ಅಲ್ಪಸಂಖ್ಯಾತರು ಸೇರಿ ಈ ಚುನಾವಣೆಯನ್ನು ತುಂಬಾ ಬುದ್ಧಿವಂತಿಕೆಯಿಂದ ಎದುರಿಸಬೇಕಾಗುತ್ತದೆ. ಸತ್ಯ ಮತ್ತು ಸುಳ್ಳಿನ ನಡುವೆ ನಡೆಯುತ್ತಿರುವ ಚುನಾವಣೆಯಾಗಿದೆ. ದೇಶದಲ್ಲಿ ನರೇಂದ್ರ ಮೋದಿ ಸುಮಾರು ವರ್ಷಗಳಿಂದ ಜನರಿಗೆ ಸುಳ್ಳು ಹೇಳಿಕೊಂಡು ಬಂದು ಜನರಿಗೆ ಮೋಸ ಮಾಡುತ್ತಿದ್ದಾರೆ**
> **-ಕುಂದಲಗುರ್ಕಿ ಮುನೀಂದ್ರ, ಮಾನವ ಬಂದುತ್ವ ಜಿಲ್ಲಾ ಸಂಚಾಲಕ**

ಕರ್ನಾಟಕದಲ್ಲಿ ಹಿಂದುಳಿದ ವರ್ಗಗಳಲ್ಲಿ ಅನೇಕರು ಮುಖ್ಯಮಂತ್ರಿಗಳಾಗಿದ್ದಾರೆ.ಅದೇ ಬಿಜೆಪಿ ಏನು ಮೀಸಲಾತಿ ಇದಿಯೋ ಅವರಿಗೆ ಮಾತ್ರ ಸೀಮಿತವಾಗಿ ಇತರರಿಗೆ ಯಾವುದೇ ರೀತಿಯ ಹಂಚಿಕೆ ಮಾಡಿಲ್ಲ ಎಂದು ಬಿಜೆಪಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ದಿಬ್ಬೂರಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಡಿಪಿ ನಾಗರಾಜ್ ಮಾತನಾಡಿ ಮನಮೋಹನ್ ಸಿಂಗ್ ಅವರು ಅಧಿಕಾರದಲ್ಲಿ ಇದ್ದಾಗ ಗ್ರಾಮೀಣ ಭಾಗದ ಜನತೆಗೆ ನರೇಗಾ ಎಂಬ ಯೋಜನೆಯನ್ನು ಜಾರಿಗೆ ತಂದು ಪ್ರತಿಯೊಂದು ಹಳ್ಳಿಗೂ ಸಹ ಈ ಯೋಜನೆಯ ಮೂಲಕ ಅಭಿವೃದ್ಧಿಯಾಗುತ್ತಿದೆ. 10 ವರ್ಷಗಳ ಅವಧಿಯಲ್ಲಿ ಬಿಜೆಪಿ ಸರ್ಕಾರ ಮಾಡಿದ್ದು ಬರಿ ಶೂನ್ಯ ಅವರು ಯಾವುದೇ ಯೋಜನೆಗಳು ಜಾರಿಗೆ ತರಲಿಲ್ಲ ಅಭಿವೃದ್ಧಿ ಕುಂಠಿತವಾಗಿದೆ ದೇಶದಲ್ಲಿ ಏನಾದರೂ ಅಭಿವೃದ್ಧಿ ಆಗಿದೆ ಎಂದರೆ ಅದು ಕೇವಲ ನರೇಗಾ ಯೋಜನೆಯಿಂದ ಮಾತ್ರ. ನರೇಂದ್ರ ಮೋದಿ ಅಧಿಕಾರಕ್ಕೆ ಬಂದ ನಂತರ ಪ್ರತಿಯೊಂದು ವಸ್ತುವಿನ ಮೇಲೆ ದರಗಳನ್ನು ದುಬಾರಿಯನ್ನಾಗಿಸಿದ ಕೀರ್ತಿ ಬಿಜೆಪಿ ಸರ್ಕಾರದ್ದು ಎಂದರು. ಈ ಸಂದರ್ಭದಲ್ಲಿ ದಲಿತ ಮುಖಂಡ ನಾಗ ನರಸಿಂಹ, ಶ್ರೀನಿವಾಸ ಚಕ್ರವರ್ತಿ, ನಾಗರಾಜ, ಟಿ.ಎ ಚಲಪತಿ, ಮಂಜುನಾಥ್, ನಾರಾಯಣಸ್ವಾಮಿ ಕೆ, ದೇವರಾಜ, ಬಾಲಕೃಷ್ಣ, ಜೆ ಎಂ ಅಣ್ಣಪ್ಪ, ಕೆ ಮಂಜುನಾಥ್, ಫಯಾಜ್, ಆಫೀಜ್, ಗಿರೀಶ್, ಮುನಿನಂಜಪ್ಪ, ರಾಮಾಂಜಿ , ಮುನಿಯಪ್ಪ ಜೀವಿಕ ಮತ್ತಿತರಿದ್ದರು.

## ಮಳೆಗಾಗಿ ಮಕ್ಕಳಿಗೆ ತಿಂಗಳಮಾಮನ ಮದುವೆ

• ಉದಯವಾಹಿನಿ ಕಿಕ್ಕೇರಿ


☛ ಉದಯವಾಹಿನಿ ಚಿತ್ರ

ಮಳೆಗಾಗಿ ಪ್ರಾರ್ಥಿಸಿ ಜಾನಪದ ಸಂಸ್ಕೃತಿಯಲ್ಲಿನ ನಂಬಿಕೆಯಂತೆ ಮಕ್ಕಳಿಗೆ ತಿಂಗಳಮಾಮನ ಮದುವೆ ಹೋಬಳಿಯ ಮಾದಾಪುರ ಗ್ರಾಮದಲ್ಲಿ ಮಾಡಲಾಯಿತು.

ಹೋಬಳಿಯ ಮಾದಾಪುರ ಗ್ರಾಮದಲ್ಲಿ ಇಡೀ ಗ್ರಾಮಸ್ಥರು ಒಂದಾಗಿ ಈ ಬಾರಿಯಾದರೂ ಮಳೆಬರಲಿ ಎಂದು ಚಂದಿರನ ಪ್ರಾರ್ಥಿಸಿ ವಿಶೇಷವಾಗಿ ಚಂದಮಾಮನ ಹೆಸರಿನಲ್ಲಿ ವಿವಾಹ ನಡೆಸಲು ಈಚೆಗೆ ಮುಂದಾದರು.

**ಊರಿನ ಗ್ರಾಮಸ್ಥರು ಇದಕ್ಕೆ ಸಾಥ್**

ಗ್ರಾಮದಲ್ಲಿನ ಮಕ್ಕಳನ್ನು ಒಂದೆಡೆ ಕಲೆಹಾಕಿ ಮದುವೆ ಶಾಸ್ತ್ರ ಮಾಡಲು ಸಜ್ಜಾದರು. ಮದುವೆಯಲ್ಲಿ ವರ ಹಾಗೂ ವಧುವಾಗಿ ಇಬ್ಬರನ್ನು ಗಂಡು ಮಕ್ಕಳನ್ನೆ ಆಯ್ಕೆ ಮಾಡಲಾಯಿತು. ಕಾರ್ತಿಕ್ ಮದುಮಗನಾದರೆ, ಚಿರಾಗ್ ಮದುಮಗಳಾಗಿ ಸಜ್ಜಾದರು. ಚಿರಾಗ್‌ಗೆ ಸೀರೆ ಕುಪ್ಪಸ, ಬಳೆ, ಒಡವೆ ತೊಡಿಸಿ ಶೃಂಗರಿಸಿದರು. ಮನೆ ಮನೆಗಳಲ್ಲಿ ಮಕ್ಕಳು ರೊಟ್ಟಿ ಹಿಟ್ಟನ್ನು ತಂದು ಒಂದೆಡೆ ಸೇರಿಸಿ ರೊಟ್ಟಿ ತಯಾರಿಸಲು ಸಜ್ಜಾದರು. 9 ದಿನಗಳ ಕಾಲ ನಡೆದ ಮದುವೆ ಶಾಸ್ತ್ರದಲ್ಲಿ ದಿನಕ್ಕೊಂದು ರೊಟ್ಟಿಯಂತೆ 9 ರೊಟ್ಟಿ, 9 ಹೋಳಿಗೆ ತಯಾರಿಸಲಾಯಿತು. ರೊಟ್ಟಿಯ ಮೇಲೆ ಚಂದಿರನ ಚಿತ್ತಾರ ಬಿಡಿಸಿದರು. ಪರಸ್ಪರ ರೊಟ್ಟಿ ಕಸಿಯಲು ಯತ್ನಿಸಿದರು. ಅಂತಿಮವಾಗಿ ಒಂದೆಡೆ ಕಲೆತು ಮಳೆರಾಯನ ಕುರಿತು ಹಾಡಿದರು. ನೃತ್ಯ ಮಾಡಿ ಬಾರೋ ಮಳೆರಾಯ ಎಂದು ಕರೆದರು. ಪರಸ್ಪರ ನೀರು ಎರಚಾಡಿ ಸಂಭ್ರಮಿಸಿದರು. ಊರಿನ ಗ್ರಾಮಸ್ಥರು ಇದಕ್ಕೆ ಸಾಥ್ ನೀಡಿದರು.

ಗ್ರಾಮದ ಮುಖಂಡರಾದ ಪುಟ್ಟಕ್ಕ, ಕಾಳಮ್ಮ, ಭಾಗ್ಯ, ನಿರ್ಮಲಾ, ಶಾಂತಲಾ, ಸವಿತಾ, ಲಕ್ಷ್ಮೀ, ಸುರೇಶ್, ಶಿವಶಂಕರ್, ನಾಗೇಗೌಡ, ಯೋಗೇಶ್, ನಿತೀಶ್ ಪಾಲ್ಗೊಂಡು, ಮದುವೆ ಪೌರೋಹಿತ್ಯವನ್ನು ಟೈಲರ್ ರಘು ಉಸ್ತುವಾರ ವಹಿಸಿದ್ದರು.

## ಸುಳ್ಳು ಗ್ಯಾರಂಟಿ ನೆಪದಲ್ಲಿ ಜನರಿಗೆ ಮೋಸ: ಎಂ.ಕೃಷ್ಣಾರೆಡ್ಡಿ


☛ ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂತಾಮಣಿ

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಗ್ಯಾರಂಟಿಗಳ ನೆಪದಲ್ಲಿ ವಿವಿಧ ಶುಲ್ಕ ಹೆಚ್ಚಿಸುವ ಮೂಲಕ ಜನ ಸಾಮಾನ್ಯರ ಜೇಬಿಗೆ ಕತ್ತರಿ ಹಾಕುತ್ತಿದೆ ಎಂದು ಮಾಜಿ ಶಾಸಕ ಎಂ.ಕೃಷ್ಣಾರೆಡ್ಡಿ ಆರೋಪಿಸಿದರು.

ಚಿನ್ನಸಂದ್ರ ಗ್ರಾಮದಲ್ಲಿ ಬಿಜೆಪಿ-ಜೆಡಿಎಸ್ ಹಮ್ಮಿಕೊಂಡಿದ್ದ ಪ್ರಚಾರ ಸಭೆಯಲ್ಲಿ ಮೈತ್ರಿ ಅಭ್ಯರ್ಥಿ ಮಲ್ಲೇಶಬಾಬು ಪರ ಮತಯಾಚನೆ ಮಾಡಿ ಮಾತನಾಡಿದರು.

ಬರಗಾಲದಲ್ಲಿ ರೈತ ಕೊಳವೆ ಬಾವಿ ಕೊರೆದು ವಿದ್ಯುತ್ ಸಂಪರ್ಕ ಪಡೆಯಲು 3ಲಕ್ಷ ಕಟ್ಟಬೇಕು.

> **ಕಾಂಗ್ರೆಸ್ ಸರ್ಕಾರ ರೈತರ ಜಮೀನು ನೋಂದಣಿ, ಪಹಣಿ, ಮ್ಯುಟೇಷನ್, ಛಾಪ ಕಾಗದ, ಸಬ್ ರಿಜಿಸ್ಟರ್ ಕಚೇರಿ ಮತ್ತು ಭೂದಾಖಲೆ ಕಚೇರಿಯಿಂದ ಪಡೆದುಕೊಳ್ಳುವ ಎಲ್ಲ ದಾಖಲೆಗಳ ಶುಲ್ಕ ಹೆಚ್ಚಿಸಿದೆ. ಮದ್ಯದ ಬೆಲೆ ಸಿಕ್ಕಾಪಟ್ಟೆ ಏರಿಸಲಾಗಿದೆ. ಗ್ಯಾರಂಟಿಗಳಿಗೆ ಹಣ ಒದಗಿಸಲು ಜನಸಾಮಾನ್ಯರ ಕಿಸೆಯಿಂದಲೇ ಹಣ ಕೀಳಲಾಗುತ್ತಿದೆ. ಕೇಂದ್ರ ಸರ್ಕಾರ ನೀಡುತ್ತಿರುವ 5ಕೆ.ಜಿ.ಅಕ್ಕಿ ತಾನು ನೀಡಿದ್ದು ಎಂದು ಮೋಸ ಮಾಡುತ್ತಿದೆ**
> **-ಎಂ.ಕೃಷ್ಣಾರೆಡ್ಡಿ, ಮಾಜಿ ಶಾಸಕ**

ಯಾವುದೇ ನೀರಾವರಿ ಸೌಲಭ್ಯಗಳಿಲ್ಲದ ಬರಪೀಡಿತ ಪ್ರದೇಶದಲ್ಲಿ ಕೊಳವೆ ಬಾವಿಗಳಿಂದ ಮಾತ್ರ ಕೃಷಿ ಮಾಡಲು ಸಾಧ್ಯ. ಇದು ರೈತರಿಗೆ ಅನುಕೂಲ ಮಾಡಿದ ಸರ್ಕಾರವೇ ರೈತರ ಹೆಸರೇಳಿಕೊಂಡು ಅಧಿಕಾರಕ್ಕೆ ಬಂದ ಕಾಂಗ್ರೆಸ್ ರೈತರಿಗೆ ಅನ್ಯಾಯ ಮಾಡುತ್ತಿದೆ ಎಂದು ಟೀಕಿಸಿದರು.

## ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗ ದೇಶದ್ರೋಹಿಗಳ ಸಂಖ್ಯೆ ಹೆಚ್ಚಾಗುತ್ತಿದೆ

• ಉದಯವಾಹಿನಿ, ಬಂಗಾರಪೇಟೆ

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗ ದೇಶದ್ರೋಹಿಗಳ ಸಂಖ್ಯೆ ಹೆಚ್ಚಾಗುತ್ತಿದೆ ವಿಧಾನಸೌಧದಲ್ಲಿ ಪಾಕಿಸ್ತಾನ್ ಜಿಂದಾಬಾದ್ ಎಂಬ ಘೋಷಣೆ ಕೇಳಿಬರುತಿದೆ ಮತ್ತು ಆರೋಪಿಗಳನ್ನು ಕುಲಾಸೆ ಮಾಡಲಾಗಿದೆ ಎಂದು ಸಂಸದ ಎಸ್ ಮುನಿಸ್ವಾಮಿ ಗುಡುಗಿದರು.

**ಅಂಬೇಡ್ಕರ್ ಸೋಲಿಸಿದ ಕಾಂಗ್ರೆಸ್:** ಈ ದೇಶಕ್ಕೆ ಸಂವಿಧಾನವನ್ನು ಕೊಟ್ಟು ಬಾಬಾ ಸಾಹೇಬ್ ಅಂಬೇಡ್ಕರ್ ರವರ ವಿರುದ್ಧ ನೆಹರು ರವರು ಪ್ರಚಾರ ಮಾಡಿ ಎರಡು ಬಾರಿ ಸೋಲಿಸಿದರು, ಶವ ಸಂಸ್ಕಾರಕ್ಕೆ ಸ್ಥಳವನ್ನು ನೀಡದೆ ಅಪಮಾನಗೊಳಿಸಿದರು, ಭಾರತ ರತ್ನ ನೀಡಲು ಮೀನಾ-ಮೇಷ ಎನಿಸಿದರು , ಆದರೆ ಪ್ರಧಾನಿ ನರೇಂದ್ರ ಮೋದಿಯವರು ಅಧಿಕಾರಕ್ಕೆ ಬಂದ ನಂತರ ಅಂಬೇಡ್ಕರ್ ಅವರ ಹೆಸರನ್ನು ವಿಶ್ವದಲ್ಲಿ ಚಿರಸ್ಥಾಯಿಗೊಳಿಸಲು ಸಾವಿರಾರು ಕೋಟಿ ರುಪಾಯಿಗಳ ವೆಚ್ಚದಲ್ಲಿ ಪಂಚತೀರ್ಥಗಳನ್ನು ಸ್ಥಾಪಿಸಿದ್ದಾರೆ, ಕಾಂಗ್ರೆಸ್ ಪಕ್ಷದವರಿಗೆ ದಲಿತರ


☛ ಉದಯವಾಹಿನಿ ಚಿತ್ರ

ಮತಗಳನ್ನು ಕೇಳುವ ನೈತಿಕತೆ ಇಲ್ಲ, ಸ್ಥಳೀಯ ಶಾಸಕರು ದಲಿತ ಸಮುದಾಯವನ್ನು ಎಡ- ಬಲ, ದೊಡ್ಡದು-ಚಿಕ್ಕದು, ತಮಿಳು, ತೆಲುಗು, ಕನ್ನಡ, ಒಕ್ಕಲಿಗ, ಹಿಂದುಳಿದ ವರ್ಗ ಎಂದು ಇಬ್ಭಾಗ ಮಾಡುವುದರ ಮೂಲಕ ಪ್ರತ್ಯೇಕ ಸಭೆಗಳನ್ನು ನಡೆಸಿ ಸಮುದಾಯಗಳ ನಡುವೆ ದ್ವೇಷ ರಾಜಕಾರಣದ ವಿಷಬೀಜ ಬಿತ್ತುವ ತಂತ್ರವನ್ನು ಮಾಡುತ್ತಿದ್ದಾರೆ ಇದು ಶೋಭೆ ತರುವಂತದ್ದಲ್ಲ ಎಂದರು. ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಬಿ.ಪಿ.ವೆಂಕಟಮುನಿಯಪ್ಪ, ಎಂ.ನಾರಾಯಣಸ್ವಾಮಿ ಮಾಲೂರಿನ ಮಂಜುನಾಥ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಿವಿ ಮಹೇಶ್, ಮುಖಂಡರಾದ ಕೆ ಚಂದ್ರಾರೆಡ್ಡಿ, ಹೊಸರಾಯಪ್ಪ, ಸಂಪಂಗಿ ರೆಡ್ಡಿ, ವಿ ಶೇಷು, ನಗರ ಘಟಕ ಅಧ್ಯಕ್ಷ ಮಹೇಶ್, ಇತರರೂ ಉಪಸ್ಥಿತರಿದ್ದರು.

### ಕಾಂಗ್ರೆಸ್ ಮನೆ ಒಂದು ಮೂರು ಬಾಗಿಲು

**ಕೋಲಾರದಲ್ಲಿ ಕೆಎಚ್ ಮುನಿಯಪ್ಪ ಬಾಣ ಮತ್ತು ರಮೇಶ್ ಕುಮಾರ್ ಬಾಣಗಳ ನಡುವೆ ಕಿತ್ತಾಟ ಜೋರಾಗಿದೆ, ರಾಜ್ಯದಲ್ಲಿ ಮುಖ್ಯಮಂತ್ರಿ ಹುದ್ದೆಗಾಗಿ ಡಿಕೆ ಶಿವಕುಮಾರ್ ಮತ್ತು ಸಿಎಂ ಸಿದ್ದರಾಮಯ್ಯನವರ ನಡುವಿನ ಮುಸುಕಿನ ಗುದ್ದಾಟ ಹೆಚ್ಚಾಗುತ್ತಿದೆ ಕಾಂಗ್ರೆಸ್ ಮನೆ ಒಂದು ಮೂರು ಭಾಗಗಳಾಗಿದ್ದು ಲೋಕಸಭಾ ಚುನಾವಣೆಯ ನಂತರ ನಾಲ್ಕು ತಿಂಗಳ ಒಳಗಾಗಿ ವಿಧಾನಸಭಾ ಚುನಾವಣೆ ಬರುವ ಸಾಧ್ಯತೆಗಳು ಹೆಚ್ಚಾಗಿದೆ ಮತದಾರರು ಸಿದ್ದರಾಗಬೇಕು ಎಂದರು.**

## ಹೃದಯವಂತನೊ, ಲೂಟಿಕೋರನೊ ನಿರ್ಧರಿಸಿ: ನಿಖಿಲ್ ಕುಮಾರಸ್ವಾಮಿ

• ಉದಯವಾಹಿನಿ, ರಾಮನಗರ

ಬೆಂಗಳೂರು ಗ್ರಾಮಾಂತರದ ಜನರು ಈ ಸಲದ ಚುನಾವಣೆಯಲ್ಲಿ ಸಂಸತ್ತಿಗೆ ಹೃದಯವಂತನನ್ನು ಕಳಿಸುತ್ತಿರೋ ಅಥವಾ ಲೂಟಿಕೋರನನ್ನೊ ಎಂಬುದನ್ನು ಯೋಚಿಸಿ ನಿರ್ಧರಿಸಬೇಕು. ಕ್ಷೇತ್ರವಷ್ಟೇ ಅಲ್ಲದೆ ತಮ್ಮ ಮಕ್ಕಳ ಭವಿಷ್ಯದ ದೃಷ್ಟಿಯಿಂದ ಹೃಯವಂತನನ್ನು ಕಳಿಸಿದರೆ, ಇಡೀ ದೇಶಕ್ಕೆ ಒಳ್ಳೆಯದು ಮಾಡಿದಂತಾಗುತ್ತದೆ' ಎಂದು ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದರು. ತಮ್ಮ ಮಾವ ಬಿಜೆಪಿ ಅಭ್ಯರ್ಥಿ ಡಾ. ಸಿ.ಎನ್. ಮಂಜುನಾಥ್ ಪರವಾಗಿ ನಗರದ ಕೆಂಗಲ್ ಹನುಮಂತಯ್ಯ ವೃತ್ತದಲ್ಲಿ ಮಂಗಳವಾರ ಮತಯಾಚಿಸಿ ಅವರು ಮಾತನಾಡಿದರು.

ದೇಶ ವಿಭಜನೆಯ ಹೇಳಿಕೆ ಕೊಟ್ಟಿರುವ ಸುರೇಶ್ ಅವರ ಮನಸ್ಥಿತಿ ಏನೆಂದು ನಿಮಗೆಲ್ಲಾ ಗೊತ್ತಿದೆ. ಅಂತವರನ್ನು ಮತ್ತೆ ಸಂಸತ್ತಿಗೆ ಕಳಿಸಿ ಆವಾಂತರ ಮಾಡಿ


☛ ಉದಯವಾಹಿನಿ ಚಿತ್ರ

ಕೊಳ್ಳುತ್ತೀರಾ ಸಾಕು, ಅವರ ಬದಲಿಗೆ ಸೇವೆಗೆ ತಮ್ಮ ಬದುಕು ಮುಡಿಪಾಗಿಟ್ಟಿರುವ ಮಂಜುನಾಥ್ ಅವರಿಗೆ ಒಂದು ಅವಕಾಶ ಕೊಟ್ಟು ನೋಡಿ' ಎಂದು ಮನವಿ ಮಾಡಿದರು. ಹಿಂದಿನ ಚುನಾವಣೆಯಲ್ಲಿ ಕಾಂಗ್ರೆಸ್ ಜೊತೆ ಕೈ ಜೋಡಿಸಿದ್ದ ನಾವು ಮೈತ್ರಿ ಧರ್ಮ ಪಾಲಿಸಿದ ಕಾರಣಕ್ಕೆ, ಸುರೇಶ್ ಅವರು ಸಂಸದರಾದರು. ಆದರೆ, ಮಂಡ್ಯ ಮತ್ತು ತುಮಕೂರಿನಲ್ಲಿ ಮೈತ್ರಿ ಧರ್ಮ ಪಾಲಿಸದ ಕಾಂಗ್ರೆಸ್‌ನವರು ಬೆನ್ನಿಗೆ ಚೂರಿ ಹಾಕಿದರು.

> **ಅಭ್ಯರ್ಥಿ ಡಾ. ಸಿ.ಎನ್. ಮಂಜುನಾಥ್ ಮಾತನಾಡಿ, ರಾಮನಗರವನ್ನು ಜಿಲ್ಲೆ ಮಾಡಿ ಅಭಿವೃದ್ಧಿಗೆ ಬುನಾದಿ ಹಾಕಿದ್ದೇ ಎಚ್.ಡಿ. ಕುಮಾರಸ್ವಾಮಿ. ಜಿಲ್ಲೆಯ ಅಭಿವೃದ್ಧಿಗೆ ಅವರ ಕೊಡುಗೆ ಮಹತ್ತರವಾದುದು. ಜಿಲ್ಲೆಯ ಪ್ರಗತಿ ಕುರಿತು ಅವರು ಕಂಡಿರುವ ಕನಸುಗಳು ಈಡೇರಬೇಕಾದರೆ ನೀವು ನನ್ನನ್ನು ಸಂಸತ್ತಿಗೆ ಕಳಿಸಬೇಕು. ಕ್ಷೇತ್ರದಲ್ಲಿ ಕೈ ಬದಲು ಕಮಲ ಅರಳಿಸಬೇಕು' ಎಂದು ಮನವಿ ಮಾಡಿದರು.**
> **-ನಿಖಿಲ್ ಕುಮಾರಸ್ವಾಮಿ**


ಹಿರಿಯರಾದ ಎಚ್.ಡಿ. ದೇವೇಗೌಡರು ಮತ್ತು ನನ್ನ ವಿರುದ್ಧ ಷಡ್ಯಂತ್ರ ಮಾಡಿ ಸೋಲಿಸಿದರು. ಹಿಂದಿನ ಸೋಲಿನ ಸೇಡನ್ನು ಮತದಾರರು ತೀರಿಸಿಕೊಳ್ಳಬೇಕು' ಎಂದು ಹುರಿದುಂಬಿಸಿದರು.

## ಚುನಾವಣಾ ಅಧಿಕಾರಿಯನ್ನ ಕೆಳಗಿಳಿಸಿದ ಕಾರ್ಯಕರ್ತರು

• ಉದಯವಾಹಿನಿ, ಚಾಮರಾಜನಗರ

ಅನುಮತಿ ಪಡೆದ ಅವಧಿಗಿಂತಲೂ ಹೆಚ್ಚಾಗಿ ಭಾಷಣ ಮಾಡಿದ ಹಿನ್ನೆಲೆ ಕಾರ್ಯಕ್ರಮ ನಿಲ್ಲಿಸಲು ಬಂದ ಚುನಾವಣಾ ಅಧಿಕಾರಿಯ ಜೊತೆ ಬಿಜೆಪಿ ಕಾರ್ಯಕರ್ತರು ತಳ್ಳಾಟ ನಡೆಸಿದ ಘಟನೆ ಚಾಮರಾಜನಗರದಲ್ಲಿ ನಡೆದ ಚಕ್ರವರ್ತಿ ಸೂಲಿಬೆಲೆ ಅವರ ಭಾಷಣ ಕಾರ್ಯಕ್ರಮದಲ್ಲಿ ನಡೆದಿದೆ.

ಸಾಯಂಕಾಲ 5 ರಿಂದ 8 ಗಂಟೆಯವರೆಗೆ ಕಾರ್ಯಕ್ರಮ ನಡೆಸಲು ಅನುಮತಿ ನೀಡಲಾಗಿತ್ತು. ಆದರೆ ಅವಧಿ ಮೀರಿದರೂ ಚಕ್ರವರ್ತಿ ಸೂಲಿಬೆಲೆ ಅವರು ಭಾಷಣ ಮಾಡುತ್ತಿದ್ದರು . ಸ್ಥಳಕ್ಕೆ ಬಂದ ಚುನಾವಣಾ ಅಧಿಕಾರಿ ಭಾಷಣ ನಿಲ್ಲಿಸುವಂತೆ ಸನ್ನೆ ಮಾಡಿದ್ದಾರೆ ಆದರೆ ಯಾವುದೇ ಪ್ರತಿಕ್ರಿಯೆ ಸಿಗದ ಕಾರಣ ವೇದಿಕೆ ಏರಿ ಸೂಲಿಬೆಲೆ ಬಳಿ


☛ ಉದಯವಾಹಿನಿ ಚಿತ್ರ

ಸಮಯ ಮೀರಿದೆ ಭಾಷಣ ನಿಲ್ಲಿಸಿ ಎಂದು ಹೇಳಿದ್ದಾರೆ. ಈ ವೇಳೆ ವೇದಿಕೆ ಮೇಲೆ ಬಂದ ಕಾರ್ಯಕರ್ತರು ಹಾಗೂ ಅಧಿಕಾರಿಯ ಮಧ್ಯೆ ಮಾತಿನ ಚಕಮಕಿ ನಡೆದಿದ್ದು ಅವರನ್ನು ವೇದಿಕೆಯಿಂದ ಕೆಳಗಿಳಿಸಿದ್ದಾರೆ. ಕರ್ತವ್ಯ ನಿರತ ಅಧಿಕಾರಿಯ ಜೊತೆ ಅನುಚಿತವಾಗಿ ವರ್ತಿಸಬೇಡಿ ಎಂದು ಚಕ್ರವರ್ತಿ ಸೂಲಿಬೆಲೆ ಅವರು ಹೇಳುತ್ತಿದ್ದರೂ ಕೇಳದೇ ಅವರನ್ನು ಕೆಳಗಿಳಿಸಿದ್ದು ಬಳಿಕ ಸೂಲಿಬೆಲೆ ಅವರು ಭಾಷಣ ನಿಲ್ಲಿಸಿದ್ದಾರೆ.

# ಜಲಕ್ಷಾಮ ತಡೆಗೆ ಜಲಸಂರಕ್ಷಣೆಯೇ ಪರಿಹಾರ

## ನದಿಯಲ್ಲಿ ತುಂಬಿ ಹರಿದ ನೀರನ್ನು ಕೆರೆ, ಕಟ್ಟೆಗಳಿಗೆ ಹಾಯಿಸಿ ತುಂಬಿಸಿಡುವ ಪ್ರಯತ್ನ ಮಾಡಲಿಲ್ಲ, ಹೀಗಾಗಿ ಜಲಕ್ಷಾಮ ಎದುರಾಗಿದೆ

• ಉದಯವಾಹಿನಿ ಮೈಸೂರು

ಸತತ ಐದು ವರ್ಷಗಳ ಕಾಲ ಅತಿವೃಷ್ಟಿಯಿಂದ ಭಾರೀ ಹಾನಿಯಾಯಿತು ಜತೆಗೆ ನೀರು ಹರಿದು ಸಮುದ್ರ ಸೇರಿತು. ಕೆಲವು ಕಡೆಗಳಲ್ಲಿ ಕೆರೆಗಳು ತುಂಬಿ ಕಟ್ಟೆಗಳು ಒಡೆದವು. ನಾವು ಅವುಗಳನ್ನು ದುರಸ್ತಿಪಡಿಸಿ ನೀರನ್ನು ಹಿಡಿದಿಡುವ ಕೆಲಸ ಮಾಡಲಿಲ್ಲ. ನದಿಯಲ್ಲಿ ತುಂಬಿ ಹರಿದ ನೀರನ್ನು ಕೆರೆ, ಕಟ್ಟೆಗಳಿಗೆ ಹಾಯಿಸಿ ತುಂಬಿಸಿಡುವ ಪ್ರಯತ್ನ ಮಾಡಲಿಲ್ಲ. ಹೀಗಾಗಿ ಕಳೆದ ಐದು ವರ್ಷಗಳ ಬಳಿಕ ಈ ಬಾರಿ ಜಲಕ್ಷಾಮ ಎದುರಾಗಿದೆ.

ಈಗ ನೋಡಿ ಐದು ವರ್ಷಗಳ ಬಳಿಕ ಒಂದೇ ಒಂದು ಮುಂಗಾರು ಕೈಕೊಟ್ಟಿದಕ್ಕೆ ನಾವು ಪಡಬಾರದ ಪಾಡನ್ನು ಅನುಭವಿಸುತ್ತಿದ್ದೇವೆ. ಎದುರಾಗಿರುವ ಜಲಕ್ಷಾಮವನ್ನು ನಿಭಾಯಿಸಲಾಗದೆ ಪರದಾಡುತ್ತಿದ್ದೇವೆ. ನೀರಿಗಾಗಿ ಪರಿತಪಿಸುತ್ತಿದ್ದೇವೆ. ವರುಣ ನಮ್ಮ ಕಡೆಗೆ ಕರುಣೆ ತೋರಿದಂತೆ ಕಾಣುತ್ತಿಲ್ಲ ಹೀಗಾಗಿಯೇ ಈ ಬೇಸಿಗೆ ನಮಗೆಲ್ಲರಿಗೂ ಎಚ್ಚರಿಕೆಯ ಸಂದೇಶವನ್ನು ನೀಡುತ್ತಿದೆ. ಈಗಿನ ಪರಿಸ್ಥಿತಿಯಲ್ಲಿ

### ಆಧುನಿಕತೆಯ ಭರದಲ್ಲಿ ನಮಗೆ ನಾವೇ ವಂಚನೆ

**ಇವತ್ತು ಗದ್ದೆಗಳು ತೋಟಗಳಾಗಿವೆ. ನಿವೇಶನಗಳಾಗಿವೆ. ಇನ್ನು ಕೆಲವು ಕಡೆಗಳಲ್ಲಿ ನಾಟಿ ಮಾಡಲು ಸಾಧ್ಯವಾಗದೆ ಪಾಳು ಬಿದ್ದಿವೆ. ಆಧುನಿಕತೆಯ ಭರದಲ್ಲಿ ನಮಗೆ ನಾವೇ ವಂಚನೆ ಮಾಡಿಕೊಳ್ಳುತ್ತಿದ್ದೇವೆ ಅದರ ಪರಿಣಾಮ ಪ್ರಕೃತಿ ಮೇಲಾಗುತ್ತಿದೆ. ದಶಕಗಳ ಹಿಂದೆಯೇ ಪ್ರತಿ ಶಾಲೆಯಲ್ಲಿ ಮಳೆಕೊಯ್ಲು ಮಾಡಲೇ ಬೇಕೆಂಬ ಯೋಜನೆ ಜಾರಿಗೆ ತರಲಾಯಿತು. ಒಂದಷ್ಟು ಶಾಲೆಗಳಲ್ಲಿ ಅನುಷ್ಠಾನವೂ ಆಯಿತು. ಆದರೀಗ ಅದು ಹಳ್ಳಹಿಡಿದಿದೆ.**


☛ ಉದಯವಾಹಿನಿ ಚಿತ್ರ

ಕೆಆರ್‌ಎಸ್, ಕಬಿನಿ ಸೇರಿದಂತೆ ಜಲಾಶಯಗಳಲ್ಲಿ ನೀರಿನ ಮಟ್ಟ ಪಾತಾಳದ ಕಡೆಗೆ ಹೋಗುತ್ತಿದ್ದರೆ, ಕೆರೆಗಳು ಒಣಗಿ ಬಿರುಕು ಬಿಟ್ಟಿವೆ.. ಬಾವಿಗಳಲ್ಲಿ ನೀರು ತಳ ಸೇರಿದೆ.. ಕೊಳವೆಬಾವಿಯಲ್ಲಿ ನೀರು ಬರುತ್ತಿಲ್ಲ.. ನದಿಯಲ್ಲಿ ನೀರು ಹರಿಯುತ್ತಿಲ್ಲ. ಇದರ ನಡುವೆ ಬಿಸಿಲಿನ ಝಳ ಮೈ ಸುಡುತ್ತಿದೆ.. ಕುಡಿಯುವ ನೀರಿಗೆ ತಾತ್ವಾರ ಶುರುವಾಗಿದೆ. ಬೇರೇನು ಬೇಡ ಬೇರು ಕೊಡಿ ಸಾಕು ಎನ್ನುವ ಸ್ಥಿತಿಗೆ ಜನ ಬಂದಿದ್ದಾರೆ. ಮೊದಲೆಲ್ಲ ಯುಗಾದಿ ಕಳೆಯುತ್ತಿದ್ದಂತೆಯೇ ಮಳೆಯೂ ಆರಂಭವಾಗುತ್ತಿತ್ತು. ಜೂನ್ ಜುಲೈನಲ್ಲಿ ಎಡೆಬಿಡದೆ ಮಳೆ ಸುರಿದು

> **ಏಲಕ್ಕಿ ತೋಟ ಸದಾ ತಂಪನ್ನು ಬಯಸುತ್ತಿತ್ತು. ಏಲಕ್ಕಿ ತೋಟ ನಾಶವಾಗಿ ಕಾಫಿ ತೋಟವಾಗಿ ಮಾರ್ಪಾಡಾಯಿತೋ ಎಲ್ಲವೂ ಉಲ್ಟ ಆಗಿದೆ. ಪ್ರಕೃತಿ ನಾಶವಾಗಿದೆ. ಇದರೊಂದಿಗೆ ಕಾರ್ಮಿಕರ ಸಮಸ್ಯೆ, ನಷ್ಟವಾಗುತ್ತಿರುವ ಕಾರಣದಿಂದ ಭತ್ತದ ಬೆಳೆಯುವ ಪ್ರದೇಶ ಕಡಿಮೆಯಾಗುತ್ತಿದೆ. ಭತ್ತದ ಗದ್ದೆಯಲ್ಲಿ ಸುಮಾರು ಮೂರ್ನಾಗಲ್ಕು ತಿಂಗಳು ನೀರನ್ನು ನಿಲ್ಲಿಸುವುದರಿಂದ ಅಂತರ್ಜಲ ಹೆಚ್ಚುತ್ತಿತ್ತು.**

ಮಲೆನಾಡಿನಲ್ಲಿ ನೀರಿನ ಸೆಲೆಯಿರುವ ಸ್ಥಳಗಳಲ್ಲಿ ಜಲ ಹುಟ್ಟಿ ನೀರು ಹರಿಯುತ್ತಿತ್ತು. ಬೆಟ್ಟಗುಡ್ಡಗಳ ಮೇಲಿನಿಂದ ನೀರು ಉಕ್ಕಿ ಬರುತ್ತಿತ್ತು. ಹಿರಿಯರು ತಮ್ಮೂರಿನ ಬೆಟ್ಟದಲ್ಲಿ ಮಳೆಯಾಗಿ ಜಲ ಉಕ್ಕಿ ಹರಿದರೆ ಈ ಬಾರಿ ಉತ್ತಮ ಮಳೆಯಾಗಿದೆ. ಮುಂದಿನ ಬೇಸಿಗೆಯಲ್ಲಿ ನೀರಿಗೆ ತೊಂದರೆಯಾಗುವುದಿಲ್ಲ ಎಂದು ಹೇಳುತ್ತಿದ್ದರು.

**ಈ ಬಾರಿ ಜಲಕ್ಷಾಮ**

ಕಳೆದ ವರ್ಷ ಇಂತಹ ಯಾವ ಅನುಭವವೂ ಆಗಿಲ್ಲ ಅದರ ಪರಿಣಾಮವನ್ನು ನಾವು ಎದುರಿಸುತ್ತಿದ್ದೇವೆ. ಮೊದಲೆಲ್ಲ ಮಲೆನಾಡಿನಲ್ಲಿ ಜಲದ ಸೆಲೆಗಳು ದಾರಿಯುದ್ದಕ್ಕೂ ಕಾಣಸಿಗುತ್ತಿದ್ದವು. ಈಗ ಅವುಗಳೆಲ್ಲವೂ ಬತ್ತಿ ಹೋಗಿವೆ. ಇದಕ್ಕೆ ಕಾರಣವೂ ಇಲ್ಲದಿಲ್ಲ. ಮಲೆನಾಡಿನಲ್ಲಿಯೂ ಅಂತರ್ಜಲದ ಸಮಸ್ಯೆ ಎದುರಾಗಿದೆ. ಸುಮಾರು ಎರಡು ದಶಕಗಳ ಹಿಂದೆ ಕಾಫಿ ತೋಟ ಹೆಚ್ಚು ಇರಲಿಲ್ಲ. ಏಲಕ್ಕಿ ತೋಟ ಹೆಚ್ಚಾಗಿತ್ತು.

## ಮಿನಿ ನ್ಯೂಸ್

### ಶೆಟ್ಟಿಹಳ್ಳಿ ಆಂಜನೇಯ ರಥೋತ್ಸವ

• ಉದಯವಾಹಿನಿ ತುಮಕೂರು


☛ ಉದಯವಾಹಿನಿ ಚಿತ್ರ

ನಗರ ಹೊರ ವಲಯದ ಶೆಟ್ಟಿಹಳ್ಳಿ ಆಂಜನೇಯ ಸ್ವಾಮಿ ಬ್ರಹ್ಮ ರಥೋತ್ಸವ ಮಂಗಳವಾರ ಅಪಾರ ಸಂಖ್ಯೆ ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ನೆರವೇರಿತು. ಆಂಜನೇಯ ಸ್ವಾಮಿಗೆ ವಿಶೇಷ ಅಲಂಕಾರ ಮಾಡಲಾಗಿತ್ತು. ದೇಗುಲವನ್ನು ತಳಿರು, ತೋರಣಗಳಿಂದ ಸಿಂಗರಿಸಲಾಗಿತ್ತು. ರಥೋತ್ಸವದ ಪ್ರಯುಕ್ತ ದೇವಾಲಯದಲ್ಲಿ ಬೆಳಗ್ಗೆಯಿಂದ ವಿವಿಧ ಧಾರ್ಮಿಕ ಕೈಂಕರ್ಯಗಳು ಜರುಗಿದವು. ಪ್ರಾರಂಭದಲ್ಲಿ ರಥದಲ್ಲಿ ದೇವರನ್ನು ಕೂರಿಸಿ ಬಳಿಕ ರಥದ ಸುತ್ತ ಗರುಡ ಮೂರು ಸುತ್ತು ಪ್ರದಕ್ಷಿಣೆ ಹಾಕಿತು. ನಂತರ ರಥೋತ್ಸವಕ್ಕೆ ಚಾಲನೆ ದೊರೆಯಿತು. ನಗರ ಮತ್ತು ಶೆಟ್ಟಿಹಳ್ಳಿ ಸುತ್ತಮುತ್ತಲಿನ ಪ್ರದೇಶಗಳ ಸಾರ್ವಜನಿಕರು ಬೆಳಗ್ಗೆಯೇ ದೇವಸ್ಥಾನಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದರು. ಮಧ್ಯಾಹ್ನ ನೆರವೇರಿದ ರಥೋತ್ಸವಕ್ಕೆ ಸಾಕ್ಷಿಯಾದರು. ರಥಕ್ಕೆ ಹೂವು, ದವನ, ಬಾಳೆಹಣ್ಣು ಎಸೆದು ನಮಿಸಿದರು. ಶೆಟ್ಟಿಹಳ್ಳಿಗೆ ಸಂಪರ್ಕ ಕಲ್ಪಿಸುವ ರಸ್ತೆ, ರಿಂಗ್ ರಸ್ತೆಯ ವಿವಿಧ ಕಡೆಗಳಲ್ಲಿ ಶಾಮಿಯಾನ ಹಾಕಿ ರಥೋತ್ಸವಕ್ಕೆ ಬರುವ ಜನರಿಗೆ ಮಜ್ಜಿಗೆ, ಪಾನಕ ವಿತರಿಸಲಾಯಿತು.

### ಕಾಡಾನೆ ದಾಳಿ: ಮನೆಗೆ ಹಾನಿ

• ಉದಯವಾಹಿನಿ ಕುಶಾಲನಗರ


☛ ಉದಯವಾಹಿನಿ ಚಿತ್ರ

ತಾಲ್ಲೂಕಿನ ಯಡವನಾಡು ಮೀಸಲು ಅರಣ್ಯ ಪ್ರದೇಶ ವ್ಯಾಪ್ತಿಯಲ್ಲಿ ಸೋಮವಾರ ರಾತ್ರಿ ಕಾಡಾನೆ ದಾಳಿಯಿಂದ ಮನೆಗೆ ಹಾನಿಯಾಗಿದೆ. ಗ್ರಾಮದ ರಾಧಾ ರಮೇಶ್ ಎಂಬುವರ ಮನೆ ಆವರಣಕ್ಕೆ ರಾತ್ರಿ ಕಾಡಾನೆ ನುಗ್ಗಿದೆ. ಇದರಿಂದ ಭಯಭೀತರಾದ ಮನೆ ಮಂದಿ ಜೋರಾಗಿ ಕೂಗಿದ್ದಾರೆ. ಜೊತೆಗೆ ಮನೆ ಮುಂದಿನ ಲೈಟ್ ಹಾಕಿದ್ದಾರೆ. ಇದರಿಂದ ಕಾಡಾನೆ ಏಕಾಏಕಿ ಮನೆ ಮುಂದೆ ನುಗ್ಗಿ ಮನೆಯ ಮೇಲ್ಚಾವಣಿಗೆ ಅಳವಡಿಸಿದ್ದ ಸಿಮೆಂಟ್ ಶೀಟು ಜಖಂಗೊಳಿಸಿದೆ. ಕಾಡಾನೆ ದಾಳಿ ವಿಚಾರ ತಿಳಿದು ಅರಣ್ಯ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸ್ಥಳಕ್ಕೆ ತಾಲ್ಲೂಕಿನ ಅರಣ್ಯಾಧಿಕಾರಿಗಳು ಭೇಟಿ ನೀಡಿ ಸೂಕ್ತ ಪರಿಹಾರ ನೀಡಬೇಕು ಎಂದು ಗ್ರಾಮದ ಕೃಷಿಕರಾದ ಪ್ರವೀಣ್, ವರದರಾಜೇ ಅರಸು, ರಮೇಶ್, ಲವ ಒತ್ತಾಯಿಸಿದರು.

### ಕಾಲ್ನಡಿಗೆಯಲ್ಲಿ ಯದುವೀರ್ ಮತಯಾಚನೆ


☛ ಉದಯವಾಹಿನಿ ಚಿತ್ರ

• ಉದಯವಾಹಿನಿ ಮಡಿಕೇರಿ


ಮೈಸೂರು- ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಬುಧವಾರ ಮಡಿಕೇರಿ ಮತ್ತು ವಿರಾಜಪೇಟೆ ಪಟ್ಟಣದಲ್ಲಿ ಮತಯಾಚನೆ ಮಾಡಿದರು. ಮಡಿಕೇರಿಯ ಚೌಡೇಶ್ವರಿ ದೇಗುಲದಲ್ಲಿ ಪೂಜೆ ಸಲ್ಲಿಸಿದ ಅವರು ಕಾಲ್ನಡಿಗೆಯಲ್ಲಿ ಮತ ಯಾಚಿಸಿದರು.ನಟಿ ತಾರಾ ಅನುರಾಧಾ ಅವರೂ ಈ ವೇಳೆ ಯದುವೀರ ಪರ ಮತ ಯಾಚಿಸಿದರು. ಮಹದೇವಪೇಟೆಯಿಂದ ಇಂದಿರಾಗಾಂಧಿ ವೃತ್ತದ ಮೂಲಕ ಜನರಲ್ ತಿಮ್ಮಯ್ಯ ವೃತ್ತದ ತನಕ ಮೆರವಣಿಗೆ ನಡೆಸಿದರು.

ಈ ವೇಳೆ ಮಾತನಾಡಿದ ನಟಿ ತಾರಾ ಅನುರಾಧಾ, ಯದುವಂಶದ ಯದುವೀರ ಅವರ ಪರ ಪ್ರಚಾರಕ್ಕೆ ಬಂದಿರುವುದು ಗೌರವ ತಂದಿದೆ. ಅವರು ಅತೀ ಹೆಚ್ಚು ಮತಗಳ ಅಂತರದಿಂದ ಗೆಲುವು ಸಾಧಿಸುತ್ತಾರೆ ಎಂಬ ವಿಶ್ವಾಸವಿದೆ' ಎಂದರು.

### ಕೆರೆಯಲ್ಲಿ ಸಿಲುಕಿದ್ದ ಕಾಡಾನೆಗಳ ರಕ್ಷಣೆ

• ಉದಯವಾಹಿನಿ ಮಡಿಕೇರಿ

ಕೊಡಗು ಜಿಲ್ಲೆಯ ಪೊನ್ನಂಪೇಟೆ ತಾಲ್ಲೂಕಿನ ಶ್ರೀಮಂಗಲದ ಕುಮಟೂರುವಿನ ತೋಟವೊಂದರ ಕೆರೆಯಲ್ಲಿ ಸಿಲುಕಿದ್ದ ಕಾಡಾನೆಗಳನ್ನು ಅರಣ್ಯ ಇಲಾಖೆ ಸಿಬ್ಬಂದಿ ರಕ್ಷಿಸಿದ್ದಾರೆ. 4 ಕಾಡಾನೆಗಳು ಸಿಲುಕಿ ಹೊರಬರಲಾಗದೆ ಒದ್ದಾಡುತ್ತಿದ್ದವು. ಸ್ಥಳಕ್ಕೆ ಬಂದ ಅರಣ್ಯ ಇಲಾಖೆ ಸಿಬ್ಬಂದಿ ಕೆರೆಯ ಒಂದು ಬದಿಯಲ್ಲಿ ಮಣ್ಣನ್ನು ತೆಗೆದರು.ನಂತರ ಒಂದರ ನಂತರ ಒಂದು ಕಾಡಾನೆಗಳು ಕೆರೆಯಿಂದ ಹೊರ ಬಂದವು.


☛ ಉದಯವಾಹಿನಿ ಚಿತ್ರ

### ಮತದಾರರ ಪಟ್ಟಿಯಲ್ಲಿ ಹೆಸರಿಲ್ಲವೆಂದು ಬೀದಿಗಿಳಿದ ವ್ಯಕ್ತಿ: ಆಕ್ರೋಶ

• ಉದಯವಾಹಿನಿ ಚಾಮರಾಜನಗರ

ಮತದಾರರ ಪಟ್ಟಿಯಿಂದ ತನ್ನ ಹೆಸರು ಕೈ ಬಿಟ್ಟಿರುವುದಕ್ಕೆ ಆಕ್ರೋಶಗೊಂಡು ಗ್ರಾಮ ಪಂಚಾಯತಿ ಮುಂದೆ ಇಡೀ ಕುಟುಂಬ ಪ್ರತಿಭಟನೆ ನಡೆಸುತ್ತಿರುವ ಘಟನೆ ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಮಾರ್ಟಳ್ಳಿ ಗ್ರಾಮದಲ್ಲಿ ನಡೆದಿದೆ. ಹನೂರು ತಾಲ್ಲೂಕಿನ ಮಾರ್ಟಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪಾಳಿಮೇಡು ಗ್ರಾಮದ ಮರುದ ಎಂಬವರ ಹೆಸರನ್ನು ಮತದಾರರ ಪಟ್ಟಿಯಿಂದ ಅಳಿಸಲಾಗಿದೆ. ಮತದಾನ ಮಾಡಲು ಊರಿಗೆ ಬಂದ ವೇಳೆ ಈ ವಿಚಾರ ಗಮನಕ್ಕೆ ಬಂದಿದೆ. ಏಕಾಏಕಿ ಹೆಸರನ್ನು ಕೈ ಬಿಟ್ಟಿರುವುದರಿಂದ ಕುಪಿತಗೊಂಡ ಮರುದ ಪತ್ನಿ, ಮಗು ಹಾಗೂ ತಾಯಿ ಜೊತೆ ಗ್ರಾಪಂ ಮುಂಭಾಗ ಪ್ರತಿಭಟನೆ ನಡೆಸಿದ್ದಾರೆ. ಅಂಗನವಾಡಿ ಕಾರ್ಯಕರ್ತೆಯ ಕಣ್ತಪ್ಪಿನಿಂದ ಹೆಸರು ಅಳಿಸಲಾಗಿದೆ ಎಂದು ಸಬೂಬು ಕೊಡುತ್ತಿದ್ದಾರೆ. ಆದರೆ, ನನ್ನ ಮತ-ನನ್ನ ಹಕ್ಕು, ಮತದಾನ ಮಾಡಲೆಂದೇ ಸಾವಿರಾರು ರೂಪಾಯಿ ವ್ಯಯಿಸಿ ಊರಿಗೆ ಬಂದಿದ್ದೇನೆ. ಮತದಾನ ನನ್ನ ಹಕ್ಕಾಗಿದ್ದು, ನನಗೆ ನ್ಯಾಯ ಸಿಗುವವರೆಗೂ ನನ್ನ ಹೋರಾಟ ಮುಂದುವರೆಯುತ್ತದೆ ಎಂದು ಮರುದ ಆಕ್ರೋಶ ಹೊರಹಾಕಿದ್ದಾರೆ.


☛ ಉದಯವಾಹಿನಿ ಚಿತ್ರ

ಅಂತರಾಳದಿಂದ... EDITORIAL

# ರಕ್ಷಣಾ ರಫ್ತು ಕ್ಷೇತ್ರದಲ್ಲಿ ಬೆಳವಣಿಗೆ ನಮ್ಮ ಹೆಗ್ಗಳಿಕೆ

ಫಿಲಿಪ್ಪೀನ್ಸ್‌ಗೆ ಬ್ರಹ್ಮೋಸ್ ಸೂಪರ್‌ಸಾನಿಕ್ ಕ್ರೂಸ್ ಕ್ಷಿಪಣಿಗಳಭೂ ಆವೃತ್ತಿಯ ನಾಲ್ಕನೇ ಬ್ಯಾಟರಿ'ಯನ್ನು ಭಾರತ ಕಳುಹಿಸುತ್ತಿದೆ. ಬ್ರಹ್ಮೋಸ್ ಕ್ಷಿಪಣಿಗಳ ಮೂರು 'ಬ್ಯಾಟರಿ'ಗಳನ್ನು ಈಗಾಗಲೇ ದ್ವೀಪ ರಾಷ್ಟ್ರಕ್ಕೆ ಹಸ್ತಾಂತರಿಸಲಾಗಿದೆ. ಪ್ರತಿ ಬ್ಯಾಟರಿಯೂ ನಾಲ್ಕು ಲಾಂಚರ್‌ಗಳನ್ನು ಒಳಗೊಂಡಿರುತ್ತದೆ. ಪ್ರತಿ ಲಾಂಚರ್‌ನಲ್ಲೂ 290 ಕಿಮೀ ವ್ಯಾಪ್ತಿಯ ಮೂರು ಕ್ಷಿಪಣಿಗಳಿರುತ್ತವೆ. ಈ ಕ್ಷಿಪಣಿ ಸೂಪರ್‌ಸಾನಿಕ್ ವೇಗವನ್ನು ಹೊಂದಿರುತ್ತದೆ. ಇದನ್ನು ಭೂಮಿ ಅಥವಾ ಹಡಗು ಆಧಾರಿತ ಬ್ಯಾಲಿಸ್ಟಿಕ್ ಮಿಸೈಲ್ ಡಿಫೆನ್ಸ್ ವ್ಯವಸ್ಥೆಗಳಿಂದಲೂ ಎದುರಿಸುವುದು ತುಂಬಾ ಕಷ್ಟ. 2022ರಲ್ಲಿ ಭಾರತ– ಫಿಲಿಪ್ಪೀನ್ಸ್ ಸಹಿ ಮಾಡಿದ ಗಖಿಆ 375 ಮಿಲಿಯನ್ ಒಪ್ಪಂದದ ಭಾಗವಿದು. ಸದ್ಯ ಭಾರತದ ಬ್ರಹ್ಮೋಸ್ ದಾಖಲೆ ಮಾರಾಟ ಕಂಡಿದೆ. ಮುಂದಿನ ದಿನಗಳಲ್ಲಿ ಭಾರತವು ಈ ಸೂಪರ್‌ಸಾನಿಕ್ ಕ್ಷಿಪಣಿಗಳ ಹೆಚ್ಚಿನ ಆರ್ಡರ್‌ಗಳನ್ನು ಪಡೆದುಕೊಳ್ಳುವ ನಿರೀಕ್ಷೆಯಿದೆ.

ಬ್ರಹ್ಮೋಸ್‌ನ ಫಿಲಿಪ್ಪೀನ್ಸ್ ಒಪ್ಪಂದದ ಮೂಲಕ, 2023–2024ರಲ್ಲಿ ಭಾರತದ ರಕ್ಷಣಾ ರಫ್ತು 21083 ಕೋಟಿಗಳನ್ನು ಮುಟ್ಟಿದೆ. ಕಳೆದ ಹಣಕಾಸು ವರ್ಷಕ್ಕೆ ಹೋಲಿಸಿದರೆ ವರ್ಷದಿಂದ ವರ್ಷಕ್ಕೆ ಶೇ.32.5ರಷ್ಟು ರಫ್ತು ಬೃಹತ್ ಬೆಳವಣಿಗೆಯಾಗಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಪ್ರಕಾರ, 2026ರ ವೇಳೆಗೆ ರಕ್ಷಣಾ ರಫ್ತನ್ನು 40 ಸಾವಿರ ಕೋಟಿ ರೂ. ದಾಟಿಸುವ ಗುರಿ ಹೊಂದಲಾಗಿದೆ. ಅನೇಕ ಕಾರಣಗಳಿಂದಾಗಿ ಇದೊಂದು ಮೈಲುಗಲ್ಲು. ಬಾಹ್ಯಾಕಾಶ ಸಂಶೋಧನೆ ಹಾಗೂ ರಕ್ಷಣಾ ರಫ್ತುಗಳು ಭಾರತದ ಜಿಡಿಪಿ ಬೆಳವಣಿಗೆ, ವಿದೇಶಾಂಗ ನೀತಿಯ ವರ್ಧನೆ ಇತ್ಯಾದಿಗಳಲ್ಲಿ ಗರಿಷ್ಠತೆ ಸಾಧಿಸಲು ಕಾರಣವಾಗುತ್ತಿರುವ ಬೆಳವಣಿಗೆಗಳು. ಈ ಹಿಂದೆ ಪ್ರತಿಯೊಂದು ಶಸ್ತ್ರಕ್ಕೂ ಭಾರತ ವಿದೇಶಗಳನ್ನು ಅವಲಂಬಿಸಿತ್ತು. ಆದರೆ ಈಗ ರಕ್ಷಣಾ ಶಸ್ತ್ರಾಸ್ತ್ರಗಳ ಉತ್ಪಾದನೆಯಲ್ಲಿ ದಿನೇದಿನೆ ಸ್ವಾವಲಂಬನೆ ಸಾಧಿಸುತ್ತಿದೆ. ಶಸ್ತ್ರಾಸ್ತ್ರಗಳಿಂದ ಹಿಡಿದು ಯುದ್ಧ ನೌಕೆಗಳನ್ನೂ ಭಾರತದಲ್ಲೇ ತಯಾರಿಸಲಾಗುತ್ತಿದೆ. ಪಾಕಿಸ್ತಾನ ಹೊರತುಪಡಿಸಿ ಇತರ ಹಲವು ನೆರೆದೇಶಗಳಿಗೆ ಭಾರತ ಯಥೇಚ್ಛವಾಗಿ ಶಸ್ತ್ರಾಸ್ತ್ರ ರಫ್ತು ಮಾಡುತ್ತಿದೆ. ಮಿಲಿಟರಿ ಸಾಧನಗಳಿಗಾಗಿ ಭಾರತ ಪ್ರತಿವರ್ಷ ಸಾವಿರಾರು ಕೋಟಿ ರೂ. ಖರ್ಚು ಮಾಡುತ್ತಿದೆ. ಈ ನಿಟ್ಟಿನಲ್ಲಿ ಈಗಿನ ಶಸ್ತ್ರಾಸ್ತ್ರ ರಫ್ತು ದಾಖಲೆ ದೇಶದ ಪ್ರಗತಿ ಮತ್ತು ಸ್ವಾವಲಂಬನೆಯ ದೃಷ್ಟಿಯಿಂದ ಮಹತ್ವದ್ದಾಗಿದೆ.

> **ರಫ್ತು ಮಾತ್ರವಲ್ಲ, ರಕ್ಷಣಾ ಸಾಮಗ್ರಿಗಳಲ್ಲಿ ಆತ್ಮನಿರ್ಭರತೆ ಕೂಡ ನಮ್ಮಿಂದ ಸಾಧ್ಯವಾಗುತ್ತಿದೆ. ಇದಕ್ಕೆ ಇತ್ತೀಚಿನ ಉದಾಹರಣೆ ಎಂದರೆ ತುಮಕೂರಿನ ಗುಬ್ಬಿಯಲ್ಲಿ ಪ್ರಧಾನಿ ಉದ್ಘಾಟಿಸಿರುವ ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್‌ನ (ಎಚ್‌ಎಎಲ್) ನೂತನ ಹೆಲಿಕಾಪ್ಟರ್ ಉತ್ಪಾದನಾ ಘಟಕ. ಇದು ಏಷ್ಯಾದ ಅತಿದೊಡ್ಡ ಹೆಲಿಕಾಪ್ಟರ್ ಉತ್ಪಾದನಾ ಘಟಕ ಎಂಬ ಹೆಗ್ಗಳಿಕೆಯನ್ನು ಹೊಂದಿದೆ.**

ಈಗಾಗಲೇ ಭಾರತ ಫಿಲಿಪ್ಪೀನ್ಸ್‌ಗೆ ಬ್ರಹ್ಮೋಸ್ ಕ್ಷಿಪಣಿಗಳನ್ನು, ಮಾರಿಷಸ್‌ಗೆ ಹಗುರ ಯುದ್ಧ ವಿಮಾನಗಳನ್ನು, ವಿಯೆಟ್ನಾಂಗೆ ಅತಿವೇಗದ ರಕ್ಷಣಾ ಬೋಟ್‌ಗಳನ್ನು, ಅರ್ಮೇನಿಯಾಕ್ಕೆ ಆಯುಧಶೋಧಕ ರೇಡಾರ್‌ಗಳನ್ನು, ಇಟಲಿ, ಮಾಲ್ದೀವ್ಸ್, ಶ್ರೀಲಂಕಾ, ಮಲೇಷಿಯಾ ಮುಂತಾದ ಹಲವು ದೇಶಗಳಿಗೆ ಪಿನಾಕ ರಾಕೆಟ್ ಲಾಂಚರ್‌ಗಳನ್ನು ಹಾಗೂ ಇತರ ಹಲವು ತಂತ್ರಜ್ಞಾನಗಳನ್ನು ರಫ್ತು ಮಾಡುತ್ತಿದೆ. ರಕ್ಷಣಾ ಸಾಮಗ್ರಿಗಳ ರಫ್ತು ಜತೆಜತೆಗೇ ನೋಡಬೇಕಾದ ಇನ್ನೊಂದು ಸಂಗತಿ ಎಂದರೆ, ಇಸ್ರೋ ಸಂಸ್ಥೆಯು ಉಡಾಯಿಸುತ್ತಿರುವ ಉಪಗ್ರಹಗಳು. ಸ್ಥಳೀಯ ತಂತ್ರಜ್ಞಾನದ ಉಪಗ್ರಹ ವಾಹಕಗಳನ್ನು (ಎಸ್‌ಎಲ್‌ವಿ) ನಾವು ತಯಾರಿಸಿದ್ದು, ಅವುಗಳ ಮೂಲಕ ಅಕ್ಕಪಕ್ಕದ ದೇಶಗಳ ಉಪಗ್ರಹಗಳನ್ನೂ ಕಕ್ಷೆಗೆ ಉಡಾಯಿಸುವ ಉದ್ಯಮವನ್ನು ಯಶಸ್ವಿಯಾಗಿ ನಡೆಸುತ್ತಿದ್ದೇವೆ. ನಮ್ಮ ದೇಶದ ಇಂಥ ಸಾಧನೆಗೆ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೊ), ಎಚ್‌ಎಎಲ್, ರಕ್ಷಣಾ ಸಂಶೋಧನೆ ಹಾಗೂ ಅಭಿವೃದ್ಧಿ ಸಂಸ್ಥೆ (ಡಿಆರ್‌ಡಿಒ) ಮಹತ್ವದ ಕೊಡುಗೆ ನೀಡುತ್ತಿವೆ. ಡಿಆರ್‌ಡಿಒ ಅಭಿವೃದ್ಧಿಪಡಿಸುತ್ತಿರುವ ಡ್ರೋನ್‌ಗಳು ನಮ್ಮ ಗಡಿಯನ್ನು ಕಾಯುತ್ತಿರುವ ಯೋಧರಿಗೆ ಅತ್ಯುತ್ತಮ ಜತೆಗಾರರಾಗಿವೆ. ರಫ್ತು ಮಾತ್ರವಲ್ಲ, ರಕ್ಷಣಾ ಸಾಮಗ್ರಿಗಳಲ್ಲಿ ಆತ್ಮನಿರ್ಭರತೆ ಕೂಡ ನಮ್ಮಿಂದ ಸಾಧ್ಯವಾಗುತ್ತಿದೆ. ಇದಕ್ಕೆ ಇತ್ತೀಚಿನ ಉದಾಹರಣೆ ಎಂದರೆ ತುಮಕೂರಿನ ಗುಬ್ಬಿಯಲ್ಲಿ ಪ್ರಧಾನಿ ಉದ್ಘಾಟಿಸಿರುವ ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್‌ನ (ಎಚ್‌ಎಎಲ್) ನೂತನ ಹೆಲಿಕಾಪ್ಟರ್ ಉತ್ಪಾದನಾ ಘಟಕ. ಇದು ಏಷ್ಯಾದ ಅತಿದೊಡ್ಡ ಹೆಲಿಕಾಪ್ಟರ್ ಉತ್ಪಾದನಾ ಘಟಕ ಎಂಬ ಹೆಗ್ಗಳಿಕೆಯನ್ನು ಹೊಂದಿದ್ದು, 3 ಟನ್‌ನಿಂದ 12 ಟನ್ ತೂಕದ ತನಕ ವಿವಿಧ ಶ್ರೇಣಿಗಳ ಹೆಲಿಕಾಪ್ಟರ್‌ಗಳನ್ನು ನಿರ್ಮಿಸುತ್ತದೆ. ಇಲ್ಲಿ ಉತ್ಪಾದನೆಗೊಳ್ಳಲಿರುವ ಹಗುರ ಹೆಲಿಕಾಪ್ಟರ್‌ಗಳು (ಎಲ್‌ಯುಎಚ್) ದೇಶದ ಮಿಲಿಟರಿ ಮತ್ತು ನಾಗರಿಕ ಅಗತ್ಯಗಳನ್ನು ಪೂರೈಸಲಿವೆ. ಇದರಿಂದ ಭಾರತದ ವಾಯುಪಡೆ ಹಾಗೂ ವಾಯುಸಾರಿಗೆ ಇನ್ನಷ್ಟು ಸಮೃದ್ಧವಾಗಲಿವೆ. ಇದು ಒಂದು ಉದಾಹರಣೆ ಮಾತ್ರ. ಇನ್ನೊಂದು ಉದಾಹರಣೆ ಎಂದರೆ ಇತ್ತೀಚೆಗೆ ಪ್ರಯೋಗಾರ್ಥ ಉಡಾಯಿಸಲಾದ ಅಣ್ವಸ್ತ್ರ ಸಿಡಿತಲೆಯನ್ನು 5000 ಕಿಲೋಮೀಟರ್ ದೂರ ಹೊತ್ತೊಯ್ಯಬಲ್ಲ ಸಾಮರ್ಥ್ಯ ಹೊಂದಿರುವ ಅಗ್ನಿ–5 ಖಂಡಾಂತರ ಕ್ಷಿಪಣಿಯ ಅಭಿವೃದ್ಧಿ.

ಈ ಕ್ಷಿಪಣಿ ಚೀನಾದ ಉತ್ತರ ತುದಿಯಿಂದ ಹಿಡಿದು ಯುರೋಪಿನ ಬಹುತೇಕ ಭಾಗಗಳಿಗೂ ಗುರಿ ಇಟ್ಟು ದಾಳಿ ಮಾಡುವ ಸಾಮರ್ಥ್ಯ ಹೊಂದಿರುವುದು ಭಾರತದ ರಕ್ಷಣಾ ದೃಷ್ಟಿಯಿಂದ ಮಹತ್ವದ್ದು. ಹಾಗೆಯೇ ಕಳೆದ ತಿಂಗಳು ಪರೀಕ್ಷಿಸಲಾದ ಮಿಷನ್ ದಿವ್ಯಾಸ್ತ್ರ. ಇದು ಏಕಕಾಲಕ್ಕೆ ಹಲವು ಸಿಡಿತಲೆಗಳನ್ನು ಉಡಾಯಿಸಬಲ್ಲ ಸಾಮರ್ಥ್ಯವನ್ನು ಹೊಂದಿದೆ. ಇದೆಲ್ಲದರ ಹಿನ್ನೆಲೆಯಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರ ಮೇಕ್ ಇನ್ ಇಂಡಿಯಾ ಮತ್ತು ಆತ್ಮ ನಿರ್ಭರ ಭಾರತ ಅಭಿಯಾನ ಫಲ ಕೊಡಲಾರಂಭಿಸಿದೆ ಎನ್ನಬಹುದು. ಆದರೂ ಭಾರತ ತರಿಸಿಕೊಳ್ಳುತ್ತಿರುವ ಶಸ್ತ್ರಾಸ್ತ್ರಗಳ ಪ್ರಮಾಣ ಸಾಕಷ್ಟಿದೆ. ಅತಿ ಹೆಚ್ಚು ಶಸ್ತ್ರಾಸ್ತ್ರ ಆಮದು ಮಾಡಿಕೊಳ್ಳುವ ದೇಶಗಳಲ್ಲಿ ಭಾರತವೂ ಒಂದು. ರಕ್ಷಣಾ ಕ್ಷೇತ್ರದಲ್ಲಿ ಸ್ವಾವಲಂಬನೆ ಹೆಚ್ಚಿದಷ್ಟು ಆಮದು ಕಡಿಮೆಯಾಗಬಹುದು. ರಫ್ತು ಹೆಚ್ಚಾದಷ್ಟು ನಮ್ಮ ಗಣ್ಯತೆ, ಜಿಡಿಪಿ, ವಿದೇಶಾಂಗ ಸಾಮರ್ಥ್ಯವೂ ಅಧಿಕವಾಗುತ್ತದೆ.

## ಮಹಾಭಾರತ – ಭೀಷ್ಮಪರ್ವ



• ಹಿಂದಿನ ಸಂಚಿಕೆಯಿಂದ

ಶಿಖಂಡಿಯು ಕೃತವರ್ಮನೊಂದಿಗೆ ಹೋರಾಡತೊಡಗಿದನು. ಧೃಷ್ಟದ್ಯುಮ್ನ ಶಿಖಂಡಿ ಇಬ್ಬರು ಸೋತು ರಣರಂಗದಿಂದ ಹಿಮ್ಮೆಟ್ಟಬೇಕಾಯಿತು. ಅರ್ಜುನನು ಅದ್ಭುತವಾಗಿ ಯುದ್ಧಮಾತ್ತಿದ್ದನು. ಕೌರವ ಸೈನ್ಯವು ಅವನ ಪ್ರತಾಪದ ಎದುರು ಗಾಳಿಯೆದುರಿಗಿನ ಹತ್ತಿಯ ರಾಶಿಯಂತಾಯಿತು. ಅಳಿದುಳಿದ ಸಂಶಪ್ತಕರು ಅವನನ್ನು ಎದುರಿಸಿದರು. ಅವರಲ್ಲಿ ಬಹುಮಟ್ಟಿಗೆ ಎಲ್ಲರು ಸತ್ತರು; ಉಳಿದವರು ಓಡಿಹೋದರು. ದುರ್ಯೋಧನನು ಯುಧಿಷ್ಠಿರನೊಂದಿಗೆ ದ್ವಂದ್ವಯುದ್ಧಕ್ಕೆ ನಿಂತನು. ಕೃತವರ್ಮನು ಪಾಂಡವ ಸೈನ್ಯವನ್ನು ಧ್ವಂಸಮಾದುತ್ತಿದ್ದುದನ್ನು ನೋಡಿ ಅವನಿಗೆ ಬಹು ಸಂತೋಷವಾದ್ದಿತು. ಆದರೂ ಅವನು ಯುಧಿಷ್ಠಿರನ ಕೈಯಲ್ಲಿ ಸೋಲಬೇಕಾಯಿತು. ರಾಧೇಯ ಅಶ್ವತ್ಥಾಮ ಕೃಪ ಮೂವರೂ ಅವನ ನೆರವಿಗೆ ಓಡಿಬಂದರು. ಯುಧಿಷ್ಠಿರನ ಸುತ್ತಲೂ ಸಹ ಯೋಧರು ನೆರೆದರು; ಯುದ್ಧ ಸಂಕುಲವಾಯಿತು. ಮಧ್ಯಾಹ್ನದ ಉರಿಬಿಸಿಲಲ್ಲಿ ಭೀಮನು ಅರ್ಜುನನಂತೆಯೇ ಕೌರವಸೈನ್ಯವನ್ನು ಕರಗಿಸುತ್ತಿದ್ದನು. ದುರ್ಯೋಧನನು ಮತ್ತೊಮ್ಮೆ ಯುಧಿಷ್ಠಿರನನ್ನೆದುರಿಸಲು ಪ್ರಯತ್ನಿಸಿ ಭಲ್ಲೆಯೊಂದರಿಂದ ಗಾಯಗೊಂಡು ಕೃತವರ್ಮನ ರಥದಲ್ಲಿ ಹಿಂದಿರುಗಬೇಕಾಯಿತು.ಯುದ್ಧವು ದಿನದ ಕೊನೆಯವರೆಗೂ ಹೀಗೆಯೇ ಬಿಡುವಿಲ್ಲದೆ ಮುಂದುವರೆಯಿತು. ಎರಡು ಕಡೆಯ ಸೈನ್ಯಗಳು ಬಹುಮಟ್ಟಿಗೆ ಕರಗಿದವು. ಆದರೆ ಕರ್ಣಸೇನಾಪತ್ಯದ ಮೊದಲದಿನವಾದ ಹದಿನಾರನೆಯ ದಿನದ ಯುದ್ಧದಲ್ಲಿ ವಿಶೇಷವೇನೂ ಘಟಿಸಲಿಲ್ಲ. ಸೂರ್ಯನು ಪಶ್ಚಿಮದ ಕಡೆಗೆ ಇಳಿಯತೊಡಗಿದನು. ಯೋಧರೆಲ್ಲ ಕತ್ತಲಾದ ಮೇಲೂ ಯುದ್ಧ ಮುಂದುವರೆಯುವುದೋ ಎಂಬ ಭಯದಲ್ಲಿ ತಾವಾಗಿಯೇ ಪಾಳೆಯಕ್ಕೆ ಹಿಂದಿರುಗತೊಡಗಿದರು. ಎರಡು ಪಾಳೆಯಗಳಲ್ಲೂ ಭೀಷ್ಮನಾಯಕತ್ವದ ಮೊದಲ ದಿನದ ಹಾಗೆಯೇ ಪರಿಸ್ಥಿತಿ ಸಾಧಾರಣವಾಗಿದ್ದಿತು.

★ ★ ★ ★

ರಾಧೇಯನು ಅರ್ಜುನನನ್ನು ಕೊಲ್ಲಲಿಲ್ಲವೆಂದು ದುರ್ಯೋಧನನಿಗೆ ನಿರಾಸೆಯಾಗಿದ್ದಿರಬಹುದು. ನಕುಲನನ್ನು ಸುಲಭವಾಗಿ ಕೊಲ್ಲಬಹುದಾಗಿದ್ದರೂ ಕೊಲ್ಲದೆ ಬಿಟ್ಟದ್ದನ್ನೂ ಅವನು ಗಮನಿಸಿರಬಹುದು. ಆದರೂ ಒಂದೂ ಮಾತನಾಡಲಿಲ್ಲ. ರಾಧೇಯನನ್ನು ಕಂಡರೆ ರಾಜನಿಗೆ ಅಷ್ಟೊಂದು ಪ್ರೀತಿ. ಪಾಳೆಯದಲ್ಲಿ ಅವರವರ ಡೇರೆಗಳಿಗೆ ಹೊರಡುವಾಗ ರಾಧೇಯನು ದುರ್ಯೋಧನನ ಕೈಕುಲುಕಿ, ''ಅರ್ಜುನ ತುಂಬ ಬುದ್ಧಿವಂತ; ಕುಶಲತೆಯಿಂದ ಯುದ್ಧಮಾಡುತ್ತಾನೆ; ಯಾವ ಕ್ಷಣದಲ್ಲಿ ಏನು ಮಾಡಬೇಕೆಂದು ಕೃಷ್ಣನು ಅವನಿಗೆ ಸೂಚನೆ ಕೊಡುತ್ತಾನೆ; ಅದರಿಂದಾಗಿಯೇ ಅವನು ಇನ್ನೂ ಬದುಕಿರುವುದು. ಆದರೆ ನಾಳೆ ನಾನು ಅಗತ್ಯವಾದದನ್ನು ಮಾಡುತ್ತೇನೆ. ನನ್ನ ಪ್ರತಿಜ್ಞೆಯನ್ನು ನೆರವೇರಿಸಿಕೊಳ್ಳುತ್ತೇನೆ ಎಂದಾಗ, ರಾಜನು, ''ನನಗೆ ಗೊತ್ತು ರಾಧೇಯ, ನನಗೆ ಗೊತ್ತು ಎಂದು ಮಾತ್ರ ಹೇಳಿ ಸುಮ್ಮನಾದನು.

**ಮುಂದುವರಿಯುವುದು...**

# ಅಭಿಮಾನಿಗಳ ಮನದಲ್ಲಿ ಇನ್ನೂ ಉಳಿದಿರುವ ಡಾ. ರಾಜಕುಮಾರ್





ಸಾಮಾಜಿಕ ಕಳಕಳಿ

ಹೆಚ್.ಎಸ್. ಪ್ರತಿಮಾ
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ ಶಿಕ್ಷಕಿ, ಹಾಸನ

• ಉದಯವಾಹಿನಿ, ವಿಶೇಷ

ಕರುಳಿನ ಕೂಗಿಹುದು ರಾಜ್ ರವರ ಬರುವಿಕೆಗೆ
ಮರುಳನದು ಆಗದಿರೆ ಮನವೆಲ್ಲವೂ
ತರುಗಳಲಿ ತೇಲಿದೆಯು ಜೀವನದ ದಾರಿಯದು
ಸರಿಯಾಗಿ ಬೇಡುತಲಿ ಲಕ್ಷ್ಮಿ ದೇವಿ.......

ಮೇಲಿನ ಮುಕ್ತ ಕದಂತೆ ಕರುನಾಡ ತಾಯಂದಿರ ಕನಸು ಡಾ. ರಾಜಕುಮಾರ್ ಅಂತಹ ಮಗನನ್ನು ಪಡೆಯುವುದು. ಅವರು ಇಂದಿಗೂ ಎಲ್ಲರ ಮನಮನೆಗಳಲ್ಲಿ ಜೀವಂತವಾಗಿ ರಾರಾಜಿಸುತ್ತಿದ್ದಾರೆ. ಬೇರೆ ಯಾವುದೇ ಮಾತುಗಳಿಗೆ ಮಾರು ಹೋಗದ ಜನರು ಕೊಡುವ ಕೈಯಾಗಿದಂತಹ ಡಾ. ರಾಜಕುಮಾರ್‌ರವರನ್ನು ಇಂದು ಅವರ ಅಭಿಮಾನಿಗಳು ಮರೆತಿಲ್ಲ. ಇಂದಿಗೂ ದೇವರಲ್ಲಿ ಅಂತಹ ವರ ಪುತ್ರನೇ ಜನಿಸಬೇಕೆಂದು ಕೇಳಿಕೊಳ್ಳುತ್ತಾರೆ. ರಾಜಕುಮಾರ್‌ರವರು ಚಿಕ್ಕಂದಿನಿಂದ ಬಹಳಷ್ಟು ಕಷ್ಟಪಟ್ಟ ಚಿತ್ರರಂಗಕ್ಕೆ ಬಂದವರು. ರಾಜ್‌ಕುಮಾರ್ (ಜನನ: ಏಪ್ರಿಲ್ 24, 1929 – ಮರಣ: ಏಪ್ರಿಲ್ 12, 2006) ಕನ್ನಡ ಚಿತ್ರರಂಗದ ಧ್ರುವತಾರೆ ಎಂದೇ ಹೆಸರಾದ ಪ್ರಸಿದ್ಧ ನಟ, ಗಾಯಕ. 1954–2005ರವರೆಗೆ 5 ದಶಕದಗಳ ಚಿತ್ರರಂಗದ ಬದುಕಿನಲ್ಲಿ, 200 ಕ್ಕೂ ಹೆಚ್ಚು ಚಿತ್ರಗಳಲ್ಲಿ ನಾಯಕನಾಗಿ ನಟಿಸಿದ ಹೆಗ್ಗಳಿಕೆ ಡಾ. ರಾಜ್ ರದ್ದು. ಕೇವಲ ನಟರಾಗಿ ಉಳಿಯದೆ ಹಿನ್ನೆಲೆ ಗಾಯಕರಾಗಿ ಸಹ ಹೆಸರು ಮಾಡಿದ್ದಾರೆ. ರಂಗ ಕಲಾವಿದರಾಗಿ, ಚಿತ್ರರಂಗದಲ್ಲಿ ಅಪಾರ ಸಾಧನೆ ಮಾಡಿದವರು. ಕನ್ನಡವನ್ನು ಉಳಿಸುವುದಕ್ಕೆ ಪಣತೊಟ್ಟವರು. ತಮ್ಮ ಮಕ್ಕಳಿಗೂ ಚಿತ್ರರಂಗದಲ್ಲಿ ಮಾರ್ಗದರ್ಶನ ನೀಡಿದವರು..

ಹುಟ್ಟಿದ ತಕ್ಷಣ ರಾಜರಾಗಲಿಲ್ಲ
ರಾಜ್ ಎಂಬ ಹೆಸರು ನಿಮ್ಮದಾಗಿದೆಯಲ್ಲ
ಪ್ರೀತಿ ಪ್ರೇಮದ ಜೊತೆಗೆ ಇದ್ದಿರಲ್ಲ
ನಿಮ್ಮನ್ನು ಮರೆಯಲು ಆಗುತ್ತಿಲ್ಲವಲ್ಲ
ನಿಮ್ಮ ಶಿಸ್ತು ಬದ್ಧ ಜೀವನ ಹೆಸರುವಾಸಿ
ನಾನು ಸಹ ನಡೆಸಬೇಕೆಂಬ ಆಸೆಯ ದಾಸಿ
ಒಮ್ಮೆಯಾದರೂ ನಿಮ್ಮ ನೆನಪಿಸಿಕೊಳ್ಳದೆ ಇರಲಾಗುತ್ತಿಲ್ಲ
ಎಲ್ಲರಿಗೂ ಮಾರ್ಗದರ್ಶಕರಾಗಿ ಇದ್ದರಲ್ಲ
ಅವರೇ ನಮ್ಮ ರಾಜ್‌ಕುಮಾರ್ ಎಂಬುದು ಮರೆಯಲಾಗುತ್ತಿಲ್ಲ

ಕೇವಲ ನಟರಾಗಿ ಉಳಿಯದೆ ಹಿನ್ನೆಲೆ ಗಾಯಕರಾಗಿ ಸಹ ಹೆಸರು ಮಾಡಿದ್ದಾರೆ. ನಟಸಾರ್ವಭೌಮ ಬಿರುದು, 1973ರಲ್ಲಿಮೈಸೂರು ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಹಾಗೂ ಹಂಪಿ ವಿಶ್ವವಿದ್ಯಾಲಯದಿಂದ ನಾಡೋಜ ಪದವಿಯನ್ನು ಪಡೆದಿದ್ದಾರೆ. ಭಾರತ ಸರ್ಕಾರದಿಂದ ಪದ್ಮಭೂಷಣ ಪ್ರಶಸ್ತಿ ಮತ್ತು ಚಿತ್ರರಂಗದಲ್ಲಿನ ಜೀವಮಾನದ ಸಾಧನೆ ಗಾಗಿ ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿಗಳು ಸಹ ಲಭಿಸಿವೆ. ಸಿನಿಮಾ ರಂಗದ ದಾರಿ ಸುಲಭವಾಗಿರಲಿಲ್ಲ, ಬಹಳಷ್ಟು ಕಷ್ಟಪಟ್ಟ ಮುಂದೆ ಬಂದವರು. ಸಿನಿಮಾ ಜಗತ್ತೆ ತಮ್ಮ ಜೀವ ಎಂದುಕೊಂಡು ಕೊನೆಯ ಉಸಿರೆದವರೆಗೂ ಸಿನಿಮಾ ರಂಗದಲ್ಲೇ ಕಾರ್ಯ ನಿರ್ವಹಿಸಿದವರು. ಅಪ್ಪಟ ಕನ್ನಡಿಗರಾಗಿ ತಮ್ಮ ಕಡಗಣದಲ್ಲೂ ಕನ್ನಡವನ್ನು ತುಂಬಿಕೊಂಡವರು. ಕರುನಾಡ ಹೆಮ್ಮೆಯ ಪುತ್ರರಾಗಿ ಜನಿಸಿ ಕೀರ್ತಿ ಶೇಷ ರಾಗಿ ಜೀವಿಸಿದವರು. ಒಮ್ಮೆ ಕಷ್ಟದ ದಿನಗಳು ಬರುತ್ತವೆ ಎನ್ನುವುದಕ್ಕೆ ಕುಖ್ಯಾತ ಅಧಿಕ ಚೋರ ವೀರಪ್ಪನ್ ರವರು ಡಾ. ರಾಜಕುಮಾರ್ ರವರನ್ನು ಅಪಹರಣ ಮಾಡಿದ್ದರು. ಕರ್ನಾಟಕ ಸರ್ಕಾರದಿಂದ ಕರ್ನಾಟಕ ರತ್ನ ಪಡೆದ ಎರಡನೆಯ ವ್ಯಕ್ತಿ 2000ನೇ ವರ್ಷದಲ್ಲಿ ಕುಖ್ಯಾತ ದಂತಚೋರ ವೀರಪ್ಪನ್‌ನಿಂದ ಅಪಹರಣವಾಗಿದ್ದ ರಾಜ್ ಕುಮಾರ್, 108 ದಿನಗಳ ನಂತರ ಬಿಡುಗಡೆಯಾಗಿದ್ದರು. 2006 ಏಪ್ರಿಲ್ 12ರಂದು ಬೆಂಗಳೂರಿನಲ್ಲಿ, ಹೃದಯಾಘಾತದಿಂದ ಮರಣ ಹೊಂದಿದರು. ಡಾ.ರಾಜ್‌ಕುಮಾರ್. ಅಂದಿನ ದಿನ ಕರುನಾಡೆ ಕತ್ತಲೆಯಾದಂತೆ ಭಾಸವಾಗಿ ಭಾರತದಾದ್ಯಂತ ಅಭಿಮಾನ ಬಳಗವನ್ನು ಹೊಂದಿದ್ದಾರೆ ರಾಜಕುಮಾರ್‌ರವರು ಬಾಳಷ್ಟು ನೋವು ಅನುಭವಿಸಬೇಕಾದ ಪರಿಸ್ಥಿತಿಯಲ್ಲ ಅಭಿಮಾನಿಗಳಿಗೆ ನೀಡಿ ಹೋದರು ಅವರ ಅಗಲಿಕೆಯನ್ನು ಯಾರು ಸಹ ಸಹಿಸಲಾರದೆ ಬಹಳಷ್ಟು ನೋವು ಅನುಭವಿಸಿದ್ದರು. ಕರುನಾಡ ರಂಗಭೂಮಿಯ ಹೆಸರಾಂತ ಪ್ರತಿಭೆ ಸಿಂಗನಲ್ಲೂರು ಪುಟ್ಟಸ್ವಾಮಯ್ಯ ಮತ್ತು ಲಕ್ಷ್ಮಮ್ಮ ದಂಪತಿಗಳ ಹಿರಿಯ ಮಗನಾಗಿ, ಚಾಮರಾಜನಗರ ಜಿಲ್ಲೆಯ ಗಡಿಭಾಗದಲ್ಲಿರುವ ದೊಡ್ಡ ಗಾಜನೂರಿನಲ್ಲಿ 1929ರ ಏಪ್ರಿಲ್ 24ರಂದು ರಾಜ್‌ಕುಮಾರ್ ಹುಟ್ಟಿದರು. ನಾಮಕರಣಗೊಂಡ ಹೆಸರು ಮುತ್ತುರಾಜು(ಮುತ್ತಣ್ಣ). ಇವರ ಜನನದ ನಂತರ ಬಹಳಷ್ಟು ಏರು –ಪೇರುಗಳನ್ನು ಜೀವನದಲ್ಲಿ ಕಂಡವರು ಇವರು. ಡಾ. ರಾಜ್ ಅವರಿಗೆ ವರದರಾಜ್ ಎಂಬ ಸಹೋದರರೂ, ಶಾರದಮ್ಮ ಎಂಬ ತಂಗಿಯೂ ಇದ್ದರು. 1953 ಜೂನ್ 25ರಂದು ಪಾರ್ವತಿಯವರೊಡನೆ ಲಗ್ನವಾಯಿತು. ಪಾರ್ವತಿಯವರು ಮುಂದೆ ಪಾರ್ವತಮ್ಮ ರಾಜ್‌ಕುಮಾರ್ ಎಂದೇ ಕನ್ನಡದ ಜನತೆಗೆ ಚಿರ ಪರಿಚಿತರಾಗಿ ಕನ್ನಡ ಚಿತ್ರರಂಗದ ಪ್ರಮುಖ ಚಿತ್ರ ನಿರ್ಮಾಪಕರಲ್ಲೊಬ್ಬರಾದರು. ಪತಿಯು ನಟನೆಯಲ್ಲಿ ಸೈ ಅನ್ನಿಸಿಕೊಂಡರೆ ಪತ್ನಿಯೂ ಚಿತ್ರದ ನಿರ್ಮಾಪಕರಾಗಿ ಎಲ್ಲರ ಮೆಚ್ಚುಗೆಗೆ ಪಾತ್ರರಾದವರು. ವಜ್ರೇಶ್ವರಿ ಸಂಸ್ಥೆಯ ಅಡಿಯಲ್ಲಿ ಹಲವಾರು ಕನ್ನಡ ಚಲನಚಿತ್ರಗಳನ್ನು ನಿರ್ಮಿಸಿದ್ದಾರೆ. ಡಾ. ರಾಜ್ ದಂಪತಿಗಳಿಗೆ 5 ಜನ ಮಕ್ಕಳು. ಮೂರು ಜನ ಗಂಡು ಮಕ್ಕಳು ಮತ್ತು ಇಬ್ಬರು ಹೆಣ್ಣು ಮಕ್ಕಳು. ಗಂಡು ಮಕ್ಕಳಾದ ಶಿವರಾಜ್‌ಕುಮಾರ್, ರಾಘವೇಂದ್ರ ರಾಜ್‌ಕುಮಾರ್ ಮತ್ತು ಪುನೀತ್ ರಾಜ್‌ಕುಮಾರ್ ಕನ್ನಡ ಚಿತ್ರರಂಗದ ನಾಯಕ ನಟರು. ಹೆಣ್ಣು ಮಕ್ಕಳು ಪೂರ್ಣಿಮಾ ಹಾಗು ಲಕ್ಷ್ಮಿ. ಹಿರಿಯ ಅಳಿಯ ಪಾರ್ವತಮ್ಮನವರ ತಮ್ಮನಾದ ಗೋವಿಂದರಾಜು ಹಾಗು ಕಿರಿಯ ಅಳಿಯ ಚಿತ್ರನಟ ರಾಮ್‌ಕುಮಾರ್. ಒಟ್ಟು ಹನ್ನೆರಡು ಮೊಮ್ಮಕ್ಕಳಿದ್ದು, ಶಿವರಾಜ್‌ಕುಮಾರ್ ಪುತ್ರಿಯಾದ ನಿವೇದಿತಾ, ಅಂಡಮಾನ್ ಮುಂತಾದ ಕೆಲವು ಚಿತ್ರಗಳಲ್ಲಿ ಬಾಲನಟಿಯಾಗಿ ನಟಿಸಿದ್ದಾಳೆ. ಕರ್ನಾಟಕದ ಮಾಜಿ ಮುಖ್ಯಮಂತ್ರಿ ಎಸ್. ಬಂಗಾರಪ್ಪ ಅವರು ಡಾ. ರಾಜ್ ಅವರ ಬೀಗರು. ಬಂಗಾರಪ್ಪನವರ ಪುತ್ರಿಯಾದ ಗೀತಾ, ಶಿವರಾಜ್‌ಕುಮಾರ್ ಅವರ ಪತ್ನಿ. ಪುನೀತ್ ರಾಜಕುಮಾರ್ ರವರನ್ನು ಪ್ರಸ್ತುತ ದಿನಮಾನಗಳಲ್ಲಿ ಕಳೆದುಕೊಂಡಿದ್ದೇವೆ. ದೈಹಿಕವಾಗಿ ಕಳೆದುಕೊಂಡರು ಸಹ ಮಾನಸಿಕವಾಗಿ ಅವರು ಶಾಶ್ವತವಾಗಿ ಜೀವಂತವಾಗಿ ಉಳಿಯುತ್ತಾರೆ. ಜುಲೈ 2000ರಂದು, ಕುಖ್ಯಾತ ದಂತಚೋರ, ನರಹಂತಕ ವೀರಪ್ಪನ್‌ನಿಂದ ಡಾ. ರಾಜ್ ಅವರು ಗಾಜನೂರಿನಲ್ಲಿರುವ ತಮ್ಮ ತೋಟದ ಮನೆಯಿಂದ ಅಪಹರಣವಾದರು. ಡಾ. ರಾಜ್ ಅವರೊಂದಿಗೆ ಅವರ ಅಳಿಯ ಗೋವಿಂದರಾಜು ಮತ್ತು ನಾಗಪ್ಪ ಮಾರಡಗಿ ಅವರೂ ಕೂಡ ಅಪಹರಣಕ್ಕೊಳಗಾದರು. ಇದು ಸರ್ವೇ ಸಾಮಾನ್ಯವಾಗಿ ಪ್ರತಿಯೊಬ್ಬರಿಗೂ ತಿಳಿದಂತಹ ವಿಚಾರವಾಗಿದೆ. ಪ್ರತಿಯೊಬ್ಬ ಕಲಾವಿದನ ಜೀವನದಲ್ಲಿ ಏರುಪೇರುಗಳು ಸಹಜ ಎಂಬುದಕ್ಕೆ ಇವರು ಒಂದು ನಿದರ್ಶನವಾಗಿ ಉಳಿದುಬಿಟ್ಟಿದ್ದಾರೆ.ಅಪಹರಣದ ನಂತರದ ದಿನಗಳಲ್ಲಿ, ಕ್ಯಾಸೆಟ್ಟುಗಳ ಮೂಲಕ, ಪತ್ರಗಳ ಮೂಲಕ ಕರ್ನಾಟಕ ಹಾಗು ತಮಿಳುನಾಡು ಸರ್ಕಾರಗಳನ್ನು ಸಂಪರ್ಕಿಸುತ್ತಿದ್ದ ವೀರಪ್ಪನ್ ಡಾ. ರಾಜ್ ಅವರನ್ನು ಒತ್ತೆಯಾಳಗಿಟ್ಟುಕೊಂಡು, ಹಲವಾರು ಬೇಡಿಕೆಗಳನ್ನು ಮುಂದಿಟ್ಟಿದ್ದನು. ನೂರೆಂಟು ದಿನಗಳ ಕಾಲ ಅಪಹೃತರಾಗಿ, ಅರಣ್ಯವಾಸ ಅನುಭವಿಸಿದ್ದ ಡಾ. ರಾಜ್, 15 ನವೆಂಬರ್ 2000ರಂದು ಬಿಡುಗಡೆಗೊಂಡರು. ಬಿಡುಗಡೆಯಾದ ದಿನದಂದು ಇಡೀ ಕರ್ನಾಟಕವೇ ಹಬ್ಬವನ್ನ ಆಚರಿಸಿತ್ತು.ಅಪಹರಣದ ಅವಧಿಯಲ್ಲಿ ಕರ್ನಾಟಕದ ಪೋಲಿಸ್ ಮಹಾನಿರ್ದೇಶಕರಾದ(ಡಿಜಿಪಿ) ಪಿ. ದಿನಕರ್ ಅವರು ಅಪಹರಣದ ಬಗ್ಗೆ ವೀರಪ್ಪನ್ ಕ್ಲೀಸ್ ಕ್ಯಾಚ್ ಡಾಕ್ಟರ್ ರಾಜಕುಮಾರ್ ಎಂಬ ಪುಸ್ತಕವನ್ನು ಬರೆದಿದ್ದಾರೆ. ಆ ಪುಸ್ತಕವನ್ನು ರವಿ ಬೆಳಗೆರೆಯವರು ರಾಜ ರಹಸ್ಯ ಎಂಬ ಹೆಸರಿನಲ್ಲಿ ಕನ್ನಡಕ್ಕೆ ಅನುವಾದಿಸಿದ್ದಾರೆ. ಇದು ಸರ್ವೇ ಸಾಮಾನ್ಯವಾಗಿ ಎಲ್ಲರಿಗೂ ತಿಳಿದಿದೆ. ರಾಜಕುಮಾರ ರವರ ಚಟುವಟಿಕೆಯ ಕ್ರಮಗಳು ಹಲವಾರು ಜನರಿಗೆ ಮಾದರಿಯಾಗಿ ಉಳಿದುಬಿಟ್ಟಿದೆ. ಮಾಧ್ಯಮಗಳಿಂದ ದಿನಗಳಲ್ಲಿ ಮಂಡಿನೋವು ಹಾಗು ಎದೆನೋವಿನಿಂದ ಬಳಲಿದ ಡಾ. ರಾಜ್, 12 ಏಪ್ರಿಲ್, 2006 ಬುಧವಾರದಂದು ಮಧ್ಯಾಹ್ನ 1:45ರ ಸುಮಾರಿಗೆ, ಬೆಂಗಳೂರಿನಲ್ಲಿ ತಮ್ಮ ಕೊನೆಯುಸಿರೆಳೆದರು. ಕನ್ನಡ ಚಿತ್ರರಂಗದ ದಂತಕಥೆಯಾಗಿದ್ದ ಡಾ. ರಾಜ್ ಅವರ ಅಗಲಿಕೆಯಿಂದ, ಒಂದು ಸುವರ್ಣ ಯುಗದ ಅಂತ್ಯವಾದಂತಾಯಿತು. ಪ್ರತಿಯೊಬ್ಬ ಅಭಿಮಾನಿಯೂ ಸಹ ಅವರ ಮಕ್ಕಳು ಸಹ ಯಾರು ಸಹ ಅವರನ್ನು ಮರೆತಿಲ್ಲ . ಮುಂದೆ ಮರೆಯುವ ಮಾತೇ ಇಲ್ಲ, ನಾಡು ಎಷ್ಟು ವರ್ಷದವರೆಗೆ ಇರುತ್ತದೆಯೋ ಅಲ್ಲಿಯವರೆಗೆ ರಾಜಕುಮಾರ್ ಅವರನ್ನು ಯಾರು ಮರೆಯುವದಿಲ್ಲ.ಡಾ. ರಾಜ್ ಅವರ ಸ್ವ–ಇಚ್ಛೆಯಂತೆ, ಮರಣೋತ್ತರವಾಗಿ ಅವರ ಕಣ್ಣುಗಳನ್ನು ನಾರಾಯಣ ನೇತ್ರಾಲಯಕ್ಕೆ ದಾನ ಮಾಡಲಾಯಿತು. ಮೃತರ ಪಾರ್ಥಿವ ಶರೀರವನ್ನು ಅಭಿಮಾನಿಗಳ, ಬಂಧುಮಿತ್ರರ ದರ್ಶನಕ್ಕಾಗಿ ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಇಡಲಾಗಿತ್ತು. ಅಪಾರ ಸಂಖ್ಯೆಯ ಜನಸ್ತೋಮ ಅಂತಿಮ ದರ್ಶನದಲ್ಲಿ ಪಾಲ್ಗೊಂಡಿತ್ತು. ತಲೆಯ ಮೇಲೆ ಅಪಾರವಾದ ನೋವು ಬಿದ್ದಂತೆ ಎಲ್ಲಾ ಜನರು ದುಃಖಿಸಲು ಪ್ರಾರಂಭಿಸಿದರು.13 ಏಪ್ರಿಲ್ 2006ರಂದು, ಬೆಂಗಳೂರಿನ ನಂದಿನಿ ಲೇಔಟ್‌ನಲ್ಲಿರುವ ಕಂಠೀರವ ಸ್ಟುಡಿಯೊ ಆವರಣದಲ್ಲಿ ಡಾ. ರಾಜ್ ಪಾರ್ಥಿವ ಶರೀರದ ಅಂತ್ಯಸಂಸ್ಕಾರವು ನಡೆಯಿತು. ಇವೆರಡು ದಿನ (ಏಪ್ರಿಲ್ 12 ಮತ್ತು 13), ಬೆಂಗಳೂರಿನಲ್ಲಿ ಪ್ರಕ್ಷುಬ್ದ ಪರಿಸ್ಥಿತಿ ಉಂಟಾಗಿತ್ತು.ಬಣ್ಣದ ಬದುಕು

> **ಚಿತ್ರರಂಗದಲ್ಲಿ ಅಪಾರ ಸಾಧನೆ**

ಬಣ್ಣದ ಬದುಕು ಮಾಸಿಹೋಯಿತು
ಮತ್ತೇ, ಪಡೆಯಲು ಸಾಧ್ಯವೇ ನಿಮ್ಮನ್ನು
ಬಂಗಾರದ ಮನುಷ್ಯ ನೀವು
ಅದನು ಮರೆಯಲಾಗುವುದೇನು
ನಿಮ್ಮಿಂದ ಎಷ್ಟೆಲ್ಲಾ ಕಲಿತಿರುವೆವು ನಾವು
ಕೊನೆಗೆ ಮರೆಯಾದಿರಿ ನೀವು
ಮುಂದೆ ಹುಟ್ಟಿ ಬರಬೇಕು ತಾವು.......

ರಾಜ್ ಅಭಿನಯದ ಚಲನಚಿತ್ರಗಳ ಸಂಪೂರ್ಣ ಪಟ್ಟಿ (ಫಿಲ್ಮೋಗ್ರಾಫಿ) ಹೇಳಬೇಕೆಂದರೆ. ರಾಜಕುಮಾರ್ ರವರು ಹಲವಾರು ಪ್ರಶಸ್ತಿಗಳನ್ನು ಪಡೆದವರು......

ಮುಂದುವರೆಯುವುದು...

# ವಿಶ್ವ ಪುಸ್ತಕ ದಿನ ಕಾರ್ಯಕ್ರಮ ಉದ್ಘಾಟಿಸಿದ ಸಂಸ್ಕೃತಿ ಚಿಂತಕ ಡಾ. ಗುರುರಾಜ ಪೋಶೆಟ್ಟಿಹಳ್ಳಿ ಅಭಿಮತ ಪುಸ್ತಕಗಳು ಜ್ಞಾನದೀವಿಗೆ

• ಉದಯವಾಹಿನಿ, ಬೆಂಗಳೂರು





ಉದಯವಾಹಿನಿ ಚಿತ್ರ

> **ಪುಸ್ತಕ ಪ್ರೇಮ ಒದಿನ ಖುಷಿ ಹೆಚ್ಚಿಸಿ**

ಸಾರ್ವಜನಿಕ ಗ್ರಂಥಾಲಯ ಇಲಾಖೆ ಬೆಂಗಳೂರು ದಕ್ಷಿಣ ವಲಯ ನಗರ ಕೇಂದ್ರ ಗ್ರಂಥಾಲಯ ಕುಮಾರ ಸ್ವಾಮಿ ಬಡಾವಣೆಯ ಗ್ರಂಥದ ಗುಡಿ ಅಲ್ಲಿ ಆಯೋಜಿಸಿದ್ದ ವಿಶ್ವ ಪುಸ್ತಕ ಮತ್ತು ಕೃತಿ ಸ್ವಾಮ್ಯ ದಿನಾಚರಣೆ ಅಂಗವಾಗಿ ಪುಸ್ತಕ ಪ್ರದರ್ಶನ ಉದ್ಘಾಟಿಸಿದ ಪ್ರಣವ ಮೀಡಿಯಾ ಹೌಸ್ ಪ್ರಕಾಶನದ ಕಾರ್ಯನಿರ್ವಾಹಕ ಅಂಕಣ ಕಾರ ಡಾ. ಗುರುರಾಜ ಪೋಶೆಟ್ಟಿ ಹಳ್ಳಿ ಮಾತನಾಡುತ್ತಾ ಯುವ ಜನತೆಯಲ್ಲಿ ಪುಸ್ತಕ ಪ್ರೇಮ ಓದಿನ ಖುಷಿ ಹೆಚ್ಚಿಸುವ ಮತ್ತು ಲೇಖಕರನ್ನು ಗೌರವಿಸುವ ಅಂಗವಾಗಿ 1995 ರಿಂದ ವಿಶ್ವಸಂಸ್ಥೆ ಖ್ಯಾತ ಸಾಹಿತಿ ನಾಟಕಕಾರ ವಿಲಿಯಂ ಷೇಕ್ಸ್‌ಪಿಯರ್ ಸ್ಮರಣಾರ್ಥ ವಿಶ್ವ ಪುಸ್ತಕ ಮತ್ತು ಕೃತಿ ಸ್ವಾಮಿಯ ದಿನಾಚರಣೆಯನ್ನು ಆಚರಿಸಲಾಗುತ್ತದೆ

ಮನುಜ ಕುಲಕೆ ದೇವ ಕೊಟ್ಟ ಕೊಡುಗೆ ಮಾತು ಮಂಥನ ಭಾಷೆ ಹಾಗೂ ಬರವಣಿಗೆ ತಲೆತಲಾಂತರದಿಂದ ಪರಂಪರಾನುಗತವಾಗೆ ಗ್ರಂಥಗಳಲಿ ಬೆಳಗುತ್ತಾ ಬಂದಿದೆ ಜ್ಞಾನದೀವಿಗೆ.

ಪುಸ್ತಕದ ಅರಿವು ಮಸ್ತಕಕೆ ಬರಬೇಕು ಬಾಳಲ್ಲಿ ಅಳವಡಿಸಿಕೊಳ್ಳುವ ಜಾಣ್ಮೆ ಬೇಕು ಇವು ಹಿರಿಯರ ನಡೆ ನುಡಿ ಆಲೋಚನೆಗಳ ಕನ್ನಡಿ ಜೀವನದ ಪಟ್ಟುಗಳ ತಿಳಿಸಿಕೊಡುವ ಕುಸ್ತಿ ಗರಡಿ.

ಹೊತ್ತಿಗೆಗಳಿಗಿಂತ ಆಪ್ತಮಿತ್ರ ಬೇರೊಂದಿಲ್ಲ ಇವುಗಳಿಗಿಂತ ಹೆಚ್ಚಿನ ಆಸ್ತಿ ಮತ್ತೊಂದಿಲ್ಲ ಬೆಳೆಸಿಕೊಳ್ಳಿ ಉಳಿಸಿಕೊಳ್ಳಿ ಅದಮ್ಯ ಓದಿನ ಪ್ರೀತಿ ಆಗ ಬಾಳಲಿ ಅಂಧಕಾರವಿಲ್ಲಬರೀ ಸುಜ್ಞಾನ ಜ್ಯೋತಿ ಎಂದು ಅಭಿಪ್ರಾಯ ಪಟ್ಟರು ಕುಮಾರಸ್ವಾಮಿ ಬಡಾವಣೆಯ ಪ್ರಶಾಂತ ಪರಿಸರದಲ್ಲಿ ಬಹು ವಿಶಿಷ್ಟ ರೀತಿಯಲ್ಲಿ ಸಾರ್ವಜನಿಕ ಗ್ರಂಥಾಲಯವನ್ನು ಓದುಗಸ್ನೇಹಿಯಾಗಿ ರೂಪಿಸಿರುವ ಗ್ರಂಥಾಲಯದ ಪ್ರಭಾರದಾರರಾದ ಎಸ್ ಆನಂದ್‌ರವರ ಸೇವಾ ಮನೋಭಾವದ ಕಾರ್ಯ ಅನುಕರಣಿಯ.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಕೊಳಲು ವಾದಕ ವಿದ್ವಾನ್ ವೆಂಕಟೇಶ ಸತ್ಯನಾರಾಯಣ , ವೇಣು ವಾದನ ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮವನ್ನು ನಡೆಸಿಕೊಟ್ಟರು. ವೆಲ್ನೆಸ್ ಕೋಚ್ ಯೋಗೇಶ್ ಹಾಗೂ ಲೇಖಕ ವಿ ಎಸ್ ಕುಮಾರ ಉಪಸ್ಥಿತರಿದ್ದರು.

ಎ.ವಿ ಗೋಪಾಲ್ ರವರಿಂದ ಪುಸ್ತಕವನ್ನು ಓದುವುದರಿಂದಾಗುವ ಉಪಯೋಗ ಕುರಿತು ತಿಳುವಳಿಕೆ ಮತ್ತು ರಸಪ್ರಶ್ನೆ ಸ್ಪರ್ಧೆ,ಖ್ಯಾತ ಲೇಖಕರ ಪುಸ್ತಕ ಕಾಣಿಕೆ ನೀಡಿ ಗೌರವಿಸಲಾಯಿತು .

# ಹನುಮ ಜನ್ಮೋತ್ಸವದ ಪ್ರಯುಕ್ತ ದೇವರಿಗೆ ಮಧು ಅಭಿಷೇಕ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಜಯನಗರದ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ ಅವರ ನೇತೃತ್ವದಲ್ಲಿ ಶ್ರೀ ಹನುಮ ಜನ್ಮೋತ್ಸವದ ಪ್ರಯುಕ್ತ ಏಪ್ರಿಲ್ 23, ಮಂಗಳವಾರ ಬೆಳಗ್ಗೆ ಮುಖ್ಯಪ್ರಾಣ ದೇವರಿಗೆ ಮಧು ಅಭಿಷೇಕ, ರತ್ನ ಕವಚ ಧಾರಣೆ ಮತ್ತು ಚಿತ್ತಾ ಪೂರ್ಣಿಮೆ ಅಂಗವಾಗಿ ಸಾಮೂಹಿಕ ಶ್ರೀ ಸತ್ಯನಾರಾಯಣ ವ್ರತ ಪೂಜೆ ಮಹಾಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ಕಾರ್ಯಕ್ರಮಗಳು ಜರುಗಿದವು ಎಂದು ಶ್ರೀ ನಂದಕಿಶೋರ್ ಆಚಾರ್ ತಿಳಿಸಿದರು, ಈ ಸಂದರ್ಭದಲ್ಲಿ ಭಕ್ತಾದಿಗಳು ಪೂಜೆಯಲ್ಲಿ ಭಾಗವಹಿಸಿ, ಶ್ರೀ ಹರಿವಾಯು ಗುರುಗಳ ಅನುಗ್ರಹಕ್ಕೆ ಪಾತ್ರರಾದರು.

# ಪರಿಸರ ಸೇವೆ ಅನನ್ಯವಾದದ್ದು

• ಉದಯವಾಹಿನಿ, ಬೆಂಗಳೂರು

ಖ್ಯಾತ ಪರಿಸರ ಪ್ರೇಮಿ ಪರಿಸರ ಮಂಜು ಅವರ ಪರಿಸರ ಸೇವೆ ಅನನ್ಯವಾದದ್ದು ಎಂದು ಅಂತರಾಷ್ಟ್ರೀಯ ಕ್ರೀಡಾ ತರಬೇತುದಾರರಾದ ಡಾ. ಕರಾಟೆ ಶ್ರೀನಾಥ್ ತಿಳಿಸಿದರು.

ನಗರದ ರಾಜಾಜಿನಗರದ ಅಲೆ ದಿ ಆರ್ಟ್ ಹಬ್ ನಲ್ಲಿ ಕರ್ನಾಟಕ ಯೂತ್ ವೆಲ್ಫೇರ್ ಅಸೋಸಿಯೇಷನ್ ಆಯೋಜಿಸಿದ ದಿವಂಗತ ನಟ ಹಾಗೂ ನಿರ್ಮಾಪಕ ದ್ವಾರಕೀಶ್ ನುಡಿನಮನ ಹಾಗೂ ಸಾಧಕರಿಗೆ ಪ್ರಶಸ್ತಿ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು. ಪರಿಸರ ಕ್ಷೇತ್ರದಲ್ಲಿ ಸುಮಾರು 5 ಸಾವಿರಕ್ಕೂ ಹೆಚ್ಚು ಸಸಿಗಳನ್ನು ನೆಟ್ಟು, 1 ಲಕ್ಷಕ್ಕೂ ಮಿಕ್ಕ ಸಸಿಗಳನ್ನು ಮದುವೆ, ಶುಭಕಾರ್ಯಗಳಲ್ಲಿ ರೈತರಿಗೆ, ಸಾರ್ವಜನಿಕರಿಗೆ ವಿತರಣೆ ಮಾಡಿದ್ದಾರೆ. ವೃಕ್ಷ ಬಚಾವೋ ಆಂದೋಲನ ಪ್ರರಂಬಿಸಿ ನಗರದ ನೂರಾರು ಮರಗಳ ರಕ್ಷಣೆ ಮಾಡಿದ್ದಾರೆ. ಮೊಳೆ ಮುಕ್ತ ಮರಗಳು ಅಭಿಯಾನದಲ್ಲಿ ಸಾವಿರಾರು ಮರಗಳಿಗೆ ಮೊಳೆಗಳಿಂದ ಮುಕ್ತಿ ನೀಡಿದ್ದಾರೆ ಎಂದರು. ಇಂದಿನ ಯುವಪೀಳಿಗೆಗೆ ಮಾದರಿಯಾದ ಕೆಲಸಗಳನ್ನು ಮಾಡುತ್ತಿದ್ದು, ಸುಮಾರು 20 ವರ್ಷಗಳ ಸುಧೀರ್ಘ ಪರಿಸರ ಸೇವೆಯನ್ನು ಗುರುತಿಸಿ ಭಾರತ ರತ್ನ ಡಾ. ಬಿ.ಆರ್.ಅಂಬೇಡ್ಕರ್ ಸೇವಾ ಸಮಾನ್ ಪ್ರಶಸ್ತಿ ಹಾಗೂ ವಿಶ್ವಮಟ್ಟದ ಪ್ರೆಸ್ಟೀಜಿಯಸ್ ಬುಕ್ ಆಫ್ ಓಲ್ಡ್ ರೆಕಾರ್ಡ್ ದಾಖಲೆ ಪಟ್ಟಿ ಸೇರ್ಪಡೆಯ ಗೌರವವನ್ನು ನೀಡಲಾಗಿದೆ ಎಂದು ನುಡಿದರು.



ಉದಯವಾಹಿನಿ ಚಿತ್ರ

# ಆಮೀಷಕ್ಕೆ ಒಳಗಾಗದೆ ಸ್ವಯಿಚ್ಛೆಯಿಂದ ಎಲ್ಲರೂ ಮತ ಚಲಾಯಿಸಿ: ತುಷಾರ್ ಗಿರಿನಾಥ್





ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಆಮೀಷಕ್ಕೆ ಒಳಗಾಗದೆ ಸ್ವಯಿಚ್ಛೆಯಿಂದ ಎಲ್ಲರೂ ಮತ ಚಲಾಯಿಸಬೇಕೆಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಮುಖ್ಯ ಆಯುಕ್ತರಾದ ಶ್ರೀ ತುಷಾರ್ ಗಿರಿನಾಥ್ ರವರು ವಿದ್ಯಾರ್ಥಿಗಳಲ್ಲಿ ಹಾಗೂ ಎಲ್ಲಾ ಮತದಾರರಿಗೆ ಅರಿವು ಮೂಡಿಸುವಂತೆ ಕರೆ ನೀಡಿದರು.

ಮಹದೇವಪುರದ ಗುಂಜೂರು ಬಳಿಯಿರುವ ಕೃಪಾನಿಧಿ ಗ್ರೂಫ್ ಆಫ್ ಇನ್ಸ್ಟಿಟ್ಯೂಷನ್ಸ್ ನಲ್ಲಿ ಏರ್ಪಡಿಸಿದ್ದ ಮತದಾನ ಜಾಗೃತಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ನಾವೆಲ್ಲರೂ ಮತದಾನದ ಪ್ರಮಾಣವನ್ನು ಹೆಚ್ಚಿಸಬೇಕು. ಈ ನಿಟ್ಟಿನಲ್ಲಿ ಎಲ್ಲರೂ ಸ್ವಯಿಚ್ಛೆಯಿಂದ ಮುಂದೆ ಬಂದು ಮತದಾನ ಮಾಡಬೇಕೆಂದು ತಿಳಿಸಿದರು. ನಿಮಗೆ ಮತದಾನ ಮಾಡುವ ಮನಸ್ಸಿದ್ದು, ಅದರ ಬಗ್ಗೆ ಅರಿವಿಲ್ಲ ಎಂದಾದರೆ ಎಲ್ಲರೂ ಮೊದಲು ಮಾಡಬೇಕಾಗಿರುವ ಕೆಲಸ ವೋಟರ್ ಹೆಲ್ಪ್ ಲೈನ್ ತಂತ್ರಾಂಶವನ್ನು ಡೌನ್ಲೋಡ್ ಮಾಡಿಕೊಳ್ಳಬೇಕು. ನಂತರ ತಂತ್ರಾಂಶದಲ್ಲಿ ನಿಮ್ಮ ಮತದಾರರ ಗುರುತಿನ ಚೀಟಿಯ ಸಂಖ್ಯೆ ನಮೂಸಿದರೆ ಸಾಕು ಎಲ್ಲಾ ಮಾಹಿತಿ ನಿಮಗೆ ಸಿಗಲಿದೆ ಎಂದು ಮಾಹಿತಿ ನೀಡಿದರು. ನಿಮ್ಮ ಹೆಸರು ಮತದಾರರ ಪಟ್ಟಿಯಲ್ಲಿದ್ದು, ನೀವು ಮತದಾನ ಮಾಡದಿರುವುದು ತಪ್ಪಾಗುತ್ತದೆ. ಇನ್ನು ನೀವು ಆಮೀಷಕ್ಕೊಳಗಾಗಿ ಮತದಾನ ಮಾಡಿದರೆ ಅದು ಅಪರಾಧವಾಗಲಿದೆ. ನಿಮಗೆ ಉತ್ತಮ ಅಭ್ಯರ್ಥಿಯನ್ನು ಆಯ್ಕೆ ಮಾಡುವ ವಿವೇಚನೆಯಿದ್ದು, ನಿಮ್ಮ ವಿವೇಚನೆಯಿಂದ ಮತದಾನ ಮಾಡಲು ತಿಳಿಸಿದರು. ಈ ವೇಳೆ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ಕಾಂತರಾಜು, ಮಹದೇವಪುರ ವಲಯ ಆಯುಕ್ತರಾದ ರಮೇಶ್, ವಲಯ ಜಂಟಿ ಆಯುಕ್ತರಾದ ದಾಕ್ಷಾಯಿಣಿ, ಕೃಪಾನಿಧಿ ಕಾಲೇಜಿನ ನಿರ್ದೇಶಕರಾದ ಡಾ. ಸ್ಯಾಮ್ ಫಾಲ್, ಉಪಾಧ್ಯಕ್ಷರಾದ ಗೀತಾ ನಾಗ್ವಾಲ್, 500ಕ್ಕೂ ಹೆಚ್ಚು ವಿದ್ಯಾರ್ಥಿಗಳು ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

### ಚುನಾವಣೆ ಸುಗಮವಾಗಿ ನಡೆಯಲು ಅಧಿಕಾರಿಗಳ ನಿಗಾ

ಚುನಾವಣೆಯ ಸಮಯದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಚುನಾವಣಾಧಿಕಾರಿಗಳು ಹಾಗೂ ಪೊಲೀಸ್ ಅಧಿಕಾರಿಗಳು ಎಲ್ಲಾ ಕಡೆ ನಿಗಾವಹಿಸಿ ಸಕ್ರಿಯವಾಗಿ ಕಾರ್ಯನಿರ್ವಹಿಸಲಿದ್ದಾರೆ. ನಿಮಗೇನಾದರು ಆಮೀಷದ ಕುರಿತು ಮಾಹಿತಿ ಲಭ್ಯವಾದಲ್ಲಿ ಕೂಡಲೆ ಸಿವಿಜಿಲ್ ತಂತ್ರಾಂಶದಲ್ಲಿ ಅಪ್ಲೋಡ್ ಮಾಡಿದರೆ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಸೂಕ್ತ ಕ್ರಮ ಕೈಗೊಳ್ಳಲಿದ್ದಾರೆ ಎಂದು ಹೇಳಿದರು.

### ನಿಮ್ಮ ಊರುಗಳಿಗೆ ತೆರಳಿ ಮತದಾನ ಮಾಡಿ

ನಿಮ್ಮ ಮತ ಬೆಂಗಳೂರಿನಲ್ಲಿ ಇಲ್ಲವಾದರೆ ನಿಮ್ಮ ಊರುಗಳಿಗೆ ತೆರಳಿ ಮತದಾನ ಚಲಾಯಿಸುವ ಮೂಲಕ ಪ್ರಜಾಪ್ರಭುತ್ವಕ್ಕೆ ಗೌರವ ತರುವ ಕೆಲಸ ಮಾಡಬೇಕು. ಈ ನಿಟ್ಟಿನಲ್ಲಿ ಎಲ್ಲರೂ ಮತದಾನದ ದಿನ ತಮ್ಮ–ತಮ್ಮ ಊರುಗಳಿಗೆ ತೆರಳಿ ತಪ್ಪದೆ ಮತದಾನ ಮಾಡಲು ಕೋರಿದರು.

# ನಾಳೆ ವಿಜಯಪುರಕ್ಕೆ ರಾಹುಲ್ ಗಾಂಧಿ: ಲಕ್ಷ ಜನ ಸೇರುವ ನಿರೀಕ್ಷೆ

**• ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ, ಮಲ್ಲಿಕಾಜುನ ಖರ್ಗೆ, ಸುರ್ಜೇವಾಲಾ, ಮುಖಂಡರ ಆಗಮನ**

• **ಉದಯವಾಹಿನಿ, ಮುದ್ದೇಬಿಹಾಳ**


ಉದಯವಾಹಿನಿ ಚಿತ್ರ

**ಮತಕ್ಷೇತ್ರದಿಂದ ಹತ್ತು ಸಾವಿರ ಜನ**

ಏ.26ರಂದು ವಿಜಯಪುರ ನಗರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ರಾಜು ಆಲಗೂರ ಪರ ಪ್ರಚಾರಕ್ಕಾಗಿ ಬರಲಿರುವ ಎಐಸಿಸಿ ವರಿಷ್ಠ ರಾಹುಲ್ ಗಾಂಧಿ ಅವರ ಕಾರ್ಯಕ್ರಮದಲ್ಲಿ ಜಿಲ್ಲೆಯ ಲಕ್ಷ ಜನ ಸೇರುವ ನಿರೀಕ್ಷೆ ಇದ್ದು ಮುದ್ದೇಬಿಹಾಳ ವಿಧಾನಸಭಾ ಮತಕ್ಷೇತ್ರದಿಂದ 10 ಸಾವಿರ ಜನರು ಪಾಲ್ಗೊಳ್ಳಲಿದ್ದಾರೆ ಎಂದು ಕೆಎಸ್‌ಡಿ ನಿಗಮದ ಅಧ್ಯಕ್ಷ, ಶಾಸಕ ಸಿ.ಎಸ್.ನಾಡಗೌಡ ಹೇಳಿದರು.

ಇಲ್ಲಿನ ಹುಡ್ಕೋದಲ್ಲಿರುವ ತಮ್ಮ ಗೃಹಕಚೇರಿಯಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಹುಲ್ ಅವರ ಜೊತೆಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾಜುನ ಖರ್ಗೆ, ಪಕ್ಷದ ಕರ್ನಾಟಕ ಉಸ್ತುವಾರಿ ಸುರ್ಜೇವಾಲಾ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ ಸೇರಿ ರಾಷ್ಟ್ರ, ರಾಜ್ಯದ ಹಲವು ಮುಖಂಡರು ಆಗಮಿಸಿ ಕೇಂದ್ರ ಸರ್ಕಾರದ ಮಲತಾಯಿ ಧೋರಣೆಯನ್ನು ಜನತೆಗೆ ತಿಳಿಸಿ ಹೇಳಲಿದ್ದಾರೆ ಎಂದರು.

ಮೊದಲ ಬಾರಿ ಲೋಕಸಭೆಗೆ ಸ್ಪರ್ಧಿಸಿರುವ ನಮ್ಮ ಪಕ್ಷದ ಅಭ್ಯರ್ಥಿ ರಾಜು ಆಲಗೂರ ಅವರು ಎರಡು ಬಾರಿ ಶಾಸಕರಾಗಿ, 10 ವರ್ಷ ಪಕ್ಷದ ಜಿಲ್ಲಾಧ್ಯಕ್ಷರಾಗಿ ಆಡಳಿತದ ಅನುಭವ ಇದ್ದವರು. ಪ್ರೊಫೇಸ್‌ರ್ ಆಗಿ ವಾಕ್ಚಾತುರ್ಯ ಪಡೆದವರು. ಯಾವುದೇ ಅಪರಾಧ ಹಿನ್ನೆಲೆ ಇಲ್ಲದಂಥವರು. ಅನ್ಯಾಯದ ವಿರುದ್ಧ ಧ್ವನಿ ಎತ್ತುವಂಥವರು. ವರ್ಗದ, ಸಮಾಜದ ಜನರೊಂದಿಗೆ ಉತ್ತಮ ಬಾಂಧವ್ಯ ಹೊಂದಿದವರು.

ನಾಗಠಾಣ ಮತಕ್ಷೇತ್ರಲ್ಲಿ ವಿಠ್ಠಲ ಕಟಕದೊಂಡ ಅವರಿಗಾಗಿ ತಮ್ಮ ಸ್ಪರ್ಧೆ ಬಿಟ್ಟುಕೊಟ್ಟಂಥವರು. ನಮ್ಮ ಭಾಗದ ನೀರಾವರಿ, ಪ್ರವಾಸೋದ್ಯಮ ಸೇರಿ ಹಲವು ಸಮಸ್ಯೆಗಳ ಅರಿವಿರುವ ಅವರು ಸಂಸತ್ತಿನಲ್ಲಿ ಪ್ರಭಲವಾಗಿ ಗಮನ ಸೆಳೆಯುವ ರೀತಿಯಲ್ಲಿ ಮಾತನಾಡುವಂಥವರು. ಇಂಥವರ ಅವಶ್ಯಕತೆ ಸಂಸತ್ತಿಗೆ ಇದ್ದು ಅವರ ಗೆಲುವು ನಿಶ್ಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ, ಕಾರ್ಯದರ್ಶಿ ಗೋಪಿ ಮಡಿವಾಳರ, ಎಐಸಿಸಿ ಸದಸ್ಯ ಬಾಪೂರಾಯ ದೇಸಾಯಿ ಹಡಗಲಿ ಇದ್ದರು.

> ಬಿಜೆಪಿ ಅಭ್ಯರ್ಥಿ ರಮೇಶ ಜಿಗಜಿಣಗಿ ವೈಯಕ್ತಿಕವಾಗಿ ಒಳ್ಳೆಯವರು. ನಾನು ಅವರೊಂದಿಗೆ ವೈಯುಕ್ತಿಕವಾಗಿ ಉತ್ತಮ ಉತ್ತಮ ಬಾಂಧವ್ಯ ಹೊಂದಿದ್ದೇನೆ. ಆದರೆ ಅವರಿಗೀಗ ವಯಸ್ಸಾಗಿದೆ. ಮೇಲಾಗಿ ಅವರು ಜನರ ಸಂಪರ್ಕದಿಂದ ದೂರಾಗುತ್ತಿದ್ದಾರೆ. ನನ್ನ ಮುಖ ನೋಡಿ ಯಾರು ವೋಟ್ ಹಾಕ್ತಾರೆ. ಮೋದಿ ಮುಖ ನೋಡಿ ವೋಟ್ ಹಾಕ್ತಾರೆ ಎಂದು ಅವರೇ ಹೇಳುತ್ತಿದ್ದಾರೆ. ಬಿಜೆಪಿಗೆ ಮೋದಿ ಒಬ್ಬರೇ ನಾಯಕರು. ಕಾಂಗ್ರೆಸ್ಸಿನಲ್ಲಿ ನಾಯಕರ ಪಟ್ಟಿಯೇ ಇದೆ. ಪ್ರಧಾನಿಯಾಗುವ ಅರ್ಹತೆ ಇದ್ದವರು ಬೇಕಾದಷ್ಟು ಜನ ಇದ್ದಾರೆ
> – ಸಿ.ಎಸ್.ನಾಡಗೌಡ, ಶಾಸಕ

**ಮೋದಿ ಬುದ್ದಿಗೇಡಿ:** ಪಂಚವಾರ್ಷಿಕ ಯೋಜನೆ ಜಾರಿಗೊಳಿಸಿ ಬಡವರು ಚಿನ್ನದ ತಾಳಿ ಕಟ್ಟಿಕೊಳ್ಳುವ ಶಕ್ತಿ ಕೊಟ್ಟಿದ್ದು ಕಾಂಗ್ರೆಸ್ ದಶಕಗಳ ಹಿಂದೆ ಬಡವರ ಕೊರಳಲ್ಲಿ ಹಿತ್ತಾಳೆಯ ತಾಳಿ ಇರುತ್ತಿತ್ತು. ಪ್ರಧಾನಿ ಮೋದಿ ಭಾಷಣವೊಂದರಲ್ಲಿ ಕಾಂಗ್ರೆಸ್ ಆಯ್ಕೆ ಮಾಡಿದರೆ ಬಡವರ ಚಿನ್ನದ ತಾಳಿ ಕಸಿದುಕೊಳ್ತಾರೆ ಎಂ ದು ಹೇಳಿದ್ದು ಬುದ್ದಿಗೇಡಿತನದ್ದು. ಇದು ದೇಶದಲ್ಲಿ ಹಿಂದು ಮುಸ್ಲಿಂರ ನಡುವೆ ಜಗಳ ಹಚ್ಚಲು ಹೂಡಿರುವ ಸಂಚಿನ ಭಾಗವಲ್ಲದೆ ಬೇರೇನೂ ಅಲ್ಲ. ಕಾಂಗ್ರೆಸ್ ಗೆದ್ದರೆ ಸಂಪತ್ತನ್ನು ಮುಸ್ಲೀಮರಿಗೆ ಹಂಚಿಕೆ ಮಾಡ್ತಾರೆ ಎಂದು ಅವರೇ ಹೇಳಿದ್ದು ಯಾರ ಸಂಪತ್ತನ್ನು ಯಾರೂ ಕಸಿದುಕೊಂಡು ಯಾರಿಗೂ ಹಂಚುವುದು ಸಾಧ್ಯವಿಲ್ಲ. ಆದರೆ ಸಂಪತ್ತು ಅಂಬಾನಿ, ಅದಾನಿ ಅಂಥವರ ಬಳಿ ಕೇಂದ್ರೀಕೃತವಾಗಿರುವುದನ್ನು ತಡೆಯಲು ಮೀಸಲಾತಿ ಅನ್ವಯ ಹಂಚಿಕೆಯ ಮಾತನ್ನು ನಮ್ಮ ನಾಯಕರು ಆಡಿರಬಹುದು ಎಂದು ನಾಡಗೌಡರು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು.

### ಮುಖ್ಯಮಂತ್ರಿ ಹುದ್ದೆ ಖಾಲಿ ಇಲ್ಲ

ಲೋಕಸಭೆ ಚುನಾವಣೆಯ ನಂತರ ಮುಖ್ಯಮಂತ್ರಿ ಬದಲಾಗ್ತಾರೆ ಅನ್ನೋದು ಸುಳ್ಳು. ಸಧ್ಯಕ್ಕೆ ನಮ್ಮಲ್ಲಿ ಮುಖ್ಯಮಂತ್ರಿ ಹುದ್ದೆ ಖಾಲಿ ಇಲ್ಲ. ಕಾಂಟ್ರೋವರ್ಷಿ ವಿಷಯಗಳಲ್ಲಿ ಬಗ್ಗೆ ಮಾತನಾಡಲು ನನಗೆ ಆಸಕ್ತಿ ಇಲ್ಲ. ಡಿಕೆಶಿ ಅವರು ಮುಖ್ಯಮಂತ್ರಿಯಾಗಬೇಕೆನ್ನುವ ಆಕಾಂಕ್ಷೆ ವ್ಯಕ್ತಪಡಿಸಿದ್ದು ಸಹಜ, ನನಗೂ ಮುಖ್ಯಮಂತ್ರಿ ಆಗಬೇಕೆನ್ನುವ ಆಸೆ ಇದೆ. ಆದರೆ ಪಕ್ಷದ ಹೈಕಮಾಂಡ್ ಹೇಳಿದಂತೆ ನಾವೆಲ್ಲ ಕೇಳಬೇಕು. ಸಚಿವ ಭೈರತಿ ಸುರೇಶ ಅವರು ಪ್ರಚಾರವೊಂದರಲ್ಲಿ ಮಾತನಾಡಿ ಚುನಾವಣೆ ಮುಗಿದ ಮೇಲೂ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿರಬೇಕೆಂದರೆ ಕಾಂಗ್ರೆಸ್ ಅಭ್ಯರ್ಥಿ ಗೆಲ್ಲಿಸಬೇಕೆಂದು ಹೇಳಿದ್ದು ಅವರ ವೈಯುಕ್ತಿಕ ವಿಚಾರ. ತಮ್ಮ ಸಮುದಾಯದ ಕಾಳಜಿಯಿಂದ ಅವರು ಹೇಳಿದ್ದಾರೆಯೇ ಹೊರತು ಬದಲಾವಣೆ ಏನೂ ಇಲ್ಲ ಎಂದು ಪ್ರಶ್ನೆಯೊಂದಕ್ಕೆ ನಾಡಗೌಡರು ಪ್ರತಿಕ್ರಿಯಿಸಿದರು.

---

## ಪಾರದರ್ಶಕವಾಗಿ ಬಡವರಿಗೆ ವಿತರಿಸಿದ ಮನೆಗಳು ಕಟ್ಟಿಕೊಳ್ಳಲು ಪ್ರೋತ್ಸಾಹಿಸಲು ಅಧ್ಯಕ್ಷೆ ಮನವಿ

• **ಉದಯವಾಹಿನಿ,ಚಿಂಚೋಳಿ**



ತಾಲ್ಲೂಕಿನ ಶಾಧಿಪೂರ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ವಿವಿಧ ಯೋಜನೆಯಡಿಯಲ್ಲಿ ಸರ್ಕಾರದ ನಿಯಮಾವಳಿಗಳ ಪ್ರಕಾರ ಬಡವರಿಗೆ ಪಾರದರ್ಶಕತೆಯಿಂದ ಅರ್ಹ ಫಲಾನುಭವಿಗಳಿಗೆ ವಿತರಿಸಿದ ಮನೆಗಳು ಕಟ್ಟಿಕೊಳ್ಳಲು ಪ್ರೋತ್ಸಾಹಿಸಬೇಕು ಎಂದು ಶಾಧಿಪೂರ ಗ್ರಾ.ಪಂ ಅಧ್ಯಕ್ಷೆ ಭಾರತಿ ರಾಜ್ ಪವ್ಹಾರ ಮನವಿ ಮಾಡಿದ್ದಾರೆ.

ಶಾಧಿಪೂರ ಗ್ರಾ.ಪಂ ಕೆಲ ಸದಸ್ಯರು ರಾಜಕೀಯ ಪ್ರೇರಿತವಾಗಿ ಸುಳ್ಳಿನಿಂದ ಕೂಡಿದ ಆರೋಪಗಳು ಮಾಡುತ್ತಾ ಕೆಲ ಸದಸ್ಯರ ನಕಲಿ ಸಹಿ ಮಾಡಿಕೊಂಡು ತಾಪಂ ಕಛೇರಿಗೆ ಆಗಮಿಸಿ 2021-22ರ ಬಸವ, ಅಂಬೇಡ್ಕರ್ ವಸತಿ ಯೋಜನೆಯಲ್ಲಿ ಸರ್ಕಾರದ ನಿಯಮ ಗಾಳಿಗೆ ತೂರಿ ಆಕ್ರಮವಾಗಿ ಮನೆಗಳು ಹಂಚಿಕೆ ಮಾಡಲಾಗಿದೆ ಎಂದು ಸುಳ್ಳು ದೂರು ಸಲ್ಲಿಸಿದ್ದು ಅದನ್ನು ಯಾವುದೇ ಕಾರಣಕ್ಕೂ ಉನ್ನತಮಟ್ಟದ ಅಧಿಕಾರಿಗಳು ನಂಬಬಾರದು, ನಕಲಿ ಸಹಿ ಮಾಡಿ ದೂರು ಸಲ್ಲಿಸಿದವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು 12ಜನ ಸದಸ್ಯರು ಸಹಿ ಮಾಡಿ ತಾಪಂ.ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮನವಿಪತ್ರ ಸಲ್ಲಿಸಿದರು. ನಾನು ಅಧ್ಯಕ್ಷೆಯಾದ ಮೇಲೆ ಗ್ರಾಮ ಪಂಚಾಯತ ಅಭಿವೃದ್ಧಿಗಾಗಿ ಒಂದು ಮುನ್ನೋಟ ಇಟ್ಟುಕೊಂಡು ಕಾರ್ಯಕ್ರಮ ರೂಪಿಸಿ ಅದರಂತೆ ಮೊದಲ ಬಾರಿಗೆ ವಿದ್ಯುತ್ ಉಪಕೇಂದ್ರ ಮತ್ತು ಸಾರ್ವಜನಿಕ ಆಸ್ಪತ್ರೆಯ ಮಂಜೂರಾತಿಗೆ ಪ್ರಯತ್ನಿಸಿದ್ದೇನೆ.

> ಉತ್ತಮ ಗುಣಮಟ್ಟದ ಗ್ರಂಥಾಲಯ ನಿರ್ಮಾಣಕ್ಕೂ ಪ್ರಯತ್ನಿಸುತ್ತಿದ್ದು ಹೀಗೆ ಹಲವಾರು ಸಾರ್ವಜನಿಕ ಉಪಯುಕ್ತ ಸೇವೆಗಾಗಿ ಜನರು ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ. ಇದನ್ನು ಸಹಿಸದ ಕೆಲವರು ನನ್ನ ವಿರುದ್ಧ ಷಡ್ಯಂತ್ರ ಮಾಡಲು ನೋಡುತ್ತಿರುವ ಒಂದು ಭಾಗವಾಗಿ ವಸತಿ ಯೋಜನೆಯ ಫಲಾನುಭವಿಗಳನ್ನು ಎಳೆದು ತರುತ್ತಿದ್ದಾರೆ
> –ಭಾರತಿ ರಾಜ್ ಪವ್ಹಾರ
> ಶಾಧಿಪೂರ ಗ್ರಾ.ಪಂ ಅಧ್ಯಕ್ಷೆ

## ಲಾಡ್‌ಗೆ ಅವಮಾನ; ಮರಾಠ ಸಮಾಜದಿಂದ ಪ್ರತಿಭಟನೆ


• **ಉದಯವಾಹಿನಿ, ಹುಬ್ಬಳ್ಳಿ**

ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರಿಗೆ, ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಅವಾಚ್ಯವಾಗಿ ನಿಂದಿಸಿದ್ದು, ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು' ಎಂದು ಆಗ್ರಹಿಸಿ ಮರಾಠ ಸಮಾಜ ಸೇರಿದಂತೆ ವಿವಿಧ ಸಂಘಟನೆಗಳು ಬುಧವಾರ ನಗರದಲ್ಲಿ ಪ್ರತಿಭಟನೆ ನಡೆಸಿದವು. ನಗರದ ಚನ್ನಮ್ಮ ವೃತ್ತದಲ್ಲಿ ಒಂದೆಡೆ ಸೇರಿದ ಪ್ರತಿಭಟನಾಕಾರರು, ಬಿ.ವೈ. ವಿಜಯೇಂದ್ರ ಅವರ ಭಾವಚಿತ್ರ ದಹಿಸಿ ಆಕ್ರೋಶ ವ್ಯಕ್ತಪಡಿಸಿದರು. ನಂತರ ಚನ್ನಮ್ಮ ವೃತ್ತದಿಂದ ಮಿನಿವಿಧಾನ ಸೌಧದವರಗೆ ಮೆರವಣಿಗೆ ನಡೆಸಿ, ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದರು. ಬಿ.ವೈ. ವಿಜಯೇಂದ್ರ ಅವರು ಸಚಿವ ಲಾಡ್ ಅವರಿಗೆ ಕೀಳುಮಟ್ಟದ ಪದಗಳಿಂದ ನಿಂದಿಸಿದ್ದಾರೆ. ಅವರ ವ್ಯಕ್ತಿತ್ವಕ್ಕೆ ಹಾಗೂ ಸಾಂವಿಧಾನಿಕ ಸ್ಥಾನಕ್ಕೆ ಅಗೌರವ ತಂದಿದ್ದಾರೆ. ಅಲ್ಲದೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಅವಮಾನಿಸಿದ್ದಾರೆ. ತಕ್ಷಣ ಅವರ ವಿರುದ್ಧ ಪ್ರಕರಣ ದಾಖಲಿಸಿ, ಸೂಕ್ತ ಕ್ರಮ ಕೈಗೊಳ್ಳಬೇಕು' ಎಂದು ಆಗ್ರಹಿಸಿದರು.

ಮಯೂರ ಮೋರೆ, ಪ್ರೇಮನಾಥ ಚಿಕ್ಕತುಂಬಳ, ಗುರುನಾಥ ಉಳ್ಳಿಕಾಶಿ ಸೇರಿದಂತೆ ಸಂತೋಷ ಲಾಡ್ ಅಭಿಮಾನಿಗಳು, ಮರಾಠ ಸಮುದಾಯದವರು ಪಾಲ್ಗೊಂಡಿದ್ದರು.

## ಕಾಂಗ್ರೆಸ್ ಮಾಂಗಲ್ಯ ಕಿತ್ತುಕೊಳ್ಳುತ್ತೆ ಎನ್ನುವ ಮೋದಿಗೆ ನಾಚಿಕೆಯಾಗಬೇಕು

• **ಉದಯವಾಹಿನಿ, ಕಲಬುರಗಿ**



ಉದಯವಾಹಿನಿ ಚಿತ್ರ

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಮಾಂಗಲ್ಯ ಸೂತ್ರ ಕಿತ್ತುಕೊಳ್ಳುತ್ತದೆ ಎನ್ನುವ ಪ್ರಧಾನಿ ನರೇಂದ್ರ ಮೋದಿ ಅವರಿಗೆ ನಾಚಿಕೆಯಾಗಬೇಕು' ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ವಾಗ್ದಾಳಿ ನಡೆಸಿದರು.

ಅಫಜಲಪುರದಲ್ಲಿ ಕಾಂಗ್ರೆಸ್ ಅಭ್ಯರ್ಥಿ, ತಮ್ಮ ಅಳಿಯ ರಾಧಾಕೃಷ್ಣ ದೊಡ್ಡಮನಿ ಅವರ ಪರವಾಗಿ ಬುಧವಾರ ಮತಯಾಚನೆ ನಡೆಸಿ ಅವರು ಮಾತನಾಡಿದರು. ದೇಶದಲ್ಲಿ 50 ವರ್ಷ ಆಡಳಿತ ನಡೆಸಿದ ಕಾಂಗ್ರೆಸ್ ಯಾವ ಮಹಿಳೆಯ ಮಾಂಗಲ್ಯ ಸೂತ್ರ ಕಿತ್ತುಕೊಂಡಿದೆ? ಮಹಿಳೆಯರಿಗಾಗಿ ಹಲವಾರು ಯೋಜನೆಗಳನ್ನು ತಂದಿದೆ ಹೊರತು ಮಾಂಗಲ್ಯ ಸೂತ್ರ ಕಿತ್ತುಕೊಳ್ಳುವ ಕೆಲಸ ಮಾಡಿಲ್ಲ' ಎಂದರು.ನಮ್ಮ ಆಡಳಿತದಲ್ಲಿ ಭೂಸುಧಾರಣೆ, ಬ್ಯಾಂಕ್‌ಗಳ ರಾಷ್ಟ್ರೀಕರಣ ಮಾಡಿ, ಜನರಿಗೆ ಅನುಕೂಲ ಆಗುವಂತಹ ಯೋಜನೆಗಳನ್ನು ಕೊಟ್ಟಿದ್ದೇವೆ. ಪಾಕಿಸ್ತಾನ, ಚೀನಾ ಯುದ್ಧದ ವೇಳೆ ಇಂದಿರಾಗಾಂಧಿ, ಸೋನಿಯಾ ಗಾಂಧಿ ಅವರು ತಮ್ಮ ಒಡವೆ, ಆಸ್ತಿಯನ್ನು ದೇಶಕ್ಕಾಗಿ ಕೊಟ್ಟಿದ್ದಾರೆ. ಬಿಜೆಪಿಯವರ ಮನೆಯ ಒಂದು ಇಲಿಯೂ ದೇಶಕ್ಕಾಗಿ ಪ್ರಾಣತ್ಯಾಗ ಮಾಡಿಲ್ಲ' ಎಂದು ಹೇಳಿದರು. ಸಿಕ್ಕ ಅಧಿಕಾರವನ್ನು ಜನರ ಹಿತಕ್ಕಾಗಿ ಬಳಸಿಕೊಳ್ಳಬೇಕು. ಆದರೆ ಪ್ರಧಾನಿ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಸೇರಿಕೊಂಡು ದೇಶವನ್ನು ಮಾರುತ್ತಿದ್ದಾರೆ. ಅತ್ತ ಅಂಬಾನಿ ಮತ್ತು ಅದಾನಿ ಇಬ್ಬರೂ ಖರೀದಿ ಮಾಡುತ್ತಿದ್ದಾರೆ' ಎಂದು ಟೀಕಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರಾದ ಡಾ.ಶರಣಪ್ರಕಾಶ ಪಾಟೀಲ, ಪ್ರಿಯಾಂಕ್ ಖರ್ಗೆ, ಕೆಕೆಆರ್‌ಡಿಬಿ ಅಧ್ಯಕ್ಷ ಡಾ.ಅಜಯ್ ಸಿಂಗ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

---

## ಪ್ಲಾಸ್ಟಿಕ್ ಮುಕ್ತವಾಗಿ ಮಾಡಲು ಸಂಕಲ್ಪ ಮಾಡೋಣ

• **ಉದಯವಾಹಿನಿ, ಚಿತ್ರದುರ್ಗ**


ಉದಯವಾಹಿನಿ ಚಿತ್ರ

ಗಿಡ ನೆಡುವುದು, ಪ್ಲಾಸ್ಟಿಕ್ ತ್ಯಜಿಸುವುದು, ತ್ಯಾಜ್ಯವನ್ನು ಮರುಬಳಕೆ, ಭೂ ಸಂರಕ್ಷಣೆಗೆ ಜಾಗೃತಿ ಮೂಡಿಸುವುದು. ಪರಿಸರ ಮಾಲಿನ್ಯ ತಡೆ, ಪ್ರಾಣಿ ಪಕ್ಷಿಗಳ ರಕ್ಷಣೆ, ಮರಕಡಿತ ತಡೆ ಇಂತಹ ಕಾರ್ಯಗಳನ್ನು ಮಾಡುವ ಮೂಲಕ ಭೂಮಿಯನ್ನ ಕಾಪಾಡಲು ಪ್ರತಿಯೊಬ್ಬರೂ ವೈಯಕ್ತಿಕ ಜವಾಬ್ದಾರಿಗಳನ್ನು ಅನುಸರಿಸಬೇಕು, ಪ್ಲಾಸ್ಟಿಕ್ ಮುಕ್ತವಾಗಿ ಮಾಡಲು ಸಂಕಲ್ಪ ಮಾಡೋಣ ಎಂದು ನಗರಸಭೆ ಆಯುಕ್ತರಾದ ಎಂ. ರೇಣುಕಾ ಹೇಳಿದರು.

ಋಷಿಸಂಸ್ಕೃತಿ ಗುರುಕುಲ ಮಹಾಸಂಸ್ಥಾನ, ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ, ಕರ್ನಾಟಕ ರಾಜ್ಯ ಶಿಕ್ಷಣ ಪರಿಷತ್ತು ವತಿಯಿಂದ ಚಿತ್ರದುರ್ಗ ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ವಿಶ್ವ ಭೂಮಿ ದಿನಾಚರಣೆ ಮತ್ತು ಭೂಮಿಸಂರಕ್ಷಣೆಯಲ್ಲಿ ವಿದ್ಯಾರ್ಥಿಗಳ ಪಾತ್ರ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ನಗರಸಭೆ ಇಂತಹ ಕಾರ್ಯಕ್ರಮಗಳಿಗೆ ಸದಾ ಸಹಕಾರ ನೀಡುತ್ತದೆ. ಪ್ಲಾಸ್ಟಿಕ್ ನಿಷೇದ ಮತ್ತು ಜಲ ಸಂರಕ್ಷಣೆ, ಗಿಡಬೆಳೆಸುವುದು, ಭೂಮಿ ರಕ್ಷಣೆ ಬಗ್ಗೆ ಪ್ರಬಂಧ ಸ್ಪರ್ಧೆ ಮಾಡಲಾಗುವುದು. ಅದರಲ್ಲೂ ಮಹಿಳೆಯರು ಇರುವ ಈ ಕಾಲೇಜಿನಲ್ಲಿ ಅದು ಪರಿಣಾಮಕಾರಿಯಾಗಿರಲಿ ಎಂದರು.

ಭೂಮಿಯ ಸುರಕ್ಷತೆಯಲ್ಲಿ ಪರಿಸರವು ಪ್ರಮುಖ ಪಾತ್ರ ವಹಿಸುತ್ತದೆ. ಜಲ, ವಾಯು ಮಾಲಿನ್ಯ, ಅರಣ್ಯನಾಶ ಹಾಗೂ ಇನ್ನೂ ಹಲವು ಪ್ರಮುಖ ಸಮಸ್ಯೆಗಳ ಬಗ್ಗೆ ಜನರು ಒಟ್ಟಾಗಿ ಮಾತನಾಡಬೇಕು, ಅಲ್ಲದೆ ಈ ಬಗ್ಗೆ ಜನರಲ್ಲಿ ಸ್ವಯಂ ಜಾಗೃತಿ ಮೂಡಬೇಕು ಎಂಬುದು ಈ ದಿನದ ಮಹತ್ವವಾಗಿದೆ. ನಗರದಲ್ಲಿ ಮರ ಕಡಿಯುವವರ ಮೇಲೆ ಎಫ್‌ಐಆರ್ ದಾಖಲಿಸಲಾಗುತ್ತದೆ ಎಂದರು. ಚುನಾವಣಾ ಹಿನ್ನೆಲೆಯಲ್ಲಿ ಯುವ ಮತದಾರರು ಕಡ್ಡಾಯವಾಗಿ ಮತ ಹಾಕಿ ಮತ್ತು ಮತದಾನದಿಂದ ದೂರ ಉಳಿಯುವುದನ್ನು ತಪ್ಪಿಸಿ ಗ್ರಾಮೀಣ ಮತ್ತು ನಗರದಲ್ಲಿ ಮತ ಪ್ರಮಾಣ ಹೆಚ್ಚಬೇಕು ಎಂದು ಆಯುಕ್ತರು ಉದಾಹರಣೆ ಸಮೇತ ಮಾಹಿತಿಯನ್ನು ಹಂಚಿಕೊಂಡರು.

ಪ್ರಾಸ್ತಾವಿಕ ಮಾತನಾಡಿದ ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ರಾಜ್ಯ ಪ್ರಧಾನ ಕಾರ್ಯದರ್ಶಿ ಮಾಲತೇಶ್ ಅರಸ್ , ಪರಿಸರವನ್ನು ರಕ್ಷಿಸುವ ತೀವ್ರ ಅಗತ್ಯತೆ ನಮ್ಮಮೇಲಿದೆ. ಮಿತಿಮೀರಿದ ಜನಸಂಖ್ಯೆ, ಜೀವವೈವಿಧ್ಯತೆಯ ನಷ್ಟ, ಓಝೋನ್ ಪದರದ ಸವಕಳಿ, ಹೆಚ್ಚುತ್ತಿರುವ ಮಾಲಿನ್ಯ, ಜಾಗತಿಕ ತಾಪಮಾನ ಏರಿಕೆ, ಇವೇ ಮುಂತಾದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಮತ್ತು ಸಮಕಾಲೀನ, ಹೊಸ ಪೀಳಿಗೆಯಲ್ಲಿ ಜಾಗೃತಿ ಮೂಡಿಸುವ ಉದ್ದೇಶವನ್ನು ಈ ದಿನ ಒಳಗೊಂಡಿದೆ ಎಲ್ಲರೂ ಮಾತೃಭೂಮಿಯ ಮಕ್ಕಳಾಗಿ ಪರಿಸರ ವೃದ್ದಿಸೋಣ. ಋಷಿಸಂಸ್ಕೃತಿ ಗುರುಕುಲ ಮಹಾಸಂಸ್ಥಾನದಿಂದ ರಾಜ್ಯಾದ್ಯಂತ ಗ್ರೀನ್ ಕರ್ನಾಟಕ ಟೀಮ್ ರಚನೆ ಮಾಡಿದ್ದು ಹಸಿರು ಸಮೃದ್ಧವಾಗಲು ಎಲ್ಲರೂ ಕೈ ಜೋಡಿಸಿ ಎಂದರು. ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಕನ್ನಡ ವಿಭಾಗದ ಮುಖ್ಯಸ್ಥ ಡಾ. ಮಂಜುನಾಥ್ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಗ್ರೀನ್ ಕರ್ನಾಟಕ ಟೀಮ್ ಕಮಿಷನರ್ ಡಾ.ಎಂ.ಸಿ.ನರಹರಿ, ವಾಣಿಜ್ಯ ವಿಭಾಗದ ಮುಖ್ಯಸ್ಥ ಡಾ. ಚನ್ನಕೇಶವ, ಡಾ.ಮಧು, ಶಿವಣ್ಣ, ಕುಮಾರಸ್ವಾಮಿ, ಶಕುಂತಲಾ ಮತ್ತು ವಿವಿಧ ವಿಭಾಗದ ಉಪನ್ಯಾಸಕರು, ವಿದ್ಯಾರ್ಥಿಗಳು ಇದ್ದರು

> ಕರ್ನಾಟಕ ರಾಜ್ಯ ಶಿಕ್ಷಣ ಪರಿಷತ್ತು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗೀತಾ ಭರಮಸಾಗರ ಅವರು ಭೂಮಿ ಸಂರಕ್ಷಣೆಯಲ್ಲಿ ವಿದ್ಯಾರ್ಥಿಗಳ ಪಾತ್ರ ಕುರಿತು ಉಪನ್ಯಾಸ ನೀಡುತ್ತಾ, ಜೀವಿಗಳು ವಾಸಿಸಲು ಯೋಗ್ಯವಾದ ಒಂದೇ ಒಂದು ಸ್ಥಳ ಭೂಮಿ. ಹಾಗಾಗಿ ಭೂಮಿಗೆ ತಾಯಿ ಸ್ಥಾನ ನೀಡಲಾಗಿದೆ. ಆದರೆ, ಈಗ ಆ ಮಾತಿನ ಅರ್ಥ ಕಳೆದು ಕೊಳ್ಳುತ್ತಿದೆ. ನೀರು, ವಾಯು ಮಾಲಿನ್ಯವಾಗುತ್ತಿವೆ. ಪ್ರಾಣಿಗಳು ಅಳಿವಿನಂಚಿಗೆ ತಲುಪಿವೆ. ಇದೆಲ್ಲ ಆಗಿದ್ದು ಮನುಷ್ಯ ತನ್ನ ಶ್ರೀಮಂತಿಕೆಯ ದಾಹದಿಂದ. ಭೂಮಿ ಎಚ್ಚರಿಕೆಕೊಡುತ್ತಿದೆ. ವಿದ್ಯಾರ್ಥಿಗಳು ಪರಿಸರ ಉಳಿಸುವ ಕಾಯಕ ಮಾಡೋಣ
> – ಎಂ. ರೇಣುಕಾ, ನಗರಸಭೆ ಆಯುಕ್ತ

---

## ಐದು ದಿನಗಳ: ವಿಶ್ವಗುರು ಬಸವಣ್ಣನವರು ಜಯಂತಿ ಉತ್ಸವ

• **ಉದಯವಾಹಿನಿ, ಸಿಂಧನೂರು**



ಉದಯವಾಹಿನಿ ಚಿತ್ರ

ವಿಶ್ವಗುರು ಬಸವಣ್ಣನವರು ಜಯಂತಿಯನ್ನು ಭಕ್ತಿ ಶ್ರದ್ಧೆಯಿಂದ ಕಾರ್ಯಕ್ರಮವನ್ನು ಮೇ 05 ರಂದು 10 ದಿನಾಂಕದ ವರಿಗೆ ಪ್ರತಿ ದಿನ ಸಂಜೆ 6.30 ರಿಂದ 8.30 ವರಗೆ ನಗರದ ಆರ್.ಜೆ.ಎಮ್. ಶಾಲಾ ಮೈದಾನದಲ್ಲಿ ಪ್ರವಚನ ಕಾರ್ಯಕ್ರಮವು ನಡೆಯುವುದು ಎಂದು ಜಿಲ್ಲಾ ಬಸವ ಕೇಂದ್ರ ಅಧ್ಯಕ್ಷ ಪಿ. ವೀರಭದ್ರಪ್ಪ ಕುರುಕುಂದಿ ಅವರು ತಿಳಿಸಿದರು


ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು ಸಿಂಧನೂರು ನಗರದಲ್ಲಿ ಕಳೆದ 25 ವರ್ಷಗಳಿಂದ ಸತತವಾಗಿ ಬಸವ ಜಯಂತಿ ಉತ್ಸವದಲ್ಲಿ ಬಸವಾದಿ ಶರಣರ ದೇವರ ಕಲ್ಪನೆ ಅನುಭವ ಮಂಟಪ ಲೋಕ ಕಲ್ಯಾಣ ಸಂಸ್ಥೆ ಕಾಯಕ -ದಾಸೋಹಗಳು ಹಿರಿಮೆ ಸ್ವರ್ಗ- ನರಕ. ಪಾಪ -ಪುಣ್ಯ. ಭವಿ- ಭಕ್ತಿ. ಮೇಲು -ಕೀಳು. ಕುಲ- ಗೋತ್ರಗಳು. ಮತ್ತು ಸ್ತ್ರೀ-ಪುರುಷ ಬಗ್ಗೆ ಶರಣರು ಚಿಂತನೆಗಳು ಕುರಿತು ಇತ್ಯಾದಿ ಗಳು ಪ್ರವಚನ ಏರ್ಪಡಿಸಲಾಗುವುದು ಎಂದರು. ಪ್ರವಚನಕಾರರಾದ. ಶ್ರೀ ಮಲ್ಲಿಕಾರ್ಜುನ ಮಹಾಸ್ವಾಮಿಗಳು ವಿರಕ್ತಮಠತಿ ಕೋಟ (ವಿಜ ಯಪುರ). ಶ್ರೀ ಮಹಾಲಿಂಗ ಮಹಾಸ್ವಾಮಿಗಳು. ಸುವರ್ಣ ಗಿರಿ ವಿರಕ್ತಮಠ ಯದ್ದಲದೊಡ್ಡಿ. ಅವರು ನೇತೃತ್ವದಲ್ಲಿ. ವಚನ ಸಂಗೀತ. ಶರಣ ಶ್ರೀ ಬಸವರಾಜ ಮೋತಿ ಕು. ಪುಟ್ಟರಾಜ ಮೋತಿ, ಸಂಗಡಿಗರು ಸಿಂಧನೂರು. ಶರಣ ಶ್ರೀ ನಾರಾಯಣಪ್ಪ ಮಾಡಿಸಿರುವಾರ ತತ್ವಪದಕಾರರು, ಸಂಗಡಿಗರು. ಶರಣ ಶ್ರೀ ಅಮ ರೇಗೌಡ ಮಾ. ಪಾ., ಲಿಂಪಂಪನ ಗೌಡ್ರು, ಸಂಗೀತ ಬಳಗ ವಗರನಾಳ ಭಾಗವಹಿಸುವವರು.

ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ. ಶಾಂತಿ ನೆಮ್ಮದಿ ಸೌಹಾರ್ದತೆ ಸಹಬಾಳ್ವೆ ದೊಂದಿಗೆ ಸಾಗೋಣ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಸವ ಲಿಂಗಪ್ಪ ಬಾದರ್ಲಿ, ನಿಜಗುಣ ಶಾಂತಪ್ಪ, ಬೀರಪ್ಪ ಸಂಬೋಜಿ, ಗುಂಡಪ್ಪ ಬಳೆಗಾರ, ಹಂಪಣ್ಣ ಹಡಪದ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ನಾನು ಸತ್ತಾಗ ಸುಟ್ಟರೆ ಮೇಣದ ಬತ್ತಿ ಹಚ್ಚಿ ಹೂಳಿದ್ರೆ ಮಣ್ಣು ಹಾಕಿ: ಮಲ್ಲಿಕಾರ್ಜುನ ಖರ್ಗೆ

• **ಉದಯವಾಹಿನಿ, ಕಲಬುರಗಿ**



ನಾನು ಸತ್ತಾಗ ಸುಟ್ಟರೆ ಮೇಣದ ಬತ್ತಿ ಹಚ್ಚೋಕೆ ಬನ್ನಿ. ಮಣ್ಣಲ್ಲಿ ಹೂಳಿದ್ರೆ ಮಣ್ಣು ಹಾಕೋಕೆ ಬನ್ನಿ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದರು.ಅಫಜಲಪುರದಲ್ಲಿ ನಡೆದ ಕಾಂಗ್ರೆಸ್ ಪ್ರಚಾರ ಸಮಾವೇಶದಲ್ಲಿ ಮಾತನಾಡಿದ ಅವರು, ನನಗೆ ಕಳೆದ ಬಾರಿ ಸೋಲಾಯ್ತು ಆಗಲಿ.ಸೋಲಾದ್ರು ದೊಡ್ಡ ಸ್ಥಾನ ಸಿಕ್ಕಿದೆ ಎಂದು ತಿಳಿಸಿದರು.

ನಿಮ್ಮ ವೋಟು ನನಗೆ ತಪ್ಪಿದ್ರೆ ನಿಮ್ಮ ಹೃದಯ ಗೆಲ್ಲೋದಕ್ಕೆ ನನಗೆ ಸಾಧ್ಯ ಆಗಲಿಲ್ಲ ಅಂತ ತಿಳಿದುಕೊಳ್ತೇನೆ. ಮತ ಹಾಕೋಕೆ ಬರದೆ ಇದ್ದರೂ ಕೂಡ, ನಾನು ಸತ್ತ ಮೇಲೆ ಮಣ್ಣಿಗೆ ಬರಬೇಕು ನೀವು. ನಾವು ಸತ್ತರೆ ನಮ್ಮ ಕೆಲಸ ನೆನೆಸಿಕೊಂಡು ಮಣ್ಣು ಹಾಕೋಕೆ ಬನ್ನಿ. ನಾನು ಸತ್ತಾಗ ಸುಟ್ಟರೆ ಮೇಣದ ಬತ್ತಿ ಹಚ್ಚೋಕೆ ಬನ್ನಿ, ಹೂಳಿದ್ರೆ ಮಣ್ಣು ಹಾಕೋಕೆ ಬನ್ನಿ. ಆವಾಗ ನೋಡಪ್ಪ ಆತನ ಮಣ್ಣಿಗೆ ಎಷ್ಟು ಜನ ಬಂದ್ರು ಅಂತಾನಾದ್ರು ಹೇಳಬೇಕು ಎಂದು ಹೇಳಿದರು. ನಾನು ಪ್ರಧಾನಿ ಆದ್ರೆ ಪ್ರತಿ ವರ್ಷ ಎರಡು ಕೋಟಿ ನೌಕರಿ ಕೊಡ್ತೆನೆ ಅಂತ ಹೇಳಿದ್ರು.

> ಸಿಕ್ಕಿದೆಯಾ ನೌಕರಿ ಯಾರಿಗಾದ್ರು? 15 ಲಕ್ಷ ರೂಪಾಯಿ ಕೊಟ್ಟರಾ ಮೋದಿ? ಅವರು ಬಂದರೆ ಕೇಳ ಬೇಕು. ಕಾಂಗ್ರೆಸ್ ಅವರ ಬಳಿಯಿದ್ದ ಹಣ ತಂದು ಎಲ್ಲಿಟ್ಟಿದ್ದಿರಿ ಅಂತ ಕೇಳಿ. ಸಾಲಮನ್ನಾ ಆದರೂ ಮಾಡಿದ್ರಾ? ರಾಜ್ಯದಲ್ಲಿ ಸಿದ್ದರಾಮಯ್ಯ, ಕೇಂದ್ರದಲ್ಲಿ ಮನಮೋಹನ್ ಸಿಂಗ್ ಮಾಡಿರೋದು
> –ಮಲ್ಲಿಕಾರ್ಜುನಖರ್ಗೆ, ಎಐಸಿಸಿ ಅಧ್ಯಕ್ಷ

---

# ಜನ ಸೇವಕನಾಗಿ ದುಡಿಯಲು ನನಗೊಂದು ಅವಕಾಶ ಕೊಡಿ

**ಕಾಂಗ್ರೆಸ್ ಪಕ್ಷ ಆರೋಗ್ಯ ಭಾಗ್ಯ ಘೋಷಣೆ, ಸುಮಾರು 25 ಲಕ್ಷ ದವರೆಗೆ ಒಬ್ಬ ವ್ಯಕ್ತಿಗೆ ಚಿಕಿತ್ಸಾ ವೆಚ್ಚ ಭರಿಸಲಾಗುವುದು**

• **ಉದಯವಾಹಿನಿ, ಧಾರವಾಡ**


ಉದಯವಾಹಿನಿ ಚಿತ್ರ

**ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ**

ಲೋಕಸಭಾ ಚುನಾವಣೆ ಹಿನ್ನೆಲೆ ಅಬ್ಬರ ಪ್ರಚಾರ ರಾಜ್ಯದಲ್ಲಿ ಜೋರಾಗಿದೆ. ಧಾರವಾಡ ಲೋಕಸಭಾ ವ್ಯಾಪ್ತಿಯ ಕುರುಬಗಟ್ಟಿ, ಮಂಗಳಗಟ್ಟಿ ಗ್ರಾಮದಲ್ಲಿ ಕಾಂಗ್ರೆಸ್ ಅಭ್ಯರ್ಥಿ ವಿನೋದ್ ಅಸೂಟಿ ಅವರು ಬುಧವಾರ ಭರ್ಜರಿ ಪ್ರಚಾರ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಆರೋಗ್ಯ ಭಾಗ್ಯ ಘೋಷಿಸಿದೆ. ಸುಮಾರು 25 ಲಕ್ಷ ದವರೆಗೆ ಒಬ್ಬ ವ್ಯಕ್ತಿಗೆ ಚಿಕಿತ್ಸಾ ವೆಚ್ಚ ಭರಿಸಲಾಗುವುದು. ಇಂತಹ ಹಲವಾರು ಯೋಜನೆಗಳನ್ನು ಕಾಂಗ್ರೆಸ್ ಜಾರಿಗೆ ತರಲಿದೆ. ಬಡವರ ಬಗ್ಗೆ ಕಾಳಜಿಯಿರುವ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ಎಂದು ಮನವಿ ಮಾಡಿದರು.

ರಾಜಕೀಯ ತುಂಬಾ ಕಲುಷಿತಗೊಂಡಿದೆ. ಕೀಳು ಮಟ್ಟಕ್ಕೆ ಇಳಿದು ರಾಜಕೀಯ ಮಾಡಲಾಗುತ್ತಿದೆ. ರಾಜಕೀ ಯವೆಂದರೆ ಸೇವಕನಾಗಿ ಜನರ ಸೇವೆ ಮಾಡುವುದು. ಜನ ಸೇವಕನಾಗಿ ದುಡಿಯಲು ನನಗೊಂದು ಅವಕಾಶ ಕೊಡಿ ಎಂದು ಮನವಿ ಮಾಡಿದರು.

ಮಂಗಳಗಟ್ಟಿ ಗ್ರಾಮದ ಜಗದ್ಗುರು ರೇಣುಕಾಚಾರ್ಯ ಮಂಗಲ ಭವನ, ಶ್ರೀ ಬೀರಲಿಂಗೇಶ್ವರ ಮತ್ತು ಮರೆಮ್ಮದೇವಿ ದೇವಸ್ಥಾನಕ್ಕೆ ಭೇಟಿ ನೀಡಿ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ಶ್ರೀಮತಿ ಶಿವಲೀಲಾ ಕುಲಕರ್ಣಿ, ಈಶ್ವರ ಶಿವಳ್ಳಿ ಮತ್ತು ಪಕ್ಷದ ಹಿರಿಯರು, ಮಂಗಳಗಟ್ಟಿ ಗ್ರಾಮದ ಸಮಸ್ತ ಕಾರ್ಯಕರ್ತರು ಮತ್ತು ಯುವಕರು ಉಪಸ್ಥಿತರಿದ್ದರು.

ಹಾರೊಬೆಳವಡಿ ಗ್ರಾಮವನ್ನು ಸಂಸದರ ಆದರ್ಶ ಗ್ರಾಮ ಯೋಜನೆಯಡಿಯಲ್ಲಿ ಆಯ್ಕೆಮಾಡಿ ಸುಂದರ ಹಾಗೂ ಸ್ವಚ್ಛವಾದ ಗ್ರಾಮ ಮಾಡಬೇಕಿತ್ತು.

ಆದರೆ ಪ್ರಹ್ಲಾದ ಜೋಶಿ ಸಾಹೇಬರು ಆ ಹಳ್ಳಿಗೆ ಎಷ್ಟು ಸಲ ಭೇಟಿ ನೀಡಿ, ಎಷ್ಟು ಅನುದಾನ ತಂದು ಕೆಲಸ ಮಾಡಿ ದರೂ ಅವರೇ ಆತ್ಮವಿಮರ್ಶೆ ಮಾಡಿಕೊಳ್ಳಲಿ ಎಂದು ಧಾರವಾಡ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವಿನೋದ್ ಅಸೂಟಿ ವ್ಯಂಗ್ಯವಾಡಿದರು.

ಈ ಸಂದರ್ಭದಲ್ಲಿ ಶ್ರೀಮತಿ ಶಿವಲೀಲಾ ಕುಲಕರ್ಣಿ, ಅರವಿಂದ ಏಗನಗೌಡ್ರ, ಈಶ್ವರ ಶಿವಳ್ಳಿ, ಗಿರಿಮಲ್ಲಯ್ಯ ನಂದಿಕೋಲಮಠ, ಸಿದ್ದಪ್ಪ ಪ್ಯಾಟಿ ಮತ್ತು ಪಕ್ಷದ ಹಿರಿಯರು, ಮರೇವಾಡ ಗ್ರಾಮದ ಸಮಸ್ತ ಕಾರ್ಯಕರ್ತರು, ಯುವಕರು ಉಪಸ್ಥಿತರಿದ್ದರು.

> ತಿಮ್ಮಾಪೂರ ಹಾಗೂ ಮರೇವಾಡ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಧಾರವಾಡ ಲೋಕಸಭಾ ವ್ಯಾಪ್ತಿಯ ಧಾರವಾಡ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಮುಖಂಡರ ಮತ್ತು ಕಾರ್ಯಕರ್ತರ ಚುನಾವಣಾ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿದರು. ಸಂಸದರ ಆದರ್ಶ ಗ್ರಾಮ ಈ ಶಬ್ದಗಳು ನಿಮಗೆ ನೆನಪಿರಬೇಕು ಅಲ್ವಾ? ಇದು ಬಿಜೆಪಿಯ ಬಣ್ಣಬಣ್ಣದ ಯೋಜನೆಯ ಒಂದು ಹೆಸರಷ್ಟೇ. ಆದ್ದರಿಂದ ನುಡಿದಂತೆ ನಡೆದ ಕಾಂಗ್ರೆಸ್ ಪಕ್ಷ ಬೆಂಬಲಿಸಿ
> –ವಿನೋದ್ ಅಸೂಟಿ, ಕೈ ಅಭ್ಯರ್ಥಿ

### ಕಾಂಗ್ರೆಸ್ ಗೆಲ್ಲಿಸಿ ಸಂವಿಧಾನ ಉಳಿಸಿ: ವಿನೋದ್ ಅಸೂಟಿ

ಸದವಕಾಶಗಳು ಯಾವಾಗಲೂ ಬರುವುದಿಲ್ಲ. ಗ್ರಾಮದ ಎಲ್ಲಾ ಸಮುದಾಯದ ನಾಯಕರು, ಯುವಕರು ಒಗ್ಗಟ್ಟಾಗಿ ಚುನಾವಣೆಯಲ್ಲಿ ಕೆಲಸ ಮಾಡೋಣ. ಕಾಂಗ್ರೆಸ್ ಗೆಲ್ಲಿಸಿ ಸಂವಿಧಾನ ಉಳಿಸಿ ಎಂದರು. ಗೃಹಲಕ್ಷ್ಮಿ, ಗೃಹಜ್ಯೋತಿ ಮುಂತಾದ ಗ್ಯಾರಂಟಿಗಳನ್ನು ರಾಜ್ಯ ಸರ್ಕಾರ ಭರವಸೆ ಕೊಟ್ಟಂತೆ ಹತ್ತು ತಿಂಗಳೊಳಗೆ ಎಲ್ಲಾ ಈಡೇರಿಸಿದೆ. ಕೇಂದ್ರದ ಕಾಂಗ್ರೆಸ್ ನಾಯಕರು ಸುಮಾರು 25 ಗ್ಯಾರಂಟಿಗಳನ್ನು ತನ್ನ ಪ್ರಣಾಳಿಕೆಯಲ್ಲಿ ನೀಡಿದೆ. ಮುಂಬರುವ ದಿನಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ನೀವು ಅಧಿಕಾರ ನೀಡಿದರೆ ಖಂಡಿತವಾಗಿಯೂ ಎಲ್ಲಾ ಭರವಸೆಗಳನ್ನು ಜಾರಿಗೆ ತರುತ್ತೇವೆ.

---

## ಮಿನಿ ನ್ಯೂಸ್

### ಸಿಐಡಿ ತನಿಖೆ: ಸ್ಥಳ ಮಹಜರು ವೇಳೆ ಎಬಿವಿಪಿ ಪ್ರತಿಭಟನೆ

• **ಉದಯವಾಹಿನಿ, ಹುಬ್ಬಳ್ಳಿ**

ನೇಹಾ ಕೊಲೆ ಪ್ರಕರಣದ ಆರೋಪಿ ಫಯಾಜ್‌ನನ್ನು ಸ್ಥಳ ಮಹಜರು ಮಾಡಲು ಸಿಐಡಿ ಅಧಿಕಾರಿಗಳು ಬಿವಿಬಿ ಕಾಲೇಜಿಗೆ ಕರೆದೊಯ್ಯುವಾಗ, ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ಕಾರ್ಯಕರ್ತರು ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.ಫಯಾಜ್‌ನನ್ನು ಕರೆದುಕೊಂಡು ಬಂದ ಕಾರಿಗೆ ಮುತ್ತಿಗೆ ಹಾಕಲು ಯತ್ನಿಸಿದಾಗ, ಪೊಲೀಸರು ಕಾರ್ಯಕರ್ತರನ್ನು ತಡೆದರು.ಆ ವೇಳೆ ಪರಸ್ಪರ ವಾಗ್ವಾದ ನಡೆಯಿತು. ನಮ್ಮ ಕಾಲೇಜಿನ ಆವರಣದಲ್ಲಿ ಕೊಲೆ ನಡೆದಿದೆ. ಆರೋಪಿಗೆ ಶಿಕ್ಷೆಯಾಗಬೇಕು. ಪ್ರಕರಣದ ತನಿಖೆ ಸಿಬಿಐಗೆ ಒಪ್ಪಿಸಬೇಕು. ಇಲ್ಲದಿದ್ದರೆ, ಆರೋಪಿಯನ್ನು ನಮ್ಮ ಕೈಗೆ ಒಪ್ಪಿಸಿ' ಎಂದು ಕಾರ್ಯಕರ್ತರು ಆಗ್ರಹಿಸಿದರು. ಕಾವ್ಯಾ, ಮೌನೇಶ ಗೌಡ, ರಾಘವೇಂದ್ರ ಪೆದ್ದಾರ, ಶಶಿ, ಸುಪ್ರಿತ್ ಇದ್ದರು.

### ವಿದ್ಯಾರ್ಥಿನಿ ನೇಹಾ ಹತ್ಯೆ ಪ್ರಕರಣ ಆರೋಪಿ ಸಿಐಡಿ ಕಸ್ಟಡಿಗೆ

• **ಉದಯವಾಹಿನಿ, ಹುಬ್ಬಳ್ಳಿ**

ಹುಬ್ಬಳ್ಳಿಯಲ್ಲಿ ವಿದ್ಯಾರ್ಥಿನಿ ನೇಹಾ ಹಿರೇಮಠ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಂಗ ಬಂಧನದಲ್ಲಿದ್ದ ಆರೋಪಿಯನ್ನಿ ಸಿಐಡಿ ಕಸ್ಟಡಿಗೆ ವಹಿಸಿ ಕೋರ್ಟ್ ಆದೇಶ ನೀಡಿದೆ. ಹುಬ್ಬಳ್ಳಿ-ಧಾರವಾಡ ಒಂದನೇ ಜೆ ಎಂ ಎಫ್ ಸಿ ನ್ಯಾಯಾಲಯ ಆರೋಪಿ ಫಯಾಜ್ ನನ್ನು 6 ದಿನಗಳ ಕಾಲ ಸಿಐಡಿ ತನಿಖೆಗೆ ಒಪ್ಪಿಸಿ ಆದೇಶ ನೀಡಿದೆ.

ಕೆಲ ದಿನಗಳ ಹಿಂದೆ ಹುಬ್ಬಳ್ಳಿ-ಧಾರವಾಡ ಕಾರ್ಪೊರೇಟರ್ ನಿರಂಜನ ಹಿರೇಮಠ ಮಗಳು ನೇಹಾ ಹಿರೇಮಠಳನ್ನು ಬಿವಿಬಿ ಕಾಲೇಜು ಆವರಣದಲ್ಲಿಯೇ ದುಷ್ಕರ್ಮಿ ಫಯಾಜ್ ಚಾಕುವಿನಿಂದ ಇರಿದು ಬರ್ಬರವಾಗಿ ಹತ್ಯೆ ಮಾಡಿದ್ದ. ಬಂಧಿತ ಆರೋಪಿಯನ್ನು 14 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿತ್ತು. ಇದೀಗ ಪ್ರಕರಣದ ತನಿಖೆಯನ್ನು ರಾಜ್ಯ ಸರ್ಕಾರ ಸಿಐಡಿಗೆ ವರ್ಗಾಯಿಸಿದೆ. ಈ ಹಿನ್ನೆಲೆಯಲ್ಲಿ ಸಿಐಡಿ ಪೊಲೀಸರು ಆರೋಪಿಯನ್ನು ಕಸ್ಟಡಿಗೆ ಪಡೆದಿದ್ದಾರೆ.

### ಮತದಾನ ಜಾಗೃತಿ ಜಾಥಾ

• **ಉದಯವಾಹಿನಿ, ತಾವರಗೇರಾ**

ಮೇ 7 ರಂದು ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ಪ್ರತಿಯೊಬ್ಬರು ಮತದಾನ ಮಾಡುವಂತೆ ಜಾಗೃತಿ ಮೂಡಿಸಲಾಗುತ್ತಿದೆ ಎಂದು ತಹಶೀಲ್ದಾರ್ ರವಿ ಅಂಗಡಿ ಹೇಳಿದರು. ಪಟ್ಟಣ ಪಂಚಾಯಿತಿ ಆವರಣದಲ್ಲಿ ಜಿಲ್ಲಾ ಸ್ವಿಪ್ ಸಮಿತಿ, ತಾಲ್ಲೂಕು ಚುನಾವಣಾಧಿಕಾರಿಗಳ ಕಾರ್ಯಾಲಯ, ಸ್ಥಳೀಯ ಪ.ಪಂ ಆಡಳಿತ ಆಶ್ರಯದಲ್ಲಿ ಮಂಗಳವಾರ ನಡೆದ ನಮ್ಮ ಹಕ್ಕು ನಮ್ಮ ಮತದಾನ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸ್ಥಳೀಯ ಪಪಂ ಅಧಿಕಾರಿಗಳು, ಮತಗಟ್ಟೆ ಅಧಿಕಾರಿಗಳು ಮತ್ತು ವಿವಿಧ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಸಹಕಾರ, ಜಾಗೃತಿಯಿಂದ ಶೇ 90ಕ್ಕೂ ಹೆಚ್ಚು ಮತದಾನ ಗುರಿ ಹೊಂದಲಾಗಿದೆ.ಆದ್ದರಿಂದ ತಮ್ಮ ಮತವನ್ನು ಚಲಾಯಿಸಬೇಕು ಎಂದು ಹೇಳಿದರು.

ನಂತರ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಜಾಥಾ ಸಂಚಾರ ಮಾಡುವ ಮೂಲಕ ಜಾಗೃತಿ ಮೂಡಿಸಲಾಯಿತು. ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ನಬಿಸಾಬ ಖುದನ್ನವರ, ನಾಡ ತಹಶೀಲ್ದಾರ್ ಪ್ರಕಾಶ, ಕಂದಾಯ ನಿರೀಕ್ಷಕ ಶರಣಪ್ಪ ದಾಸರ, ಮತ್ತು ಮತಗಟ್ಟೆ ಅಧಿಕಾರಿಗಳು, ಶಿಕ್ಷಣ ಇಲಾಖೆ, ಆರೋಗ್ಯ ಇಲಾಖೆ ಸಿಬ್ಬಂದಿ, ಜೆಸ್ಕಾಂ ಸಿಬ್ಬಂದಿ, ಅಂಗನವಾಡಿ, ಆಶಾ ಕಾರ್ಯಕರ್ತೆಯರು, ಪ.ಪಂ ಸಿಬ್ಬಂದಿ ಹಾಜರಿದ್ದರು.

### ಇಂದು ಹಿರೇಕೆರೂರು ಪಟ್ಟಣದಲ್ಲಿ ಬೊಮ್ಮಾಯಿ ರೋಡ್ ಶೋ

• **ಉದಯವಾಹಿನಿ, ಹಿರೇಕೆರೂರು**

ಹಿರೇಕೆರೂರು ಹಾಗೂ ರಟ್ಟೀಹಳ್ಳಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಹಾವೇರಿ- ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವ ರಾಜ ಬೊಮ್ಮಾಯಿ ಅವರು ಏ.25ರಂದು ಪ್ರಚಾರ ಸಭೆ ಹಾಗೂ ಹಿರೇಕೆರೂರು ಪಟ್ಟಣದಲ್ಲಿ ಮಧ್ಯಾಹ್ನ 3.30ಕ್ಕೆ ರೋಡ್ ಶೋ ಮೂಲಕ ಮತಯಾಚನೆ ಮಾಡುವರು ಎಂದು ಮಾಜಿ ಸಚಿವ ಬಿ.ಸಿ.ಪಾಟೀಲ ತಿಳಿಸಿದರು. ಪಟ್ಟಣದ ತಮ್ಮ ನಿವಾಸದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 25ರಂದು ಬೆಳಿಗ್ಗೆ ರಟ್ಟೀಹಳ್ಳಿ ತಾಲ್ಲೂಕಿನ ಮಕರಿ ಗ್ರಾಮ, ನಾಗವಂದ ಗ್ರಾಮದಲ್ಲಿ ಮತ್ತು ಮಧ್ಯಾಹ್ನ ಹಿರೇಕೆರೂರು ತಾಲ್ಲೂಕಿನ ನೀಡನೇಗಿಲು ಗ್ರಾಮದಲ್ಲಿ ಚುನಾವಣಾ ಪ್ರಚಾರ ನಡೆಸುವರು ಎಂದು ಹೇಳಿದರು. ಮಧ್ಯಾಹ್ನ ಹಿರೇಕೆರೂರು ಪಟ್ಟಣದ ವಕೀಲರ ಭವನದಲ್ಲಿ ನ್ಯಾಯವಾದಿ ಸಂಘದದೊಂದಿಗೆ ಸಭೆ, ಮಹಿಳಾ ಮುಖಂಡರ ಸಭೆ ಹಾಗೂ ತಾಲ್ಲೂಕಿನ ಎಲ್ಲಾ ಸಮಾಜದ ಪ್ರಮುಖರ ಸಭೆ ನಡೆಸುವರು. ನಂತರ ತಾಲ್ಲೂಕಿನ ಎಲ್ಲಾ ಗ್ರಾಮಗಳ ಬಿಜೆಪಿ ಕಾರ್ಯಕರ್ತರೊಂದಿಗೆ ರೋಡ್ ಶೋ ಮೂಲಕ ಮತಯಾಚನೆ ಮಾಡುವರು ಎಂದರು. ರೋಡ್ ಶೋ ನಮ್ಮ ನಿವಾಸದಿಂದ ಪಟ್ಟಣದ ಮುಖ್ಯ ರಸ್ತೆಯ ಮೂಲಕ ಜಿ.ಬಿ.ಶಂಕರರಾವ್ ವೃತ್ತದ ವರೆಗೆ ನಡೆಯಲಿದೆ ಎಂದು ತಿಳಿಸಿದರು. ಟಿಪಿಎಂಎಸ್ ಅಧ್ಯಕ್ಷ ಎಸ್.ಎಸ್.ಪಾಟೀಲ, ಬಿಜೆಪಿ ತಾಲ್ಲೂಕು ಮಂಡಲ ಅಧ್ಯಕ್ಷ ಶಿವಕುಮಾರ ತಿಪ್ಪಶೆಟ್ಟಿ, ಕೆ.ಜೆ.ಪ್ರತಾಪ್, ಹೊನ್ನಪ್ಪ ಸಾಲಿ ಇದ್ದರು.

### 28ರಂದು ದಾವಣಗೆರೆಗೆ ಪ್ರಧಾನಿ

• **ಉದಯವಾಹಿನಿ, ದಾವಣಗೆರೆ**

ಪ್ರಧಾನಿ ನರೇಂದ್ರ ಮೋದಿ ಅವರು ಏಪ್ರಿಲ್ 28 ರಂದು ದಾವಣಗೆರೆ ಜಿ ಲ್ಲೆಗೆ ಆಗಮಿಸಲಿದ್ದು, ದಾವಣಗೆರೆ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗಾಯತ್ರಿ ಸಿದ್ದೇಶ್ವರ ಹಾಗೂ ಹಾವೇರಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಅವರ ಪರ ಪ್ರಚಾರ ನಡೆಸಲಿದ್ದಾರೆ.ಅಂದು ಮಧ್ಯಾಹ್ನ 1ಕ್ಕೆ ಇಲ್ಲಿನ ಹೈಸ್ಕೂ ಲ್ ಮೈದಾನದಲ್ಲಿ ನಡೆಯುವ ಸಮಾವೇಶದಲ್ಲಿ ಕಾರ್ಯಕರ್ತರನ್ನು ಉ ದ್ದೇಶಿಸಿ ಮಾತನಾಡುವರು. ನರೇಂದ್ರ ಮೋದಿ ಅವರು 5ನೇ ಬಾರಿಗೆ ದಾವಣಗೆರೆಗೆ ಆಗಮಿಸುತ್ತಿದ್ದು,ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ, ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ, ಹಾಗೂ ರಾಜ್ಯ ನಾಯಕರು ಪಾಲ್ಗೊಳ್ಳಲಿದ್ದಾರೆ.

ಮೋದಿ ಆಗಮನ ಕಾರ್ಯಕರ್ತರಲ್ಲಿ ಹೊಸ ಹುರುಪು ಮೂಡಿಸಿದ್ದು, ಗಾಯತ್ರಿ ಸಿದ್ದೇಶ್ವರ ಅವರನ್ನು ಹೆಚ್ಚಿನ ಅಂತರದಿಂದ ಗೆಲ್ಲಿಸುವ ಸಂಕಲ್ಪ ಮಾಡಿದ್ದೇವೆ ಎಂದು ಸಂಸದ ಜಿ.ಎಂ.ಸಿದ್ದೇಶ್ವರ ಸುದ್ದಿಗಾರರಿಗೆ ತಿಳಿಸಿದರು. ಮೋದಿ ಆಗಮನದ ನಿಮಿತ್ತ ಇಲ್ಲಿನ ಹೈಸ್ಕೂಲ್ ಮೈದಾನದಲ್ಲಿ ಹಂದರಗಂಬ ಪೂಜೆ ನೆರವೇರಿಸಲಾಯಿತು. ಎನ್.ರಾಜಶೇಖರ್, ಎ.ಎಚ್.ಶಿವಯೋಗಿಸ್ವಾಮಿ, ಯಶವಂತರಾವ್ ಜಾಧವ್, ಕೊಳೇನಹಳ್ಳಿ ಸತೀಶ್, ವೈ.ಮಲ್ಲೇಶ್, ಜಿ.ಎಸ್.ಅನಿತ್ ಕುಮಾರ್ ಇತರರು ಇದ್ದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ಯಾವುದೇ ವ್ಯಕ್ತಿಯ ಸಹಾಯವಿಲ್ಲದೆ ನೀವು ಹಣವನ್ನು ಗಳಿಸಲು ಸಾಧ್ಯವಾಗುತ್ತದೆ.

**ವೃಷಭ** ಜೀವನದಲ್ಲಿ ಒತ್ತಡದ ಮನೋಭಾವವನ್ನು ತಪ್ಪಿಸಿ ನೀವು ಪ್ರಯಾಣ ಮಾಡುವ ಮತ್ತು ಹಣ ಖರ್ಚು ಮಾಡುವ ಮನಸ್ಥಿತಿಯಲ್ಲಿರುತ್ತೀರಿ. ಆದರೆ ಹಾಗೆ ಮಾಡಿದಲ್ಲಿ ನೀವು ವಿಷಾದಿಸುತ್ತೀರಿ.

**ಮಿಥುನ** ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಧೃತಿಗೆಡಬೇಡಿ ಹಾಗೂ ನಿರೀಕ್ಷಿತ ಫಲಿತಾಂಶ ಪಡೆಯಲು ಕಠಿಣ ಪರಿಶ್ರಮಪಡಿ. ಈ ಹಿನ್ನಡೆಗಳು ನಿಮ್ಮ ಯಶಸ್ಸಿನ ಸೋಪಾನಗಳಾಗಲಿವೆ.

**ಕರ್ಕಾಟಕ** ಖಂಡಿತವಾಗಿಯೂ ಆರೋಗ್ಯದ ಆರೈಕೆಯ ಅಗತ್ಯವಿದೆ. ನಿಮಗೆ ತಿಳಿದ ಜನರ ಮೂಲಕ ಆದಾಯದ ಹೊಸ ಮೂಲಗಳನ್ನು ಕಂಡುಬರುತ್ತವೆ. ಮಕ್ಕಳು ನಿಮ್ಮ ಗೃಹಕೃತ್ಯಗಳನ್ನು ಮುಗಿಸುವಲ್ಲಿ ನಿಮಗೆ ಸಹಾಯ ಮಾಡುತ್ತಾರೆ.

**ಸಿಂಹ** ಇತ್ತೀಚೆಗೆ ನಿಮ್ಮಲ್ಲಿ ಕೆಲವರು ಓವರ್‌ಟೈಮ್ ಮಾಡುತ್ತಿರುತ್ತಾರೆ ಹಾಗೂ ನಿಮ್ಮ ಚೈತನ್ಯ ಉಡುಗುತ್ತಿರುತ್ತದೆ- ಇಂದು ನೀವು ಒತ್ತಡ ಹಾಗೂ ಸಂದಿಗ್ಧತೆಯನ್ನು ಬಯಸುವುದಿಲ್ಲ.

**ಕನ್ಯಾ** ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ನಿಧಿಗಳ ಹಠಾತ್ ಒಳಹರಿವು ನಿಮ್ಮ ಪಾವತಿಗಳು ಮತ್ತು ತಕ್ಷಣದ ವೆಚ್ಚಗಳನ್ನು ನೋಡಿಕೊಳ್ಳುತ್ತದೆ.

**ತುಲಾ** ಕುಟುಂಬದ ಸದಸ್ಯರ ಸಹಾಯ ನಿಮ್ಮ ಅಗತ್ಯಗಳನ್ನು ಪೂರೈಸುತ್ತದೆ. ಪ್ರೇಮದಲ್ಲಿ ಗುಲಾಮರಂತೆ ವರ್ತಿಸಬೇಡಿ. ನಿಮ್ಮ ಯೋಜನೆಗಳ ಬಗ್ಗೆ ತುಂಬಾ ಮುಕ್ತತೆ ಹೊಂದಿದ್ದಲ್ಲಿ ನೀವು ಅವುಗಳನ್ನು ಹಾಳುಮಾಡಬಹುದು.

**ವೃಶ್ಚಿಕ** ನಿಮ್ಮ ಗೆಳತಿ ನಿಮಗೆ ಮೋಸ ಮಾಡಬಹುದು. ನಿಮ್ಮ ಕೆಲಸದ ಸ್ಥಳದಲ್ಲಿ ಇದ್ದಕ್ಕಿದ್ದಂತೆ ನಿಮ್ಮ ಕೆಲಸದ ತನಿಖೆ ಮಾಡಬಹುದು. ಅಂತಹ ಪರಿಸ್ಥಿತಿಯಲ್ಲಿ, ನೀವು ತಪ್ಪು ಮಾಡಿದ್ದರೆ, ನೀವು ಅದನ್ನು ಪಾವತಿಸಬೇಕಾಗಬಹುದು.

**ಧನಸ್ಸು** ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ.

**ಮಕರ** ನಿಮ್ಮ ಉತ್ತಮ ಆರೋಗ್ಯದ ಸಲುವಾಗಿ ದೀರ್ಘ ನಡಿಗೆಗೆ ಹೋಗಿ. ಇಂದಿನವರೆಗೂ ಹಣವನ್ನು ಯೋಚಿಸದೆ ಖರ್ಚು ಮಾಡುತ್ತಿದ್ದ ಜನರು, ಅವರಿಗೆ ಇಂದು ಹಣದ ತುಂಬಾ ಅಗತ್ಯ ವಿರಬಹುದು.

**ಕುಂಭ** ಆಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ. ನಿಮ್ಮ ಪ್ರೀತಿಯ ಕಥೆ ಇಂದು ಒಂದು ಹೊಸ ತಿರುವು ತೆಗೆದುಕೊಳ್ಳಬಹುದು, ಇಂದು ನಿಮ್ಮ ಸಂಗಾತಿ ಮದುವೆಯ ಬಗ್ಗೆ ನಿಮ್ಮೊಂದಿಗೆ ಮಾತನಾಡಬಹುದು.

**ಮೀನ** ಒತ್ತಡ ಸಂಬಂಧಿತ ಸಮಸ್ಯೆಗಳನ್ನು ತಳ್ಳಿಹಾಕಲು ಸಾಧ್ಯವಿಲ್ಲ. ದುಂದುಗಾರಿಕೆ ಮತ್ತು ಸಂಶಯಾಸ್ಪದವಾದ ಹಣಕಾಸು ಯೋಜನೆಗಳನ್ನು ತಪ್ಪಿಸಿ. ಮಕ್ಕಳ ಜೊತೆಗಿನ ನಿಮ್ಮ ಕಠಿಣ ವರ್ತನೆ ನಿಮಗೆ ಸಿಟ್ಟು ಬರಿಸಬಹುದು.

# ಮೀನುಗಾರಿಕೆ, ಪ್ರವಾಸೋದ್ಯಮದ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ

## ಮೀನುಗಾರರ ಮತ್ತು ರೈತರ ಸಮಸ್ಯೆಗಳಿಗೆ ಸ್ಪಂದಿಸಲಿಕ್ಕೆ ಅನೇಕ ಯೋಜನೆಗಳನ್ನು ರೂಪಿಸಲಾಗುವುದು: ಜಯಪ್ರಕಾಶ್ ಹೆಗ್ಡೆ

• ಉದಯವಾಹಿನಿ ಚಿತ್ರಮಲ್ಪೆ

ರಾಷ್ಟ್ರಕ್ಕೆ ಹೆಚ್ಚು ಆದಾಯ ತರುವ ಮೀನುಗಾರಿಕೆಯ ಅಭಿವೃದ್ಧಿಯ ಬಗ್ಗೆ ಹೆಚ್ಚಿನ ಆದ್ಯತೆ ನೀಡಲಾಗುವುದು. ಮುಖ್ಯವಾಗಿ ಈ ಭಾಗದ ಮೀನುಗಾರರ ಮತ್ತು ರೈತರ ಸಮಸ್ಯೆಗಳಿಗೆ ಸ್ಪಂದಿಸಲಿಕ್ಕೆ ಅನೇಕ ಯೋಜನೆಗಳನ್ನು ರೂಪಿಸಲಾಗುವುದು. ಜತೆಗೆ ಕರಾವಳಿ ದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಯಾದಾಗ ಅಲ್ಲಿನ ವ್ಯವಸ್ಥೆ, ಜನರ ಆರ್ಥಿಕ ಪರಿಸ್ಥಿತಿ ಸುಧಾರಣೆಯಾಗುತ್ತದೆ, ಇದರಿಂದ ಈ ಭಾಗದ ಯುವಕ ಯುವತಿಯರಿಗೆ ಉದ್ಯೋಗ ಸೃಷ್ಟಿಯಾಗುತ್ತದೆ, ಈ ನಿಟ್ಟಿನಲ್ಲಿ ಅನೇಕ ಯೋಜನೆಗಳನ್ನು ತರಲಾಗುವುದು ಎಂದು ಉಡುಪಿ-ಚಿಕ್ಕಮಗಳೂರು ಲೋಕ ಸಭಾ ಕ್ಷೇತ್ರದ ಅಭ್ಯರ್ಥಿ ಜಯಪ್ರಕಾಶ್ ಹೆಗ್ಡೆ ಭರವಸೆ ನೀಡಿದರು.

ಅವರು ಮಂಗಳವಾರ ಮಲ್ಪೆಯ ಸೀ ವಾಕ್-ಕಡಲ ಕಿನಾರೆಯ ಬಳಿ ಉಡುಪಿ ಬ್ಲಾಕ್ ಕಾಂಗ್ರೆಸ್ ಸಮಿತಿ ಹಾಗೂ ಕರಾವಳಿ ಕಾಂಗ್ರೆಸ್-ಮಲ್ಪೆ ಸಹಯೋಗದಲ್ಲಿ ನಡೆದ ಪ್ರಚಾರ ಸಭೆಯಲ್ಲಿ ಮಾತನಾಡಿದರು.

ನಾಯಕರ ಹೆಸರಿನಲ್ಲಿ ಮತ ಕೊಟ್ಟರೆ ಕಳೆದ 10 ವರ್ಷ ಕ್ಷೇತ್ರಕ್ಕೆ ಆಗಿರುವ ಅನ್ಯಾಯವೇ ಮರುಕಳಿಸುತ್ತದೆ. ರಾಷ್ಟ್ರೀಯ ಹೆದ್ದಾರಿಯ ಕಾಮಗಾರಿಯನ್ನು ಅಧಿಕಾರಿಗಳ ಬೆನ್ನತ್ತಿ ನಿಂತು ಮಾಡಿಸಬೇಕಾಗುತ್ತದೆ. ಕೆಲಸ ಮಾಡುವ ಚಾಕಚಕ್ಯತೆ ಬೇಕಾಗುತ್ತದೆ. ಈ ಬಾರಿ ಕೆಲಸ ಮಾಡುವವರಿಗೆ ಮತ ಕೊಡಿ ಎಂದರು. ಮಾಜಿ ಸಚಿವ ವಿನಯ ಕುಮಾರ್ ಸೊರಕೆ ಮಾತನಾಡಿ, ಶೋಭಾ ಕರಂದ್ಲಾಜೆ ಕಳೆದ 10 ವರ್ಷ ಈ ಕ್ಷೇತ್ರದ ಸಂಸದರಾಗಿದ್ದು, ಮಾಡಿರುವ ಸಾಧನೆ ಶೂನ್ಯ. ಕಾಂಗ್ರೆಸ್‌ನ ಕೆ. ಜಯಪ್ರಕಾಶ್ ಹೆಗ್ಡೆ ಮೀನುಗಾರಿಕಾ ಸಮುದಾಯಕ್ಕೆ ಹೊಸ ಚೇತನ ಕೊಟ್ಟಿದ್ದಾರೆ. ಹೆಗ್ಡೆ ಅಯ್ಯೊಯ ಬಗ್ಗೆ ಯಾವ ಕಾರ್ಯಕರ್ತರಿಗೂ ಅಪಸ್ವರವಿಲ್ಲ ಎಂದರು. ಕೋಟ ಸಮಾಜ ಕಲ್ಯಾಣ ಸಚಿವರಾಗಿದ್ದ ಅವಧಿಯಲ್ಲಿ ಬ್ರಹ್ಮಶ್ರೀ ನಾರಾಯಣ ಗುರುಗಳು ಸೇರಿದಂತೆ ಅನೇಕ ದಾರ್ಶನಿಕರ ವಿಚಾರವನ್ನು ಪಠ್ಯದಿಂದ ತೆಗೆದಾಗ ತಕರಾರು ಎತ್ತಿಲ್ಲ. ಬ್ರಹ್ಮಶ್ರೀ ನಾರಾಯಣ ಗುರುಗಳಿಗೆ ಅಪಮಾನವಾದ್ದಾಗ ಧ್ವನಿ ಎತ್ತಿಲ್ಲ ಎಂದು ಅಪಾದಿಸಿದ ಅವರು, ಮಲ್ಪೆಯ ಜನತೆ ಮನಸ್ಸು ಮಾಡಿದರೆ ಕೆ. ಜಯಪ್ರಕಾಶ್ ಹೆಗ್ಡೆ ಗೆಲ್ಲುವುದು ಖಚಿತ ಎಂದರು.

ಜಿಲ್ಲಾಧ್ಯಕ್ಷ ಅಶೋಕ್ ಕುಮಾರ್ ಕೊಡವೂರು, ಕಾಂಗ್ರೆಸ್ ನಾಯಕರಾದ ಕಿಶನ್‌ಹೆಗ್ಡೆ ಕೊಳ್ಕೆಬೈಲ್, ದಿವಾಕರ ಕುಂದರ್, ಕೃಷ್ಣಮೂರ್ತಿ ಆಚಾರ್ಯ, ಪ್ರಖ್ಯಾತ್ ಶೆಟ್ಟಿ ಹರೀಶ್ ಕಿಣಿ, ಗಣೇಶ್ ನೆರ್ಗಿ, ರಮೇಶ್ ತಿಂಗಳಾಯ, ಮಹಾಬಲ ಕುಂದರ್, ಸಂಧ್ಯಾ ತಿಲಕ್‌ರಾಜ್, ನವೀನ್‌ಚಂದ್ರ, ಕೇಶವ ಕೋಟ್ಯಾನ್, ಮನೋಜ್ ಕರ್ಕೇರ ಚಂದ್ರ ಕೊಡವೂರು ಮೊದಲಾದವರು ಉಪಸ್ಥಿತರದ್ದರು. ಎಂ. ಎ. ಗಫೂರ್ ಸ್ವಾಗತಿಸಿದರು. ಸತೀಶ್ ಕೊಡವೂರು ನಿರೂಪಿಸಿದರು.



ಉದಯವಾಹಿನಿ ಚಿತ್ರ

### ಅಸ್ತಿಯನ್ನು ಒತ್ತೆ ಇಟ್ಟು ಬ್ರಹ್ಮಾವರದಲ್ಲಿ ಸಕ್ಕರೆ ಕಾರ್ಖಾನೆ

**ಕಾಂಗ್ರೆಸ್ ನಾಯಕ ತೇಜಸ್ವಿನಿ ಗೌಡ ಮಾತನಾಡಿ ಮೀನುಗಾರಿಕೆ ಸಚಿವರಾಗಿ ಕಡಲತಡಿಯಲ್ಲಿ ಬದುಕು ಸಾಗಿರುವ ಜನರಿಗೆ ಕಡಲಕೊರೆತ ತಡೆಮಾಡುವ ಮೂಲಕ ಮೊದಲು ರಕ್ಷಣೆ ಮಾಡಿದ್ದು ಜಯಪ್ರಕಾಶ್ ಹೆಗ್ಡೆ, ರಾಜ್ಯದ ಕರಾವಳಿಯ ಎಲ್ಲಾ ಬಂದರುಗಳ ಅಭಿವೃದ್ಧಿಗೆ ಕಾರಣೀಭೂತರಾದ ಹೆಗ್ಡೆ ಅವರು ತಮ್ಮ ಕುಟುಂಬದ ಆಸ್ತಿಯನ್ನು ಒತ್ತೆ ಇಟ್ಟು ಬ್ರಹ್ಮಾವರದಲ್ಲಿ ಸಕ್ಕರೆ ಕಾರ್ಖಾನೆಯನ್ನು ಮಾಡುವ ಮೂಲಕ ಜನಕಲ್ಯಾಣಕ್ಕೊಸ್ಕರ ಕ್ರಮವನ್ನು ಕೈಗೊಂಡಿದ್ದಾರೆ ಎಂದರು. ಕೆಪಿಸಿಸಿ ವಕ್ತಾರರಾದ ಸುಧೀರ್ ಕುಮಾರ್ ಮುರೋಳ್ಳಿ ಮಾತನಾಡಿದರು.**

**ಕೆಲಸ ಮಾಡುವ ಚಾಕಚಕ್ಯತೆ**

**ಕಾಂಗ್ರೆಸ್ ನಾಯಕ ಪ್ರಸಾದ್‌ರಾಜ್ ಕಾಂಚನ್ ಮಾತನಾಡಿ, ಉಡುಪಿ ಜಿಲ್ಲೆಯ ಸೃಷ್ಟಿಕರ್ತನಿಗೆ ಈ ಬಾರಿ ಜನರು ಆಶೀರ್ವಾದ ಮಾಡಲಿದ್ದಾರೆ. ಅವಿಭಜಿತ ದ. ಕ. ಜಿಲ್ಲೆಯಲ್ಲಿ ಉಡುಪಿಯನ್ನು ಪ್ರತ್ಯೇಕ ಜಿಲ್ಲೆಯಾಗಿ ಮಾಡಿದ ಕೀರ್ತಿ ಜಯಪ್ರಕಾಶ್ ಹೆಗ್ಡೆಯವರಿಗೆ ಸಲ್ಲುತ್ತದೆ. ಉಡುಪಿ ಜಿಲ್ಲೆ ಆದಾಗಿನಿಂದ ಸರಕಾರದ ಸವಲತ್ತುಗಳು ಜನರ ಮನೆ ಬಾಗಿಲಿಗೆ ಸುಲಭದಲ್ಲಿ ಬರುವಂತೆ ಮುಖ್ಯ ಕಾರಣ ಕರ್ತರಾಗಿದ್ದಾರೆ. ಅವರ ಜನಪರ ಕೆಲಸಕ್ಕೆ ಈ ಬಾರಿಯ ಚುನಾವಣೆಯಲ್ಲಿ ಭರ್ಜರಿ ಜಯಗಳಿಸುವುದರಲ್ಲಿ ಯಾವ ಸಂದೇಹವೂ ಇಲ್ಲ - ಪ್ರಸಾದ್‌ರಾಜ್**

## ಶಿವಶರಣ ಹರಳಯ್ಯ 12ನೇಯ ಶತಮಾನದ ಬಸವಣ್ಣನವರ ಸಮಕಾಲೀನರು

• ಉದಯವಾಹಿನಿ, ಚಿಂಚೋಳಿ

ಶಿವಶರಣ ಹರಳಯ್ಯನವರು 12ನೇ ಶತಮಾನದಲ್ಲಿ ಪಾದರಕ್ಷೆಗಳನ್ನು ಸಿದ್ಧಪಡಿಸುವ ಕಾಯಕದಲ್ಲಿ ನಿರತರಾಗಿದವರು ಗುರುಲಿಂಗ ಜಂಗಮ ಸೇವೆಗೆ ತನ್ನ ತನುಮನಧನಗಳನ್ನು ಮುಡಿಪಾಗಿಟ್ಟದವರಾಗಿದ್ದರು ಎಂದು ಶಿವಶರಣ ಹರಳಯ್ಯ ಸಮಾಜದ ಉಪಾಧ್ಯಕ್ಷ ಅಮೃತ ಕಂದಿ ಹೇಳಿದರು.

ಪಟ್ಟಣದ ಚಂದಾಪೂರದಲ್ಲಿ ಶಿವಶರಣ ಹರಳಯ್ಯ ಸಮಾಜದ ಸಂಘದ ವತಿಯಿಂದ ಶಿವಶರಣ ಹರಳಯ್ಯನವರ ಜಯಂತಿ ಆಚರಣೆ ಮಾಡಲಾಯಿತು. ಹರಳಯ್ಯ ಸಮಾಜದ ಅಧ್ಯಕ್ಷ ಚಂದ್ರಶೇಖರ ಪುಣೇಕರ್ ಮಾತನಾಡಿ ಒಮ್ಮೆ ಬಸವಣ್ಣನವರನ್ನು ಮಾರ್ಗಮಧ್ಯದಲ್ಲಿ ಭೇಟಿಯಾದ ಹರಳಯ್ಯ ಶರಣು ಬಸವರಸ ಎಂದು ತಲೆಬಾಗಿ ವಂದಿಸಿದರು. ಪ್ರತಿಯಾಗಿ ಬಸವಣ್ಣ ಶರಣು ಶರಣಾರ್ಥಿ ಹರಳಯ್ಯ ತಂದೆ ಎಂದು ವಂದಿಸಿದ ಅವರು ತನ್ನ ಒಂದು ಶರಣಾರ್ಥಿಗೆ ಬಸವಣ್ಣ ಎರಡು ಶರಣಾರ್ಥಿ ಹೇಳಿದ ಬಸವಣ್ಣನ ಒಂದು ಶರಣಾರ್ಥಿ ತನ್ನ ಮೇಲೆ ಹೊರೆಯಾಗಿ ಕುಳಿತಂತೆ ಭಾಸವಾಯಿತು ಹರಳಯ್ಯ ಶರಣರು ಪತ್ನಿಯೊಡನೆ ಸಮಾಲೋಚನೆ ನಡೆಸಿದ ಏನೂ ತೋಚದೆ ಕೊನೆಗೆ ತೊಡೆಯ ಚರ್ಮದಿಂದ ಪಾದರಕ್ಷೆಗಳನ್ನು ಮಾಡಿ ಬಸವಣ್ಣನವರ ಪಾದಗಳಿಗೆ ತೊಡಿಸಿ ತಮ್ಮ ಹೊರೆಯನ್ನು ಹಗುರ ಮಾಡಿಕೊಳ್ಳಲು ನಿರ್ಧರಿಸಿದವರು ಹರಳಯ್ಯ ಶರಣರು,ಅದರಂತೆ ಸುಂದರವಾದ ಒಂದು ಜೊತೆ ಪಾದರಕ್ಷೆಗಳನ್ನು ತಯಾರಿಸಿಕೊಂಡು ಹೋಗಿ ಬಸವಣ್ಣನವರಿಗೆ ಕೊಟ್ಟರು. ಬಸವಣ್ಣನವರು ಅವರ ಶ್ರೇಷ್ಠತೆಯನ್ನು ಹೊಗಳಿದರು ಎಂಬುವುದು ಬಸವ ಪುರಾಣ ಗ್ರಂಥಗಳಿಂದ ಗೊತ್ತಾಗುತ್ತದೆ ಎಂದರು.


ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಕಾರ್ಯದರ್ಶಿ ಶರಣು ಕಂದಿ,ಮೋಹನ್ ಕಂದಿ,ಭದ್ರಪ್ಪಾ ಕಂದಿ,ರಮೇಶ ಪುಣೇಕರ,ಶ್ರೀಕಾಂತ ಕಂದಿ,ಲಕ್ಷ್ಮಣ್ ಪುಣೇಕರ್,ಕೃಷ್ಣ ಕಂದಿ,ಪ್ರಭು ಕಂದಿ,ಅನೇಕರಿದ್ದರು.

## ಆದಾಯ ತೆರಿಗೆ ಇಲಾಖೆ ಮಿಂಚಿನ ದಾಳಿ

### ಕೋಟ್ಯಂತರ ರೂ. ಮೌಲ್ಯದ ಹಣ , ಚಿನ್ನ ಸೀಜ್

• ಉದಯವಾಹಿನಿ, ಬಳ್ಳಾರಿ

ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಆದಾಯ ತೆರಿಗೆ ಇಲಾಖೆ ಮತ್ತು ಚುನಾವಣಾ ಆಯೋಗ ಅಕ್ರಮ ವಹಿವಾಟಿನ ಮೇಲೆ ಹದ್ದಿನ ಕಣ್ಣು ಇಟ್ಟಿದ್ದು, ಬಳ್ಳಾರಿಯಲ್ಲಿ ಮತ್ತೆ ಲಕ್ಷಾಂತರ ರೂ ಜಪ್ತಿ ಮಾಡಲಾಗಿದೆ.


ಉದಯವಾಹಿನಿ ಚಿತ್ರ

ಬ್ರೂಸ್ ಪೇಟೆ ಪೊಲೀಸರು, ಎಫ್.ಎಸ್.ಟಿ ಹಾಗೂ ವಿವಿಎಸ್‌ಟಿ ತಂಡದ ಜಂಟಿ ಕಾರ್ಯಚರಣೆಯಲ್ಲಿ ದಾಖಲೆ ಇಲ್ಲದೆ ಸಂಗ್ರಹಿಸಿದ್ದ 23 ಲಕ್ಷ ನಗದು, 450 ಗ್ರಾಂ ಚಿನ್ನ, 13 ಕೆಜಿ ಬೆಳ್ಳಿಗಳು ಕಮಲೇಶ್ ಜೈನ್ ಎಂಬುವರ ಮನೆಯಲ್ಲಿ ಪತ್ತೆಯಾಗಿದೆ. ಕಂಬಳಿ ಬಜಾರ್‌ನ ಚುನ್ನಿಲಾಲ್ ರಾಕೇಶ್ ಕುಮಾರ್ ಷಾ ಜ್ಯೂವೆಲರ್ಸ್‌ನ ಮಾಲೀಕರಾದ ಕಮಲೇಶ್ ಜೈನ್ ಮನೆಯಲ್ಲಿ ಅನ ಧೀಕೃತವಾಗಿ ಯಾವುದೇ ದಾಖಲಾತಿ ಇಲ್ಲದೇ ಸಂಗ್ರಹಿಸಿದ ಹಿನ್ನೆಲೆ ಚಿನ್ನಾಭರಣವನ್ನು ಜಪ್ತಿ ಮಾಡಲಾಗಿದೆ. ಇನ್ನೂ ಜಪ್ತಿ ಮಾಡಲಾದ ಹಣ, ಚಿನ್ನ ಮತ್ತು ಬೆಳ್ಳಿಯನ್ನು ವಾಣಿಜ್ಯ ತೆರಿಗೆ ಅಧಿಕಾರಿಗಳಿಗೆ ಹಸ್ತಾಂತರಿಸಲಾಗಿದೆ ಎಂದು ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಮಾಹಿತಿ ನೀಡಿದ್ದಾರೆ.

## ದೇಶದ ರಕ್ಷಣೆಗೆ ಮೋದಿ ಅನಿವಾರ್ಯ: ಯತ್ನಾಳ್

• ಉದಯವಾಹಿನಿ, ಜೇವರ್ಗಿ

ಕಲ್ಬುರ್ಗಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾದ ಡಾ. ಉಮೇಶ್ ಜಾದವ್ ಅವರ ಪರವಾಗಿ ನೂತನ ಯಡ್ರಾಮಿ ತಾಲ್ಲೂಕಿನಲ್ಲಿ ಮತಯಾಚನೆ ಮಾಡಿದ ಬಸವರಾಜ್ ಪಾಟೀಲ್ ಯತ್ನಾಳ. ಮತದಾರರ ಉದ್ದೇಶಿಸಿ ಮಾತನಾಡಿದವರು ದೇಶಕ್ಕೆ ಅನಿವಾರ್ಯವಾಗಿ ಮೋದಿಯವರು ಪ್ರಧಾನ ಮಂತ್ರಿ ಆಗಲೇ ಬೇಕಾಗಿದೆ. ಅದಕ್ಕಾಗಿ ದೇಶದ ಅಭಿವೃದ್ಧಿಗಾಗಿ ಕಮಲದ ಗುರುತಿಗೆ ಮತ ಹಾಕಿ ಉಮೇಶ್ ಜಾದವ್ ಅವರನ್ನು ಗೆಲ್ಲಿಸಿದರೆ ದೇಶದಲ್ಲಿ ಮೂರನೇ ಬಾರಿ ಮೋದಿಯವರು ಪ್ರಧಾನಮಂತ್ರಿಯಾಗುವುದು ಖಚಿತ ಎಂದು ಅಭಿಪ್ರಾಯಪಟ್ಟರು.

ಬಿಜೆಪಿ ಪಕ್ಷದ ಲೋಕಸಭಾ ಅಭ್ಯರ್ಥಿಯಾದ ಡಾ. ಉಮೇಶ್ ಜಾದವ್ ಮಾತನಾಡಿದರು. ಭಾರತ ದೇಶದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ನೋಡಿ ಭಾರತ ಜನತಾ ಪಾರ್ಟಿಗೆ ಮತ ನೀಡಬೇಕು.

ಕೇವಲ ಗ್ಯಾರಂಟಿಗಳ ಮುಖ ನೋಡಿ ಮತ ಹಾಕಬೇಡಿ. ಕಲಬುರಗಿ ಜಿಲ್ಲೆಯ ಅಭಿವೃದ್ಧಿಗಾಗಿ ನನ್ನನ್ನು ಮತ ಹಾಕಬೇಕಾಗಿ ತಮ್ಮಲ್ಲಿ ವಿನಂತಿ ಮಾಡಿಕೊಳ್ಳುತ್ತೇನೆ ಎಂದು ಡಾಕ್ಟರ್ ಉಮೇಶ್ ಜಾದವ್ ಮನವಿ ಮಾಡಿಕೊಂಡರು.


ಉದಯವಾಹಿನಿ ಚಿತ್ರ

**ದೇಶಕ್ಕೆ ಅನಿವಾರ್ಯ ಮೋದಿ**

ಈ ಸಂದರ್ಭದಲ್ಲಿ ಬಿಜೆಪಿ ಪಕ್ಷದ ಗ್ರಾಮೀಣ ಕಲಬುರ್ಗಿ ಜಿಲ್ಲಾ ಅಧ್ಯಕ್ಷರಾದ ಶಿವರಾಜ್ ಪಾಟೀಲ್ ರದ್ದೇವಡಗಿ, ಕುರಿ ಉಣ್ಣೆ ನಿಗಮುಂಡಳಿಯ ಮಾಜಿ ಅಧ್ಯಕ್ಷರಾದ ಧರ್ಮಣ್ಣ ದೊಡ್ಡಮನಿ, ಶೋಭಾ ಬಾಣಿ, ಅಶೋಕ್ ಸಾಹುಕಾರ್ ಗೋಗಿ, ಬಿಜೆಪಿ ತಾಲ್ಲೂಕ ಮಂಡಲ ಅಧ್ಯಕ್ಷರಾದ ದೇವೇಂದ್ರ ಇಜೇರಿ ಮುತ್ತುಕೊಡ, ಮಲ್ಲಿನಾಥ್ ಗೌಡ ಯಲಗೋಡ, ರೇವಣಸಿದ್ದಪ್ಪ ಸಂಕಲಿ,ಹಾಗೂ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

## ತುಷ್ಟೀಕರಣ ರಾಜಕೀಯಕ್ಕೆ ಮುಸ್ಲಿಂ ಮೀಸಲಾತಿಗೆ ಬೆಂಬಲಿಸುತ್ತದೆ

• ಉದಯವಾಹಿನಿ, ಗದಗ

ಧರ್ಮ ಆಧಾರಿತ ಮೀಸಲಾತಿಗೆ ಅವಕಾಶ ಇಲ್ಲ ಎಂದು ಸಂವಿಧಾನದಲ್ಲಿ ಸ್ಪಷ್ಟವಾಗಿದೆ. ಹೀಗಿದ್ದರೂ ಕಾಂಗ್ರೆಸ್ ತುಷ್ಟೀಕರಣದ ರಾಜಕಾರಣಕ್ಕೆ ಮುಸ್ಲೀಮರ ಮೀಸಲಾತಿಗೆ ಬೆಂಬಲ ಕೊಡುತ್ತದೆ ಎಂದು ಮಾಜಿ ಸಿಎಂ, ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ, ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಹೇಳಿದರು..

ನಗರದಲ್ಲಿ ಮಾಧ್ಯ ಮದವರೊಂದಿಗೆ ಮಾತನಾಡಿದ ಅವರು, ಧರ್ಮ ಆಧಾರಿತ ಮೀಸಲಾತಿಗೆ ಅವಕಾಶ ಇಲ್ಲ ಅಂತಾ ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗದ ಆಕ್ಷೇಪದ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಮುಸ್ಲೀಮರಲ್ಲೂ ಚಪ್ಪರಬಂದ್, ನದಾಫ್, ಪಿಂಜಾರ್ ಸೇರಿದಂತೆ 24 ಜಾತಿಯವರು ಬಹಳ ಹಿಂದುಳಿದವರಿದ್ದಾರೆ. ಅವುಗಳಿಗೆ ಈಗಾಗಲೇ 2ಎ ಯಲ್ಲಿ ಮೀಸಲಾತಿ ಇದೆ. ಅವರಿಗೆ ಹೆಚ್ಚುವರಿಯಾಗಿ ಶೇ 4 ಪರ್ಸೆಂಟ್ ಮೀಸಲಾತಿ ಕೊಟ್ಟಿದ್ದರು. ಅದನ್ನೇ ಹಿಂದುಳಿದ ವರ್ಗಗಳ ಆಯೋಗ ಆಕ್ಷೇಪ ಮಾಡಿದೆ. ಈಗ ಆ ಕೇಸ್ ಸುಪ್ರೀಂ ಕೋರ್ಟಿನಲ್ಲಿದೆ ನೋಡೋಣ ಎಂದರು. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಆಸ್ತಿ ಮರು ಹಂಚಿಕೆ ಮಾಡುತ್ತಾರೆ ಎನ್ನುವ ಮಾತಿಗೆ ಪ್ರತಿಕ್ರಿಯಿಸಿದ ಅವರು, ಆಸ್ತಿ ಕೇಳುವುದಕ್ಕೆ ಬಹಳ ಚನ್ನಾಗಿ ಅನಿಸುತ್ತದೆ. ಆದರೆ, ಯಾರದ್ದು ಕಿತ್ತುಕೊಂಡು ಯಾರಿಗೆ ಕೊಡುತ್ತಾರೆ? ಏನ್ ಸರ್ವೆ ಮಾಡುತ್ತಾರೆ.

**ಕಾಂಗ್ರೆಸ್ ತುಷ್ಟೀಕರಣದ ರಾಜಕಾರಣ**



**ಚುನಾವಣೆ ಸಂದರ್ಭದಲ್ಲಿ ಸಮಾಜದಲ್ಲಿ ಗೊಂದಲ ಸೃಷ್ಟಿಸುವ ಕೆಲಸ ಮಾಡಬಾರದು. ಕಾಂಗ್ರೆಸ್ ನೀತಿ ಇದ್ದಲ್ಲಿ ಸ್ಪಷ್ಟವಾಗಿ ಹೇಳವೇಕು. ಸಂವಿಧಾನದಲ್ಲಿ ವಾಕ್ ಸ್ವಾತಂತ್ರದ ಹಾಗೆ ಆಸ್ತಿ ಮಾಡುವ ಹಕ್ಕೂ ಇದೆ. ಕಾಂಗ್ರೆಸ್‌ನವರು ಸಂವಿಧಾನದ ವಿರುದ್ಧ ಕೆಲಸ ಮಾಡಿತ್ತಿದ್ದಾರೆ. ಜವಾಬ್ದಾರಿ ಸ್ಥಾನದಲ್ಲಿ ಇದ್ದವರು ಹೀಗೆ ಮಾತ್ನಾಡಬಾರದು ಎಂದರು.**
**-ಬಸವರಾಜ ಬೊಮ್ಮಾಯಿ**

## ಬ್ರಹ್ಮಾವರದಲ್ಲಿ ಶಕ್ತಿ ಪ್ರದರ್ಶನದ ವೇದಿಕೆ

• ಉದಯವಾಹಿನಿ, ಬ್ರಹ್ಮಾವರ


ಉದಯವಾಹಿನಿ ಚಿತ್ರ

ಬ್ರಹ್ಮಾವರ ನಗರವು ಮಂಗಳವಾರ ಸಂಜೆ ಅಕ್ಷರಸಹಃ ಕಾಂಗ್ರೆಸ್ ಹಾಗೂ ಬಿಜೆಪಿಯ ಶಕ್ತಿ ಪ್ರದರ್ಶನದ ವೇದಿಕೆಯಾಗಿ ಮಾರ್ಪಾಡಾಯಿತು. ಒಂದು ಕಡೆ ಕಾಂಗ್ರೆಸ್ ಅಭ್ಯರ್ಥಿ ಕೆ. ಜಯಪ್ರಕಾಶ್ ಹೆಗ್ಡೆ ಅವರ ಪರ ಬೃಹತ್ ಸಾರ್ವಜನಿಕ ಸಭೆ, ಇನ್ನೊಂದೆಡೆ ಬಿಜೆಪಿ ಅಭ್ಯರ್ಥಿ ಕೋಟ ಶ್ರೀನಿವಾಸ ಪೂಜಾರಿ ಅವರ ಪರ ನಾಯಕ ಅಣ್ಣಾಮಲೈ ಅವರಿಂದ ಬೃಹತ್ ರೋಡ್ ಶೋ. **ಎರಡೂ ಕಡೆಯವರಿಂದ ಸಹಸ್ರ, ಸಹಸ್ರ ಸಂಖ್ಯೆಯ ಬೆಂಬಲಿಗರು:** ಬಂಟರ ಭವನದ ಎದುರು ಆಯೋಜಿಸಲಾದ ಕಾಂಗ್ರೆಸ್ ಸಭೆಗೆ ಮಧ್ಯಾಹ್ನದಿಂದಲೇ ಜನ ಸೇರತೊಡಗಿದರೆ, ಆಕಾಶವಾಣಿಯಿಂದ ನಡೆಯುವ ಬಿಜೆಪಿ ರೋಡ್ ಶೋಗೆ ಗಾಂಧಿಮೈದಾನದಲ್ಲಿ ಜನರು ಜಮಾವಣೆಯಾಗತೊಡಗಿದರು. ಪೇಟೆಯ ಸಭೆ ಮುಗಿಯುತ್ತಿದ್ದಂತೆ ರಥಬೀದಿಯ ಮೂಲಕ ಸಾಗಿ ಬಂದ ಮೆರವಣಿಗೆ ಕುಂಜಾಲು ಕ್ರಾಸ್‌ಗೆ ಆಗಮಿಸುತ್ತಿದ್ದಂತೆ ಸಾವಿರಾರು ಜನರ ಸಮಾಗಮನವಾಯಿತು. ಎಲ್ಲಾ ಕಡೆಗಳಲ್ಲಿ ಟ್ರಾಫಿಕ್‌ಜಾಮ್ ನಿಯಂತ್ರಿಸಲು ಪೊಲೀಸರು ಹರಸಾಹಸ ಪಟ್ಟರು.

## ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಭೇಟಿಯಾದ ನಟಿ ಹರ್ಷಿಕಾ ಪೂಣಚ್ಚ-ಭುವನ್ ದಂಪತಿ


• ಉದಯವಾಹಿನಿ, ಹುಬ್ಬಳ್ಳಿ


ಉದಯವಾಹಿನಿ ಚಿತ್ರ

ಕನ್ನಡದ ನಟಿ ಹರ್ಷಿಕಾ ಪೂಣಚ್ಚ ಮತ್ತು ಭುವನ್ ಪೊನ್ನಣ್ಣ ದಂಪತಿ, ಇತ್ತೀಚೆಗೆ ಬೆಂಗಳೂರಿನ ಪುಲಕೇಶಿ ನಗರದಲ್ಲಿ ತಮ್ಮ ಮೇಲೆ ನಡೆದ ಹಲ್ಲೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಹುಬ್ಬಳ್ಳಿಯಲ್ಲಿರುವ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರನ್ನು ಖುದ್ದಾಗಿ ಭೇಟಿಯಾಗಿದ್ದು, ಘಟನೆ ಬಗ್ಗೆ ಹೆಚ್ಚು ಸಮಯ ಚರ್ಚೆ ನಡೆಸಿದ್ದಾರೆ. ಹಲ್ಲೆ ಸಂಬಂಧ ಪುಲಿಕೇಶಿ ನಗರ ಪೊಲೀಸ್ ಠಾಣೆಗೆ ಹಾಜರಾಗಿ ತಮ್ಮ ಹೇಳಿಕೆ ದಾಖಲಿಸಿದ್ದು, ನ್ಯಾಯ ದಕ್ಕಿಸಿಕೊಡುವಂತೆ ಸಚಿವರಿಗೆ ಮನವಿ ಮಾಡಿದ್ದಾರೆ. ನಮ್ಮ ಮೇಲೆ ಹಲ್ಲೆಗೆ ಯತ್ನಿಸಿ, ಗಲಾಟೆ ಮಾಡಿದ ಮೂವರನ್ನು ಗುರುತಿಸಿದ್ದೇವೆ. ಪೊಲೀಸರು ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿ ಕೆಲ ವ್ಯಕ್ತಿಗಳನ್ನು ತೋರಿಸಿದ್ದು, ನಮ್ಮ ಮೇಲೆ ಗಲಾಟೆ ಮಾಡಿದವರ ಮುಖ ಛಾಯೆ ಇರುವ ವ್ಯಕ್ತಿಗಳನ್ನು ಸದ್ಯ ಗುರುತಿಸಿದ್ದೇವೆ ಎಂದು ದಂಪತಿಗಳು ಸಚಿವರಿಗೆ ವಿವರಿಸಿದ್ದಾರೆ. ನಮಗೆ ಆದಂತೆ ಬೇರೆ ಯಾರಿಗೂ ಆಗಬಾರದು. ಹಾಗಾಗಿ ಪೊಲೀಸರಿಗೆ ದೂರು ಕೊಟ್ಟಿದ್ದು, ಪೊಲೀಸರು ಆದಷ್ಟು ಬೇಗ ಆರೋಪಿಗಳನ್ನು ಬಂಧಿಸುವ ಭರವಸೆ ಹೊಂದಿದ್ದೇವೆ ಎಂದು ಹರ್ಷಿಕಾ ಪೂಣಚ್ಚ ಹೇಳಿದ್ದಾರೆ.

## ಸಂಯುಕ್ತಾ ಪಾಟೀಲ್ ಪರ ಭರ್ಜರಿ ಪ್ರಚಾರ

• ಉದಯವಾಹಿನಿ ಬಾಗಲಕೋಟೆ



ಲೋಕಸಭಾ ಚುನಾವಣೆಗೆ ಇನ್ನೇನು ಕೆಲವೇ ದಿನಗಳು ಮಾತ್ರ ಬಾಕಿ ಉಳಿದದ್ದು, ಆಯಾ ಕ್ಷೇತ್ರಗಳ ಅಭ್ಯರ್ಥಿಗಳು ಬಿರುಸಿನ ಪ್ರಚಾರಕ್ಕಿಳಿದು, ಜನರಲ್ಲಿ ಮತಯಾಚನೆ ಮಾಡುವಲ್ಲಿ ನಿರತರಾಗಿದ್ದಾರೆ. ಇನ್ನು ಈ ಮಧ್ಯೆ, ಬಾಗಲಕೋಟೆ ಲೋಕಸಭಾ ಅಖಾಡದಲ್ಲಿ ಚುನಾವಣಾ ರಂಗು ಕಾವೇರುತ್ತಿದ್ದು, ಸಚಿವ ಶಿವಾನಂದ ಪಾಟೀಲ್ ಪುತ್ರಿ ಸಂಯುಕ್ತಾ ಪಾಟೀಲ್ ಪರ ಕಾಂಗ್ರೆಸ್ ನಾಯಕರು ಭರ್ಜರಿ ಪ್ರಚಾರ ಆರಂಭಿಸಿದ್ದಾರೆ. ಸಂಯುಕ್ತಾ ಪರ ಪ್ರಚಾರಕ್ಕಿಳಿದ ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ್ ಮಾತನಾಡಿ, ನನ್ನ ತಂಗಿಗೆ ಹೆಚ್ಚು ಲೀಡ್ ಕೊಟ್ಟು ಗೆಲ್ಲಿಸಿ, ಆಕೆಗೆ ತವರು ಮನೆ ಜವಾಬ್ದಾರಿ ಇದೆ. ನನ್ನ ಪತ್ನಿ ವೀಣಾಗೆ ಟಿಕೆಟ್ ವಿಚಾರ ಮುಗಿದು ಹೋದ ಕತೆ. ಆ ಬಗ್ಗೆ ಯಾರೂ ಮಾತಾಡಬೇಡಿ, ಅದು ಅಂತ್ಯಕಂಡಿದೆ. ನಮ್ಮ ಅಭ್ಯರ್ಥಿ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಯಾರೂ ವಿರುದ್ಧವಾಗಿ ಬರೆಯಬಾರದು ಎಂದು ಕಾರ್ಯಕರ್ತರಲ್ಲಿ ನಾನು ಮನವಿ ಮಾಡ್ತೇನೆ ಎಂದರು.

## ಯತ್ನಾಳ್ ಅಖಂಡ ವಿಜಯಪುರ ಜಿಲ್ಲೆಯ ಗೊಡ್ಡೆಮ್ಮೆ, ಅದು ಹಿಂಡುವುದೇ ಇಲ್ಲ: ಕಾಶಪ್ಪನವರ್

• ಉದಯವಾಹಿನಿ, ಬಾಗಲಕೋಟೆ

ಬಾಗಲಕೋಟೆ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಸಚಿವ ಶಿವಾನಂದ ಪಾಟೀಲ್ ಪುತ್ರಿ ಸಂಯುಕ್ತಾ ಪಾಟೀಲ್ ಪರ ಬಿರುಸಿನ ಪ್ರಚಾರದಲ್ಲಿ ಭಾಗಿಯಾದ ವೀಣಾ ಕಾಶಪ್ಪನವರ್ ಪತಿ, ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ್, ಪ್ರಚಾರದ ವೇಳೆ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ವಾಗ್ದಾಳಿ ನಡೆಸಿ, ಜನರು ಎದುರು ಲೇವಡಿ ಮಾಡಿದ್ದಾರೆ.

ಶಾಸಕ ಯತ್ನಾಳ್ ಅಖಂಡ ವಿಜಯಪುರ ಜಿಲ್ಲೆಯ ಗೊಡ್ಡೆಮ್ಮೆ. ಅದು ಹಿಂಡುವುದೇ ಇಲ್ಲ. ಅವಾ ಎಲ್ಲಾ ಜಾತಿಗೂ ಬೈತಾನ, ಯಾರಿಗೂ ಬಿಟ್ಟಿಲ್ಲ. ಬಹಳ ದಿನದಿಂದ ಎಮ್ಮಿಕರ ಒದರಾಕ ಹತ್ತೈತಿ, ಪಂಚಮಸಾಲಿಗೆ ನೀ ಒಬ್ಬನಾ ಹುಟ್ಟಿಲ್ಲ ಎಂಬುದು ಗಮನದಲ್ಲಿರಲಿ. ನಿನ್ನ ಬಾಯಿ ಮುಚ್ಚಿಕೊಂಡು ಇದ್ದರೆ, ಒಳಿತು. ಇಲ್ಲದಿದ್ದರೆ ಈಶ್ವರಪ್ಪಗೆ ಬಂದ ಗತಿಯೇ ನಿನಿಗೂ ಬರ್ತೈತಿ ಎಂದು ಎಚ್ಚರಿಕೆ ಕೊಟ್ಟರು.


ಉದಯವಾಹಿನಿ ಚಿತ್ರ

ಈ ದೇಶ, ಜಾತಿ ಇವರಪ್ಪನ ಮನೆಯದಾ? ಹೋದಲ್ಲೆಲ್ಲ ಅಲ್ಪಸಂಖ್ಯಾತರನ್ನ ಬೈಯೋಕೆ? ಇವನು ಈ ಹಿಂದೆ ಎಲ್ಲಿದ್ದ ಅಂತ ಈ ಎರಡು ಜಿಲ್ಲೆಗೆ ಗೊತ್ತಿಲ್ಲವೇನು, ಬಾಯಿಗೆ ಲಗಾಮ್ ಹಾಕಿಕೊಂಡರೆ ಒಳಿತು. ಇಲ್ಲ ಎಂದರೆ ಎಮ್ಮಿಕರದಂಗ ಒದರಿ..ಒದರಿ ಸಾಯೋ ಪರಿಸ್ಥಿತಿ ಬರುತ್ತದೆ ಎಂದರು.

## ಎ. 29, ಮೇ ತಿಂಗಳ ಎಲ್ಲಾ ಸೋಮವಾರವೂ ಪಿಲಿಕುಳ ಮುಕ್ತ

• ಉದಯವಾಹಿನಿ, ಮಂಗಳೂರು

ಶಾಲಾ ಕಾಲೇಜು ಮಕ್ಕಳಿಗೆ ಬೇಸಗೆ ರಜೆ ಪ್ರಾರಂಭವಾಗಿರುವುದರಿಂದ ಎ. 29 ಹಾಗೂ ಮೇ ತಿಂಗಳ ನಾಲ್ಕು ಸೋಮವಾರಗಳಂದು ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರದ ಎಲ್ಲಾ ವಿಭಾಗಗಳೂ ಸಾರ್ವಜನಿಕರಿಗೆ ತೆರೆದಿರುತ್ತವೆ. ಮೃಗಾಲಯ, ಪ್ರಾದೇಶಿಕ ವಿಜ್ಞಾನ ಕೇಂದ್ರ, ಲೇಕ್ ಗಾರ್ಡನ್, ಸಂಸ್ಕೃತಿ ಗಾರ್ಡನ್‌ಗಳನ್ನು ಇತರ ದಿನಗಳಂತೆಯೇ ವೀಕ್ಷಿಸಬಹುದಾಗಿದೆ ಎಂದು ಪ್ರಕಟನೆ ತಿಳಿಸಿದೆ.



ಉದಯವಾಹಿನಿ ಚಿತ್ರ

## ಬಿಜೆಪಿ ಯುವ ಮೋರ್ಚಾ ಮುಖಂಡರ ವಿರುದ್ಧ ಕೇಸ್

• ಉದಯವಾಹಿನಿ, ಉಡುಪಿ

ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದರೂ ಚುನಾವಣಾ ಅಧಿಕಾರಿಯಿಂದ ಪೂರ್ವಾನುಮತಿಯನ್ನು ಪಡೆಯದೆ ಹಾಗೂ ಕರಪತ್ರದಲ್ಲಿ ಮುದ್ರಣ ಕುರಿತು ಪ್ರಕಾಶಕರ ವಿವರ ನಮೂದಿಸದೇ ಪೋಸ್ಟರ್ ಅಭಿಯಾನ ನಡೆಸಿದ ಬಿಜೆಪಿ ಯುವ ಮೋರ್ಚಾದ ಮುಖಂಡರ ವಿರುದ್ಧ ಉಡುಪಿ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬಿಜೆಪಿ ಯುವ ಮೋರ್ಚಾದ ವತಿಯಿಂದ ಕಾಂಗ್ರೆಸ್ ವಿರುದ್ಧ ಪೋಸ್ಟರ್ ಅಭಿಯಾನವನ್ನು ನಗರದಲ್ಲಿ ಎ.23ರಂದು ಹಮ್ಮಿಕೊಳ್ಳಲಾಗಿತ್ತು. ಬನ್ನಂಜೆ ಕೆಎಸ್ಸಾರ್ಟಿಸಿ ಬಸ್ ನಿಲ್ದಾಣದ ಪ್ಲಾಟ್ ಫಾರ್ಮ್ ಕಂಬಗಳಿಗೆ ಹಾಗೂ ಕರಾವಳಿ ಬೈಪಾಸ್‌ನ ಅಂಡರ್ ಪಾಸ್‌ಗಳ ಗೋಡೆಯ ಮೇಲೆ ಕಾರ್ಯಕರ್ತರು ಪೋಸ್ಟರ್‌ಗಳನ್ನು ಅಂಟಿಸಿದ್ದರು. ಇವರು ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದರೂ ಪೂರ್ವಾನುಮತಿಯನ್ನು ಪಡೆದುಕೊಳ್ಳದೆ ಹಾಗೂ ಕರಪತ್ರದಲ್ಲಿ ಮುದ್ರಣ ಕುರಿತಂತೆ ಪ್ರಕಾಶಕರ ವಿವರ ನಮೂದಿಸದೇ ಒಂದು ಪಕ್ಷದ ವಿರುದ್ಧವಾಗಿ ಮುದ್ರಿಸಿರುವ ಪೋಸ್ಟರ್‌ಗಳನ್ನು ಅಂಟಿಸಿರುವುದು ಕಂಡುಬಂದಿದ್ದು, ಇದರ ನೇತೃತ್ವ ವಹಿಸಿದ್ದ ಉಡುಪಿ ನಗರ ಬಿಜೆಪಿ ಯುವ ಮೋರ್ಚಾದ ಶ್ರೀವತ್ಸಾ, ಶಿವಪ್ರಸಾದ್, ಧನುಷ್ ಹಾಗೂ ಇತರರ ವಿರುದ್ಧ ಉಡುಪಿ ವಿಧಾನ ಸಭಾ ಕ್ಷೇತ್ರದ ಫ್ಲೈಯಿಂಗ್ ಸ್ಕ್ವ್ಯಾಡ್ ಟೀಂನ ಅಧಿಕಾರಿ ಗೌತಮ್ ಶಾಸ್ತ್ರಿ ನೀಡಿದ ದೂರಿನಂತೆ ಉಡುಪಿ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.


ಉದಯವಾಹಿನಿ ಚಿತ್ರ

**ಅನುಮತಿಯಿಲ್ಲದೆ ಪೋಸ್ಟರ್ ಅಭಿಯಾನ**

# ಮೋದಿ ಎಲ್ಲೆ ಮೀರಿ ಮಾತನಾಡಿತ್ತಿದ್ದಾರೆ: ಎಚ್.ಕೆ. ಪಾಟೀಲ

## ದಲಿತರ ಮೀಸಲಾತಿ ಕಿತ್ತು ಅಲ್ಪಸಂಖ್ಯಾತರಿಗೆ ನೀಡುತ್ತಾರೆ ಎಂಬ ಹೇಳಿಕೆ ನೀಡುವ ಮೂಲಕ ದ್ವೇಷ ರಾಜಕಾರಣ ಮಾಡುತ್ತಿದ್ದಾರೆ

• ಉದಯವಾಹಿನಿ ಗದಗ

ಕಳೆದ ಮೂರು ದಿನಗಳಿಂದ ಪ್ರಧಾನಿ ನರೇಂದ್ರ ಮೋದಿ ಅವರು ಎಲ್ಲೆ ಮೀರಿ ಮಾತನಾಡಿತ್ತಿದ್ದಾರೆ. ಸಾರ್ವಜನಿಕರಿಗೆ ಪ್ರಚೋದನೆ ನೀಡುವ ಹಾಗೂ ದ್ವೇಷ ಬಿತ್ತುವ ಅಂಶಗಳನ್ನು ಮಾತನಾಡುವ ಮೂಲಕ ದೇಶದಲ್ಲಿ ಕೋಮುಭಾವನೆ ಹುಟ್ಟುಹಾಕುತ್ತಿರುವ ಪ್ರಧಾನಿ ನರೇಂದ್ರ ಮೋದಿ ಅವರ ವಿರುದ್ಧ ಕೇಂದ್ರ ಚುನಾವಣಾ ಆಯೋಗವು ಸುಮೋಟೋ ಪ್ರಕರಣ ದಾಖಲಿಸಿ, ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಳಿ ಕಿತ್ತು ಮುಸಲ್ಮಾನರಿಗೆ ಕೊಡುತ್ತಾರೆ, ಹಿಂದುಗಳ ಆಸ್ತಿಯನ್ನು ಕಿತ್ತು ಮುಸಲ್ಮಾನರಿಗೆ ಹಂಚಿಕೆ ಮಾಡುತ್ತಾರೆ, ದಲಿತರ ಮೀಸಲಾತಿ ಕಿತ್ತು ಅಲ್ಪಸಂಖ್ಯಾತರಿಗೆ ನೀಡುತ್ತಾರೆ ಎಂಬ ಹೇಳಿಕೆ ನೀಡುವ ಮೂಲಕ ದ್ವೇಷ ರಾಜಕಾರಣ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ಭಾರತ ಮಾತೆಯ ಆಭರಣಗಳಾದ ರೈಲ್ವೆ, ಏರ್ಪೋರ್ಟ್, ಗ್ಯಾಸ್ ಲೈನ್‌ಗಳು, ಸ್ಟೇಡಿಯಂಗಳು, ರಸ್ತೆಗಳನ್ನು ದೋಚಿ ಶ್ರೀಮಂತರ ಪಾಲು ಮಾಡುತ್ತಿದ್ದಾರೆ. ಆಭರಣಗಳನ್ನು ಕಿತ್ತು, ದೋಚಿ ಆದಾನಿ, ಅಂಬಾನಿ ಹಾಗೂ ಗುಜರಾತಿನ ವ್ಯಾಪಾರಿಗಳಿಗೆ ನೀಡುತ್ತಿರುವ ಪ್ರಧಾನಿ ನರೇಂದ್ರ ಮೋದಿ ಅವರು ಇಂತಹ ಹೇಳಿಕೆ ನೀಡುತ್ತಿರುವುದು ನಾಚಿಕೆಗೇಡಿನ ಸಂಗತಿ ಎಂದರು. ಪ್ರಸ್ತುತ ನಡೆ ಯುತ್ತಿರುವ ಲೋಕಸಭೆ ಚುನಾವಣೆಯಲ್ಲಿ ಈಗಾಗಲೇ ಮತದಾನವಾಗಿರುವ ರಾಜ್ಯಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸೋಲುವ ಭಯ ಕಾಡುತ್ತಿದ್ದು, ಇದರಿಂದ ಹತಾಶರಾಗಿ ಇಲ್ಲಸಲ್ಲದ ಮಾತುಗಳನ್ನಾಡುತ್ತಿದ್ದಾರೆ. ದುರ್ವ್ಯವಹಾರಗಳನ್ನು ಮಾಡುತ್ತಿರುವ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮತದಾರರು ತಕ್ಕ ಪಾಠ ಕಲಿಸಲಿದ್ದಾರೆ ಎಂದರು.

**ಸುಮೋಟೋ ಪ್ರಕರಣ ದಾಖಲಿಸಿ**



ಉದಯವಾಹಿನಿ ಚಿತ್ರ

ಬರಪೀಡಿತರಿಗೆ ಬರಪರಿಹಾರ ನೀಡಿ ಎಂದು ಕಳೆದ ಆರು ತಿಂಗಳ ಕಾಲ ಹೋರಾಟ ಮಾಡಿದರೂ ಪರಿಹಾರ ನೀಡಲಿಲ್ಲ. ಬರ ಪರಿಹಾರ ಪಡೆದುಕೊಳ್ಳಲು ಸುಪ್ರೀಂ ಕೋರ್ಟ್ ಮೆಟ್ಟಿಲು ಹತ್ತಬೇಕಾಯಿತು, ಪರಿಹಾರ ಸರಿಯಾದ ಸಮಯದಲ್ಲಿ ಬರಪೀಡಿತ ರೈತರ ಕುಟುಂಬಗಳಿಗೆ 13 ಸಾವಿರ ಪರಿಹಾರ ನೀಡಲು ಸಾಧ್ಯವಿತ್ತು. ಆದರೆ, ಜನರು ನರಳುವುದನ್ನು ನೋಡುವ ಕೇಂದ್ರ ಸರಕಾರ, ರಾಜ್ಯ ಸರಕಾರಕ್ಕೆ ಅನಾನುಕೂಲತೆ ಸೃಷ್ಟಿಸಲು ಕೇಂದ್ರ ಸರಕಾರ ದ್ವೇಷದ ರಾಜಕಾರಣ ಮಾಡಿತು ಎಂದು ಆರೋಪಿಸಿದರು. ಕಾರ್ಯದರ್ಶಿ ವಿ.ಬಿ. ಸೋಮನಕಟ್ಟಿಮಠ, ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಬಸವರಾಜ ಕಡೇಮನಿ, ಉಮರ್ ಫಾರೂಖ್ ಹುಬ್ಬಳ್ಳಿ ಸೇರಿ ಅನೇಕರು ಸುದ್ದಿಗೋಷ್ಠಿಯಲ್ಲಿದ್ದರು. ಏ. 25ರಂದು ಮಧ್ಯಾಹ್ನ 2.45ಕ್ಕೆ ಗಜೇಂದ್ರಗಡದಲ್ಲಿ ಜರುಗುವ ಚುನಾವಣಾ ಪ್ರಚಾರದ ಬೃಹತ್ ಸಮಾವೇಶಕ್ಕೆ ಸಿಎಂ ಸಿದ್ದರಾಮಯ್ಯ ಆಗಮಿಸಲಿದ್ದಾರೆ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

### ಪೊಲೀಸ್ ಇಲಾಖೆಗೆ ಮೆಚ್ಚುಗೆ

**ಗದಗ-ಬೆಟಗೇರಿ ಅವಳಿ ನಗರದಲ್ಲಿ ಕೆಲ ದಿನಗಳ ಹಿಂದೆ ನಡೆದ ದುರ್ಘಟನೆ, ಬರ್ಬರ ಕೊಲೆ ಪ್ರಕರಣದಲ್ಲಿ ನಮ್ಮ ಸರಕಾರ, ಜಿಲ್ಲಾ ಪೊಲೀಸ್ ಇಲಾಖೆ ಈಗಾಗಲೇ ತನಿಖೆ ಪೂರ್ಣಗೊಳಿಸಿ, ಆರೋಪಿಗಳನ್ನು ಬಂಧಿಸಿದ್ದಾರೆ. ತೀವ್ರವಾದ ತನಿಖೆ, ಕ್ರಮ ಕೈಗೊಂಡಿರುವ ಜಿಲ್ಲಾ ಪೊಲೀಸ್ ಇಲಾಖೆಗೆ ಮೆಚ್ಚುಗೆ ವ್ಯಕ್ತಪಡಿಸಿದ ಸಚಿವರು ತನಿಖೆ ಪ್ರಕ್ರಿಯೆಯಲ್ಲಿ ಥರ್ಡ್ ಐ ನೀಡಿರುವ ಕ್ಲ್ಯೂಗಳು ತನಿಖೆಗೆ ಸಹಾಯವಾಗಿದೆ ಎಂಬುದು ತಿಳಿದು ಬರುತ್ತದೆ ಎಂದರು.**

**ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ, ರೋಣ ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಹಾವೇರಿ-ಗದಗ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರು ಗೆಲ್ಲಲು ಪೂರಕ ವಾತಾವರಣವಿದೆ ಎಂದರು.**
**-ಎಚ್.ಕೆ. ಪಾಟೀಲ**

## ಹುಟ್ಟುಹಬ್ಬ ಆಚರಿಸಿಕೊಂಡ ಸಚಿನ್ ತೆಂಡೂಲ್ಕರ್; ವಿಡಿಯೊ ವೈರಲ್



ಸಚಿನ್ ಸಾಧನೆ ನಿಜಕ್ಕೂ ಒಂದು ಅದ್ಭುತವೇ ಸರಿ. ಕ್ರಿಕೆಟ್ ಬಾಳ್ವೆಯ ಆರಂಭದಿಂದ ಹಿಡಿದು ಕಡೇಯ ದಿನದವರೆಗೂ ಯಾವುದೇ ವಿವಾದವಿಲ್ಲದೆ ಸವ್ಯಸಾಚಿಯಾಗಿದ್ದ ಸಚಿನ್ ಎಲ್ಲಾ ಕ್ರಿಕೆಟ್ ಆಟಗಾರರಿಗೂ ಸ್ಫೂರ್ತಿಯಾಗಿದ್ದಾರೆ.

ಮುಂಬಯಿ: ವಿಶ್ವ ಕಂಡ ಶ್ರೇಷ್ಠ ಬ್ಯಾಟ್ಸ್‌ಮನ್, ಲೆಜೆಂಡರಿ ಕ್ರಿಕೆಟರ್, ಕ್ರಿಕೆಟ್ ದೇವರು ಎಂದೆಲ್ಲ ನಾಮಾಂಕಿತರಾದ ಸಚಿನ್ ತೆಂಡೂಲ್ಕರ್‌ಅವರು ಎಪ್ರಿಲ್ 24ರಂದು ತಮ್ಮ 51ನೇ ವರ್ಷದ ಹುಟ್ಟು ಹಬ್ಬವನ್ನು 'ಸಚಿನ್ ತೆಂಡೂಲ್ಕರ್ ಫೌಂಡೇಶನ್'ನಮಕ್ಕಳೊಂದಿಗೆ ಆಚರಿಸಿದ್ದರು. ಇದರ ವಿಡಿಯೊವನ್ನು ಸಚಿನ್ ತಮ್ಮ ಇನ್‌ಸ್ಟಾಗ್ರಾಮ್ ಮತ್ತು ಟ್ವಿಟರ್ ಎಕ್ಸ್‌ನಲ್ಲಿ ಹಂಚಿಕೊಂಡಿದ್ದಾರೆ. ಸಚಿನ್ ಅವರಿಗೆ ಕೋಟ್ಯಂತರ ಕ್ರಿಕೆಟ್ ಅಭಿಮಾನಿಗಳು ಸಾಮಾಜಿಕ ಜಾಲತಾಣದಲ್ಲಿ ಹರಸಿ ಹಾರೈಸಿದ್ದಾರೆ.

ಸಚಿನ್ ಅವರು 'ಸಚಿನ್ ತೆಂಡೂಲ್ಕರ್ ಫೌಂಡೇಶನ್' ಎನ್ನುವ ಹೆಸರಿನ ಪ್ರತಿಷ್ಠಾನದ ಮೂಲಕ ಬಡ ಮಕ್ಕಳಿಗೆ ಶಿಕ್ಷಣ, ಕ್ರಿಡೆ ಮತ್ತು ವೈದ್ಯಕೀಯ ನೆರವನ್ನು ನೀಡುತ್ತಿದ್ದಾರೆ. ಸಮಾಜಮುಖಿ ಕಾರ್ಯವನ್ನು ಮಾಡುವ ಮೂಲಕ ಅನೇಕ ಬಡ ಮಕ್ಕಳ ಕನಸನ್ನು ನನಸು ಮಾಡುವ ಕಾರ್ಯ ಮಾಡುತ್ತಿದ್ದಾರೆ. ಈ ಪ್ರತಿಷ್ಠಾನವು ಮಕ್ಕಳಿಗೆ ಸಮಾನ ಅವಕಾಶವನ್ನು ನೀಡಲು ಮತ್ತು ಉತ್ತಮ ಜಗತ್ತನ್ನು ಸೃಷ್ಟಿಸಲು ಸಹಾಯ ಮಾಡುತ್ತದೆ. ಸಚಿನ್ ಅವರು ತಮ್ಮ ಹುಟ್ಟು ಹಬ್ಬವನ್ನು ಈ ಫೌಂಡೇಶನ್‌ನ ಮಕ್ಕಳೊಂದಿದೆ ಕೆಲ ಕಾಲ ಫುಟ್ಬಾಲ್ ಆಡಿ, ಊಟ ಮಾಡುವ ಜತೆಗೆ ಕೇಕ್ ಕತ್ತರಿಸಿ ಆಚರಿಸಿದ್ದಾರೆ. ಬಳಿಕ ಮಕ್ಕಳಿಗೆ ವಿಶೇಷವಾಗಿ ಹಾರೈಸಿ ಉಜ್ವಲ ಭವಿಷ್ಯ ರೂಪಿಸಿಕೊಳ್ಳುವಂತೆ ಕಿವಿ ಮಾತು ಹೇಳಿದ್ದಾರೆ. ಕಳೆದ ವರ್ಷ ಸಚಿನ್ ಅವರು ತಮ್ಮ 50ನೇ ವರ್ಷದ ಜನ್ಮ ದಿನಾಚರಣೆಯನ್ನು ತಮ್ಮ ಕುಟುಂಬದೊಂದಿಗೆ ಗೋವಾದಲ್ಲಿ ಆಚರಿಸಿದ್ದರು. ಐಷಾರಾಮಿ ಜೀವನಶೈಲಿಗೆ ಹೆಸರುವಾಸಿಯಾದ ಸಚಿನ್ ಅವರು ತಮ್ಮ ಹುಟ್ಟು ಹಬ್ಬವನ್ನು ಮಾತ್ರ ಹಳ್ಳಿ ಸೊಗಡಿನಲ್ಲಿ ಆಚರಿಸಿದ್ದರು. ಪತ್ನಿ ಅಂಜಲಿ ಮತ್ತು ಮಗಳು ಸಾರಾ ತೆಂಡೂಲ್ಕರ್ ಅವರೊಂದಿಗೆ ಒಲೆಯ ಪಕ್ಕದಲ್ಲಿ ಕುಳಿತು ಸಚಿನ್ ಒಲೆ ಊದುತ್ತಿರುವ ಫೋಟೊವನ್ನು ಹಂಚಿಕೊಂಚಿಕೊಂಡಿದ್ದರು.

2020ರಲ್ಲಿ ಹುಟ್ಟುಹಬ್ಬ ಆಚರಿಸದ ಸಚಿನ್!

ಪ್ರತಿ ವರ್ಷವೂ ಸಂಭ್ರಮದೊಂದಿಗೆ ಹುಟ್ಟು ಹಬ್ಬ ಆಚರಿಸುತ್ತಿದ್ದ ಸಚಿನ್ 2020ರಲ್ಲಿ ತಮ್ಮ 47ನೇ ವರ್ಷದ ಹುಟ್ಟುಹಬ್ಬ ಆಚರಿಸಿಕೊಂಡಿರಲಿಲ್ಲ. ಇಡೀ ವಿಶ್ವವನ್ನೇ ತಲ್ಲಣಗೊಳಿಸಿದ್ದ ಕೋವಿಡ್ ಸಂಕಷ್ಟದಲ್ಲಿ ಸೇವೆ ಸಲ್ಲಿಸಿದ್ದ ಆರೋಗ್ಯ ಸೈನಿಕರಿಗೆ ಗೌರವ ಕೊಡುವ ನಿಟ್ಟಿನಲ್ಲಿ ಅವರು ತಮ್ಮ ಹುಟ್ಟು ಹಬ್ಬವನ್ನು ಆಚರಿಸಿರಲಿಲ್ಲ. ಮನೆಯಲ್ಲಿಯೇ ತಾಯಿ ಕಾಲಿಗೆ ಬಿದ್ದು ಆಶೀರ್ವಾದ ಪಡೆದಿದ್ದರು. 24 ವರ್ಷಗಳ ಕ್ರಿಕೆಟ್ ಬಾಳ್ವೆಯಲ್ಲಿ 664 ಪಂದ್ಯ, 34,357 ರನ್, 201 ವಿಕೆಟ್, 100 ಅಂತಾರಾಷ್ಟ್ರೀಯ ಶತಕ, 164 ಅರ್ಧ ಶತಕ, ಲೆಕ್ಕವಿಲ್ಲದಷ್ಟು ದಾಖಲೆಗಳ ಸರದಾರ, ದೇಶದ ಶ್ರೇಷ್ಠ ಗೌರವ ಭಾರತ ರತ್ನ, ಪದ್ಮ ಪ್ರಶಸ್ತಿಗಳ ಒಡೆಯ, ರಾಜೀವ್ ಗಾಂಧಿ ಖೇಲ್‌ರತ್ನ ಪ್ರಶಸ್ತಿಗಳಿಂದೆಲ್ಲ ಪುರಸ್ಕೃತರಾಗಿರುವ ಸಚಿನ್ ಸಾಧನೆ ನಿಜಕ್ಕೂ ಒಂದು ಅದ್ಭುತವೇ ಸರಿ. ಕ್ರಿಕೆಟ್ ಬಾಳ್ವೆಯ ಆರಂಭದಿಂದ ಹಿಡಿದು ಕಡೇಯ ದಿನದವರೆಗೂ ಯಾವುದೇ ವಿವಾದವಿಲ್ಲದೆ ಸವ್ಯಸಾಚಿಯಾಗಿದ್ದ ಸಚಿನ್ ಎಲ್ಲಾ ಕ್ರಿಕೆಟ್ ಆಟಗಾರರಿಗೂ ಸ್ಫೂರ್ತಿಯಾಗಿದ್ದಾರೆ.

# ಗುಜರಾತ್ ವಿರುದ್ಧ ಡೆಲ್ಲಿಗೆ ರೋಚಕ ಗೆಲುವು

## ■ ಸಿಡಿದ ಪಂತ್-ಅಕ್ಷರ್ ■ ಡೆಲ್ಲಿಗೆ ಪ್ಲೇ ಆಫ್ ರೇಸ್ ಜೀವಂತ

### ರಿಷಭ್ ಪಂತ್ ಭರ್ಜರಿ ಬ್ಯಾಟಿಂಗ್

**ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ ತಂಡವು 44 ಮೂರು ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿತು. ಅಕ್ಷರ್ ಪಟೇಲ್ ,ಪಂತ್ ದೊಡ್ಡ ರನ್ ಗಳಿಸಿದರು. ಅಕ್ಷರ್ ಪಟೇಲ್ 43 ಎಸೆತಗಳಲ್ಲಿ 5 ಬೌಂಡರಿ 4 ಸಿಕ್ಸರ್ ನೆರವಿನಿಂದ 66 ರನ್ ಗಳಿಸಿದರು. ಪಂತ್ 43 ಎಸೆತಗಳಲ್ಲಿ 8 ಸಿಕ್ಸ್ 88 ರನ್ ಗಳಿಸಿದರು. 113 ರನ್‌ಗಳ ಜೊತೆಯಾಟ ನೀಡಿದರು. ಉಳಿಂದತೆ ಜಾಕ್ ಮೆಕರ್ಕ್ 23, ಪೃಥ್ವಿ ಶಾ 11 ಮತ್ತು ಸ್ಟಬ್ಸ್ 26 ರನ್ ಗಳಿಸಿದರು. ಡೆಲ್ಲಿ ಕ್ಯಾಪಿಟಲ್ಸ್ 20 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 224 ರನ್ ಗಳಿಸಿತು. ಮೋಹಿತ್ ಶರ್ಮಾ ಎಸೆದ ಕೊನೆಯ ಓವರ್‌ನಲ್ಲಿ ಕ್ಯಾಪಿಟಲ್ಸ್ 31 ರನ್ ಗಳಿಸಿತು. ಗುಜರಾತ್ ಟೈಟಾನ್ಸ್ ಟೈಟಾನ್ಸ್ ಬೌಲರ್‌ಗಳ ಪೈಕಿ ಸಂದೀಪ್ ವಾರಿಯರ್ ಗರಿಷ್ಠ 3 ವಿಕೆಟ್ ಪಡೆದರೆ, ನೂರ್ ಅಹ್ಮದ್ 1 ವಿಕೆಟ್ ಪಡೆದರು.**



ಡೆಲ್ಲಿ ಕ್ಯಾಪಿಟಲ್ಸ್ ಗುಜರಾತ್ ಟೈಟಾನ್ಸ್ ನಡುವೆ ನಡೆಯಿತು. ಈ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಗುಜರಾತ್ ಟೈಟಾನ್ಸ್‌ಗೆ ನಿಗದಿತ 20 ಓವರ್ ನಲ್ಲಿ 225 ರನ್‌ಗಳ ಸವಾಲನ್ನು ನೀಡಿತು. ದೆಹಲಿಯ ಅರುಣ್ ಜೇಟ್ಲಿ ಸ್ಟೇಡಿಯಂನಲ್ಲಿ ನಡೆದ ಈ ಈ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ನಾಯಕ ಶುಭಮನ್ ಗಿಲ್ ಟಾಸ್ ಗೆದ್ದು ಮೊದಲು ಬೌಲಿಂಗ್ ಆಯ್ಕೆ ಮಾಡಿಕೊಂಡರು, ಡೆಲ್ಲಿಗೆ ಮೊದಲು ಬ್ಯಾಟಿಂಗ್ ಮಾಡಲು ಆಹ್ವಾನಿಸಿದರು. ಈ ಮೂಲಕ ಡೆಲ್ಲಿ ಉತ್ತಮ ಮೊತ್ತ ಕಲೆಹಾಕಿತು. ಬಿಗ್ ಟಾರ್ಗೆಟ್ ಬೆನ್ನಟ್ಟಿದ ಗುಜರಾತ್ ತಂಡವು ನಿಗದಿತ 20 ಓವರ್‌ಗೆ 8 ವಿಕೆಟ್ ನಷ್ಟಕ್ಕೆ 220 ರನ್ ಗಳಿಸುವ ಮೂಲಕ 5 ರನ್ ಗಳಿಂದ ಸೋಲನ್ನಪ್ಪಿತು. ಡೆಲ್ಲಿ ಕ್ಯಾಪಿಟಲ್ಸ್ ನೀಡಿದ 225 ರನ್ ಗಳ ಬೃಹತ್ ಟಾರ್ಗೆಟ್ ಬೆನ್ನಟ್ಟಿದ ಗುಜರಾತ್ ತಂಡಕ್ಕೆ ಆರಂಭದಲ್ಲಿಯೇ ಆಘಾತ ಎದುರಾಯಿತು. ತಂಡದ ನಾಯಕ ಶುಭ್ ಮನ್ ಗಿಲ್ 6 ರನ್ ಗಳಿಸಿ ಔಟ್ ಆದರೆ, ಅಜ್ಮತುಲ್ಲಾ ಓಮರ್ಝಾಯಿ 1 ರನ್ ಗಳಿಸಿ ಪೆವಿಲಿಯನ್ ಸೇರಿದರು. ಆದರೆ ವೃದ್ಧಿಮಾನ ಸಾಹಾ 25 ಎಸೆತದಲ್ಲಿ 39 ರನ್ ಗಳಿಸಿದರು. ಆದರೆ ಸಾಯಿ ಸುದರ್ಶನ್ ಮತ್ತು ಡೇವಿಡ್ ಮಿಲ್ಲರ್ ಕೊಂಚ ಹೋರಾಟ ನಡೆಸಿದರೂ ಸಹ ತಂಡವನ್ನು ಗೆಲ್ಲಿಸಲು ಸಾಧ್ಯವಾಗಲಿಲ್ಲ. ಈ ವೇಳೆ ಸಾಯಿ ಸುದರ್ಶನ್ 39 ಎಸೆತದಲ್ಲಿ 2 ಸಿಕ್ಸ್ ಮತ್ತು 7 ಫೋರ್ ಮೂಲಕ 65 ರನ್ ಮತ್ತು ಡೇವಿಡ್ ಮಿಲ್ಲರ್ 23 ಎಸೆತದಲ್ಲಿ 3 ಸಿಕ್ಸ್ ಮತ್ತು 6 ಫೋರ್ ಮೂಲಕ 55 ರನ್ ಗಳಿಸಿದರೂ ವ್ಯರ್ಥವಾಯಿತು. ಉಳಿದಂತೆ ಶಾರೂಖ್ ಖಾನ್ 8 ರನ್, ರಾಹುಲ್ ತೆವಾಟಿಯಾ 4 ರನ್ ಗಳಿಸಿದರು. ಸಾಯಿ ಕಿಶೋರ್ 13 ರನ್ ಸಿಡಿಸಿದರು.

### ಪಂತ್, ಅಕ್ಷರ್ ಜೊತೆಯಾಟ



**ಮೊದಲು ಇನಿಂಗ್ಸ್ ಆರಂಭಿಸಿದ ಡೆಲ್ಲಿಗೆ ಪೃಥ್ವಿ ಶಾ ಮತ್ತು ಜೇಕ್ ಫ್ರೇಸರ್-ಮ್ಯಾಕ್‌ಗುರ್ಕ್ ಆಕ್ರಮಣಕಾರಿ ಬ್ಯಾಟಿಂಗ್ ಮೂಲಕ ಉತ್ತಮ ಆರಂಭ ಒದಗಿಸಿದರು. ಆದರೆ ಈ ಬ್ಯಾಟಿಂಗ್ ಆರ್ಭಟ ಹೆಚ್ಚು ಹೊತ್ತು ಸಾಗಲಿಲ್ಲ. ಸಂದೀಪ್ ವಾರಿಯರ್ ಒಂದೇ ಓವರ್‌ನಲ್ಲಿ ಉಭಯ ಆಟಗಾರರ ವಿಕೆಟ್ ಕಿತ್ತು ಡೆಲ್ಲಿಗೆ ಅವಳಿ ಆಘಾತವಿಕ್ಕಿದರು. 5 ರನ್‌ಗಳಿಸಿದ್ದ ವೇಳೆ ಜೀವದಾನ ಪಡೆದಿದ್ದ ಮ್ಯಾಕ್‌ಗುರ್ಕ್ 23 ರನ್ ಗಳಿಸಿ ಔಟಾದರು. ಇದರ ಬೆನ್ನಲ್ಲೇ ಪೃಥ್ವಿ ಶಾ(11) ವಿಕೆಟ್ ಕೂಡ ಪತನಗೊಂಡಿತು. ನೂರ್ ಅಹ್ಮದ್ ಹಿಡಿದ ಅದ್ಭುತ ಕ್ಯಾಚ್‌ಗೆ ಉಭಯ ಆಟಗಾರರು ಬಲಿಯಾದರು. ಈ ವಿಕೆಟ್ ಪತನದ ಬಳಿಕ ಆಡಲಿಳಿದ ಶಾಯ್ ಹೋಪ್ ಕೂಡ ಡೆಲ್ಲಿಗೆ ಹೋಪ್ ನೀಡುವಲ್ಲಿ ವಿಫಲರಾದರು. ಕೇವಲ 5 ರನ್‌ಗೆ ಆಟ ಮುಗಿಸಿದರು. 44 ರನ್‌ಗೆ ಮೂರು ವಿಕೆಟ್ ಕಳೆದುಕೊಂಡ ವೇಳೆ ಕ್ರೀಸ್‌ಗಿಳಿದ ಎಡಗೈ ಬ್ಯಾಟರ್‌ಗಳಾದ ರಿಷಭ್ ಪಂತ್ ಮತ್ತು ಅಕ್ಷರ್ ಪಟೇಲ್ ಆರಂಭದಲ್ಲಿ ತಾಳ್ಮೆಯುತ ಬ್ಯಾಟಿಂಗ್ ನಡೆಸಿ ತಂಡವನ್ನು ಆರಂಭಿಕ ಆಘಾತದಿಂದ ಪಾರು ಮಾಡಿದರು.**

## ಫಿಟ್‌ನೆಸ್ ಸಲುವಾಗಿ ಮ್ಯಾಡ್ರಿಡ್ ಓಪನ್‌ನಿಂದ ಹಿಂದೆ ಸರಿದ ಹಾಲೆಪ್



ದುರದೃಷ್ಟವಶಾತ್ ನನ್ನ ದೇಹವು ಸಿದ್ಧವಾಗಲು ಸ್ವಲ್ಪ ಹೆಚ್ಚು ಸಮಯ ಬೇಕಾಗುತ್ತದೆ ಮತ್ತು ಮ್ಯಾಡ್ರಿಡ್‌ನಲ್ಲಿ ಆಡದಿರಲು ನಾನು ಕಠಿಣ ನಿರ್ಧಾರವನ್ನು ತೆಗೆದು ಕೊಂಡಿದ್ದೇನೆ'' ಎಂದು ಸಿಮೋನಾ ಹಾಲೆಪ್ ಹೇಳಿದ್ದಾರೆ.

ಬೂಖರೆಸ್ಟ್ ಡೋಪಿಂಗ್ ಪ್ರಕರಣದಿಂದ ಮುಕ್ತರಾಗಿರುವ ರೊಮೇನಿಯಾದ ಟೆನಿಸ್ ತಾರೆ, 2 ಗ್ರ್ಯಾನ್ ಸ್ಲಾಂ ವಿಜೇತೆ ಸಿಮೋನಾ ಹಾಲೆಪ್‌ಮ್ಯಾಡ್ರಿಡ್ ಓಪನ್ ನಿಂದಹಿಂದೆ ಸರಿದಿದ್ದಾರೆ. ಫಿಟ್‌ನೆಸ್ ಕಂಡುಕೊಳ್ಳುವ ಸಲುವಾಗಿ ಅವರು ಈ ನಿರ್ಧಾರ ಕೈಗೊಂಡಿರುವುದಾಗಿ ತಿಳಿಸಿಸಿದ್ದಾರೆ. ಉದ್ದೀಪನ ಮದ್ದು ಸೇವನೆ ನಿಯಮ ಉಲ್ಲಂಘನೆಗಾಗಿ ವಿಶ್ವದ ಮಾಜಿ ಅಗ್ರಮಾನ್ಯ ಟೆನಿಸ್ ಆಟಗಾರ್ತಿ ಸಿಮೊನಾ ಹಾಲೆಪ್ ಅವರಿಗೆ 2022ರ ಅಕ್ಟೋಬರ್‌ನಲ್ಲಿ 4 ವರ್ಷಗಳ ನಿಷೇಧ ಹೇರಿಲಾಗಿತ್ತು. ಇಂಟರ್‌ನ್ಯಾಷನಲ್ ಟೆನಿಸ್ ಇಂಟೆಗ್ರಿಟಿ ಏಜನ್ಸಿಯೂ ಅಂದು ಹಾಲೆಪ್ ನಿಷೇಧ ಶಿಕ್ಷೆಯನ್ನು ಪ್ರಕಟಿಸಿತ್ತು. ನಿಷೇಧ ಅವಧಿ ಇಳಿಸಲು ಕ್ರೀಡಾ ಮಧ್ಯಸ್ಥಿಕೆ ನ್ಯಾಯಾಲಯಕ್ಕೆ ಹಾಲೆಪ್ ಮನವಿ ಮಾಡಿದ್ದರು. ಅವರ ಕೋರಿಕೆ ಮನ್ನಣೆ ನೀಡಿದ ನ್ಯಾಯಾಲಯ ನಿಷೇಧ ಅವಧಿಯನ್ನು 9 ತಿಂಗಳಿಗೆ ಇಳಿಕೆ ಮಾಡಿದೆ. 2023ರ ಜುಲೈ ವೇಳೆಗಾಗಲೇ 9 ತಿಂಗಳ ನಿಷೇಧ ಅವಧಿ ಮುಕ್ತಾಯಗೊಂಡಿದ್ದರಿಂದ ಹಾಲೆಪ್ ಅವರಿಗೆ 2 ತಿಂಗಳ ಹಿಂದಷ್ಟೇ ಅಂತಾರಾಷ್ಟ್ರೀಯ ಟೆನಿಸ್‌ನಲ್ಲಿ ಸ್ಪರ್ಧಿಸಲು ಅವಕಾಶ ನೀಡಲಾಗಿತ್ತು. 32 ವರ್ಷದ ಸಿಮೋನಾ ಹಾಲೆಪ್‌ಗೆ ನಿಷೇಧ ಶಿಕ್ಷೆಯಿಂದಾಗಿ ಹಲವು ಟೂರ್ನಿಗಳು ಕೈ ತಪ್ಪಿ ಹೋಗಿತ್ತು. ಸರಿ ಸುಮಾರು 18 ತಿಂಗಳಿನಿಂದ ಟೆನಿಸ್ ಆಡದ ಕಾರಣ ಮತ್ತೆ ಉನ್ನತ ಮಟ್ಟದಲ್ಲಿ ಸ್ಪರ್ಧಿಸಲು ದೈಹಿಕವಾಗಿ ಸಿದ್ಧರಾಗುವ ನಿಟ್ಟಿನಲ್ಲಿ ಫಿಟ್‌ನೆಸ್ ಮೊರೆ ಹೋಗಲು ನಿರ್ಧರಿಸಿದ್ದಾರೆ. ಇದೇ ಕಾರಣದಿಂದ ಅವರು ಮ್ಯಾಡ್ರಿಡ್ ಓಪನ್‌ನಿಂದ ಹಿಂದೆ ಸರಿದಿರುವುದಾಗಿ ತಿಳಿಸಿದ್ದಾರೆ. ''ದುರದೃಷ್ಟವಶಾತ್ ನನ್ನ ದೇಹವು ಸಿದ್ಧವಾಗಲು ಸ್ವಲ್ಪ ಹೆಚ್ಚು ಸಮಯ ಬೇಕಾಗುತ್ತದೆ ಮತ್ತು ಮ್ಯಾಡ್ರಿಡ್‌ನಲ್ಲಿ ಆಡದಿರಲು ನಾನು ಕಠಿಣ ನಿರ್ಧಾರವನ್ನು ತೆಗೆದುಕೊಂಡಿದ್ದೇನೆ'' ಎಂದು ಅವರು ಎಕ್ಸ್‌ನಲ್ಲಿ ಬರೆದಿದ್ದಾರೆ.

ಟೆನಿಸ್‌ಗೆ ವಿದಾಯ ಹೇಳಿದ ಮುಗುರುಜಾ ಸ್ಪೇನಿನ ಖ್ಯಾತ ಟೆನಿಸ್ ಆಟಗಾರ್ತಿ, ಎರಡು ಬಾರಿಯ ಗ್ರ್ಯಾನ್‌ಸ್ಲ್ಯಾಮ್ ಚಾಂಪಿಯನ್, ಮಾಜಿ ವಿಶ್ವ ನಂ.1 ಆಟಗಾರ್ತಿ ಗಾರ್ಬಿನ್ ಮುಗುರು ಜಾಅವರು ಟೆನಿಸ್‌ಗೆ ವಿದಾಯ ಹೇಳಿದ್ದಾರೆ. ಗ್ರ್ಯಾನ್ ಸ್ಲ್ಯಾಮ್ ಪ್ರಶಸ್ತಿ ಸುತ್ತಿನ ಪಂದ್ಯದಲ್ಲಿ ಅಮೆರಿಕದ ವಿಲಿಯಮ್ಸ್ ಸಹೋದರಿಯರನ್ನು ಸೋಲಿಸಿದ ಏಕೈಕ ಆಟಗಾರ್ತಿ ಎಂಬ ಹೆಗ್ಗಳಿಕೆ ಅವರದು. 30 ವರ್ಷದ ಗಾರ್ಬಿನ್ ಮುಗುರುಜಾ, ಸುದ್ದಿಗೋಷ್ಠಿ ನಡೆಸಿ ತಮ್ಮ ವಿದಾಯವನ್ನು ಪ್ರಕಟಿಸಿದರು. 'ಇದು ನಿವೃತ್ತಿ ಹೊಂದುವ ಸಮಯ ಮತ್ತು ನನ್ನ ಜೀವನದಲ್ಲಿ ಹೊಸ ಅಧ್ಯಾಯ ತೆರೆಯುವ ಸಮಯ ಎಂದು ಭಾವಿಸುವೆ' ಎಂದು ಹೇಳುವ ಮೂಲಕ ತನ್ನ ನಿವೃತ್ತಿಯನ್ನು ಪ್ರಕಟಿಸಿದ್ದರು. 2016ರ ಫ್ರೆಂಚ್ ಓಪನ್ ಫೈನಲ್ ನಲ್ಲಿ ಸೆರೆನಾ ವಿಲಿಯಮ್ಸ್‌ಮತ್ತು 2017ರ ವಿಂಬಲ್ಡನ್ ಫೈನಲ್‌ನಲ್ಲಿ ವೀನಸ್ ವಿಲಿಯಮ್ಸ್‌ಅವರನ್ನು ಮುಗುರುಜಾ ಸೋಲಿಸಿ ಗ್ರ್ಯಾನ್‌ಸ್ಲ್ಯಾಮ್ ಪ್ರಶಸ್ತಿ ಗೆದ್ದಿದ್ದರು. ತಮ್ಮ ವೃತ್ತಿಜೀವನದಲ್ಲಿ ಒಟ್ಟು 10 ಪ್ರಮುಖ ಪ್ರಶಸ್ತಿ ಗೆದ್ದಿದ್ದಾರೆ. 2015ರ ವಿಂಬಲ್ಡನ್ ಮತ್ತು 2020ರ ಆಸ್ಟ್ರೇಲಿಯನ್ ಓಪನ್ ಟೂರ್ನಿಯಲ್ಲಿ ರನ್ನರ್ ಅಪ್ ಸ್ಥಾನ ಪಡೆದಿದ್ದರು.

## ಜ್ಯೂ.ಎನ್‌ಟಿಆರ್ ನಟನೆಯ 'ದೇವರ' ಚಿತ್ರದಲ್ಲಿ ಮಗಧೀರ ಬೆಡಗಿ ಕಾಜಲ್



'ಮಗಧೀರ' ಬ್ಯೂಟಿ ಕಾಜಲ್ ಅಗರ್ವಾಲ್ ಮದುವೆಯಾಗಿ ಮಗು ಆದ್ಮೇಲೆ ಕೂಡ ನಟನೆಯಲ್ಲಿ ಸಕ್ರಿಯರಾಗಿದ್ದಾರೆ. ತಮ್ಮ ಚಾರ್ಮ್ ಅನ್ನು ನಟಿ ಉಳಿಸಿಕೊಂಡಿದ್ದಾರೆ. ಸದ್ಯ ನಟಿಯ ಬಗ್ಗೆ ಕ್ರೇಜಿ ಅಪ್‌ಡೇಟ್‌ವೊಂದು ಸಿಕ್ಕಿದೆ. ಸ್ಟಾರ್ ನಟ ಜ್ಯೂ.ಎನ್‌ಟಿಆರ್ ನಟನೆಯ ದೇವರ ಚಿತ್ರಕ್ಕೆ ಕಾಜಲ್ ಕೈಜೋಡಿಸಿದ್ದಾರೆ. ಇತ್ತೀಚೆಗೆ ಪೂಜಾ ಹೆಗ್ಡೆ ಸಿನಿಮಾದಲ್ಲಿ ಸ್ಪೆಷಲ್ ಸಾಂಗ್‌ನಲ್ಲಿ ಕುಣಿಯುತ್ತಾರೆ ಎನ್ನಲಾಗಿತ್ತು. ಪೂಜಾ ಒಬ್ಬರೇ ಅಲ್ಲ ಅವರ ಜೊತೆ ಕಾಜಲ್ ಕೂಡ ಸೊಂಟ ಬಳುಕಿಸಲಿದ್ದಾರೆ ಎಂಬ ಲೇಟೆಸ್ಟ್ ಅಪ್‌ಡೇಟ್‌ವೊಂದು ಸಿಕ್ಕಿದೆ. ಇಬ್ಬರೂ ಕೂಡ ಜ್ಯೂ.ಎನ್‌ಟಿಆರ್ ಜೊತೆ ಹೆಜ್ಜೆ ಹಾಕಲಿದ್ದಾರೆ.'ದೇವರ' ಸಿನಿಮಾದಲ್ಲಿ ಪೂಜಾ ಹೆಗ್ಡೆ ಮತ್ತು ಕಾಜಲ್ ಡ್ಯಾನ್ಸ್‌ಗೆ ಮಾತ್ರ ಸೀಮಿತನಾ ಅಥವಾ ನಟನೆಗೂ ಅವಕಾಶವಿದ್ಯಾ ಎಂಬುದು ಖಾತ್ರಿಯಾಗಿಲ್ಲ. ಜ್ಯೂ.ಎನ್‌ಟಿಆರ್ ಜೊತೆಗೆ ಈ ಹಿಂದೆ ಕೂಡ ನಾಯಕಿಯಾಗಿ ಕಾಜಲ್ ನಟಿಸಿದ್ದಾರೆ. ಆ ಚಿತ್ರಗಳು ಗಲ್ಲಾಪೆಟ್ಟಿಗೆಯಲ್ಲಿ ಗೆದ್ದು ಬೀಗಿತ್ತು.

ಇನ್ನೂ ಈ ಹಿಂದೆ ಕೂಡ ಚಿರಂಜೀವಿ, ರಾಮ್ ಚರಣ್ ನಟನೆಯ 'ಆಚಾರ್ಯ' ಚಿತ್ರದಲ್ಲಿ ಪೂಜಾ ಹೆಗ್ಡೆ ಮತ್ತು ಕಾಜಲ್ ಜೊತೆಯಾಗಿ ನಟಿಸಿದ್ದರು. ಇಬ್ಬರಿಗೂ ಉತ್ತಮ ಒಡನಾಟವಿದೆ. ಹಾಗಾಗಿ ಮತ್ತೆ ಈ ಕಾಂಬಿನೇಷನ್ ರಿಪೀಟ್ ಆದರೆ ಚೆನ್ನಾಗಿರುತ್ತೆ ಎಂಬುದು ಪ್ರೇಕ್ಷಕರ ಅಭಿಪ್ರಾಯ. ಮುಂದಿನ ದಿನಗಳಲ್ಲಿ ಚಿತ್ರತಂಡದಿಂದ ಈ ಕುರಿತು ಸಿಹಿ ಸುದ್ದಿ ಸಿಗುತ್ತಾ ಕಾಯಬೇಕಿದೆ.



## ರಾಮಾಯಣ ಸಿನಿಮಾ ಕುರಿತಂತೆ ಯಶ್ ಫಸ್ಟ್ ರಿಯ್ಯಾಕ್ಷನ್



ಬಾಲಿವುಡ್‌ನಲ್ಲಿ ತಯಾರಾಗುತ್ತಿರುವ ರಾಮಾಯಣ ಸಿನಿಮಾ ಕುರಿತಂತೆ ಸಾಕಷ್ಟು ಸುದ್ದಿ ಆಗುತ್ತಿದ್ದರೂ, ಯಶ್ ಮಾತ್ರ ಯಾವುದೇ ಮಾಹಿತಿಯನ್ನು ಹಂಚಿಕೊಂಡಿರಲಿಲ್ಲ. ಇದೇ ಮೊದಲ ಬಾರಿಗೆ ಅಂತಾರಾಷ್ಟ್ರೀಯ ಪತ್ರಿಕೆಯೊಂದರ ಜೊತೆ ಮಾತನಾಡಿರುವ ಅವರು, ಕೆಲವು ವಿಚಾರಗಳನ್ನು ಹಂಚಿಕೊಂಡಿದ್ದಾರೆ. ಭಾರತೀಯ ಸಿನಿಮಾವನ್ನು ಜಾಗತಿಕ ಮಟ್ಟದಲ್ಲಿ ಪ್ರದರ್ಶಿಸುವುದು ನನ್ನ ಬಹುದಿನಗಳ ಕನಸು. ಅದರ ಹುಡುಗಾಟದಲ್ಲಿ ನಾನು ಅತ್ಯುತ್ತಮ ಸ್ಟುಡಿಯೋ ಕಂಡುಕೊಂಡಿದ್ದೇನೆ. ಅದರ ಹಿಂದಿನ ಪ್ರೇರಕ ಶಕ್ತಿ ಒಬ್ಬ ಭಾರತೀಯ. ನಾವು ಸಿನಿಮಾ ರಂಗದ ಬೇರೆ ವಿಷಯಗಳ ಬಗ್ಗೆ ಚರ್ಚೆ ನಡೆಸುವಾಗ ರಾಮಾಯಣ ವಿಷಯವು ಬಂದಿತು. ಭಾರತೀಯ ಸಂಸ್ಕೃತಿಯನ್ನು ಜಗತ್ತಿಗೆ ಪ್ರಸ್ತುತಪಡಿಸುವ ಸಿನಿಮಾ ಇದಾಗಿದ್ದು, ಈ ಮಹಾಕಾವ್ಯ ಸಿನಿಮಾ ರೂಪ ತಾಳುತ್ತಿದೆ. ಆ ಅತ್ಯುತ್ತಮ ಅನುಭವವನ್ನು ಜಗತ್ತಿಗೆ ನೀಡಲು ನಾವು ಕಾತರರಾಗಿದ್ದೇವೆ ಎಂದು ಮಾತನಾಡಿದ್ದಾರೆ ಯಶ್.ಅಂದುಕೊಂಡಂತೆ ಆಗಿದ್ದರೆ ರಾಮಾಯಣ ಸಿನಿಮಾದಲ್ಲಿ ಬಾಲಿವುಡ್ ನ ಹೆಸರಾಂತ ನಟ ಆದಿತ್ಯಾ ದೇಶಮುಖ ಕೂಡ ನಟಿಸಬೇಕಿತ್ತು. ಡೇಟ್ ಹೊಂದಾಣಿಕೆ ಕಾರಣದಿಂದಾಗಿ ಅವರು ನಟಿಸೋಕೆ ಸಾಧ್ಯವಾಗಿಲ್ಲ. ಆದರೆ, ರಾಮಾಯಣ ಸಿನಿಮಾದ ಸೀಕ್ರೇಟ್ ಒಂದನ್ನು ಬಿಚ್ಚಿಟ್ಟಿದ್ದಾರೆ ಆದಿತ್ಯಾ, ಈ ರಾಮಾಯಣವನ್ನು ರಾವಣನ ದೃಷ್ಟಿಕೋನದಲ್ಲಿ ಹೆಣೆಯಲಾಗುತ್ತಿದೆಯಂತೆ. ಹಾಗಾಗಿ ನಿಜವಾಗಿಯೂ ಈ ಸಿನಿಮಾದ ಹೀರೋ ಯಶ್ ಎಂದು ಅವರು ಹೇಳಿದ್ದಾರೆ. ಅಲ್ಲದೇ, ಬಹುನಿರೀಕ್ಷಿತ ಸಿನಿಮಾ ರಾಮಾಯಣ ಚಿತ್ರೀಕರಣ ಪ್ರಾರಂಭವಾಗಿದೆ. ಭಾರತೀಯ ಪುರಾಣದ ಕಥೆಯನ್ನು ತೆರೆದಿಡುವ ರಾಮಾಯಣ ಚಿತ್ರಕ್ಕಾಗಿ ರಾಕಿಂಗ್ ಸ್ಟಾರ್ ಯಶ್, ನಮಿತ್ ಮಲ್ಹೋತ್ರಾ ಕೈ ಜೋಡಿಸಿದ್ದಾರೆ. ರಾಮಾಯಣಕ್ಕೆ ರಾಕಿ ಕೂಡ ನಿರ್ಮಾಪಕ ರಾಮಾಯಣ ಸಿನಿಮಾವನ್ನು ಬಹಳ ಅದ್ಧೂರಿಯಾಗಿ ದೃಶ್ಯ ರೂಪಕ್ಕೆ ಇಳಿಸುವುದಕ್ಕೆ ದಂಗಲ್ ನಿರ್ದೇಶಕ ನಿತೀಶ್ ತಿವಾರಿ ಹೊರಟಿದ್ದಾರೆ. ಅದರಂತೆ ಬಹು ಕೋಟಿ ಬಜೆಟ್ ಹಾಕಿ ಚಿತ್ರ ನಿರ್ಮಾಣ ಮಾಡೋದಿಕ್ಕೆ ರಾಕಿಭಾಯ್ ನಮಿತ್ ಮಲ್ಹೋತ್ರಾ, ಒಂದಾಗಿದ್ದಾರೆ.

## ಮೇ 1ಕ್ಕೆ 'ಪುಷ್ಪ 2' ಲಿರಿಕಲ್ ವಿಡಿಯೋ ರಿಲೀಸ್



ಪುಷ್ಪ 2 ಸಿನಿಮಾ ಬಿಡುಗಡೆಯ ದಿನಾಂಕ ಸಮೀಪಕ್ಕೆ ಬರುತ್ತಿದ್ದಂತೆಯೇ ಸಿನಿಮಾ ತಲುಪಿಸಲು ನಾನಾ ರೀತಿಯ ಸಿದ್ಧತೆಗಳನ್ನು ಮಾಡು ತ್ತಿದೆ ಚಿತ್ರತಂಡ. ಈಗಾಗಲೇ ಫಸ್ಟ್ ಲುಕ್, ಟೀಸರ್ ರಿಲೀಸ್ ಮಾಡಿರುವ ನಿರ್ದೇಶಕರು, ಈಗ ಮೇ 1 ರಂದು ಚಿತ್ರದ ಮೊದಲ ಲಿರಿಕಲ್ ಸಾಂಗ್ ಬಿಡುಗಡೆ ಮಾಡಲು ಸಿದ್ಧತೆ ಮಾಡಿಕೊಂಡಿದ್ದಾರೆ. ಭಾರತೀಯ ಸಿನಿಮಾ ರಂಗದಲ್ಲಿ ಪುಷ್ಪ 2 ದಾಖಲೆಗೆ ಕಾರಣವಾಗುತ್ತಿದೆ. ಈ ಸಿನಿಮಾದ ಡಿಜಿಟೆಲ್ ರೈಟ್ಸ್ ಬರೋಬ್ಬರಿ 275 ಕೋಟಿ ರೂಪಾಯಿ ಸೇಲ್ ಆಗಿದೆ ಎನ್ನುವ ಮಾಹಿತಿ ಸಿಗುತ್ತಿದೆ. ಈ ಹಣ ಸಿನಿಮಾ ರಿಲೀಸ್ ಆದ ನಂತರ ಮತ್ತಷ್ಟು ಏರಿಕೆಯೂ ಆಗಲಿದೆಯಂತೆ. ಇಷ್ಟೊಂದು ಮೊತ್ತದ ಹಣವನ್ನು ಕೊಟ್ಟು ಇದೇ ಮೊದಲ ಬಾರಿಗೆ ಡಿಜಿಟೆಲ್ ಹಕ್ಕುಗಳನ್ನು ಖರೀದಿಸಲಾಗಿದೆಯಂತೆ. ಅಲ್ಲು ಅರ್ಜುನ್ ನಟನೆಯ ಪುಷ್ಪ 2 ಸಿನಿಮಾ ಇದೇ ಆಗಸ್ಟ್ 15ರಂದು ಬಿಡುಗಡೆ ಮಾಡುವುದಾಗಿ ಈಗಾಗಲೇ ಚಿತ್ರತಂಡ ಘೋಷಣೆ ಮಾಡಿದೆ. ಅದೇ ರೀತಿಯ ಬಾಲಿವುಡ್ ನ ಹೆಸರಾಂತ ನಟ ಅಜಯ್ ದೇವಗನ್ ನಟನೆಯ ಸಿಂಗಂ ಅಗೇನ್ ಚಿತ್ರ ಕೂಡ ಅದೇ ದಿನಾಂಕದಂದು ರಿಲೀಸ್ ಆಗಬೇಕಿತ್ತು. ಆದರೆ, ಸಿಂಗಂ ಸೈಡ್ ಗೆ ಹೋಗಿದೆ ಎನ್ನುವ ಮಾಹಿತಿ ಹರಿದಾಡುತ್ತಿದೆ. ಪುಷ್ಪ 2 ಸಿನಿಮಾ ಸಾಕಷ್ಟು ಸದ್ದು ಮಾಡುತ್ತಿದೆ. ಸಿನಿ ಪಂಡಿತರ ಲೆಕ್ಕಾಚಾರದಂತೆ ಸಾವಿರಾರು ಕೋಟಿ ರೂಪಾಯಿ ವ್ಯಾಪಾರ ಮಾಡುವ ಶಕ್ತಿ ಈ ಚಿತ್ರಕ್ಕಿದೆಯಂತೆ. ಅಲ್ಲದೇ, ದೊಡ್ಡ ಮಟ್ಟದಲ್ಲಿ ಮತ್ತು ಹಲವು ಭಾಷೆಗಳಲ್ಲಿ ಈ ಚಿತ್ರವನ್ನು ತೆರೆಗೆ ತರಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಹಾಗಾಗಿ ಸಿಂಗಂ ಅಗೇನ್ ಚಿತ್ರದ ರಿಲೀಸ್ ಅನ್ನು ಮುಂದೂಡಿಕೆ ಮಾಡುವ ಯೋಚನೆ ಮಾಡಲಾಗಿದೆಯಂತೆ.

## ಮತ್ತೆ ನಟನೆಗೆ ಮರಳಿದ ಪ್ರೀತಿ ಜಿಂಟಾ



ಬಾಲಿವುಡ್ ಬ್ಯೂಟಿ ಪ್ರೀತಿ ಜಿಂಟಾ ಮದುವೆಯಾಗಿ ವಿದೇಶದಲ್ಲಿ ಸೆಟಲ್ ಆಗಿದ್ದಾರೆ. ಐಪಿಎಲ್ ಕಾರಣದಿಂದ ಆಗಾಗ ಭಾರತಕ್ಕೆ ನಟಿ ಭೇಟಿ ನೀಡುತ್ತಾರೆ. ಹಲವು ವರ್ಷಗಳ ನಂತರ ಪ್ರೀತಿ ಜಿಂಟಾ ನಟನೆಗೆ ಕಮ್ ಬ್ಯಾಕ್ ಮಾಡಿದ್ದಾರೆ. ಸನ್ನಿ ಡಿಯೋಲ್ ಜೊತೆ ಡ್ಯುಯೇಟ್ ಹಾಡೋಕೆ ನಟಿ ಸಜ್ಜಾಗಿದ್ದಾರೆ.

'ಗದರ್ 2' ಮೂಲಕ ಸಕ್ಸಸ್ ಕಂಡಿರುವ ಸನ್ನಿ ಡಿಯೋಲ್ ಜೊತೆ ಪ್ರೀತಿ ಜಿಂಟಾ ಜೊತೆಯಾಗಿ ನಟಿಸುತ್ತಿದ್ದಾರೆ. ಹೊಸ ಸಿನಿಮಾಗೆ 'ಲಾಹೋರ್ 1947' ಎಂದು ಟೈಟಲ್ ನೀಡಲಾಗಿದೆ. ಚಿತ್ರಕ್ಕೆ ರಾಜ್‌ಕುಮಾರ್ ಸಂತೋಷಿ ನಿರ್ದೇಶನ ಮಾಡುತ್ತಿದ್ದಾರೆ. ಈ ಚಿತ್ರವನ್ನು ಸ್ಟಾರ್ ನಟ ಆಮೀರ್ ಖಾನ್ ನಿರ್ಮಾಣ ಮಾಡುತ್ತಿದ್ದಾರೆ. ಸದ್ಯ ಚಿತ್ರೀಕರಣ ಸಂದರ್ಭದ ಫೋಟೋಗಳನ್ನು ನಟಿ ಹಂಚಿಕೊಂಡಿದ್ದಾರೆ.

ಸನ್ನಿ ಡಿಯೋಲ್ ಜೊತೆ ಪ್ರೀತಿ ಜಿಂಟಾಗೆ ಉತ್ತಮ ಬಾಂಧವ್ಯವಿದೆ. ಈ ಹಿಂದೆ ಇಬ್ಬರೂ ಜೊತೆಯಾಗಿ ಎರಡ್ಮೂರು ಚಿತ್ರಗಳಲ್ಲಿ ಜೋಡಿಯಾಗಿ ನಟಿಸಿದ್ದಾರೆ. ಈಗ 'ಲಾಹೋರ್ 1947' ಚಿತ್ರದ ಮೂಲಕ ಮತ್ತೆ ಈ ಜೋಡಿ ಜೊತೆಯಾಗುತ್ತಿದ್ದಾರೆ.

'ಗದರ್ 2' ಚಿತ್ರದ ಸಕ್ಸಸ್ ಸನ್ನಿ ಡಿಯೋಲ್ ಕೆರಿಯರ್ ಮರುಜೀವ ನೀಡಿದೆ. ಹಾಗಾಗಿ ಅವರ ಮುಂದಿನ ಚಿತ್ರದ ಬಗ್ಗೆ ಫ್ಯಾನ್ಸ್‌ಗೆ ಭಾರೀ ನಿರೀಕ್ಷೆಯಿದೆ.

## ಅಣ್ಣಾವ್ರ ಹಾಡಿಗೆ ಧನ್ಯಾ ಜೊತೆ ಕಿಶನ್ ಡ್ಯುಯೇಟ್

**ಅಣ್ಣಾವ್ರ ಹಾಡಿಗೆ ಹೆಜ್ಜೆ ಹಾಕಿದ್ದಾರೆ**



ಸ್ಯಾಂಡಲ್‌ವುಡ್ ನಟಿ ಧನ್ಯಾ ರಾಮ್‌ಕುಮಾರ್ ಜೊತೆ 'ಬಿಗ್ ಬಾಸ್' ಖ್ಯಾತಿಯ ಕಿಶನ್ ಡ್ಯುಯೇಟ್ ಹಾಡಿದ್ದಾರೆ. ನಿನ್ನದೇ ನೆನಪು ದಿನವೂ ಮನದಲ್ಲಿ ಎಂದು ಅಣ್ಣಾವ್ರ ಹಾಡಿಗೆ ಹೆಜ್ಜೆ ಹಾಕಿದ್ದಾರೆ. ಡಾ.ರಾಜ್‌ಕುಮಾರ್ ಹುಟ್ಟುಹಬ್ಬದಂದು ಅವರ ಮೊಮ್ಮಗಳು ಧನ್ಯಾ ಡ್ಯಾನ್ಸ್ ಮಾಡಿದ್ದಾರೆ. ರಾಜ ನನ್ನ ರಾಜ ಚಿತ್ರದ ಅಣ್ಣಾವ್ರು ನಟಿಸಿರುವ ಹಾಡಿಗೆ ಮಸ್ತ್ ಆಗಿ ಕಿಶನ್ ಜೊತೆ ಹೆಜ್ಜೆ ಹಾಕಿದ್ದಾರೆ. ಈ ಮೂಲಕ ತಾತನಿಗೆ ವಿಶೇಷವಾಗಿ ಟ್ರಿಬ್ಯೂಟ್ ಕೊಟ್ಟಿದ್ದಾರೆ. ರೆಟ್ರೋ ಹಾಡಿಗೆ ಸ್ಟೈಲೀಶ್ ಆಗಿ ಇಬ್ಬರೂ ಕಾಣಿಸಿ ಕೊಂಡಿದ್ದಾರೆ.

ಇಬ್ಬರ ಡ್ಯಾನ್ಸ್ ನೋಡಿ ಫ್ಯಾನ್ಸ್ ಖುಷಿಪಟ್ಟಿದ್ದಾರೆ. 'ಹುಟ್ಟುಹಬ್ಬದ ಶುಭಾಶಯಗಳು ಎಂದು ಡಾ.ರಾಜ್ ಕುಮಾರ್ ಸರ್' ಎಂದು ಅಡಿಬರಹ ನೀಡಿ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ಡಾ.ರಾಜ್‌ಕುಮಾರ್ ಮತ್ತು ಆರತಿ ನಟನೆಯ ರಾಜ ನನ್ನ ರಾಜ ಸಿನಿಮಾ 1976ರಲ್ಲಿ ತೆರೆಕಂಡಿತ್ತು. 25 ವಾರಗಳ ಪ್ರದರ್ಶನ ಕಂಡು 'ರಾಜ ನನ್ನ ರಾಜ' ಸಿನಿಮಾ ದಾಖಲೆ ಬರೆದಿತ್ತು.


Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news



ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966